ಸುದ್ದಿಗಳ ಹೊನಲು
# ಸಂಜೆ ಮುಗಿಲು
ಕನ್ನಡ ಪ್ರಾದೇಶಿಕ ಸಂಜೆ ದಿನಪತ್ರಿಕೆ
ಸಂಪುಟ: 22, ಸಂಚಿಕೆ: 92, ಪುಟಗಳು: 8, ಶನಿವಾರ, 11 ಜನವರಿ 2025 RNI NO. KARKAN/2002/08054
epaper: www.sanjemugilu.com
ಬೆಂಗಳೂರು। ಬೆಂಗಳೂರು ಗ್ರಾಮಾಂತರ। ಕೋಲಾರ। ಚಿಕ್ಕಬಳ್ಳಾಪುರ। ರಾಮನಗರ। ಮಂಡ್ಯ। ಮೈಸೂರು। ಚಾಮರಾಜನಗರ
₹3


ವೇಣು ಸಾರಥ್ಯದಲ್ಲಿ...

ದಶಪ್ರಮತಿ ಮುದ್ರಣಾಲಯ
dashapramathi mudranalaya
PRE-PRESS PRINTERS
Contact: +91 9483589085 | e-mail: dashapramathimudranalaya@gmail.com
We Undertake Printing of
Newspapers | Tabloids | Magazines

**ಸುಭಾಷಿತ**

ಕೂರಬೇಡಿ, ನಿಲ್ಲಬೇಡಿ, ಇಳಿಯಬೇಡಿ, ಏರುತ್ತಾ ಇರಿ ?

। ಮಾಸ್ತಿ ವೆಂಕಟೇಶ ಅಯ್ಯಂಗಾರ್

**ಪಂಚಾಂಗ**

(ಶನಿವಾರ 11, ಜನವರಿ-2025)

- ಶ್ರೀ ಕ್ರೋದಿನಾಮ ಸಂವತ್ಸರ,
- ದಕ್ಷಿಣಾಯಣ, ಹಿಮಂತ ಋತು,
- ಪುಷ್ಯ ಮಾಸ, ಶುಕ್ಲ ಪಕ್ಷ,
- ದ್ವಾದಶಿ / ಉಪರಿ ತ್ರಯೋದಶಿ,
- ರೋಹಿಣಿ ನಕ್ಷತ್ರ / ಮೃಗಶಿರ ನಕ್ಷತ್ರ.
- ರಾಹುಕಾಲ 09:39 ರಿಂದ 11:05
- ಗುಳಿಕಕಾಲ 06:47 ರಿಂದ 08:13
- ಯಮಗಂಡಕಾಲ 01:57 ರಿಂದ 03:23

## ಸಂಕ್ಷಿಪ್ತ ಸುದ್ದಿ

### ಆಕಸ್ಮಿಕವಾಗಿ ಗುಂಡು ತಗುಲಿ ಎಎಪಿ ಶಾಸಕ ಗುರುಪ್ರೀತ್ ಗೋಗಿ ಸಾವು

**ಚಂಡೀಗಢ:** ಪಂಜಾಬ್‌ನ ಲುಧಿಯಾನ ಕ್ಷೇತ್ರದ ಆಪ್ ಶಾಸಕ ಗುರುಪ್ರೀತ್ ಗೋಗಿ ಆಕಸ್ಮಿಕವಾಗಿ ಗುಂಡು ತಗುಲಿ ಶುಕ್ರವಾರ ತಡರಾತ್ರಿ ಸಾವನ್ನಪ್ಪಿದ್ದಾರೆ.



ಗುರುಪ್ರೀತ್ ಗೋಗಿ (58) ಅವರ ತಲೆಗೆ ಗುಂಡು ತಗುಲಿದ ನಂತರ ಕುಟುಂಬಸ್ಥರು ಅವರನ್ನು ಆಸ್ಪತ್ರೆಗೆ ದಾಖಲಿಸಿದ್ದಾರೆ. ಅಷ್ಟು ಹೊತ್ತಿಗಾಗಲೇ ಶಾಸಕರು ಮೃತಪಟ್ಟಿದ್ದಾರೆ ಎಂದು ವೈದ್ಯರು ಘೋಷಿಸಿದ್ದಾರೆ ಎಂದು ಹಿರಿಯ ಪೊಲೀಸ್ ಅಧಿಕಾರಿ ಜಸ್ಕರ್ ಸಿಂಗ್ ತೇಜ ತಿಳಿಸಿದ್ದಾರೆ. ಗೋಗಿ ಅವರ ಮೃತದೇಹವನ್ನು ಡಿಎಂಸಿ ಆಸ್ಪತ್ರೆಯ ಶವಾಗಾರದಲ್ಲಿ ಇಡಲಾಗಿದ್ದು, ಮರಣೋತ್ತರ ಪರೀಕ್ಷೆ ನಡೆಸಲಾಗುವುದು. ತಲೆಗೆ ಆಕಸ್ಮಿಕವಾಗಿ ಗುಂಡು ತಗುಲಿ ಮೃತಪಟ್ಟಿದ್ದಾರೆ ಎಂದು ಕುಟುಂಬಸ್ಥರು ಹೇಳಿದ್ದಾರೆ. ಮರಣೋತ್ತರ ಪರೀಕ್ಷೆ ಬಳಿಕ ಅಸಲಿ ಸತ್ಯ ಗೊತ್ತಾಗಲಿದೆ ಎಂದು ತೇಜ ಹೇಳಿದ್ದಾರೆ.

### ಹೋಟೆಲ್‌ಗಳ ಮೇಲೆ ಲಾರಿ ಪಲ್ಟಿ



**ರಾಯಚೂರು:** ನಗರದ ಹೊರವಲಯದ ಯರಮರಸ್ ಬೈಪಾಸ್ ಬಳಿ ಭತ್ತದ ಹೊಟ್ಟು ತುಂಬಿದ್ದ ಲಾರಿ ಚೈನೀಸ್ ಫಾಸ್ಟ್ ಫುಡ್ ಸೆಂಟರ್ ಹಾಗೂ ಹೋಟೆಲ್ ಮೇಲೆ ಉರುಳಿ ಬಿದ್ದು ಲಕ್ಷಾಂತರ ರೂಪಾಯಿ ಮೌಲ್ಯದ ವಸ್ತುಗಳು ಜಖಂ ಆಗಿವೆ.

» **ಲಕ್ಷಾಂತರ ರೂಪಾಯಿ ಮೌಲ್ಯದ ವಸ್ತುಗಳು ಹಾನಿ**

ಸ್ವಲ್ಪದರಲ್ಲೇ ಭಾರೀ ಅನಾಹುತ ತಪ್ಪಿದ್ದು ಸ್ಥಳದಲ್ಲಿದ್ದವರು ಪ್ರಾಣಾಪಾಯದಿಂದ ಪಾರಾಗಿದ್ದಾರೆ. ಓವರ್ ಲೋಡ್ ತುಂಬಿಕೊಂಡು ಹೊರಟಿದ್ದ ಲಾರಿ ಚಾಲಕನ ನಿಯಂತ್ರಣ ತಪ್ಪಿ ಪಲ್ಟಿಯಾಗಿದೆ. ರಾಯಚೂರಿನಿಂದ ಹೈದ್ರಾಬಾದ್ ಕಡೆಗೆ ಹೊರಟಿದ್ದ ಲಾರಿ ಪಲ್ಟಿಯಿಂದ ಹೋಟೆಲ್, ಫಾಸ್ಟ್ ಫುಡ್ ಸೆಂಟರ್ ಜಖಂ ಆಗಿವೆ. ಶೆಡ್, ಪೀಠೋಪಕರಣ ಸೇರಿ ಹೋಟೆಲ್‌ನಲ್ಲಿದ್ದ ವಸ್ತುಗಳೆಲ್ಲಾ ಹಾನಿಯಾಗಿವೆ. ಪುಟ 2

### ಬಿಸಿಯೂಟದ ಮೊಟ್ಟೆಗೂ ಕನ್ನ ಹಾಕಿದ ಹೆಡ್‌ಮಾಸ್ಟರ್!

## ತಹಶೀಲ್ದಾರ್ ರೇಡ್‌ಗೆ ಕಕ್ಕಾಬಿಕ್ಕಿ!

**ಕೊಪ್ಪಳ:** ಮಕ್ಕಳಿಗೆ ವಿಟಮಿನ್ ಮತ್ತು ಪ್ರೋಟೀನ್ ಮುಖ್ಯ. ಹಾಗಾಗಿ, ಮಕ್ಕಳಿಗೆ ಬಿಸಿ ಊಟದ ಜೊತೆ ಮೊಟ್ಟೆಯನ್ನು ನೀಡಲಾಗುತ್ತದೆ. ಇತ್ತೀಚೆಗೆ ಅಜೀಂ ಪ್ರೇಮ್ ಜಿ ಫೌಂಡೇಶನ್ ಸಹಯೋಗದಲ್ಲಿ ವಾರದಲ್ಲಿ ಆರು ದಿನವೂ ಮೊಟ್ಟೆ ನೀಡಲು ನಿರ್ಧರಿಸಲಾಗಿದೆ. ಆದರೆ ಕೊಪ್ಪಳ ಜಿಲ್ಲೆಯ ಶಾಲೆಯೊಂದರ ಮುಖ್ಯೋಪಾಧ್ಯಾಯರು ಮಕ್ಕಳ ಮೊಟ್ಟೆಗೆ ಕನ್ನ ಹಾಕಿರುವ ಆರೋಪ ಕೇಳಿ ಬಂದಿದೆ.

**ಮಕ್ಕಳ ತಟ್ಟೆಯಲ್ಲಿ ಮೊಟ್ಟೆ ಇಲ್ಲದ್ದು ಕಂಡು ತಹಶೀಲ್ದಾರ್ ಶಾಕ್:** ಕೊಪ್ಪಳದ ಶಿವಪುರ ಪ್ರಾಥಮಿಕ ಸರ್ಕಾರಿ ಶಾಲೆಯ ಮುಖ್ಯೋಪಾಧ್ಯಾಯರ ವಿರುದ್ಧ ಇಂತಹ ಗಂಭೀರ ಆರೋಪ ಕೇಳಿಬಂದಿದೆ. ಬಿಸಿ ಊಟದ ವೇಳೆ ಕೊಪ್ಪಳ ತಹಶೀಲ್ದಾರ್ ಶಾಲೆಗೆ ದಿಢೀರ್ ಭೇಟಿ ನೀಡಿದ್ದಾರೆ. ಈ ವೇಳೆ ಮಕ್ಕಳ ತಟ್ಟೆಯಲ್ಲಿ ಮೊಟ್ಟೆ ಇಲ್ಲದ್ದನ್ನು ಕಂಡು ಶಾಕ್ ಆಗಿದ್ದಾರೆ.



**ಮುಖ್ಯೋಪಾಧ್ಯಾಯರಿಗೆ ತಹಶೀಲ್ದಾರ್ ತರಾಟೆ:** ತಹಶೀಲ್ದಾರ್ ವಿಠಲ ಚೌಗಲ್ ಅವರು ಮಧ್ಯಾಹ್ನದ ಬಿಸಿಯೂಟ ಸಮಯದ ವೇಳೆ ದಿಢೀರ್ ಭೇಟಿ ನೀಡಿದ್ದಾರೆ. ಪುಟ 2

### ಮುಡಾ ಹಗರಣದಲ್ಲಿ ಜೆಡಿಎಸ್ ಶಾಸಕ ಜಿಟಿ ದೇವೇಗೌಡಗೂ ಸಂಕಷ್ಟ

## ಸ್ನೇಹಮಯಿ ಕೃಷ್ಣ ದೂರು

**ಮೈಸೂರು:** ಚಾಮುಂಡೇಶ್ವರಿ ಕ್ಷೇತ್ರದ ಜೆಡಿಎಸ್ ಶಾಸಕ ಜಿಟಿ ದೇವೇಗೌಡ ತಮ್ಮ ಪ್ರಭಾವ ಬಳಸಿ ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದಿಂದ (ಮುಡಾ) ಅಕ್ರಮವಾಗಿ ತಮ್ಮ ಪುತ್ರಿ ಮತ್ತು ಅಳಿಯನಿಗೆ ನಿವೇಶನ ಕೊಡಿಸಿದ್ದಾರೆ ಎಂದು ಆರೋಪಿಸಿ ಆರ್‌ಟಿಐ ಕಾರ್ಯಕರ್ತರ ಸ್ನೇಹಮಯಿ ಕೃಷ್ಣ ಲೋಕಾಯುಕ್ತಕ್ಕೆ ದೂರು ನೀಡಿದ್ದಾರೆ.

ಚಾಮುಂಡೇಶ್ವರಿ ಕ್ಷೇತ್ರದ ಶಾಸಕ ಜಿ.ಟಿ.ದೇವೇಗೌಡ ತಮ್ಮ ಪ್ರಭಾವವನ್ನು ಬಳಸಿಕೊಂಡು, ಸರ್ಕಾರಕ್ಕೆ ಸೇರಿದ ಮತ್ತು



ಕರ್ನಾಟಕ ಉಚ್ಚ ನ್ಯಾಯಾಲಯದಲ್ಲಿ ವಿಚಾರಣೆ ಬಾಕಿ ಇರುವ ಜಮೀನಿಗೆ ಸಂಬಂಧಿಸಿದಂತೆ ಸುಳ್ಳು ದಾಖಲೆಗಳನ್ನು ಸೃಷ್ಟಿ ಮಾಡಿಸಿದ್ದಾರೆ. ಬಳಿಕ, ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದಿಂದ ಕೆ.ಚೌಡಯ್ಯ ಎಂಬುವವರ ಹೆಸರಿಗೆ 50:50 ಅನುಪಾತದಲ್ಲಿ ಒಟ್ಟು ಆರು ನಿವೇಶನಗಳನ್ನು ಅಕ್ರಮವಾಗಿ ಕೊಡಿಸಿದ್ದಾರೆ. ಇದರಲ್ಲಿ, 50X80 ಅಡಿ ಅಳತೆಯ ಎರಡು ನಿವೇಶನಗಳನ್ನು, ಅವರ ಮಗಳು ಡಿ.ಅನ್ನಪೂರ್ಣ ಮತ್ತು ಅಳಿಯ ಜಿ.ಎಂ. ವಿಶ್ವೇಶ್ವರಯ್ಯನವರ ಹೆಸರಿಗೆ ಮಾಡಿಸಿದ್ದಾರೆ ಎಂದು ಸ್ನೇಹಮಯಿ ಕೃಷ್ಣ ದೂರು ನೀಡಿದ್ದಾರೆ. ಪುಟ 2

### ಅಯೋಧ್ಯೆಯಲ್ಲಿ ಇಂದಿನಿಂದ ಮೂರು ದಿನ ಉತ್ಸವ

# ರಾಮಲಲ್ಲಾಗೆ ಅಭಿಷೇಕ

**ಅಯೋಧ್ಯೆ:** ಕಳೆದ ವರ್ಷ (2024, ಜನವರಿ 22) ಪುಷ್ಯ (ಪೌಷ) ಶುಕ್ಲ ದ್ವಾದಶಿಯಂದು ಅಯೋಧ್ಯೆಯಲ್ಲಿ ಶ್ರೀ ರಾಮ ಲಲ್ಲಾ ವಿಗ್ರಹದ ಪ್ರಾಣಪ್ರತಿಷ್ಠೆಯಾದ ಶುಭ ದಿನವಾದ್ದರಿಂದ ಆ ದಿನವನ್ನು 'ಪ್ರತಿಷ್ಠಾ ದ್ವಾದಶಿ' ಎಂದು ಆಚರಿಸಲು ರಾಮಜನ್ಮಭೂಮಿ ಟ್ರಸ್ಟ್ ಕರೆ ನೀಡಿದೆ. ಅಲ್ಲದೆ, ಅಯೋಧ್ಯೆಯಲ್ಲಿ ಮೂರು ದಿನಗಳ ಕಾಲ ಉತ್ಸವ ಹಮ್ಮಿಕೊಂಡಿದೆ. ಶ್ರೀರಾಮ ಜನ್ಮಭೂಮಿ ತೀರ್ಥಕ್ಷೇತ್ರವು ಪ್ರತಿವರ್ಷ ಈ ದಿನವನ್ನು ಪ್ರತಿಷ್ಠಾ ದ್ವಾದಶಿ ಎಂದು ಆಚರಿಸಲು ನಿರ್ಧರಿಸಿದೆ.

ರಾಮಲಾಲ್ಲಾ ವಿಗ್ರಹ ಪ್ರತಿಷ್ಠಾಪನೆಯ ವಾರ್ಷಿಕೋತ್ಸವಕ್ಕೆ ಅಯೋಧ್ಯೆ ಸಂಪೂರ್ಣ ಸಿದ್ಧಗೊಂಡಿದೆ. ಮೂರು ದಿನಗಳ ಪ್ರತಿಷ್ಠಾ ದ್ವಾದಶಿ ಆಚರಣೆಯ ಸಂಭ್ರಮ ಇಂದಿನಿಂದ ಆರಂಭವಾಗುತ್ತಿದೆ.

**ಉತ್ತರ ಪ್ರದೇಶದ ಸಿಎಂ ಯೋಗಿಯಿಂದ ರಾಮಲಲ್ಲಾಗೆ ಅಭಿಷೇಕ:** ಸಿಎಂ ಯೋಗಿ ಆದಿತ್ಯನಾಥ್ ಉತ್ಸವವನ್ನು ಉದ್ಘಾಟಿಸಲಿದ್ದಾರೆ. ಐದು ಗಂಟೆಗಳ ಕಾಲ ಅಯೋಧ್ಯೆಯಲ್ಲಿ ತಂಗಲಿರುವ ಯೋಗಿ ಅವರು ರಾಮಲಾಲ್ಲಾ ಮೂರ್ತಿಗೆ ಅಭಿಷೇಕ ಮಾಡಲಿದ್ದಾರೆ ಮತ್ತು ಮಹಾ ಆರತಿ ಮಾಡಲಿದ್ದಾರೆ. ಇದಾದ ನಂತರ ಮಧ್ಯಾಹ್ನ 2 ಗಂಟೆಗೆ ತಿಲದಲ್ಲಿ ಮೊದಲ ಬಾರಿಗೆ ಭಕ್ತರು ಮತ್ತು ಅತಿಥಿಗಳನ್ನು ಉದ್ದೇಶಿಸಿ ಮಾತನಾಡಲಿದ್ದಾರೆ. ಪುಟ 2



### ವಿಶೇಷ ದರ್ಶನ ಪಾಸ್ ರದ್ದು

ಪ್ರಾಣ ಪ್ರತಿಷ್ಠೆಯ ವಾರ್ಷಿಕೋತ್ಸವದ ಸಂದರ್ಭದಲ್ಲಿ, ಎಲ್ಲಾ ಮೂರು ದಿನಗಳ ಕಾಲ ರಾಮಲಲ್ಲಾ ಆರತಿ ಪಾಸ್‌ಗಳು ಮತ್ತು ವಿಶೇಷ ದರ್ಶನ ಪಾಸ್‌ಗಳನ್ನು ರದ್ದುಗೊಳಿಸಲಾಗುತ್ತದೆ. ಆರತಿ ಸಮಯದಲ್ಲಿಯೂ ಭಕ್ತರಿಗೆ ದರ್ಶನ ಸಿಗಲಿದೆ. ಅಂತಹ ಪರಿಸ್ಥಿತಿಯಲ್ಲಿ, ದರ್ಶನದ ಅವಧಿ ಸುಮಾರು ಒಂದೂವರೆ ಗಂಟೆ ಹೆಚ್ಚಾಗುತ್ತದೆ. ರಾಮಲಲ್ಲಾ ಮತ್ತು ಬಾಲ ರಾಮನ ಉತ್ಸವ ಮೂರ್ತಿಗೆ ದೆಹಲಿಯಲ್ಲಿ ವಿಶೇಷ ಬಟ್ಟೆಗಳನ್ನು ಸಿದ್ಧಪಡಿಸಲಾಗಿದೆ. ಈ ಬಟ್ಟೆಗಳ ನೇಯ್ಗೆ ಮತ್ತು ಕಸೂತಿಯನ್ನು ಚಿನ್ನ ಮತ್ತು ಬೆಳ್ಳಿಯ ತಂತಿಯಿಂದ ಮಾಡಲಾಗಿದೆ. ಇದಲ್ಲದೆ, ವಿವಿಧ ಸ್ಥಳಗಳಲ್ಲಿ ಬೆಳ್ಳಿಯ ಮುದ್ರೆಗಳನ್ನು ಸಹ ಮಾಡಲಾಗಿದೆ.

### ರಾಮಲಲ್ಲಾ ಪ್ರತಿಷ್ಠಾ ವರ್ಷಾಚರಣೆ ಜನವರಿ 11 ರಂದೇ ಏಕೆ?

**ಅಯೋಧ್ಯೆ:** ಉತ್ತರ ಪ್ರದೇಶದ ಅಯೋಧ್ಯೆಯಲ್ಲಿರುವ ರಾಮ ಮಂದಿರ ಲಕ್ಷಾಂತರ ಹಿಂದೂಗಳ ನಂಬಿಕೆ, ಭಕ್ತಿ ಮತ್ತು ಪರಿಶ್ರಮದ ಸಂಕೇತವಾಗಿದ್ದು, ಅಲ್ಲಿ 2024 ರ ಜನವರಿ 22 ರಂದು ರಾಮ ಲಲ್ಲಾ ಮೂರ್ತಿಯ ಪ್ರಾಣ ಪ್ರತಿಷ್ಠೆ ನೆರವೇರಿತ್ತು. ಅಚ್ಚರಿಯ ವಿಚಾರವೆಂದರೆ, ರಾಮಮಂದಿರದಲ್ಲಿ ಪ್ರಾಣ ಪ್ರತಿಷ್ಠೆಯ ವಾರ್ಷಿಕೋತ್ಸವವನ್ನು ಜನವರಿ 11 ರಂದು ಆಚರಿಸಲಾಗುತ್ತದೆ! ಇದಕ್ಕೆ ಕಾರಣ ಹಿಂದೂ ಸಂಪ್ರದಾಯ. ಪ್ರತಿಷ್ಠಾ ಮಹೋತ್ಸವ ನಡೆದ ದಿನ ಹಿಂದೂ ಪಂಚಾಂಗದ ಪ್ರಕಾರ ಜನವರಿ 11 ರಂದು ಬರುತ್ತದೆ. ಪುಟ 2

### ಗುತ್ತಿಗೆದಾರ ಸಚಿನ್ ಆತ್ಮಹತ್ಯೆ ಕೇಸ್

## ಪ್ರಿಯಾಂಕ್ ಖರ್ಗೆ ಆಪ್ತ 5 ದಿನ ಸಿಐಡಿ ಕಸ್ಟಡಿಗೆ

**ಬೀದರ್:** ಯುವ ಗುತ್ತಿಗೆದಾರ ಸಚಿನ್ ಪಾಂಚಾಳ್ ಆತ್ಮಹತ್ಯೆ ಪ್ರಕರಣಕ್ಕೆ ಸಂಬಂಧಿಸಿದಂತೆ ಸಚಿವ ಪ್ರಿಯಾಂಕ್ ಖರ್ಗೆ ಆಪ್ತ ರಾಜು ಕಪನೂರ್ ಸೇರಿದಂತೆ ಐವರು ಆರೋಪಿಗಳನ್ನು ಬೀದರ್ ನ ಜೆಎಂಎಫ್ ಸಿ ನ್ಯಾಯಾಲಯ



5 ದಿನ ಸಿಐಡಿ ಕಸ್ಟಡಿಗೆ ನೀಡಿದೆ. ಆರೋಪಿಗಳಾದ ರಾಜು ಕಪನೂರ್ , ಘೋರಕ್ ನಾಥ್ , ಸತೀಶ್ , ನಂದಕುಮಾರ್ ನಾಗಭುಂಜಗೆ, ರಾಮಾಗೌಡ ಪಾಟೀಲ್ ಸಿಐಡಿ ಕಸ್ಟಡಿಯಲ್ಲಿದ್ದು, ವಿಚಾರಣೆ ಎದುರಿಸುತ್ತಿದ್ದಾರೆ. ಪುಟ 2



## ಭಾರತದ ಎರಡನೇ ಪ್ರಧಾನಿ ಲಾಲ್ ಬಹದ್ದೂರ್ ಶಾಸ್ತ್ರಿ 59ನೇ ಪುಣ್ಯ ಸ್ಮರಣೆ

**ನವದೆಹಲಿ:** ಶ್ರೇಷ್ಠ ಮುತ್ಸದ್ದಿ ಲಾಲ್ ಬಹದ್ದೂರ್ ಶಾಸ್ತ್ರಿಯವರು ಎಲ್ಲರಿಗೂ ಕೂಡ ಚಿರಪರಿಚಿತ. ಭಾರತದ ಹೆಮ್ಮೆಯ ಪುತ್ರ ಹಾಗೂ ಸ್ವತಂತ್ರ ಭಾರತದ ಎರಡನೇ ಪ್ರಧಾನಿ ಲಾಲ್ ಬಹದ್ದೂರ್ ಶಾಸ್ತ್ರಿಯವರ 59 ನೇ ಪುಣ್ಯ ಸ್ಮರಣೆ. ತಮ್ಮ ಅಧಿಕಾರವಧಿಯಲ್ಲಿ ಭ್ರಷ್ಟಾಚಾರರಹಿತ ನಾಯಕತ್ವಕ್ಕೆ ಹೆಸರುವಾಸಿಯಾಗಿದ್ದ ಅವರು ದೇಶಕ್ಕೆ ನೀಡಿದ ಕೊಡುಗೆ ಅಪಾರವಾದದ್ದು. ವಿಶೇಷವಾಗಿ ಯುದ್ಧದ ಸಂದರ್ಭದಲ್ಲಿ ಶಾಸ್ತ್ರಿಜೀ ತೆಗೆದುಕೊಳ್ಳುತ್ತಿದ್ದ ನಿರ್ಧಾರಗಳು, ಭಾರತದ ಸಾರ್ವಭೌಮತ್ವ ಹಾಗೂ ಭದ್ರತೆ ಕಾಪಾಡಿಕೊಳ್ಳುವ ಅವರ ಸಂಕಲ್ಪವನ್ನು ಎತ್ತಿ ತೋರಿಸುತ್ತದೆ.



ಲಾಲ್ ಬಹದ್ದೂರ್ ಶಾಸ್ತ್ರಿಯವರು ಉತ್ತರ ಪ್ರದೇಶದ ವಾರಾಣಸಿ ಜಿಲ್ಲೆಯ ಮೊಘಲ್‌ಸರಾಯ್‌ನಲ್ಲಿ 1904 ಅಕ್ಟೋಬರ್ 2ರಂದು ಜನಿಸಿದರು. ಅವರ ತಂದೆ ಶಾರದಾ ಪ್ರಸಾದ್ ಮತ್ತು ತಾಯಿ ರಾಮದುಲಾರಿ ದೇವಿ. ಶಾಸ್ತ್ರಿಯವರು ಸಮಾನತೆಯಲ್ಲಿ ನಂಬಿಕೆಯುಳ್ಳರಾಗಿದ್ದ ವ್ಯಕ್ತಿ. ಹೀಗಾಗಿ ಜಾತಿ ವ್ಯವಸ್ಥೆಯನ್ನು ವಿಭಜನೆಯನ್ನು ಸೃಷ್ಟಿಸುವ ಸಾಮಾಜಿಕ ಅನಿಷ್ಟವೆಂದು ಪರಿಗಣಿಸಿದ್ದರು. ಅವರು ಚಿಕ್ಕ ವಯಸ್ಸಿನಲ್ಲೇ ತಮ್ಮ ಕುಟುಂಬದ ಹೆಸರನ್ನು ತ್ಯಜಿಸಿ, ಕಾಶಿ ವಿದ್ಯಾಪೀಠಕ್ಕೆ ಸೇರಿ ತತ್ವಶಾಸ್ತ್ರದಲ್ಲಿ ಪದವಿ ಪಡೆದ ನಂತರವೇ 'ಶಾಸ್ತ್ರಿ' ಎಂಬ ಬಿರುದು ಪಡೆದರು.

ಶಾಸ್ತ್ರಿಯವರು ಶಾಲೆಯನ್ನು ತೊರೆದು 1920ರಲ್ಲಿ ಗಾಂಧೀಜಿಯವರು ಪ್ರಾರಂಭಿಸಿದ ಅಹಿಂಸಾತ್ಮಕ ಸ್ವಾತಂತ್ರ್ಯ ಚಳವಳಿಯಲ್ಲಿ ಭಾಗವಹಿಸಿ ದೇಶಕ್ಕೆ ಸ್ವಾತಂತ್ರ್ಯ ತಂದು ಕೊಡುವಲ್ಲಿ ಶ್ರಮಿಸಿದವರು. ಭಾರತದ ಎರಡನೇ ಪ್ರಧಾನಿಯಾಗಿ, ಗೃಹ ಸಚಿವರಾಗಿ ಸೇವೆ ಸಲ್ಲಿಸಿದ್ದರು. 1951 ರಲ್ಲಿ ರೈಲ್ವೇ ಸಚಿವರಾಗಿ ಕರ್ತವ್ಯ ಸಲ್ಲಿಸಿದ್ದರು. ಪುಟ 2



### ಎಕೆ-47, ಐದು 303 ಕೋವಿ, 100ಕ್ಕೂ ಹೆಚ್ಚು ಗುಂಡು

## ನಕ್ಸಲರದ್ದು ಎನ್ನಲಾದ ಶಸ್ತ್ರಾಸ್ತ್ರ ಪತ್ತೆ

**ಚಿಕ್ಕಮಗಳೂರು:** ರಾಜ್ಯದಲ್ಲಿ ಇತ್ತೀಚೆಗೆ ಶರಣಾದ ನಕ್ಸಲರು ರಹಸ್ಯ ಸ್ಥಳದಲ್ಲಿ ಅಡಗಿಸಿಟ್ಟಿದ್ದರು ಎನ್ನಲಾದ ಶಸ್ತ್ರಾಸ್ತ್ರಗಳು ಪತ್ತೆಯಾಗಿವೆ.

ಚಿಕ್ಕಮಗಳೂರು ಜಿಲ್ಲೆ, ಕೊಪ್ಪ ತಾಲೂಕಿನ ಜಯಪುರ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿರುವ ಕಿತ್ತಲೆಗಂಡಿ ಕಾಡಿನಲ್ಲಿ ಪತ್ತೆಯಾಗಿದೆ. ಮೇಲ್ನೋಟಕ್ಕೆ ನಕ್ಸಲರದ್ದೇ ಎಂದು ಹೇಳಲಾಗುತ್ತಿದ್ದರೂ, ಇನ್ನೂ ಖಚಿತವಾಗಿಲ್ಲ. ತನಿಖೆಯಿಂದ ಗೊತ್ತಾಗಬೇಕು ಎಂದು ಪೊಲೀಸರು ತಿಳಿಸಿದ್ದಾರೆ.

1 ಎಕೆ-47, 303 ಕೋವಿ 5, ಒಂದು ಪಿಸ್ತೂಲ್, 100ಕ್ಕೂ ಹೆಚ್ಚು ಗುಂಡುಗಳು ಮೇಗೂರು ಅರಣ್ಯ ವ್ಯಾಪ್ತಿಯ ಕಿತ್ತಲೆಗಂಡಿ ಅರಣ್ಯ ಪ್ರದೇಶದಲ್ಲಿ ಪತ್ತೆಯಾಗಿವೆ. ಶಸ್ತ್ರಾಸ್ತ್ರ ಕಾಯ್ದೆ ಅಡಿಯಲ್ಲಿ ಅಪರಿಚಿತರ ಆಯುಧಗಳು ಎಂದು



ಜಯಪುರ ಪೊಲೀಸರು ಪ್ರಕರಣ ದಾಖಲಿಸಿಕೊಂಡಿದ್ದಾರೆ.

ಪೊಲೀಸರು 6 ಮಂದಿ ನಕ್ಸಲರನ್ನು ರಾಷ್ಟ್ರೀಯ ತನಿಖಾ ದಳದ ವಿಶೇಷ ನ್ಯಾಯಾಲಯಕ್ಕೆ ಹಾಜರು ಪಡಿಸುವ ಮೊದಲು ಶಸ್ತ್ರಾಸ್ತ್ರಗಳ ಬಗ್ಗೆ ಮಾಹಿತಿಯನ್ನು ಪಡೆದುಕೊಂಡಿದ್ದರು. ಕೆಲವರು ಅರಣ್ಯದ ರಹಸ್ಯ ಸ್ಥಳದಲ್ಲಿ ಅಡಗಿಸಿ ಇಟ್ಟಿರುವುದಾಗಿ ತಿಳಿದುಬಂದಿತ್ತು. ಈ ಸ್ಥಳಗಳ ಮಾಹಿತಿ ಪೊಲೀಸರಿಗೆ ಇರಲಿಲ್ಲ. ಹೀಗಾಗಿ ಪೊಲೀಸರು ಬಾಡಿ ವಾರಂಟ್ ಪಡೆದು ಅವರನ್ನು ಹೆಚ್ಚಿನ ವಿಚಾರಣೆಗೆ ಒಳಪಡಿಸಿದ ಬಳಿಕ ಶಸ್ತ್ರಾಸ್ತ್ರ ವಶಕ್ಕೆ ಪಡೆಯಲಿದ್ದಾರೆ ಎನ್ನಲಾಗಿತ್ತು. ಪುಟ 2

## ಯಾವ ಸ್ವಾಮೀಜಿ, ಗುರೂಜಿಗಳು ಭವಿಷ್ಯ ನುಡಿಯೋದು ಬೇಕಿಲ್ಲ

**ಬೆಂಗಳೂರು:** ನಮ್ಮ ಸರ್ಕಾರ ಸುಭದ್ರವಾಗಿದೆ, ಸಿದ್ದರಾಮಯ್ಯ ಮುಖ್ಯಮಂತ್ರಿ ಆಗಿ ಕೆಲಸ ಮಾಡ್ತಿದ್ದಾರೆ. ಯಾವ ಸ್ವಾಮೀಜಿ, ಗುರೂಜಿಗಳು ಭವಿಷ್ಯ ನುಡಿಯೋದು ಬೇಕಿಲ್ಲ ಎಂದು ಡಿಸಿಎಂ ಡಿಕೆ ಶಿವಕುಮಾರ್ ತಿಳಿಸಿದರು.

ಬೆಂಗಳೂರಿನಲ್ಲಿಂದು ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಇದೇ ಅವಧಿಯಲ್ಲಿ ಡಿಕೆಶಿ ಸಿಎಂ ಆಗ್ತಾರೆ ಎಂಬ ನಯ್ ಗುರೂಜಿ ಭವಿಷ್ಯ ವಿಚಾರಕ್ಕೆ ಪ್ರತಿಕ್ರಿಯಿಸಿದರು. ನಾನು ಎಲ್ಲಾ ಸ್ವಾಮೀಜಿ, ಗುರೂಜಿಗಳಿಗೆ ವಿನಂತಿ ಮಾಡ್ತೀನಿ. ನಮ್ಮ ಸರ್ಕಾರದ ವಿಚಾರದಲ್ಲಿ ತಮ್ಮ ಯಾವ ಹೇಳಿಕೆ ಬೇಡ. ನಮ್ಮ ಸರ್ಕಾರ ಸುಭದ್ರವಾಗಿ ನಡೆಯುತ್ತಿದೆ. ರಾಜ್ಯದ ಮುಖ್ಯಮಂತ್ರಿ ಆಗಿ ಸಿದ್ದರಾಮಯ್ಯ ಅವರು ಕೆಲಸ ಮಾಡ್ತಿದ್ದಾರೆ. ಅವರ ನೇತೃತ್ವದಲ್ಲಿ



ನಾವೆಲ್ಲ ಒಟ್ಟಿಗೆ ಕೆಲಸ ಮಾಡ್ತಿದ್ದೇವೆ. ಯಾರೂ ಭವಿಷ್ಯ ನುಡಿಯೋದು ಬೇಕಿಲ್ಲ ಎಂದು ಎಂದು ಕುಟುಕಿದರು.

ಪವರ್ ಶೇರಿಂಗ್ ಜಟಾಪಟಿ ವಿಚಾರಕ್ಕೆ ಪ್ರತಿಕ್ರಿಯಿಸಿ, ಯಾವ ಪವರ್ ಇಲ್ಲ, ಯಾವ ಶೇರಿಂಗೂ ಇಲ್ಲ. 5 ವರ್ಷ ಕಾಂಗ್ರೆಸ್ ಸರ್ಕಾರ ಇರಲಿದೆ ಎಂದರು.

ಜಾತಿ ಜನಗಣತಿಗೆ ಪ್ರಬಲ ಸಮುದಾಯಗಳ ವಿರೋಧ ವಿಚಾರ ಕುರಿತು ಮಾತನಾಡಿ, ಜಾತಿ ಜನಗಣತಿಗೆ ಸಂಬಂಧಿಸಿದಂತೆ ಯಾವ ಸಭೆಯೂ ಇಲ್ಲ. ಸಿಎಂ ಕ್ಯಾಬಿನೆಟ್ ಸಭೆಗೆ ತರ್ತೀನಿ ಅಂತ ಹೇಳಿದ್ದಾರೆ. ಕ್ಯಾಬಿನೆಟ್‌ನಲ್ಲಿ ಚರ್ಚೆಯಾಗಲಿದೆ ಎಂದು ಹೇಳಿದರು.

ಅಲ್ಲದೇ, ನಾನು, ಸಿಎಂ ಸಭೆ ಕರೆದಿದ್ದೇವೆ. ಎಲ್ಲಾ ಸಭೆ ರದ್ದು ಮಾಡಿ ಸಂಜೆ ಪದಾಧಿಕಾರಿಗಳ ಇತರೆ ಸಭೆ ಇದೆ. ಸುರ್ಜೇವಾಲ ಬರ್ತಾರೆ, ಸಂಜೆ ಶಾಸಕಾಂಗ ಪಕ್ಷದ ಸಭೆ ಇದೆ. ಎಂಎಲ್‌ಎ, ಮಂತ್ರಿಗಳಿಗೆ ಜವಾಬ್ದಾರಿ ಕೊಡಬೇಕಿದೆ. ನಾಳೆ ಸಿಎಂ, ನಾನು ದೆಹಲಿಗೆ ಹೋಗ್ತಿದ್ದೇವೆ. ದೆಹಲಿಯಲ್ಲಿ ಹೊಸ ಕಟ್ಟಡ ಉದ್ಘಾಟನೆಯಲ್ಲಿ ಭಾಗಿಯಾಗಲಿದ್ದೇವೆ ಅಷ್ಟೇ ಎಂದು ಸ್ಪಷ್ಟಪಡಿಸಿದರು. ಪುಟ 2

### ಪ್ರತಿ ಸೋಮವಾರ ಮುಂಜಾನೆ 4:15 ರಿಂದ

## ಮೆಟ್ರೋ ಸೇವೆ



**ಬೆಂಗಳೂರು:** ಮೆಟ್ರೋ ಪ್ರಯಾಣಿಕರಿಗೆ ಗುಡ್ ನ್ಯೂಸ್ ಸಿಕ್ಕಿದೆ. ಇನ್ಮುಂದೆ ಪ್ರತಿ ಸೋಮವಾರ ಮುಂಜಾನೆ 4:15 ಕ್ಕೆ ಮೆಟ್ರೋ ಸೇವೆ ಆರಂಭ ಆಗಲಿದೆ.

ಜ.13 ರ ಸೋಮವಾರದಿಂದ ಹೊಸ ಸಮಯ ಚಾಲ್ತಿಯಲ್ಲಿರಲಿದೆ. ಜನಸಂದಣಿ ಆಧರಿಸಿ ಪ್ರತಿ ಸೋಮವಾರದಂದು ಮೆಟ್ರೋ ಸಮಯದಲ್ಲಿ ಬದಲಾವಣೆಯಾಗಲಿದೆ. ಪುಟ 2

# ರಾಜ್ಯ ಸಾವಿನ ಮನೆಯಾಗಿದ್ದರೂ, ಸರ್ಕಾರ ಸಂಬಂಧವಿಲ್ಲದಂತೆ ಡಿನ್ನರ್ ಪಾರ್ಟಿ ಮಾಡ್ತಿದೆ

**ವಿಜಯಪುರ:** ರಾಜ್ಯ ಸಾವಿನ ಮನೆಯಾಗಿದ್ದರೂ ಸರ್ಕಾರ ಸಂಬಂಧವಿಲ್ಲದ ರೀತಿಯಲ್ಲಿದೆ. ಜೊತೆಗೆ ಡಿನ್ನರ್ ಪಾರ್ಟಿ ನಡೆಸಿದ್ದಾರೆ ಎಂದು ಕಾಂಗ್ರೆಸ್ ಸರ್ಕಾರದ ವಿರುದ್ಧ ವಿಧಾನ ಪರಿಷತ್ ಸದಸ್ಯ ಸಿ.ಟಿ ರವಿ ಕಿಡಿಕಾರಿದ್ದಾರೆ.



ಜಿಲ್ಲೆಯಲ್ಲಿ ಮಾತನಾಡಿದ ಅವರು, ರಾಜ್ಯ ಸರ್ಕಾರ ಸಾವಿನ ಮನೆಯಾಗಿದೆ. ಬಾಣಂತಿಯರ ಸಾವು, ಹಸುಗೂಸುಗಳ ಸಾವಿಗೆ ಕಾರಣ ಗೊತ್ತಾಗುತ್ತಿಲ್ಲ. ರೈತರ ಆತ್ಮಹತ್ಯೆಗಳಾಗುತ್ತಿವೆ. ಗುತ್ತಿಗೆದಾರರು ಆತ್ಮಹತ್ಯೆ ಮಾಡಿಕೊಳ್ಳುತ್ತಿದ್ದಾರೆ. ಆಳುವ ಸರ್ಕಾರಕ್ಕೆ ಇದೆಲ್ಲ ಕಾಣುತ್ತಿಲ್ಲ ಎಂದು ವಾಗ್ದಾಳಿ ನಡೆಸಿದರು. ರೋಮ್ ದೇಶ ಹೊತ್ತಿ ಉರಿಯುವಾಗ ದೊರೆ ಪಿಟೀಲು ನುಡಿಸುತ್ತಿದ್ದನಂತೆ ಎಂಬ ಗಾದೆ ಮಾತಿನಂತೆ ರಾಜ್ಯ ಸಾವಿನ ಮನೆಯಾಗಿದ್ದರೂ ಸರ್ಕಾರ ಸಂಬಂಧವಿಲ್ಲದ ರೀತಿಯಲ್ಲಿದೆ. ಇವರು ಡಿನ್ನರ್ ಪಾರ್ಟಿ ನಡೆಸಿದ್ದಾರೆ. ಕರುಣೆ ಇದ್ದರೆ ಬಾಣಂತಿಯರ ಸಾವಿಗೆ ಕಾರಣ ಕಂಡುಕೊಳ್ಳಲಿ. ಸಾವಿನ ಸರಣಿ ಇನ್ನೂ ನಿಂತಿಲ್ಲ. ಸಾವುಗಳಿಗೆ ಆಸ್ಪತ್ರೆ, ಔಷಧ, ವೈದ್ಯರು ಯಾರು ಕಾರಣ ಎಂಬುವುದನ್ನು ಕಂಡು ಹಿಡಿಯಲಿ ಎಂದರು.

ಅತಿಮಾನುಷ ಶಕ್ತಿಗಳು ಸರ್ಕಾರಿ ಆಸ್ಪತ್ರೆಗಳಲ್ಲಿ ಬಾಣಂತಿಯರ ಸಾವಿಗೆ ಕಾರಣವಾ? ಔಷಧಿ ಕಾರಣವಾಗಿದ್ದರೆ ಪೂರೈಕೆದಾರರ ಮೇಲೆ ಕ್ರಮವಾಗಲಿ. ವೈದ್ಯರಾಗಿದ್ದರೆ ಅವರ ಮೇಲೂ ಕ್ರಮವಾಗಲಿ. ಎರಡನೇ ಬಾರಿ ಸಿಎಂ ಆಗಿರುವ ಸಿದ್ದರಾಮಯ್ಯ ಕಲ್ಲಿನ ಹೃದಯದವರಾಗಿದ್ದಾರೆ. ಬಾಣಂತಿಯರ ಸಾವಿನ ಕುರಿತು ಹಾಲಿ ನ್ಯಾಯಾಧೀಶರ ನೇತೃತ್ವದಲ್ಲಿ ತಜ್ಞರ ಸಮಿತಿ ಆಗಲಿ. ಸರ್ಕಾರದ ಸಚಿವರ ಮೇಲೆ ನಮಗೆ ನಂಬಿಕೆಯಿಲ್ಲ. ಎಕ್ಸ್‌ಫರ್ಟ್ ಕಮಿಟಿ ತನಿಖೆ ಮಾಡಲಿ ಎಂದು ಹೇಳಿದರು.

# ಆಸ್ತಿಗಾಗಿ ಮಾರಕಾಸ್ತ್ರದಿಂದ ತಂದೆ, ಮಲತಾಯಿಯ ಬರ್ಬರ ಹತ್ಯೆಗೈದ ಮಗ

**ಹುಬ್ಬಳ್ಳಿ:** ಆಸ್ತಿಗಾಗಿ ಮಾರಕಾಸ್ತ್ರದಿಂದ ಕೊಚ್ಚಿ ಹೆತ್ತ ತಂದೆ ಹಾಗೂ ಮಲತಾಯಿಯನ್ನು ವ್ಯಕ್ತಿ ಬರ್ಬರವಾಗಿ ಹತ್ಯೆಗೈದ ಘಟನೆ ಹುಬ್ಬಳ್ಳಿ ತಾಲೂಕಿನ ಕುಸುಗಲ್ ಗ್ರಾಮದಲ್ಲಿ ನಡೆದಿದೆ. ಮೃತರನ್ನು ಅಶೋಕ, ಶಾರದಮ್ಮ ಎಂದು ಗುರುತಿಸಲಾಗಿದೆ ಆರೋಪಿ ಗಂಗಾಧರಪ್ಪ ಕೃತ್ಯ ಎಸಗಿ ಪರಾರಿಯಾಗಿದ್ದಾನೆ. ಮೃತ ಅಶೋಕನ ಮೊದಲ ಹೆಂಡತಿಯ ಮಗ ಗಂಗಾಧರಪ್ಪ ಬಾಗಲಕೋಟೆ ಜಿಲ್ಲೆಯ ಬೀಳಿಗಿಯಲ್ಲಿ ವಾಸಿಸುತ್ತಿದ್ದ. ಎರಡು ಎಕರೆ ಆಸ್ತಿಗಾಗಿ ಆಗಾಗ ತಂದೆ ಮತ್ತು ಮಗನ ನಡುವೆ ಜಗಳ ನಡೆಯುತ್ತಿತ್ತು. ಇಂದು ಕೂಡ ಆರೋಪಿ ಮನೆಗೆ ಕುಡಿದು ಬಂದು ತಂದೆ ಜೊತೆ ಜಗಳ ಮಾಡಿದ್ದ. ಮನೆಗೆ ಬಂದು ಆಸ್ತಿ ಬರೆದುಕೊಡುವಂತೆ ಒತ್ತಾಯಿಸಿದ್ದ. ಈ ವೇಳೆ ತಂದೆ ಆಸ್ತಿ ಕೊಡಲು ನಿರಾಕರಿಸಿದ್ದರು. ಈ ಹಿನ್ನೆಲೆ ಮಾರಕಾಸ್ತ್ರಗಳಿಂದ ಕೊಚ್ಚಿ ತಂದೆ ಹಾಗೂ ಮಲತಾಯಿಯ ಕೊಲೆ ಮಾಡಿದ್ದಾನೆ. ಕೊಲೆ ಮಾಡಿ ಸ್ಥಳದಿಂದ ಪರಾರಿಯಾಗಿದ್ದಾನೆ. ಸದ್ಯ ಸ್ಥಳಕ್ಕೆ ಪೊಲೀಸರ ಭೇಟಿ ನೀಡಿ, ಪರಿಶೀಲನೆ ನಡೆಸಿದ್ದಾರೆ. ಹುಬ್ಬಳ್ಳಿ ಗ್ರಾಮೀಣ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಈ ಘಟನೆ ನಡೆದಿದ್ದು, ಆರೋಪಿ ಗಂಗಾಧರಪ್ಪನ ಬಂಧನಕ್ಕಾಗಿ ಪೊಲೀಸರು ಬಲೆ ಬೀಸಿದ್ದಾರೆ.

## ಕಳೆದ ವರ್ಷದ ಬಜೆಟ್ ಹಣವನ್ನೇ ರಿಲೀಸ್ ಮಾಡದ ಸರ್ಕಾರ!

# ಬಜೆಟ್‌ಗೆ ಇನ್ನೆರಡು ತಿಂಗಳು ಬಾಕಿ

**ಬೆಂಗಳೂರು:** ಹೊಸ ಬಜೆಟ್‌ಗೆ ಇನ್ನೆರಡು ತಿಂಗಳು ಬಾಕಿಯಿದೆ. ಆದರೆ ಕಳೆದ ವರ್ಷ ಘೋಷಣೆ ಮಾಡಿದ್ದ ಅನುದಾನ ಹಣವನ್ನೇ ಸರ್ಕಾರ ಇನ್ನೂ ಬಿಡುಗಡೆ ಮಾಡಿಲ್ಲ. ಹೀಗಾಗಿ ಸರ್ಕಾರಕ್ಕೆ ಹಣದ ಸಮಸ್ಯೆ ಶುರುವಾಗಿದೆಯಾ ಎನ್ನುವ ಪ್ರಶ್ನೆ ಮೂಡಿದೆ.

2024–25ನೇ ಸಾಲಿನ ಬಜೆಟ್‌ನಲ್ಲಿ ಸಿಎಂ ಸಿದ್ದರಾಮಯ್ಯ ಎಲ್ಲಾ ಇಲಾಖೆಗೂ 3,10,248 ಕೋಟಿ ರೂ. ಅನುದಾನ ಬಿಡುಗಡೆ ಮಾಡಿದ್ದರು. ಈ ಪೈಕಿ ಇಲ್ಲಿಯವರೆಗೂ 1,81,785 ಲಕ್ಷ ಕೋಟಿ ರೂ. ಅನುದಾನ ಬಿಡುಗಡೆಯಾಗಿದೆ. ಹಂಚಿಕೆಯಾದ ಅನುದಾನದಲ್ಲಿ 80% ಇಲಾಖೆಗಳಿಗೆ 50% ಹಣವನ್ನು ಸರ್ಕಾರ ನೀಡಿದೆ. ಆದರೆ ಎಲ್ಲಾ ಇಲಾಖೆಗಳಿಗೂ ಸರಿಯಾಗಿ ಅನುದಾನ ಬಿಡುಗಡೆಯಾಗಿಲ್ಲ. ಹೀಗಾಗಿ ಗ್ಯಾರಂಟಿ ಯೋಜನೆಗಳಿಂದಾಗಿ ಸರ್ಕಾರಿ ಇಲಾಖೆಗಳಿಗೆ ಹೊಡೆತ ಬೀಳುತ್ತಿದೆ. ಹಂಚಿಕೆ ಮಾಡಿದ್ದ ಅನುದಾನ ಬಿಡುಗಡೆಗೆ ಸರ್ಕಾರಕ್ಕೆ ಹಣದ ಕೊರತೆ



2024–25ನೇ ಸಾಲಿನಲ್ಲಿ ಹಾಗಾದರೆ ಯಾವ ಯಾವ ಇಲಾಖೆಗೆ ಸಿಎಂ ಎಷ್ಟು ಬಜೆಟ್ ಮೀಸಲಿಟ್ಟಿದ್ದರು? ಈವರೆಗೂ ಎಷ್ಟು ಹಣ ಬಿಡುಗಡೆ ಆಗಿದೆ ಎನ್ನುವ ಕುರಿತು ಸಂಪೂರ್ಣ ವಿವರ ಇಲ್ಲಿದೆ. ಈ ಕುರಿತು ಸರ್ಕಾರವೇ ಅಂಕಿಅಂಶಗಳನ್ನು ಬಿಡುಗಡೆ ಮಾಡಿದೆ.

## ಪ್ರಮುಖ ಇಲಾಖೆಗಳಿಗೆ ಬಿಡುಗಡೆ ಆದ ಅನುದಾನ ಎಷ್ಟು?

| ಕೃಷಿ ಇಲಾಖೆ | |
|---|---|
| ನಿಗದಿಯಾದ ಅನುದಾನ | 4,991 ಕೋಟಿ ರೂ. |
| ಬಿಡುಗಡೆಯಾದ ಅನುದಾನ | 2,351 ಕೋಟಿ ರೂ. |
| **ನಗರಾಭಿವೃದ್ಧಿ ಇಲಾಖೆ** | |
| ನಿಗದಿಯಾದ ಅನುದಾನ | 14,935 ಕೋಟಿ ರೂ. |
| ಬಿಡುಗಡೆಯಾದ ಅನುದಾನ | 7,372 ಕೋಟಿ ರೂ. |
| **ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ** | |
| ನಿಗದಿಯಾದ ಅನುದಾನ | 34,439 ಕೋಟಿ ರೂ. |
| ಬಿಡುಗಡೆಯಾದ ಅನುದಾನ | 18,646 ಕೋಟಿ ರೂ. |
| **ಆರೋಗ್ಯ ಇಲಾಖೆ** | |
| ನಿಗದಿಯಾದ ಅನುದಾನ | 10,697 ಕೋಟಿ ರೂ. |
| ಬಿಡುಗಡೆಯಾದ ಅನುದಾನ | 6,299 ಕೋಟಿ ರೂ. |

| ಆಹಾರ ಇಲಾಖೆ | |
|---|---|
| ನಿಗದಿಯಾದ ಅನುದಾನ | 99,48 ಕೋಟಿ ರೂ. |
| ಬಿಡುಗಡೆಯಾದ ಅನುದಾನ | 4,082 ಕೋಟಿ ರೂ. |
| **ಇಂಧನ ಇಲಾಖೆ** | |
| ನಿಗದಿಯಾದ ಅನುದಾನ | 23,173 ಕೋಟಿ ರೂ. |
| ಬಿಡುಗಡೆಯಾದ ಅನುದಾನ | 14,892 ಕೋಟಿ ರೂ. |
| **ಜಲಸಂಪನ್ಮೂಲ ಇಲಾಖೆ** | |
| ನಿಗದಿಯಾದ ಅನುದಾನ | 16,809 ಕೋಟಿ ರೂ. |
| ಬಿಡುಗಡೆಯಾದ ಅನುದಾನ | 7,587 ಕೋಟಿ ರೂ. |
| **ಗ್ರಾಮೀಣಾಭಿವೃದ್ಧಿ ಇಲಾಖೆ** | |
| ನಿಗದಿಯಾದ ಅನುದಾನ | 21,512 ಕೋಟಿ ರೂ. |
| ಬಿಡುಗಡೆಯಾದ ಅನುದಾನ | 70,95 ಕೋಟಿ ರೂ. |
| **ಲೋಕೋಪಯೋಗಿ ಇಲಾಖೆ** | |
| ನಿಗದಿಯಾದ ಅನುದಾನ | 10,176 ಕೋಟಿ ರೂ. |
| ಬಿಡುಗಡೆಯಾದ ಅನುದಾನ | 5,684 ಕೋಟಿ ರೂ. |
| **ವಸತಿ ಇಲಾಖೆ** | |
| ನಿಗದಿಯಾದ ಅನುದಾನ | 3,067 ಕೋಟಿ ರೂ. |
| ಬಿಡುಗಡೆಯಾದ ಅನುದಾನ | 1,606 ಕೋಟಿ ರೂ. |

| ಶಾಲಾ ಶಿಕ್ಷಣ ಇಲಾಖೆ | |
|---|---|
| ನಿಗದಿಯಾದ ಅನುದಾನ | 37,055 ಕೋಟಿ ರೂ. |
| ಬಿಡುಗಡೆಯಾದ ಅನುದಾನ | 22,932 ಕೋಟಿ ರೂ. |
| **ಸಾರಿಗೆ ಇಲಾಖೆ** | |
| ನಿಗದಿಯಾದ ಅನುದಾನ | 65,34 ಕೋಟಿ ರೂ. |
| ಬಿಡುಗಡೆಯಾದ ಅನುದಾನ | 4,023 ಕೋಟಿ ರೂ. |
| **ಸಮಾಜ ಕಲ್ಯಾಣ ಇಲಾಖೆ** | |
| ನಿಗದಿಯಾದ ಅನುದಾನ | 5,095 ಕೋಟಿ ರೂ. |
| ಬಿಡುಗಡೆಯಾದ ಅನುದಾನ | 3,028 ಕೋಟಿ ರೂ. |
| **ಯೋಜನೆ ಇಲಾಖೆ** | |
| ನಿಗದಿಯಾದ ಅನುದಾನ | 3,841 ಕೋಟಿ ರೂ. |
| ಬಿಡುಗಡೆಯಾದ ಅನುದಾನ | 429 ಕೋಟಿ ರೂ. |
| **ವೈದ್ಯಕೀಯ ಶಿಕ್ಷಣ ಇಲಾಖೆ** | |
| ನಿಗದಿಯಾದ ಅನುದಾನ | 4,331 ಕೋಟಿ ರೂ. |
| ಬಿಡುಗಡೆಯಾದ ಅನುದಾನ | 3,062 ಕೋಟಿ ರೂ. |
| **ಆರ್ಥಿಕ ಇಲಾಖೆ** | |
| ನಿಗದಿಯಾದ ಅನುದಾನ | 34,167 ಕೋಟಿ ರೂ. |
| ಬಿಡುಗಡೆಯಾದ ಅನುದಾನ | 26,340 ಕೋಟಿ ರೂ. |

# ಡಿಕೆಶಿ ಎರಡೂವರೆ ವರ್ಷ ಯಾಕೆ, ಮುಂದೆ ಐದು ವರ್ಷ ಸಿಎಂ ಆಗಲಿ

**ಬೆಂಗಳೂರು:** ಎರಡೂವರೆ ವರ್ಷಕ್ಕೆ ಯಾಕೆ ಪ್ರಯತ್ನಿಸುತ್ತೀರಿ? ಮುಂದಿನ ಐದು ವರ್ಷದ ಅವಧಿಗೆ ಮುಖ್ಯಮಂತ್ರಿ ಆಗಿ ಎಂದು ಡಿಸಿಎಂ ಡಿಕೆ ಶಿವಕುಮಾರ್‌ಗೆ ಸಚಿವ ಕೆ.ಎನ್ ರಾಜಣ್ಣ ಸಲಹೆ ನೀಡಿದ್ದಾರೆ.



ಮಾಧ್ಯಮದೊಂದಿಗೆ ಅವರು ಮಾತನಾಡಿದರು. ಡಿಕೆಶಿ ಹಣೆಯಲ್ಲಿ ಬರೆದಿದ್ರೆ ಸಿಎಂ ಆಗ್ತಾರೆ ಎಂಬ ಎಸ್.ಟಿ.ಸೋಮಶೇಖರ್ ಹೇಳಿಕೆಗೆ ಪ್ರತಿಕ್ರಿಯಿಸಿ ಮಾತನಾಡಿದ ಅವರು, ಸಿಎಂ ಆಗೇ ಬಿಡುತ್ತಾರೆ ಅಂತನೂ ಹೇಳಿಲ್ಲ. ಆಗಲ್ಲ ಅಂತಾನೂ ಹೇಳಿಲ್ಲ. ಅವರ ಹಣೆಯಲ್ಲಿ ಬರೆದಿದ್ದರೆ ಆಗ್ತಾರೆ ಎಂದಿದ್ದಾರೆ. ಹಣೆಯಲ್ಲಿ ಬರೆದಿದ್ದರೆ ಆಗುತ್ತದೆ. ಎಲ್ಲರದ್ದು ವಿಧಿ ಏನು ಅಂತ ಮೊದಲೇ ತೀರ್ಮಾನ ಆಗಿರುತ್ತದೆ. ಅದರ ಪ್ರಕಾರ ಆಗುತ್ತದೆ. ಡಿಕೆ ಶಿವಕುಮಾರ್ ಎರಡೂವರೆ ವರ್ಷಕ್ಕೆ ಯಾಕೆ ಪ್ರಯತ್ನಿಸುತ್ತೀರಿ? ಮುಂದಿನ ಐದು ವರ್ಷದ ಅವಧಿಗೆ ಸಿಎಂ ಆಗಲಿ ಎಂದರು.

ಇದೇ ವೇಳೆ, ಡಿಕೆಶಿಯಿಂದ ಪ್ರತ್ಯಂಗಿ ಹೋಮ ವಿಚಾರವಾಗಿ, ನನಗೆ ಪೂಜೆ, ಪುನಸ್ಕಾರ, ನಮನ ವಾಮಾಚಾರದ ಬಗ್ಗೆ ನಂಬಿಕೆ ಇಲ್ಲ. ಅಸಹಾಯಕರಿಗೆ ಒಳ್ಳೆಯದು ಮಾಡಿದರೆ ಅದೇ ಒಳ್ಳೆಯದು. ಯಾರೋ ಒಬ್ಬ ಅಸಹಾಯಕನಿಗೆ ತೊಂದರೆ ನೀಡಿದರೆ ಶಾಪ ಹಾಕುತ್ತಾನೆ. ಅದೇ ನಮಗೆ ಕೆಟ್ಟದಾಗುತ್ತದೆ. ಹಿಂದೆ ನನ್ನ ವಿರುದ್ಧ ಮಾಟ, ವಾಮಾಚಾರದ ಪ್ರಯೋಗ ನಡೆದಿತ್ತು. ಆ ಅನುಭವ ನನಗೆ ಆಗಿದೆ. ನಾನು ಯಾರಿಗೂ ಹೆದರಿಸುವವನು ಅಲ್ಲ ಎಂದು ಹೇಳಿದರು.

ಕೇಂದ್ರ ಸಚಿವ ಕುಮಾರಸ್ವಾಮಿ ಈ ಸರ್ಕಾರದಲ್ಲಿ ರೇಟ್ ಕಾರ್ಡ್ ಫಿಕ್ಸ್ ಆಗಿದೆ ಎಂದರೆ ಅವರ ಕಾಲದಲ್ಲಿ ರೇಟ್ ಕಾರ್ಡ್ ಎಷ್ಟಿತ್ತು ಅಂತ ಹೇಳಬೇಕಲ್ಲ. ಒಂದು ತಿಳ್ಕೊಳ್ಳಿ ಈ ದೇಶದಲ್ಲಿ 90% ರಾಜಕಾರಣಿಗಳು ಭ್ರಷ್ಟರೆ, ಎಲ್ಲಿಂದ ದುಡ್ಡು ತರ್ತಾರೆ ಮನೆಯಿಂದ ಕೊಡ್ತಾರಾ? ಬೇರೆಯವರ ಹತ್ತಿರ ತಗೊಂಡು ಕೊಡಬೇಕು ಎಂದು ವಾಗ್ದಾಳಿ ನಡೆಸಿದ್ದಾರೆ.

## ಬೋರ್‌ವೆಲ್ ಅಕ್ರಮ ಆರೋಪ

# ಬಿಬಿಎಂಪಿ 43 ಮಾಜಿ ಕಾರ್ಪೊರೇಟರ್‌ಗಳ ಮೇಲೆ ಇಡಿ ಕಣ್ಣು

**ಬೆಂಗಳೂರು:** ಬೆಂಗಳೂರಿನಲ್ಲಿ ಕೊಳವೆಬಾವಿ ಕೊರೆಸುವ ಸಂಬಂಧ 2016 ರಿಂದ 2019ರ ಅವಧಿಯಲ್ಲಿ ಸುಮಾರು 970 ಕೋಟಿ ರೂಪಾಯಿ ಅಕ್ರಮ ನಡೆದಿದೆ ಎಂಬ ಆರೋಪಗಳ ಸಂಬಂಧ ಇದೀಗ ಜಾರಿ ನಿರ್ದೇಶನಾಲಯ (ಇ.ಡಿ) ಬಿಬಿಎಂಪಿಯ 43 ಮಂದಿ ಮಾಜಿ ಕಾರ್ಪೊರೇಟರ್‌ಗಳ ವಿವರಗಳನ್ನು ಕೇಳಿದೆ.

ಯೋಜನೆ ಅನುಷ್ಠಾನಗೊಂಡ ವಾರ್ಡ್‌ಗಳು, ವಲಯಗಳು, ಕಾರ್ಪೊರೇಟರ್‌ಗಳ ವಿಳಾಸಗಳು, ಪ್ಯಾನ್ ಮತ್ತು ಆಧಾರ್ ಕಾರ್ಡ್ ವಿವರಗಳು, ಇಮೇಲ್ ಐಡಿಗಳು ಮತ್ತು ಸಂಪರ್ಕ ಸಂಖ್ಯೆಗಳನ್ನು ಜಾರಿ ನಿರ್ದೇಶನಾಲಯ ಕೇಳಿದೆ ಎಂಬುದನ್ನು ಆಂತರಿಕ ದಾಖಲೆಗಳನ್ನು ಉಲ್ಲೇಖಿಸಿ 'ಡೆಕ್ಕನ್ ಹೆರಾಲ್ಡ್' ವರದಿ ಮಾಡಿದೆ.

ನಗರದ ಹೊರವಲಯದ ನೀರಿನ ಬಿಕ್ಕಟ್ಟನ್ನು ಪರಿಹರಿಸುವುದಕ್ಕೆಂದು ಬೋರ್‌ವೆಲ್‌ಗಳನ್ನು ಕೊರೆಯುವುದಕ್ಕಾಗಿಯೇ ಹೆಚ್ಚಿನ ಹಣ ವಿನಿಯೋಗಿಸಲಾಗಿದೆ. 43 ಮಾಜಿ ಕೌನ್ಸಿಲರ್‌ಗಳು ಹಣ ಬಿಡುಗಡೆಗೆ ಪತ್ರ ಬರೆದಿರುವುದು ಬೆಳಕಿಗೆ ಬಂದಿರುವುದರಿಂದ ಅವರ ಪಾತ್ರದ ಬಗ್ಗೆ ಈಗ



ಇ.ಡಿ ಕಣ್ಣಿಟ್ಟಿದೆ ಎಂದು ವರದಿ ಉಲ್ಲೇಖಿಸಿದೆ.

**ಯಾವ ಕ್ಷೇತ್ರಗಳಲ್ಲಿ ಹೆಚ್ಚು ಅಕ್ರಮ?:** ಯಶವಂತಪುರ, ಕೆಆರ್ ಪುರಂ, ಬ್ಯಾಟರಾಯನಪುರ, ಆರ್‌ಆರ್ ನಗರ, ಬೊಮ್ಮನಹಳ್ಳಿ ಕ್ಷೇತ್ರಗಳಲ್ಲಿ ಹೆಚ್ಚು ಅಕ್ರಮ ನಡೆದಿರುವುದು ಕಂಡು ಬಂದಿರುವುದಾಗಿ ವರದಿಯಾಗಿದೆ.

2016–17 ಮತ್ತು 2017–18ರಲ್ಲಿ 9,558 ಬೋರ್‌ವೆಲ್‌ಗಳನ್ನು ಕೊರೆಸಲು ಹಣ ಬಿಡುಗಡೆ ಮಾಡಲಾಗಿತ್ತು. ಈ ಪೈಕಿ 1,000 ಬೋರ್‌ವೆಲ್‌ಗಳನ್ನು ಮಾತ್ರ ಕೊರೆಸಲಾಗಿದೆ ಎಂದು ದೂರುಗಳಲ್ಲಿ ಉಲ್ಲೇಖವಾಗಿದೆ. ಇತರ ಎಲ್ಲ ಸಂದರ್ಭಗಳಲ್ಲಿ, ಪಾವತಿಗಳನ್ನು ಸ್ವೀಕರಿಸಲು ನಕಲಿ ಬಿಲ್‌ಗಳನ್ನು ಸಂಗ್ರಹಿಸಲಾಗಿದೆ ಎಂದು ಆರೋಪಿಸಲಾಗಿದೆ. 600 ಅಡಿ ಆಳದ ಬೋರ್‌ವೆಲ್‌ಗಳನ್ನು ಕೊರೆಸಿದರೂ 1,500 ಅಡಿ ಆಳಕ್ಕೆ ಬಿಲ್ ಪಡೆದಿರುವ ಉದಾಹರಣೆಗಳಿವೆ ಎಂದು ವರದಿ ತಿಳಿಸಿದೆ.

**ಇಡಿ ಕೇಳಿದ ವಿವರಗಳೇನು?:** 43 ಮಾಜಿ ಕಾರ್ಪೊರೇಟರ್‌ಗಳ ವಿವರ ಮಾತ್ರವಲ್ಲದೆ, ಗುತ್ತಿಗೆದಾರರು ಮತ್ತು ಬಿಬಿಎಂಪಿ ನಡುವಿನ ಒಪ್ಪಂದ, ಬೋರ್‌ವೆಲ್‌ಗಳ ವಿವರಗಳು, ಸ್ಥಾಪಿಸಲಾದ ಆರ್‌ಒ ಘಟಕಗಳು ಮತ್ತು ಸಲ್ಲಿಸಿದ ದಾಖಲೆಗಳು (ಇನ್‌ವಾಯ್ಸ್‌ಗಳು ಮತ್ತು ಬಿಲ್‌ಗಳು) ಮತ್ತು ಹಣವನ್ನು ಬಿಡುಗಡೆ ಮಾಡಲು ಬಳಸಿದ ಖಾತೆಗಳು ಅಥವಾ ಹಣಕಾಸುಗಳಲ್ಲಿನ ಅಧಿಕಾರಿಗಳ ಹೆಸರುಗಳ ಬಗ್ಗೆ ಇಡಿ ಮತ್ತಷ್ಟು ವಿವರಗಳನ್ನು ಕೋರಿದೆ.

ಅಕ್ರಮದ ಆರೋಪ ಸಂಬಂಧ ಎರಡು ದಿನಗಳ ಹಿಂದಷ್ಟೇ ಬಿಬಿಎಂಪಿ ಮುಖ್ಯ ಇಂಜಿನಿಯರ್ ಕಚೇರಿ ಮೇಲೆ ಇಡಿ ಅಧಿಕಾರಿಗಳು ದಾಳಿ ನಡೆಸಿ ದಾಖಲೆಗಳ ಪರಿಶೀಲನೆ ನಡೆಸಿದ್ದರು. ಅದರ ಬೆನ್ನಲ್ಲೇ ಇದೀಗ ಇಡಿ ಮತ್ತಷ್ಟು ವಿವರ ಕೋರಿರುವ ಬಗ್ಗೆ ವರದಿಯಾಗಿದೆ.

## ರೇಡ್‌ಗೆ ಕಕ್ಕಾಬಿಕ್ಕಿ!

ಈ ವೇಳೆ ಮಕ್ಕಳ ತಟ್ಟೆಯಲ್ಲಿ ಮೊಟ್ಟೆ ಇಲ್ಲದನ್ನು ಕಂಡು ತಹಶೀಲ್ದಾರ್ ಶಾಕ್ ಆಗಿದ್ದಾರೆ. ಮೊಟ್ಟೆ ಎಲ್ಲಿ ಎಂದು ಮಕ್ಕಳಿಗೆ ಕೇಳಿದ್ದಾರೆ. ನಮಗೆ ಕೊಟ್ಟಿಲ್ಲ ಸರ್ ಬರೀ ಬಾಳೆಹಣ್ಣು ಕೊಟ್ಟಿದ್ದಾರೆ ಎಂದು ಉತ್ತರಿಸಿದ್ದಾರೆ. ಆಗ ತಹಶೀಲ್ದಾರ್, ಮುಖ್ಯೋಪಾಧ್ಯಾಯ ವೀರಣ್ಣಗೆ ಹಿಗ್ಗಾಮುಗ್ಗಾ ತರಾಟೆಗೆ ತೆಗೆದುಕೊಂಡಿದ್ದಾರೆ.

**ದರ ಹೆಚ್ಚಳದ ನೆಪ ಹೇಳಿ ಮೊಟ್ಟೆ ವಿತರಿಸಿಲ್ಲ:** ಈ ವೇಳೆ ಮುಖ್ಯೋಪಾಧ್ಯಾಯರು ತಪ್ಪಾಯ್ತು ಸರ್ ಎಂದು ಕ್ಷಮೆ ಕೇಳಿದ್ದಾರೆ. ಮುಖ್ಯೋಪಾಧ್ಯಾಯರು ದರ ಹೆಚ್ಚಳದ ನೆಪ ಹೇಳಿ ಮೊಟ್ಟೆ ವಿತರಿಸಿಲ್ಲ ಎಂಬುದು ತಿಳಿದುಬಂದಿದ್ದು, ಇದರಿಂದ ಮೊಟ್ಟೆ ಹಣವನ್ನು ಗುಳುಂ ಮಾಡಿದ್ರಾ? ಎನ್ನುವ ಅನುಮಾನ ಮೂಡಿದೆ.

ಇದೇ ರೀತಿಯ ಆರೋಪ ಬಂಡಿಹರ್ಲಾಪುರ ಗ್ರಾಮದ ಶಾಲೆಯ ವಿರುದ್ದವೂ ಕೇಳಿಬಂದಿದೆ. ಜನವರಿ 2ನೇ ತಾರೀಖು ತಹಶೀಲ್ದಾರರು ಬಂಡಿಹರ್ಲಾಪುರ ಗ್ರಾಮದ ಶಾಲೆಗೆ ಭೇಟಿ ನೀಡಿದ್ದರು. ಅಲ್ಲಿಯ ಶಾಲಾ ಶಿಕ್ಷಕರು ಸಹ ಮಕ್ಕಳಿಗೆ ವಿತರಿಸಿರಲಿಲ್ಲ ಎಂದು ಹೇಳಲಾಗಿದೆ.

## ಸ್ನೇಹಮಯಿ ಕೃಷ್ಣ ದೂರು

ಮೈಸೂರು ತಾಲ್ಲೂಕು ಕಸಬಾ ಹೋಬಳಿ ದೇವನೂರು ಗ್ರಾಮದ ಸರ್ವೆ ನಂ.154ರ ಆರ್.ಟಿ.ಸಿ ಪ್ರತಿಯಲ್ಲಿನ 9ನೇ ಕಾಲಂನಲ್ಲಿ ಜವರಯ್ಯ, ಕೆ.ಬೋರಯ್ಯ, ಚೌಡಯ್ಯ, ಪುಟ್ಟಣ್ಣಯ್ಯ, ಗಂಗಾಧರ ಎಂಬುವವರ ಹೆಸರಿಗೆ 3.38 ಎಕರೆ ಜಮೀನಿನ ಜಂಟಿ ಖಾತೆ ಇದೆ. ಇದೇ, ಆರ್‌ಟಿಸಿಯಲ್ಲಿ 11ನೇ ಕಾಲಂನಲ್ಲಿ ನಗರದ ಭೂಮಿತಿ ಕಾಯಿದೆ ವ್ಯಾಪ್ತಿಗೆ ಒಳ ಪಟ್ಟಿರುವುದಾಗಿ ನಮೂದಿಸಿದೆ. ಅಂದರೆ ಸರ್ಕಾರದ ಆಸ್ತಿಯಾಗಿದೆ.

ಈ ಜಮೀನು ನಗರದ ಭೂಮಿತಿ ಕಾಯಿದೆ ವ್ಯಾಪ್ತಿಗೆ ಒಳಪಟ್ಟಿರುವುದರಿಂದ ಸರ್ಕಾರ ವಶಕ್ಕೆ ಪಡೆದಿದೆಯೇ? ಅಥವಾ ಕಾಯಿದೆಯಿಂದ ಕೈಬಿಡಲಾಗಿದೆಯೆ? ಕೈಬಿಟ್ಟಿದ್ದರೆ ಆರ್‌ಟಿಸಿಯಲ್ಲಿ ಈಗಲೂ ಉಲ್ಲೇಖ ಇರಲು ಕಾರಣವೇನು? ಪ್ರಾಧಿಕಾರದಿಂದ ಜಮೀನನ್ನು ಸ್ವಾಧೀನಕ್ಕೆ ಪಡೆಯಲಾಗಿದೆಯೇ? ಯಾವಾಗ ಸ್ವಾಧೀನಕ್ಕೆ ಪಡೆಯಲಾಗಿದೆ? ಆ ಸಂದರ್ಭದಲ್ಲಿ ಯಾರಿಗೆ ಪರಿಹಾರದ ಹಣವನ್ನು ನೀಡಲಾಗಿದೆ? ಅಥವಾ ಪರಿಹಾರ ನೀಡಿಲ್ಲವೇ? ಜಮೀನಿನಲ್ಲಿ ಪ್ರಾಧಿಕಾರದಿಂದ ಬಡಾವಣೆ ರಚನೆ ಮಾಡಲಾಗಿದೆಯೇ? ಯಾವಾಗ ಬಡಾವಣೆ ರಚನೆ ಮಾಡಲಾಗಿದೆ? ಎಂಬ ಅಂಶಗಳ ಬಗ್ಗೆ ತನಿಖೆ ನಡೆಸಬೇಕೆಂದು ಒತ್ತಾಯಿಸಿದ್ದಾರೆ.

**ಜಿಟಿಡಿ ಪುತ್ರಿ, ಅಳಿಯನ ಹೆಸರಿಗೆ ಜಮೀನು:** ಮೈಸೂರಿನ ವಿಜಯನಗರ 4ನೇ ಹಂತದ 2ನೇ ಘಟ್ಟದ ನಿವೇಶನ ಸಂಖ್ಯೆ–12257 ಮತ್ತು 12259 ಸಂಖ್ಯೆಯ 50ಫಿ80 ಅಳತೆಯ ನಿವೇಶನಗಳನ್ನು ಜಿಟಿ ದೇವೇಗೌಡ ಪುತ್ರಿ ಡಿ.ಅನ್ನಪೂರ್ಣ ಮತ್ತು ಅಳಿಯ ಜಿ.ಎಂ.ವಿಶ್ವೇಶ್ವರಯ್ಯಗೆ 2023ರ ನವೆಂಬರ್ 11 ರಂದು ಕ್ರಯಪತ್ರಗಳನ್ನು ನೊಂದಣಿ ಮಾಡಲಾಗಿದೆ.

ಇದೇ ನಿವೇಶನಗಳನ್ನು ಪ್ರಾಧಿಕಾರದಿಂದ ಚೌಡಯ್ಯ ಎಂಬುವರಿಗೆ 2023ರ ಅಕ್ಟೋಬರ್ 19 ರಂದು ಕ್ರಯಪತ್ರ ನೊಂದಣಿ ಮಾಡಲಾಗಿದೆ. ಅದಾದ ಕೇವಲ ಸುಮಾರು 19 ದಿನಗಳ ಅಂತರದಲ್ಲೇ ಜಿಟಿ ದೇವೇಗೌಡ ಪುತ್ರಿ ಡಿ.ಅನ್ನಪೂರ್ಣ ಮತ್ತು ಜಿ.ಎಂ.ವಿಶ್ವೇಶ್ವರಯ್ಯಗೆ ಕ್ರಯಪತ್ರಗಳನ್ನು ನೊಂದಣಿ ಮಾಡಿಕೊಡಲಾಗಿದೆ ಎಂದು ದೂರಿನಲ್ಲಿ ಉಲ್ಲೇಖಿಸಿದ್ದಾರೆ.

ಮೈಸೂರು ನಗರ ಭೂಮಿತಿ ಕಾಯಿದೆಯ ವ್ಯಾಪ್ತಿಗೆ ಒಳಪಡುವ ಮತ್ತು ನ್ಯಾಯಾಲಯದಲ್ಲಿ ವಿಚಾರಣೆ ಬಾಕಿ ಇರುವ ಜಮೀನಿಗೆ ಸಂಬಂಧಿಸಿದಂತೆ, ಶಾಸಕ ಜಿ.ಟಿ. ದೇವೇಗೌಡ ತಮ್ಮ ಪ್ರಭಾವವನ್ನು ಬಳಸಿಕೊಂಡು, ಸುಳ್ಳು ದಾಖಲೆಗಳನ್ನು ಸೃಷ್ಟಿ ಮಾಡಿಸಿ, ಮುಡಾದಿಂದ ಟಿ.ಚೌಡಯ್ಯ ಹೆಸರಿಗೆ ಅಕ್ರಮವಾಗಿ 50:50 ಅನುಪಾತದಲ್ಲಿ 6 ನಿವೇಶನಗಳನ್ನು ಮಂಜೂರಾತಿ ಮಾಡಿಸಿ, ಅದರಲ್ಲಿ 2 ನಿವೇಶನಗಳನ್ನು ಅವರ ಮಗಳು

## ಮೊದಲನೇ ಪುಟದಿಂದ...

ಅನ್ನಪೂರ್ಣ ಮತ್ತು ಅಳಿಯ ವಿಶ್ವೇಶ್ವರಯ್ಯ ಹೆಸರಿನಲ್ಲಿ ಪಡೆದುಕೊಂಡಿದ್ದಾರೆ.

ಈ ಮೂಲಕ ಪ್ರಾಧಿಕಾರಕ್ಕೆ ವಂಚನೆ ಮತ್ತು ನಷ್ಟ ಉಂಟು ಮಾಡಿರುವ ಬಗ್ಗೆ ಖಚಿತ ಪಡಿಸಿಕೊಂಡು, ಜಿ.ಟಿ.ದೇವೇಗೌಡ, ಚೌಡಯ್ಯ, ಅನ್ನಪೂರ್ಣ, ವಿಶ್ವೇಶ್ವರಯ್ಯ ಮತ್ತು ''ಪ್ರಾಧಿಕಾರ''ದ ಅಧಿಕಾರಿಗಳನ್ನು 11/2024 ಸಂಖ್ಯೆಯ ಪ್ರಕರಣದಲ್ಲಿ ಆರೋಪಿಗಳನ್ನಾಗಿಸಿ, ಸೂಕ್ತ ಕಾನೂನು ಕ್ರಮಗಳನ್ನು ತೆಗೆದುಕೊಳ್ಳಬೇಕೆಂದು ಮನವಿ ಮಾಡಿದ್ದಾರೆ.

## ರಾಮಲಲ್ಲಾಗೆ ಅಭಿಷೇಕ

**ಪ್ರತಿಷ್ಠಾ ದ್ವಾದಶಿ ಉತ್ಸವದಲ್ಲಿ ಏನೇನಿರಲಿದೆ?:** ಶ್ರೀರಾಮ ಜನ್ಮಭೂಮಿಯ ಭವ್ಯ ಮಂದಿರದಲ್ಲಿ ರಾಮಲಲ್ಲಾ ಸನ್ನಿಧಿಯ ಪ್ರಥಮ ವಾರ್ಷಿಕ ಉತ್ಸವವಾದ 'ಪ್ರತಿಷ್ಠಾ ದ್ವಾದಶಿ'ಯಂದು ಇಂದಿನಿಂದ ಜನವರಿ 13 ರವರೆಗೆ ವಿವಿಧ ಕಾರ್ಯಕ್ರಮಗಳನ್ನು ಆಯೋಜಿಸಲಾಗಿದೆ. ಮೊದಲ ದಿನವಾದ ಜನವರಿ 11 ರಂದು ರಾಮಲಲ್ಲಾ ಮಹಾಭಿಷೇಕ, ಅಲಂಕಾರ, ಅರ್ಪಣೆ ಹಾಗೂ ಆರತಿ ನಡೆಯಲಿದೆ. ಇದಾದ ನಂತರ ಮಧ್ಯಾಹ್ನ 2 ಗಂಟೆಯಿಂದ ಸಂಜೆ 5 ಗಂಟೆಯವರೆಗೆ ಮುಖ್ಯಕಾರ್ಯಕ್ರಮ ನಡೆಯಲಿದೆ. ಇದನ್ನು ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ಉದ್ಘಾಟಿಸಲಿದ್ದಾರೆ.

**ರಾಮಚರಿತಮಾನಸ ಪಾರಾಯಣ, ರಾಮಾಯಣ ಪ್ರವಚನ:** ಅಂಗದ ತಿಲದಲ್ಲಿ ಮೂರು ದಿನವೂ ರಾಮಚರಿತಮಾನಸ ಪಾರಾಯಣ, ರಾಮಾಯಣ ಪ್ರವಚನ, ಶ್ರೀರಾಮ ಜನನ ಕಥಾ ಮತ್ತು ಸಾಂಸ್ಕೃತಿಕ ಸಂಜೆ ಆಯೋಜಿಸಲಾಗಿದೆ. ರಾಮಲಲ್ಲಾ ಸಂದರ್ಶಕರಿಗೆ ಮಹಾಪ್ರಸಾದವನ್ನು ಸಹ ವಿತರಿಸಲಾಗುವುದು.

## 11 ರಂದೇ ಏಕೆ?

ಹೀಗಾಗಿ ಜನವರಿ 11ರಂದು ಪ್ರತಿಷ್ಠಾ ವರ್ಷಾಚರಣೆ ನಡೆಯುತ್ತಿದೆ. ಈ ಆಚರಣೆಯು ಹಿಂದೂ ಸಂಸ್ಕೃತಿ ಮತ್ತು ಜ್ಯೋತಿಷ್ಯ ಶಾಸ್ತ್ರದೊಂದಿಗೆ ದೇವಾಲಯದ ಆಚರಣೆಯನ್ನು ಪ್ರತಿಬಿಂಬಿಸುತ್ತದೆ.

**ಪುಷ್ಯ ಶುಕ್ಲ ದ್ವಾದಶಿಯಂದು ನೆರವೇರಿದ್ದ ಪ್ರಾಣ ಪ್ರತಿಷ್ಠೆ:** ಕಳೆದ ವರ್ಷ ಪುಷ್ಯ (ಪೌಷ) ಶುಕ್ಲ ದ್ವಾದಶಿಯಂದು ಅಯೋಧ್ಯೆಯಲ್ಲಿ ಶ್ರೀ ರಾಮಲಲ್ಲಾ ವಿಗ್ರಹದ ಪ್ರಾಣಪ್ರತಿಷ್ಠೆ ನೆರವೇರಿತ್ತು. ಆ ಶುಭ ದಿನವನ್ನು 'ಪ್ರತಿಷ್ಠಾ ದ್ವಾದಶಿ' ಎಂದು ಆಚರಿಸಲು ರಾಮಜನ್ಮಭೂಮಿ ಟ್ರಸ್ಟ್ ಕರೆ ನೀಡಿತ್ತು. ಈ ವರ್ಷ (2025) ಜನವರಿ 11 ರಂದು ಪುಷ್ಯ ಶುಕ್ಲ ದ್ವಾದಶಿ ಇದೆ. ಹೀಗಾಗಿ ಪ್ರಾಣಪ್ರತಿಷ್ಠೆಯ ವರ್ಷಾಚರಣೆಯನ್ನು ಇಂದೇ ನಡೆಸಲಾಗುತ್ತಿದೆ.

**ಪ್ರತಿ ವರ್ಷವೂ ಜನವರಿ 11ರಂದೇ ನಡೆಯಲಿದೆಯಾ ಉತ್ಸವ :** ಪ್ರತಿಷ್ಠಾ ಮಹೋತ್ಸವದ ವರ್ಷಾಚರಣೆ ಹಿಂದೂ ಕ್ಯಾಲೆಂಡರ್ ಪ್ರಕಾರ ನಡೆಯುವುದರಿಂದ ಪ್ರತಿ ವರ್ಷವೂ ಜನವರಿ 11ರಂದೇ ನಡೆಯಲಾರದು. ಇದು ಪ್ರತಿ ವರ್ಷವೂ ಬದಲಾಗಬಹುದು.

ಹಿಂದೂ ಸಂಪ್ರದಾಯದ ಪ್ರಕಾರ, ಹಬ್ಬಗಳನ್ನು ಪಾಶ್ಚಾತ್ಯ ಕ್ಯಾಲೆಂಡರ್ ದಿನಾಂಕಗಳಿಗೆ ಬದಲಾಗಿ ಪಂಚಾಗಗಳಲ್ಲಿ ಉಲ್ಲೇಖವಾಗಿರುವ ದಿನಗಳ ಆಧಾರದ ಮೇಲೆ ಆಚರಿಸಲಾಗುತ್ತದೆ. ಹೀಗಾಗಿ ಪ್ರಾಣಪ್ರತಿಷ್ಠೆಯ ವರ್ಷಾಚರಣೆ ಕೂಡ ಇದರಂತೆಯೇ ನಡೆಯುತ್ತಿದೆ.

**ಮೂರು ದಿನಗಳ ಕಾಲ ಅಯೋಧ್ಯೆಯಲ್ಲಿ ಉತ್ಸವ:** ಅಯೋಧ್ಯೆಯಲ್ಲಿ ಮೂರು ದಿನಗಳ ಕಾಲ ಉತ್ಸವ ನಡೆಯಲಿದ್ದು, ವಿವಿಧ ಆಚರಣೆಗಳು, ಪ್ರಾರ್ಥನೆಗಳು ಮತ್ತು ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಒಳಗೊಂಡಿರುತ್ತದೆ. ಭಕ್ತರು ಮತ್ತು ಸಂತರು ಭಗವಾನ್ ರಾಮನನ್ನು ಗೌರವಿಸಲು, ಪೂಜಿಸಲು ಈ ಉತ್ಸವ ಅನುವು ಮಾಡಿಕೊಡಲಿದೆ.

## 59 ನೇ ಪುಣ್ಯ ಸ್ಮರಣೆ

ಉಜ್ಬೆಕಿಸ್ತಾನದ ತಾಷೆಂಟ್‌ನಲ್ಲಿ ಜನವರಿ 11, 1966ರಲ್ಲಿ ಶಾಸ್ತ್ರೀಜಿ ಅಕಾಲಿಕವಾಗಿ ಸಾವನ್ನಪ್ಪಿದರು. ಸರಳತೆ ಬಿಡದ ವ್ಯಕಿತ್ವ, ಪ್ರಾಮಾಣಿಕವಾಗಿ ಬದುಕಿದ ಶಾಸ್ತ್ರೀಜಿಯವರ ಎಲ್ಲರಿಗೂ ಮಾದರಿಯಾಗಿದೆ.

**ಲಾಲ್ ಬಹದ್ದೂರ್ ಶಾಸ್ತ್ರಿಯವರ ಸ್ಫೂರ್ತಿದಾಯಕ ಉಲ್ಲೇಖಗಳು:** ಪ್ರಗತಿಗಾಗಿ ನಾವು ನಮ್ಮೊಳಗೆ ಹೋರಾಡುವ ಬದಲು ಬಡತನ, ರೋಗ, ಮತ್ತು ಅಜ್ಞಾನದ ವಿರುದ್ಧ ಹೋರಾಡಬೇಕು.

- ದೇಶದ ಶಕ್ತಿ ಮತ್ತು ಸ್ಥಿರತೆಯ ಪ್ರಮುಖ ಕಾರ್ಯವೆಂದರೆ ಜನರಲ್ಲಿ ಏಕತೆ ಮತ್ತು ಒಗ್ಗಟ್ಟನ್ನು ಸ್ಥಾಪಿಸುವುದು.
- ಜೈ ಜವಾನ್, ಜೈ ಕಿಸಾನ್ : ನಮ್ಮ ದೇಶವನ್ನು ರಕ್ಷಿಸುವ ಮತ್ತು ಬಲಿಷ್ಠಗೊಳಿಸುವ ಸೈನಿಕರಿಗೆ ಮತ್ತು ರೈತರಿಗೆ ನಮನ ಸಲ್ಲಿಸೋಣ.
- ಹಿಂಸೆ ಮತ್ತು ಅಸತ್ಯದ ಮಾರ್ಗವನ್ನು ಅನುಸರಿಸುವ ಮೂಲಕ ನೀವು ಎಂದಿಗೂ ನಿಜವಾದ ಪ್ರಜಾಪ್ರಭುತ್ವ ಮತ್ತು ಸ್ವರಾಜ್ಯವನ್ನು ಸಾಧಿಸಲು ಸಾಧ್ಯವಿಲ್ಲ.
- ಕಾನೂನನ್ನು ಗೌರವಿಸಬೇಕು ಇದರಿಂದ ನಮ್ಮ ಪ್ರಜಾಪ್ರಭುತ್ವದ ಮೂಲ ರಚನೆಯು ಅಖಂಡವಾಗಿ ಉಳಿಯುತ್ತದೆ ಮತ್ತು ನಮ್ಮ ಪ್ರಜಾಪ್ರಭುತ್ವವೂ ಬಲಗೊಳ್ಳುತ್ತದೆ.
- ನಾವು ಆಂತರಿಕವಾಗಿ ಬಲಿಷ್ಟರಾಗಿ ಬಡತನ ಮತ್ತು ನಿರುದ್ಯೋಗವನ್ನು ಶಾಶ್ವತವಾಗಿ ನಮ್ಮ ದೇಶದಿಂದ ತೊಲಗಿಸದರೆ ಮಾತ್ರ ನಾವು ಜಗತ್ತಿನ ಗೌರವನ್ನು ಸಂಪಾದಿಸಬಹುದು.
- ಶಿಸ್ತು ಮತ್ತು ಒಗ್ಗಟ್ಟು ದೇಶದ ಶಕ್ತಿಯ ಮೂಲವಾಗಿದೆ.
- ಯುದ್ಧದಲ್ಲಿ ಹೋರಾಡಿದಂತೆ ನಾವು ಧೈರ್ಯದಿಂದ ಶಾಂತಿಗಾಗಿ ಹೋರಾಡಬೇಕು.
- ದೇಶದ ಸ್ವಾತಂತ್ರ್ಯವನ್ನು ರಕ್ಷಿಸುವ ಜವಬ್ದಾರಿ ಬರೀ ಯೋಧರದ್ದಲ್ಲ, ಅದು ಇಡೀ ದೇಶದ ಜವಾಬ್ದಾರಿಯಾಗಿದೆ.

## 5 ದಿನ ಸಿಐಡಿ ಕಸ್ಟಡಿಗೆ

ಎಂಟು ಜನರ ಪೈಕಿ ಐವರ ಬಂಧನವಾಗಿದ್ದು, ಇನ್ನೂ ಮೂವರಿಗಾಗಿ ಸಿಐಡಿಯಿಂದ ಶೋಧ ನಡೆಸುತ್ತಿದೆ.

2024 ಡಿಸೆಂಬರ್ 26 ರಂದು ಬೀದರ್ ನಗರದ ಬಸವೇಶ್ವರ ವೃತ್ತದ ಬಳಿಯ ರೈಲು ಹಳಿಗೆ ತಲೆಕೊಟ್ಟು ಯುವ ಗುತ್ತಿಗೆದಾರ ಸಚಿನ್ ಆತ್ಮಹತ್ಯೆ ಮಾಡಿಕೊಂಡಿದ್ದರು. ಸಚಿನ್ ಆತ್ಮಹತ್ಯೆ ಮಾಡಿಕೊಳ್ಳುವ ಮುನ್ನ ಸುಮಾರು ಏಳು ಪುಟಗಳ ಡೆತ್ ನೋಟ್ ಬರೆದಿಟ್ಟಿದ್ದರು. ಡೆತ್ ನೋಟ್ ನಲ್ಲಿ ಗ್ರಾಮೀಣಾಭಿವೃದ್ಧಿ ಸಚಿವ ಪ್ರಿಯಾಂಕ್ ಖರ್ಗೆ ಆಪ್ತ ರಾಜು ಕಪನೂರ್ ಆಯಂಡ್ ಗ್ಯಾಂಗ್ ನ ಎಂಟು ಸದಸ್ಯರ ಹೆಸರು ಇತ್ತು. ಈ ಆತ್ಮಹತ್ಯೆ ಪ್ರಕರಣ ರಾಜ್ಯಾದ್ಯಂತ ದೊಡ್ಡ ಸುದ್ದಿಯಾಗಿತ್ತು ಈ ಪ್ರಕರಣವನ್ನು ಗಂಭಿರವಾಗಿ ಪರಿಗಣಿಸಿದ ಸರಕಾರ ಸಿಐಡಿ ತನಿಖೆಗೆ ಆದೇಶ ಮಾಡಿತ್ತು. ಸಿಐಡಿ ಡಿವೈಎಸ್ ಎಸ್ ಪಿ ಸುಲೇಮಾನ್ ತಹಶಿಲ್ದಾರ್ ನೇತೃತ್ವದ ಅಧಿಕಾರಿಗಳ ತಂಡ ಬೀದರ್ ನಲ್ಲಿ ಬೀಡು ಬಿಟ್ಟು ಎಲ್ಲ ಆಯಾಮಗಳಲ್ಲಿ ಪ್ರಕರಣದ ತನಿಖೆ ನಡೆಸುತ್ತಿದೆ. ಕಳೆದ ಐದು ದಿನದಿಂದ ಸಿಐಡಿ ಡಿಐಜಿ ಶಾಂತನು ಸಿನ್ಹಾ ಬೀದರ್ ನಲ್ಲಿ ಮುಕ್ಕಾಮು ಹೂಡಿ ತನಿಖೆಯ ಸತ್ಯಾಸತ್ಯೆತೆಯನ್ನು ಪರಿಶಿಲನೆ ನಡೆಸಿದರು.

ಡೆತ್ ನೋಟ್ ನಲ್ಲಿ ಬರೆಯಲಾಗಿದ್ದ ಎಂಟೂ ಜನರಿಗೆ ಸಿಐಡಿ ಜನವರಿ 6 ರಂದು ನೋಟಿಸ್ ನೀಡಿತ್ತು. ಎಂಟು ಜನರ ಪೈಕಿ ಸಚಿವ ಪ್ರಿಯಂಕ್ ಖರ್ಗೆ ಆಪ್ತ ರಾಜು ಕಪನೂರು, ಗೋರಕನಾಥ್, ನಂದಕುಮಾರ್ ನಾಗಭುಜಂಗೆ, ರಾಮನಗೌಡಾ ಪಾಟೀಲ್, ಸತೀಶ್ ಐದು ಮಂದಿ ಶುಕ್ರವಾರ ಸಿಐಡಿ ವಿಚಾರಣೆಗೆ ಹಾಜರಾದರು. ಈ ವೇಳೆ ಸಿಐಡಿ ಐದೂ ಮಂದಿಯನ್ನು ಬಂಧಿಸಿದೆ.

ಆರೋಪಿಗಳನ್ನು ಬೀದರ್ ಬ್ರೀಮ್ಸ್ ಆಸ್ಪತ್ರೆಯಲ್ಲಿ ವೈದ್ಯಕೀಯ ತಪಾಸಣೆಗೆ ಒಳಪಡಿಸಿದರು. ನಂತರ ಬೀದರ್ ಜೆಎಂಎಫ್ ಸಿ ನ್ಯಾಯಾಲಯದ ಮುಂದೆ ಹಾಜರು ಪಡಿಸಿದರು. ವಾದ–ಪ್ರತಿವಾದ ಆಲಿಸಿದ ಬೀದರ್ ಜೆಎಂಎಫ್ ಸಿ ನ್ಯಾಯಾಲಯದ ನ್ಯಾ. ರಾಮಮೂರ್ತಿಯವರು ಐದೂ ಜನ ಆರೋಪಿಗಳನ್ನು 5 ದಿನಗಳ ಕಾಲ ಸಿಐಡಿ ವಶಕ್ಕೆ ನೀಡಿ ಆದೇಶ ಹೊರಡಿಸಿದರು. ಐದು ಜನ ಆರೋಪಿಗಳನ್ನು ಸಿಐಡಿ ತಂಡ ವಿಚಾರಣೆಗಾಗಿ ಬೆಂಗಳೂರಿಗೆ ಕರೆತಂದಿದೆ.

ಸಿಐಡಿ ವಿಚಾರಣೆಗೆ ಹಾಜರಾಗುವ ಮುನ್ನ ಟಿವಿ9 ಜೊತೆ ಮಾತನಾಡಿದ ಆರೋಪಿಗಳು, ನಮ್ಮ ಬಗ್ಗೆ ಸಚಿನ್ ಸುಳ್ಳು ಆರೋಪ ಮಾಡಿದ್ದಾನೆ. ನಾವು ಆತನಿಗೆ ಹಣ ಕೊಟ್ಟಿದ್ದೇವೆ. ಆದರೆ ಆತ ನಮ್ಮ ಹೆಸರು ಬರೆದಿದ್ದು ಯಾಕೆ ಅಂತ ಗೊತ್ತಿಲ್ಲ ಎಂದು ಹೇಳಿದ್ದಾರೆ.

## ಮೆಟ್ರೋ ಸೇವೆ

ಇಷ್ಟು ದಿನ ಬೆಳಗ್ಗೆ 5ಕ್ಕೆ ಆರಂಭ ಆಗುತ್ತಿತ್ತು. ಇದೀಗ ಬದಲಾದ ಸಮಯದಲ್ಲಿ ಮುಂಜಾನೆ 4:15 ಕ್ಕೆ ಮೆಟ್ರೋ ಸೇವೆ ಆರಂಭವಾಗಲಿದೆ. ಇನ್ನುಳಿದ ದಿನಗಳಲ್ಲಿ ಯಾವುದೇ ಬದಲಾವಣೆ ಇರುವುದಿಲ್ಲ,

ಮಂಗಳವಾರದಿಂದ ಭಾನುವಾರದ ವರೆಗೆ ಬೆಳಗ್ಗೆ 5ಕ್ಕೆ ಮೆಟ್ರೋ ಸೇವೆ ಯಥಾಸ್ಥಿತಿಯಲ್ಲಿ ಮುಂದುವರಿಯಲಿದೆ. ಸೋಮವಾರ ಪ್ರಯಾಣಿಕರ ಸಂಖ್ಯೆ ಹೆಚ್ಚಾಗುವ ಹಿನ್ನೆಲೆಯಲ್ಲಿ, ಆ ದಿನ ಮಾತ್ರ ಸಮಯದಲ್ಲಿ ಬದಲಾವಣೆ ಮಾಡಲಾಗಿದೆ.

ದೂರದ ಊರಿನಿಂದ ಬರುವವರಿಗೆ ಅನುಕೂಲಕ್ಕಾಗಿ ಸಮಯದಲ್ಲಿ ಬದಲಾವಣೆ ತರಲಾಗಿದೆ ಎಂದು ನಮ್ಮ ಮೆಟ್ರೋ ನಿಗಮದಿಂದ ಪ್ರಕಟಣೆಯಲ್ಲಿ ತಿಳಿಸಲಾಗಿದೆ.

## ನುಡಿಯೋದು ಬೇಕಿಲ್ಲ

ಎಲ್ಲಾ ಇಲಾಖೆಯಲ್ಲಿ ರೇಟ್ ಕಾರ್ಡ್ ಫಿಕ್ಸ್ ಮಾಡಿದ್ದಾರೆ ಅಂತ ಕುಮಾರಸ್ವಾಮಿ ಆರೋಪ ವಿಚಾರಕ್ಕೆ ಪ್ರತಿಕ್ರಿಯಿಸಿ, ಹೌದಾ.? ಅವರ ರೇಟ್ ಕಾರ್ಡಾ? ಅವರ ಕಾರ್ಡ್ ಫಿಕ್ಸ್ ಇರಬೇಕು. ಅವರ ಅನುಭವ ಮಾತಾಡ್ತಿದ್ದಾರೆ, ನನಗೆ ಗೊತ್ತಿಲ್ಲ. ಅದ್ಯಾವ್ದೋ ಪೂಜೆದೆಲ್ಲಾ ಹೇಳಿದ್ದಾರೆ ಅಲ್ವಾ? ಅದು ಅವರ ಅನುಭವ. ಅವರು ಕದ್ದು ಮಾಡ್ತಾರೆ, ನಾನು ಓಪನ್ ಆಗಿ ಮಾಡ್ತೀನಿ, ದಿನಾ ಬೆಳಗ್ಗೆ ಪೂಜೆ ಮಾಡ್ತೀನಿ. ನಿಮ್ಮಂತವರು ತೊಂದರೆ ಕೊಡ್ತಾರೆ, ರಕ್ಷಣೆ ಕೊಡಪ್ಪಾ ಅಂತ ಮನವಿ ಮಾಡ್ತೀನಿ ಎಂದು ಹೆಚ್‌ಡಿಕೆಗೆ ಕುಟುಕಿದರು.

## ಶಸ್ತ್ರಾಸ್ತ್ರ ಪತ್ತೆ

**ಪರಪ್ಪನ ಅಗ್ರಹಾರದಲ್ಲಿ ನಕ್ಸಲರು:** ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಗೃಹ ಸಚಿವ ಜಿ.ಪರಮೇಶ್ವರ ಅವರ ಎದುರು ಬುಧವಾರ ರಾತ್ರಿ ಶರಣಾದ ನಕ್ಸಲರಾದ ಮುಂಡಗಾರು ಲತಾ, ಸುಂದರಿ ಕುತ್ಲೂರು, ವನಜಾಕ್ಷಿ ಬಾಳೆಹೊಳೆ, ಟಿ.ಎನ್. ಜಿಶಾ, ಕೆ.ವಸಂತ್, ಮಾರೆಪ್ಪ ಅರೋಲಿ ಅವರನ್ನು ಕೋರ್ಟ್ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಿದೆ.

ಚಿಕ್ಕಮಗಳೂರು ಜಿಲ್ಲೆಯ ಕೊಪ್ಪ ಡಿವೈಎಸ್‌ಪಿ ಬಾಲಾಜಿ ಸಿಂಗ್ ಅವರ ನೇತೃತ್ವದಲ್ಲಿ ಗುರುವಾರ ನಗರದದಲ್ಲಿರುವ ಎನ್‌ಐಎ ವಿಶೇಷ ನ್ಯಾಯಾಲಯಕ್ಕೆ ಹಾಜರು ಪಡಿಸಲಾಯಿತು. ನ್ಯಾಯಾಲಯವು ಆರು ಮಂದಿಯನ್ನು ಜನವರಿ 30ರ ವರೆಗೆ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಿತು. ನಂತರ ಪೊಲೀಸರು 6 ಮಂದಿ ನಕ್ಸಲರನ್ನು ಬಿಗಿ ಭದ್ರತೆ ನಡುವೆ ಗುರುವಾರ ರಾತ್ರಿ, ಪರಪ್ಪನ ಅಗ್ರಹಾರ ಕೇಂದ್ರ ಕಾರಾಗೃಹಕ್ಕೆ ಬಿಟ್ಟು ಬಂದಿದ್ದಾರೆ.

ಆರು ಮಂದಿ ನಕ್ಸಲರ ವಿರುದ್ದವೂ 'ಕಾನೂನು ಬಾಹಿರ ಚಟುವಟಿಕೆಗಳ ನಿಯಂತ್ರಣ ಕಾಯ್ದೆ'(ಯುಎಪಿಎ) ಅಡಿ ಪ್ರಕರಣ ದಾಖಲಾಗಿದೆ. ಹೀಗಾಗಿ ಎನ್‌ಐಎ ವಿಶೇಷ ನ್ಯಾಯಾಲಯಕ್ಕೆ ಹಾಜರುಪಡಿಸಲಾಗಿತ್ತು.

## ಪಲ್ಟಿ

ರಾಯಚೂರು ಗ್ರಾಮೀಣ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಘಟನೆ ನಡೆದಿದ್ದು, ಲಾರಿ ಓವರ್ ಲೋಡ್ ತುಂಬಿಕೊಂಡು ವೇಗವಾಗಿ ಬಂದಿದ್ದೇ ಘಟನೆಗೆ ಕಾರಣ ಅಂತ ಸ್ಥಳದಲ್ಲಿದ್ದವರು ಆಕ್ರೋಶ ವ್ಯಕ್ತಪಡಿಸಿದ್ದಾರೆ.

# ಒಕ್ಕಲಿಗರನ್ನು ಎದುರು ಹಾಕೊಂಡ್ರೆ ಸರ್ಕಾರ ಬಿದ್ದಿರೋದ್ದಕೆ ಇತಿಹಾಸವಿದೆ: ಕೆಂಚಪ್ಪ ಗೌಡ

**ಬೆಂಗಳೂರು:** ಒಕ್ಕಲಿಗರನ್ನು ಎದುರು ಹಾಕಿಕೊಂಡರೆ ಎಷ್ಟು ಸರ್ಕಾರ ಬಿದ್ದಿದೆ ಎಂಬ ಇತಿಹಾಸವಿದೆ. ಇಲ್ಲಿದಿದ್ದರೆ ನಾವು ಕಾನೂನು ರೀತಿಯಲ್ಲಿ ಹೋರಾಟ ಮಾಡಲಿದ್ದೇವೆ ಎಂದು ಡಿಸಿಎಂ ಡಿಕೆಶಿ ಬೆಂಬಲಿಗ, ಒಕ್ಕಲಿಗರ ಸಂಘದ ಅಧ್ಯಕ್ಷ ಕೆಂಚಪ್ಪ ಗೌಡ ಎಚ್ಚರಿಕೆ ನೀಡಿದ್ದಾರೆ.



ಸಿಎಂ ಸಿದ್ದರಾಮಯ್ಯ ಜಾತಿಗಣತಿಗೆ ವರದಿ ಹಾಗೂ ಕ್ಯಾಬಿನೆಟ್‌ನಲ್ಲಿ ಸಲ್ಲಿಕೆ ಕುರಿತು ನೀಡಿದ ಹೇಳಿಕೆ ಬೆನ್ನಲ್ಲೇ ಜಾತಿಗಣತಿ ವಿರುದ್ಧ ಒಕ್ಕಲಿಗ ಸಂಘ ವಾರ್ ಶುರು ಮಾಡಿದೆ.

ನಗರದಲ್ಲಿ ಒಕ್ಕಲಿಗ ಸಂಘದಿಂದ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕರ್ನಾಟಕ ಹಿಂದುಳಿದ ವರ್ಗಗಳ ಆಯೋಗವೂ ನಾಗರಿಕರ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆ ನಡೆಸಿ ಹತ್ತು ವರ್ಷ ಆಗಿದೆ. ಜಾತಿಗಣತಿಗೆ ವರದಿ ಹಾಗೂ ಕ್ಯಾಬಿನೆಟ್‌ನಲ್ಲಿ ಸಲ್ಲಿಕೆ ಮಾಡುವ ಬಗ್ಗೆ ಸಿಎಂ ಸಿದ್ದರಾಮಯ್ಯ ಮೊನ್ನೆ ಹೇಳಿಕೆ ಕೊಟ್ಟಿದ್ದಾರೆ. ಇವರು ಮನೆ ಮನೆ ಸಮೀಕ್ಷೆ ಸರಿಯಾಗಿ ಮಾಡಿಲ್ಲ. ಜಾತಿಗಣತಿ ಸಮೀಕ್ಷೆ ಲೋಪದೋಷದಿಂದ ಕೂಡಿದೆ. 5 ಕೋಟಿ 98 ಲಕ್ಷ ಜನ ಇದ್ದಾರೆ ಎಂದು ಸಮೀಕ್ಷೆಯಲ್ಲಿ ತಿಳಿಸಿದ್ದಾರೆ. ಆದರೆ ಈಗ 7 ಕೋಟಿ ಜನಸಂಖ್ಯೆ ಇದೆ ಎಂದು ಮಾಧ್ಯಮದಲ್ಲಿ ಬರುತ್ತಿದೆ. 114 ಉಪಪಂಗಡಗಳು ನಮ್ಮಲ್ಲಿದೆ. ಆದರೆ ಇವುಗಳನ್ನು ಸರಿಯಾಗಿ ಪರಿಗಣಿಸಿಲ್ಲ ಎಂದು ವಾಗ್ದಾಳಿ ನಡೆಸಿದರು.

ಜ.12 ರಂದು ಭಾನುವಾರ 12 ಗಂಟೆಗೆ ಬೆಂಗಳೂರು ಕಿಮ್ಸ್ ಆವರಣದಲ್ಲಿ ರಾಜ್ಯ ಒಕ್ಕಲಿಗರ ಸಂಘದಿಂದ ಸಮುದಾಯದ ಎಲ್ಲಾ ಶಾಸಕರು ಹಾಗೂ ಸಚಿವರ ಸಭೆ ನಡೆಯಲಿದೆ. ಆದಿ ಚುಂಚನಗಿರಿ ಮಠದ ಶ್ರೀ ನಿರ್ಮಲಾನಂದನಾಥ ಸ್ವಾಮೀಜಿ ನೇತೃತ್ವದಲ್ಲಿ ಸಭೆ ನಡೆಯಲಿದ್ದು, ಸಭೆಯಲ್ಲಿ ಚಂದ್ರಶೇಖರನಾಥ ಸ್ವಾಮೀಜಿ ಹಾಗೂ ನಂಜಾವದೂತ ಸ್ವಾಮೀಜಿ ಕೂಡ ಭಾಗಿಯಾಗಲಿದ್ದಾರೆ. ಒಕ್ಕಲಿಗ ಸ್ವಾಮೀಜಿ, ಎಲ್ಲಾ ರಾಜಕೀಯ ಮುಖಂಡರು ಸೇರಿ ಸಭೆ ನಡೆಸಲಿದ್ದೇವೆ ಎಂದರು.

ವೀರಶೈವ ಮಹಾಸಭಾ ಕೂಡ ಒಟ್ಟಿಗೆ ಇದೆ. ಅವರ ಜೊತೆಯೂ ನಾವು ಮಾತಾನಾಡಿದ್ದೇವೆ. ಒಟ್ಟಾಗಿ ಹೋರಾಟ ಮಾಡುತ್ತೇವೆ. ಪ್ರತಿ ಹತ್ತು ವರ್ಷಕ್ಕೊಮ್ಮೆ ಜನಗಣತಿ ಆಗಬೇಕು. ಆದರೆ ಈ ಸಮೀಕ್ಷೆ ನಡೆದು ಈಗ ಹತ್ತು ವರ್ಷ ಆಗಿದೆ. ಇದು ಕಾನೂನುಬಾಹಿರ. ಸಭೆಯಲ್ಲಿ ನಿರ್ಮಲಾನಂದ ಸ್ವಾಮೀಜಿ ಕೂಡ ಭಾಗಿಯಾಗಲಿದ್ದಾರೆ. ನಮ್ಮ ನಾಯಕರು ಚಕಾರವೆತ್ತುತ್ತಿಲ್ಲ ಹೀಗಾಗಿ ಒಕ್ಕಲಿಗ ನಾಯಕರು ಪ್ರಶ್ನೆ ಮಾಡಬೇಕು ಎಂಬ ಕಾರಣಕ್ಕೆ ಸಭೆ ಕರೆದಿದ್ದೇವೆ. ವೀರಶೈವ ಮುಖಂಡರು, ಸ್ವಾಮೀಜಿ ಜೊತೆ ಕೂಡ ಮಾತಾನಾಡಿ, ಶೀಘ್ರದಲ್ಲಿಯೇ ಜಂಟಿ ಸಭೆಯನ್ನು ಕರೆಯಲಿದ್ದೇವೆ ಎಂದರು.

ಜಾತಿಗಣತಿ ಬಗ್ಗೆ ಸಿಎಂ ಪಟ್ಟು ಹಿಡಿದಿರಬಹುದು ಆದರೆ ನಮ್ಮ ನಾಯಕರ ಧ್ವನಿಯೂ ಮಂಕಾಗಿಲ್ಲ. ನಿರ್ಮಲಾನಂದ ಸ್ವಾಮೀಜಿ ಮುಖಂಡತ್ವದಲ್ಲಿ ಜ.12 ರಂದು ಸಭೆ ನಡೆಯಲಿದ್ದು, ಮಾಜಿ ಪ್ರಧಾನಿ ದೇವೇಗೌಡ, ಕುಮಾರಸ್ವಾಮಿ, ಡಿಸಿಎಂ ಡಿಕೆಶಿ, ಆರ್.ಅಶೋಕ್, ಅಶ್ವಥ್ ನಾರಾಯಣ್ ಸೇರಿದಂತೆ ಎಲ್ಲಾ ಮುಖಂಡರು ಸಭೆಯಲ್ಲಿ ಪಾಲ್ಗೊಳ್ಳಲಿದ್ದಾರೆ ಎಂದು ಹೇಳಿದರು.

# ಶಿರಹಟ್ಟಿ ಶಾಸಕ ಚಂದ್ರು ಲಮಾಣಿ ಕಾರು ಚಾಲಕ ಆತ್ಮಹತ್ಯೆ



**ಗದಗ:** ಶಿರಹಟ್ಟಿ ಬಿಜೆಪಿ ಶಾಸಕ ಡಾ. ಚಂದ್ರು ಲಮಾಣಿ ಕಾರು ಚಾಲಕ ನೇಣು ಬಿಗಿದುಕೊಂಡು ಆತ್ಮಹತ್ಯೆಗೆ ಶರಣಾಗಿದ್ದಾರೆ.

ಸುನಿಲ್ ಲಮಾಣಿ ಆತ್ಮಹತ್ಯೆಗೆ ಶರಣಾದ ಚಾಲಕ. ಗದಗ ಜಿಲ್ಲೆಯ ಲಕ್ಷ್ಮೇಶ್ವರ ಪಟ್ಟಣದ ಮಲ್ಲಾಡ್ ಕಾಲೋನಿಯಲ್ಲಿ ನೇಣಿಗೆ ಶರಣಾಗಿದ್ದಾರೆ.

ಶಾಸಕ ಚಂದ್ರು ಇತ್ತೀಚೆಗೆ ಖರೀದಿಸಿ ನಿವಾಸದಲ್ಲಿ ಸುನಿಲ್ ಲಮಾಣಿ ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ಮೃತ ಸುನಿಲ್ ಅವರು ಶಾಸಕಚಂದ್ರು ಅವರ ಸಂಬಂಧಿಯೂ ಆಗಿದ್ದಾರೆ. ಆತ್ಮಹತ್ಯೆ ಮಾಡಿಕೊಂಡಿದ್ದಕ್ಕೆ ನಿಖರ ಕಾರಣ ತಿಳಿದು ಬಂದಿಲ್ಲ. ಯಾವುದೇ ಡೆತ್‌ನೋಟ್ ಸಿಕ್ಕಿಲ್ಲ. ಕೌಟುಂಬಿಕ ಕಲಹ ಹಿನ್ನಲೆಯಲ್ಲಿ ಮೃತಪಟ್ಟಿರುವ ಶಂಕೆ ವ್ಯಕ್ತವಾಗಿದೆ.

ಸ್ಥಳಕ್ಕೆ ಲಕ್ಷ್ಮೇಶ್ವರ ಪೊಲೀಸರು ಭೇಟಿ ಪರಿಶೀಲನೆ ನಡೆಸುತ್ತಿದ್ದಾರೆ. ಲಕ್ಷ್ಮೇಶ್ವರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಸಂಜೆ ಮುಗಿಲು
ಶನಿವಾರ
11.1.2025



# ಮತದಾರರ ದಿನ ಆಚರಣೆಗೆ ಅಗತ್ಯ ಸಿದ್ಧತೆ ಕೈಗೊಳ್ಳಲು ಸೂಚನೆ

**ಚಾಮರಾಜನಗರ:** ರಾಷ್ಟ್ರೀಯ ಮತದಾರರ ದಿನವನ್ನು ಇದೇ ಜನವರಿ 25ರಂದು ಅರ್ಥಪೂರ್ಣವಾಗಿ ಆಚರಿಸಲು ಅಗತ್ಯ ಸಿದ್ಧತೆ ಮಾಡಿಕೊಳ್ಳುವಂತೆ ಜಿಲ್ಲಾಧಿಕಾರಿ ಶಿಲ್ಪಾ ನಾಗ್ ಅವರು ಅಧಿಕಾರಿಗಳಿಗೆ ಸೂಚನೆ ನೀಡಿದರು.

ವರ್ಚುವಲ್ ಮೂಲಕ ಅಧಿಕಾರಿಗಳೊಂದಿಗೆ ಪೂರ್ವಭಾವಿ ಸಭೆ ನಡೆಸಿದ ಜಿಲ್ಲಾಧಿಕಾರಿಯವರು ಈ ವರ್ಷವೂ 'ಮತದಾನಕ್ಕಿಂತ ಇನ್ನೊಂದಿಲ್ಲ, ನಾನು ಖಚಿತವಾಗಿ ಮತದಾನ ಮಾಡುವೆ' ಎಂಬ ವಿಶೇಷ ಘೋಷವಾಕ್ಯದೊಂದಿಗೆ 15ನೇ ರಾಷ್ಟ್ರೀಯ ಮತದಾರರ ದಿನಾಚರಣೆ ಕಾರ್ಯಕ್ರಮವನ್ನು ಜನವರಿ 25ರಂದು ಆಯೋಜಿಸಬೇಕು. ಇದಕ್ಕಾಗಿ ಸಕಲ ಸಿದ್ಧತೆಗಳನ್ನು ಕೈಗೊಳ್ಳಬೇಕು ಎಂದು ತಿಳಿಸಿದರು.

ಭಾರತ ಚುನಾವಣಾ ಆಯೋಗ ನೀಡಿರುವ ನಿರ್ದೇಶನಗಳ ಅನುಸಾರ ರಾಷ್ಟ್ರೀಯ ಮತದಾರರ ದಿನ ಅಂಗವಾಗಿ ವಿವಿಧ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಬೇಕಿದೆ. ಮತದಾನಕ್ಕಿಂತ ಇನ್ನೊಂದಿಲ್ಲ, ನಾನು ಖಚಿತವಾಗಿ ಮತದಾನ ಮಾಡುವೆ ಎಂಬ ವಿಶೇಷ ಧ್ಯೇಯವಾಕ್ಯದ ಬಗ್ಗೆ ವ್ಯಾಪಕ ಪ್ರಚಾರ ಕೈಗೊಳ್ಳಬೇಕಿದೆ. ಅಭಿಯಾನ, ಕ್ಷೇತ್ರ ಕಾರ್ಯಕ್ರಮಗಳು, ಪರಸ್ಪರ ಸಂವಹನ ಮೂಲಕ ಕಾರ್ಯಕ್ರಮ ಯಶಸ್ವಿಗೊಳಿಸಬೇಕು ಎಂದರು.

ರಾಷ್ಟ್ರೀಯ ಮತದಾರರ ದಿನಾಚರಣೆ ಕುರಿತು ಪೋಸ್ಟರ್, ಬ್ಯಾನರ್‌ಗಳನ್ನು ಅಳವಡಿಸಬೇಕು. ಜಿಲ್ಲಾ ಚುನಾವಣಾ ರಾಯಭಾರಿಗಳ ಸಹಕಾರದೊಂದಿಗೆ ಮತದಾರರ ದಿನಾಚರಣೆ ಕುರಿತ ಕಾರ್ಯಕ್ರಮಗಳನ್ನು ಆಯೋಜನೆ ಮಾಡಬೇಕು. ವಿವಿಧ ಸರ್ಕಾರಿ ಇಲಾಖೆಗಳ ಸಹಯೋಗದೊಂದಿಗೆ ರಾಷ್ಟ್ರೀಯ ಮತದಾರರ ದಿನ ಕಾರ್ಯಕ್ರಮ ಆಚರಿಸಲು ನಿರ್ದೇಶನ ನೀಡಬೇಕು. ಮತದಾರರು ಪ್ರತಿಜ್ಞಾವಿಧಿ ಸ್ವೀಕರಿಸಬೇಕು ಎಂದು ಜಿಲ್ಲಾಧಿಕಾರಿಯವರು ತಿಳಿಸಿದರು. ಹೊಸದಾಗಿ ನೊಂದಾಯಿಸಿಕೊಂಡಿರುವ ಯುವ ಮತದಾರರಿಗೆ ರಾಷ್ಟ್ರೀಯ ಮತದಾರರ ದಿನದಂದು ಭಾವಚಿತ್ರವಿರುವ ಮತದಾರರ ಗುರುತಿನ ಚೀಟಿ (ಎಪಿಕ್) ವಿತರಿಸಬೇಕು. ಅಂಚೆ ಮತಪತ್ರ ಸೌಲಭ್ಯ, ಮತದಾರರಿಗೆ ಮತಗಟ್ಟೆಗಳಲ್ಲಿ ಒದಗಿಸಿರುವ ಮೂಲ ಸೌಲಭ್ಯ, ಇವಿಎಂ, ವಿವಿ ಪ್ಯಾಟ್, ಮತದಾರರ ಸಹಾಯವಾಣಿ, ವೋಟರ್ ಹೆಲ್ಪ್ ಲೈನ್ ಆಪ್, ನೈತಿಕ ಮತದಾನ ಇನ್ನಿತರ ಬಗ್ಗೆ ಜಾಗೃತಿ ಚಿತ್ರಗಳನ್ನು ಪ್ರದರ್ಶಿಸಬೇಕು ಎಂದು ಜಿಲ್ಲಾಧಿಕಾರಿ ಶಿಲ್ಪಾ ನಾಗ್ ಅವರು ಹೇಳಿದರು. ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮೋನಾ ರೋತ್ ಅವರು ಮಾತನಾಡಿ ಚುನಾವಣಾ ಆಯೋಗ ನೀಡಿರುವ ಮಾರ್ಗಸೂಚಿಗಳ ಪ್ರಕಾರ ಮತದಾರರ ದಿನ ಆಚರಣೆಯಲ್ಲಿ ವಿವಿಧ ಕಾರ್ಯಕ್ರಮಗಳನ್ನು ಏರ್ಪಡಿಸಬೇಕಿದೆ. ಸ್ವೀಪ್ ಕಾರ್ಯಕ್ರಮಗಳನ್ನು ಸಹ ಆಯೋಜಿಸಬೇಕಿದೆ ಎಂದು ತಿಳಿಸಿದರು. ಹೆಚ್ಚುವರಿ ಜಿಲ್ಲಾಧಿಕಾರಿ ಗೀತಾ ಹುಡೇದ ಇದ್ದರು.

## ಮಲಗಿದ್ದ ರೈತನ ಮೇಲೆ ಆನೆ ದಾಳಿ

**ಚಾಮರಾಜನಗರ:** ಜಮೀನಿನಲ್ಲಿ ಹುರುಳಿ ಕಾವಲು ವೇಳೆ ಟಾರ್ಪಲ್ ಹೊದ್ದು ಮಲಗಿದ್ದ ರೈತನ ಮೇಲೆ ಕಾಡಾನೆ ಆನೆ ದಾಳಿ ನಡೆಸಿ ತುಳಿದ ಘಟನೆ ಚಾಮರಾಜನಗರ ಜಿಲ್ಲೆಯ ಬಂಡೀಪುರ ರಾಷ್ಟ್ರೀಯ ಉದ್ಯಾನವನ ವ್ಯಾಪ್ತಿಯ ದೇಶಿಪುರದಲ್ಲಿ ನಡೆದಿದೆ. ಬಂಡೀಪುರ ಹುಲಿ ಸಂರಕ್ಷಿತ ಪ್ರದೇಶದ ಕಾಡಂಚಿನ ಗ್ರಾಮವಾದ ಗುಂಡ್ಲುಪೇಟೆ ತಾಲ್ಲೂಕಿನ ದೇಶಿಪುರ ಗ್ರಾಮದಲ್ಲಿ ಘಟನೆ ನಡೆದಿದೆ. ಹುರುಳಿ ಒಕ್ಕಣೆ ಮಾಡಿ ಕಾವಲು ಕಾಯ್ತಿದ್ದ ಚಾಮರಾಜನಗರ ಜಿಲ್ಲೆಯ ಗುಂಡ್ಲುಪೇಟೆ ತಾಲ್ಲೂಕಿನ ದೇಶಿಪುರ ಗ್ರಾಮದ ರೈತರಾದ ಸಿದ್ದರಾಜಶೆಟ್ಟಿ ಮತ್ತು ಮಹದೇವಶೆಟ್ಟಿ ರೈತರು.ರಸ್ತೆ ಬದಿಯಲ್ಲಿರಿಸಿದ್ದ ಹುರುಳಿ ತಿಂದು ಸಾಗುತ್ತಿದ್ದ ಕಾಡಾನೆ ಕಾಲಿಗೆ ಸಿಲುಕಿದ ರೈತ ಸಿದ್ದರಾಜಶೆಟ್ಟಿ ಕುತ್ತಿಗೆ ಕಿವಿ ಭಾಗಕ್ಕೆ ಪೆಟ್ಟಾಗಿದ್ದು, , ಮಹದೇವಶೆಟ್ಟಿ ಪಾರಾಗಿದ್ದಾರೆ.

### ಉದ್ಘಾಟನೆಗೆ ಯಡಿಯೂರಪ್ಪ, ಸಮಾರೋಪದಲ್ಲಿ ಸಿಎಂ ಸಿದ್ದರಾಮಯ್ಯ

# 14, 15ಕ್ಕೆ ಸಿದ್ದರಾಮೇಶ್ವರ ಜಯಂತಿ

**ಬೆಂಗಳೂರು:** 852ನೇ ಶ್ರೀ ಗುರು ಸಿದ್ದರಾಮೇಶ್ವರ ಜಯಂತಿ ಈ ಬಾರಿ ಬೆಂಗಳೂರಿನಲ್ಲಿ ಅರಮನೆ ಆವರಣದಲ್ಲಿ ಜ.14 ಮತ್ತು 15ರಂದು ಎರಡು ದಿನಗಳ ಕಾಲ ಆಯೋಜನೆ ಮಾಡಲಾಗಿದೆ ಎಂದು ಜಯಂತಿ ಮಹೋತ್ಸವ ಸ್ವಾಗತ ಸಮಿತಿ ಅಧ್ಯಕ್ಷ ಎಸ್.ಎನ್.ಸಿದ್ದರಾಮಪ್ಪ ಹೇಳಿದ್ದಾರೆ.



ಪ್ರೆಸ್ ಕ್ಲಬ್‌ನಲ್ಲಿ ಏರ್ಪಡಿಸಿದ್ದ ಸುದ್ದಿಗೋಷ್ಠಿಯಲ್ಲಿ ಜಯಂತಿಯ ಆಹ್ವಾನ ಪತ್ರಿಕೆ ಬಿಡುಗಡೆ ಮಾಡಿ ಮಾತನಾಡಿ, ಕರ್ಮಯೋಗಿ ಸಿದ್ದರಾಮೇಶ್ವರರ ಜಯಂತಿಯನ್ನು ನೊಳಂಬ ಲಿಂಗಾಯಿತ ಸಂಘದಿಂದ ಪ್ರತಿ ವರ್ಷವೂ ಮಾಡಿಕೊಂಡು ಬರಲಾಗುತ್ತಿದೆ ಎಂದರು.

12ನೇ ಶತಮಾನದಲ್ಲಿ ಕೆರೆ ಕಟ್ಟೆಗಳನ್ನು ಕಟ್ಟಿಸುವ ಮೂಲಕ ತನ್ನದೇ ಆದ ಕಾಯಕ ಮಾಡುತ್ತಿದ್ದ ಸಿದ್ದರಾಮ, ಅಲ್ಲಮಪ್ರಭುಗಳಿಂದ ದೀಕ್ಷೆ ಪಡೆದು ಬಸವಾದಿ ಶಿವಶರಣರ ಜತೆಯಲ್ಲಿ ಶರಣ ತತ್ವಗಳನ್ನು ಅನುಷ್ಠಾನ ಮಾಡುತ್ತಿದ್ದ. ಅಂದಿನಿಂದಲೂ ಸಿದ್ದರಾಮನ ಭಕ್ತರು ಮತ್ತು ಅನುಯಾಯಿಗಳು ನಾಡಿನ ಉದ್ದಗಲಕ್ಕೂ ನೆಲೆಸಿದ್ದಾರೆ ಎಂದರು.

ನೊಳಂಬರು ಎಂದರೆ ಶ್ರಮಜೀವಿಗಳು. ರಾಜ್ಯದಲ್ಲಿ 12ನೇ ಶತಮಾನದಿಂದ 18ನೇ ಶತಮಾನದ ತನಕ ಸುಧೀರ್ಘವಾಗಿ ಆಳಿದ ಸಾಮಂತ ಮನೆತನಗಳಲ್ಲಿ ನೊಳಂಬ ಅರಸು ಮನೆತನವೂ ಒಂದು. ಈ ಸಂದರ್ಭದಲ್ಲಿ ನೊಳಂಬ ಸ್ಮರಣ ಸಂಚಿಕೆಯನ್ನು ಹೊರತರಲಾಗುತ್ತಿದೆ. ನೊಳಂಬ ಇತಿಹಾಸ ಸಾಕ್ಷ್ಯ ಚಿತ್ರವನ್ನು ಬಿಡುಗಡೆ ಮಾಡಲಾಗುತ್ತಿದ್ದು, ನೊಳಂಬ ವೆಬ್ ಸೈಟ್ ಅನಾವರಣ ಮಾಡಲಾಗುವುದು ಎಂದರು.

14 ರಂದು ನಡೆಯಲಿರುವ ಉದ್ಘಾಟನಾ ಕಾರ್ಯಕ್ರಮದಲ್ಲಿ ಕೆರಗೋಡಿ ರಂಗಾಪುರದ ಪೀಠಾಧ್ಯಕ್ಷ ಶ್ರೀ ಗುರು ಪರದೇಶಿ ಕೇಂದ್ರ ಸ್ವಾಮೀಜಿ, ಪಂಡಿತಾರಾಧ್ಯ ಸ್ವಾಮೀಜಿ,ಗೋಡೆಕೆರೆ ಸ್ವಾಮೀಜಿ, ಕುಪ್ಪೂರು ತಮ್ಮಡಿಹಳ್ಳಿ ಸ್ವಾಮೀಜಿ ಸಾನಿಧ್ಯ ವಹಿಸಲಿದ್ದು, ಮಾಜಿ ಸಿಎಂ ಬಿ.ಎಸ್ .ಯಡಿಯೂರಪ್ಪ ಅವರು ಉದ್ಘಾಟನೆ ಮಾಡಲಿದ್ದಾರೆ. ಮಾಜಿ ಎಂಪಿ ಜಿ.ಎಸ್.ಬಸವರಾಜು ಅಧ್ಯಕ್ಷತೆ ವಹಿಸಲಿದ್ದು, ಅರಣ್ಯ ಸಚಿವ ಈಶ್ವರ ಖಂಡ್ರೆ, ಬಿಜೆಪಿ ಅಧ್ಯಕ್ಷ ಬಿ.ವೈ. ವಿಜಯೇಂದ್ರ, ಸಂಸದ ಗೋವಿಂದ ಕಾರಜೋಳ ಮತ್ತಿತರರು ಭಾಗವಹಿಸಲಿದ್ದಾರೆ ಎಂದರು. 15ರಂದು ನಡೆಯಲಿರುವ ಸಮಾರೋಪ ಸಮಾರಂಭದಲ್ಲಿ ಸುತ್ತೂರು ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ, ಶಿಡ್ಲೇಹಳ್ಳಿ ಮಠದ ಇಮ್ಮಡಿ ಕರಿಬಸವ ದೇಶಿಕೇಂದ್ರ ಸ್ವಾಮೀಜಿ, ಬೆಟ್ಟದಹಳ್ಳಿ ಗವಿಮಠದ ಶ್ರೀ ಚಂದ್ರಶೇಖರ ಸ್ವಾಮೀಜಿ ಸಾನಿಧ್ಯ ವಹಿಸಲಿದ್ದು, ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಸಮಾರೋ ಭಾಷಣ ಮಾಡಲದಿದಾರೆ. ಸಚಿವರಾದ ಎಂ.ಬಿ.ಪಾಟೀಲ್, ಭೈರತಿ ಸುರೇಶ್, ಶಾಸಕ ಶಾಮನೂರು ಶಿವಶಂಕರಪ್ಪ ಎವರು ಸೇರಿದಂತೆ ಹಲವರು ಭಾಗವಹಿಸಲಿದ್ದಾರೆ. ಇದೇ ಸಂದರ್ಭದಲ್ಲಿ ಸಾಹಿತ್ಯ ಗೋಷ್ಠಿ ಏರ್ಪಡಿಸಿದ್ದು, ಡಿಸಿಎಂ ಡಿ.ಕೆ.ಶಿವಕುಮಾರ್, ಮಾಜಿ ಸಿಎಂ ಬಸವರಾಜ ಬೊಮ್ಮಾಯಿ, ಮಾಜಿ ಸಚಿವ ಜೆ.ಸಿ.ಮಾಧುಸ್ವಾಮಿ ಮತ್ತಿತರರು ಭಾಗವಹಿಸಲಿದ್ದಾರೆ. ಮಹಿಳಾ ಮತ್ತು ಕೃಷಿ ಗೋಷ್ಠಿಯನ್ನು ಏರ್ಪಡಿಸಲಾಗಿದೆ. ಎರಡೂ ದಿನಗಳು ಸಾಂಸ್ಕೃತಿಕ ಕಾರ್ಯಕ್ರಮ, ಇಷ್ಟಲಿಂಗಪೂಜೆ, ಲಿಂಗಧಾರಣೆ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ ಎಂದರು. ನೊಳಂಬ ಸಂಘದ ಮಾಜಿ ಅಧ್ಯಕ್ಷ ಕಾಮನಕೆರೆ ಶಶಿಧರ್, ಸ್ವಾಗತ ಸಮಿತಿ ಪ್ರಧಾನ ಕಾರ್ಯದರ್ಶಿ ಬೆಟ್ಟದಹಳ್ಳಿ ರೇಣುಕಾರಾಧ್ಯ, ವೈ. ಎಸ್.ಸಿದ್ದರಾಮೇಗೌಡ, ಎಚ್.ಆರ್. ಮಲ್ಲಿಕಾರ್ಜುನಯ್ಯ, ನೊಳಂಬ ಸಂಘದ ಕಾಮನಕೆರೆ ಶಶಿಧರ್, ಪದಾಧಿಕಾರಿಗಳಾದ ಎಚ್.ರಾಮಲಿಂಗಪ್ಪ, ರುದ್ರಪ್ಪ, ಎಸ್.ಆರ್.ನಟರಾಜ್, ಕುಬೇರಪ್ಪ, ಜಿ.ಎಸ್.ಧನಂಜೇಯ ಮತ್ತಿತರರು ಹಾಜರಿದ್ದರು.

# ಕೂಸಿನ ಮನೆಗೆ ಯುನಿಸೆಫ್ ತಂಡ ಭೇಟಿ

**ಬೆಂಗಳೂರು ಗ್ರಾಮಾಂತರ:** ಹೊಸಕೋಟೆ ತಾಲ್ಲೂಕಿನ ಬೈಲನರಸಪುರ ಗ್ರಾಮ ಪಂಚಾಯಿತಿಗೆ ರಾಜ್ಯ ಸರ್ಕಾರದ ಮಹತ್ವಾಕಾಂಕ್ಷೆಯ 'ಕೂಸಿನ ಮನೆ' ಕಾರ್ಯಕ್ರಮದ ಪರಿಣಾಮಗಳ ಕುರಿತು ಅಧ್ಯಯನ ಮಾಡಲು ಯುನಿಸೆಫ್ ಸಂಸ್ಥೆಯ ರಿನಿ ಕುರಿನ್ ಮುಖ್ಯಸ್ಥರು ಮತ್ತು ಪರಿಣಿತರ ತಂಡ ಭೇಟಿ ನೀಡಿದರು.

ನರೇಗಾ ಕೆಲಸಕ್ಕೆ ಹೋಗುವ ಕೂಲಿಕಾರರ ಮಕ್ಕಳಿಗಾಗಿ ವಿಶೇಷವಾಗಿ ಗ್ರಾಮ ಪಂಚಾಯತಿಗೆ ಒಂದರಂತೆ ತೆರೆದಿರುವ ಕೂಸಿನ ಮನೆಯು ಹೇಗೆ ಕಾರ್ಯ ನಿರ್ವಹಿಸುತ್ತಿದೆ ಮತ್ತು ಅದರಿಂದ ಮಕ್ಕಳಿಗೆ ಸಿಗುತ್ತಿರುವ ಸಾಧಕ, ಬಾಧಕಗಳ ಬಗ್ಗೆ ಅಧ್ಯಯನ ನಡೆಸಿತು.

ಹೊಸಕೋಟೆ ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಡಾ. ನಾರಾಯಣ ಸ್ವಾಮಿ ಮತ್ತು ಮಹಿಳಾ ಮತ್ತು ಮಕ್ಕಳ ಕಲ್ಯಾಣಾ ಇಲಾಖೆಯ ಉಪನಿರ್ದೇಶಕ ಮುದ್ದಣ್ಣ, ಅನಿತಾ ಲಕ್ಷ್ಮಿ, ಆರೋಗ್ಯ ಇಲಾಖೆ ಅಧಿಕಾರಿಗಳು ಕೂಸಿನ ಮನೆ ಬಗ್ಗೆ ಮಾಹಿತಿ ನೀಡಿದರು. ಯುನಿಸೆಫ್ ತಂಡದ ಕೂಸಿನ ಮನೆ ಮೇಲ್ವಿಚಾರಣಾ ಸಮಿತಿಯ ಅಧ್ಯಕ್ಷರು ಮತ್ತು ಸದಸ್ಯರು, ಗ್ರಾಮ ಪಂಚಾಯತಿ ಅಧಿಕಾರಿಗಳು ಮತ್ತು ಸಿಬ್ಬಂದಿಗಳು, ಮಕ್ಕಳ ಪೋಷಕರು, ಗ್ರಾಮ ಪಂಚಾಯತಿ ಮಟ್ಟದ ಕೂಸಿನ ಮನೆ ಮೇಲ್ವಿಚಾರಣಾ ಸಮಿತಿ, ಕೂಸಿನ ಮನೆ ಕೇರ್ ಟೇಕರ್ ಗಳು, ಗ್ರಾಮ ಪಂಚಾಯತಿ ಮತ್ತು ನರೇಗಾ ಅಧಿಕಾರಿ ಮತ್ತು ಸಿಬ್ಬಂದಿಗಳು, ಕೂಸಿನ ಮನೆ ಸೌಲಭ್ಯ ಪಡೆಯುತ್ತಿರುವ ಮಕ್ಕಳ ಪೋಷಕರು ಸಮಾಲೋಚನಾ ಸಭೆಯಲ್ಲಿ ಭಾಗವಹಿಸಿದ್ದರು.



## ಪದ್ಮನಾಭನಗರದ ಲಕ್ಷ್ಮೀ ವೆಂಕಟೇಶ್ವರ ದೇವಸ್ಥಾನದಲ್ಲಿ ವೈಭವದ ವೈಕುಂಠ ಏಕಾದಶಿ

**ಬೆಂಗಳೂರು:** ನಗರದ ಬನಶಂಕರಿ 2ನೇ ಹಂತದ ಪದ್ಮನಾಭಾನಗರದಲ್ಲಿರುವ ಶ್ರೀ ಲಕ್ಷ್ಮೀ ವೆಂಕಟೇಶ್ವರ ದೇವಸ್ಥಾನದಲ್ಲಿ ವೈಭವಯುತವಾಗಿ ವೈಕುಂಠ ಏಕಾದಶಿ ಆಚರಿಸಲಾಯಿತು, ದೇವಸ್ಥಾನವನ್ನ ವಿವಿಧ ಹೋ ಗಳಿಂದ ಅಲಂಕರಿಸಲಾಗಿತ್ತು, ಲಕ್ಷ್ಮೀ ವೆಂಕಟೇಶ್ವರ ಸ್ವಾಮಿಗೆ ಆಭರಣಗಳಿಂದ ಮತ್ತು ಹೋ, ತುಳಸಿ ಮಾಲೆಗಳಿಂದ ಕಣ್ ತುಂಬುವಂತೆ ಅಲಂಕಾರ ಪೂಜೆ ಮಾಡಲಾಗಿತ್ತು. ಬೆಳಿಗ್ಗೆ ಸಂಜೆ 6 ಗಂಟೆಯತನಕ ಸುಮಾರು 30ಸಾವಿರ ಭಕ್ತರು ಸರತಿ ಸಾಲಿನಲ್ಲಿ ನಿಂತು ದೇವರ ದರ್ಶನ ಪಡೆದು ತೀರ್ಥ ಪ್ರಸಾದ ಸ್ವೀಕರಿಸಿದರು. ಭಕ್ತರಿಗೆ ಉಚಿತವಾಗಿ 35 ಸಾವಿರ ಲಡ್ಡುಗಳನ್ನ ಪ್ರಸಾದವಾಗಿ ವಿತರಿಸಲಾಯಿತು. ದೇವಸ್ಥಾನದ ಆವರಣದಲ್ಲಿ ವಿವಿಧ ಮಹಿಳಾ ಭಜನೆ ಮಂಡಳಿಗಳಿಂದ ಭಜನೆ, ದೇವರ ನಾಮ ನಡೆಯಿತು, ಸ್ಥಳೀಯ ಶಾಸಕ ಹಾಗೂ ವಿರೋಧ ಪಕ್ಷದ ನಾಯಕ ಆರ್ ಅಶೋಕ್ ಹಾಗೂ ಇತರೆ ಗಣ್ಯರು ಆಗಮಿಸಿ ದರ್ಶನ ಪಡೆದರು



## ಜಿಲ್ಲಾ ಮಟ್ಟದ ಸಿರಿಧಾನ್ಯಗಳ ಹಬ್ಬ

**ಬೆಂಗಳೂರು ಗ್ರಾಮಾಂತರ:** ಬೆಂಗಳೂರು ಗ್ರಾಮಾಂತರ ಜಿಲ್ಲಾ ಕೃಷಿ ಇಲಾಖೆ ವತಿಯಿಂದ ಸಾವಯುವ ಮತ್ತು ಸಿರಿಧಾನ್ಯಗಳ ಮಹತ್ವದ ಕುರಿತು ಸಾರ್ವಜನಿಕರಲ್ಲಿ ಅರಿವು ಮೂಡಿಸುವ ಸಲುವಾಗಿ ''ಜಿಲ್ಲಾ ಮಟ್ಟದ ಸಿರಿಧಾನ್ಯಗಳ ಹಬ್ಬ-2025 ಕಾರ್ಯಕ್ರಮವನ್ನು ಜನವರಿ 11ರ ಶನಿವಾರದಂದು ದೇವನಹಳ್ಳಿ ಟೌನ್ ಕ್ರೀಡಾಂಗಣದಲ್ಲಿ ಆಯೋಜಿಸಲಾಗಿದೆ. ಈ ಕಾರ್ಯಕ್ರಮದಲ್ಲಿ ರೈತರಿಗೆ ಅವಶ್ಯವಿರುವ ಬೇಸಾಯಕ್ಕೆ ಸಂಬಂಧಿಸಿದ ಮಾಹಿತಿಯನ್ನು ಇಲ್ಲಿ ನೀಡಲಾಗುತ್ತದೆ ಹಾಗೂ ವಸ್ತು ಪ್ರದರ್ಶನ ಏರ್ಪಡಿಸಲಾಗಿದೆ. ರೈತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಪ್ರಯೋಜನವನ್ನು ಪಡೆಕೊಳ್ಳಬೇಕೆಂದು ಬೆಂಗಳೂರು ಗ್ರಾಮಾಂತರ ಜಿಲ್ಲಾ ಜಂಟಿ ಕೃಷಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## 15 ರಂದು ಮಲೆಮಹದೇಶರ ಬೆಟ್ಟದಲ್ಲಿ ಸಚಿವ ಸಂಪುಟ ಸಭೆ

**ಬೆಂಗಳೂರು:** ರಾಜ್ಯ ಸರ್ಕಾರ ನಿರ್ಧರಿಸಿದಂತೆ ಬರುವ ಫೆಬ್ರವರಿ 15 ರಂದು ಚಾಮರಾಜನಗರ ಜಿಲ್ಲೆಯ ಮಲೆಮಹದೇಶ್ವರ ಬೆಟ್ಟದಲ್ಲಿ ರಾಜ್ಯದ ಸಚಿವ ಸಂಪುಟ ಸಭೆ ಜರುಗಲಿದೆ. ಇದರಲ್ಲಿ ಯಾವುದೇ ಬದಲಾವಣೆಗಳು ಆಗಿಲ್ಲ ಎಂದು ಸರ್ಕಾರದ ಅಪರ ಕಾರ್ಯದರ್ಶಿ (ಸಚಿವ ಸಂಪುಟ) ಆರ್. ಚಂದ್ರಶೇಖರ್ ತಿಳಿಸಿದ್ದಾರೆ. ಕೆಲವು ಮಾಧ್ಯಮಗಳಲ್ಲಿ ಸಚಿವ ಸಂಪುಟ ಸಭೆಯು ಚಿಕ್ಕಬಳ್ಳಾಪುರ ಜಿಲ್ಲೆಯ ನಂದಿಬೆಟ್ಟಕ್ಕೆ ಸ್ಥಳಾಂತರಿಸಲಾಗಿದೆ ಎಂದು ಸುದ್ದಿ ಪ್ರಕಟವಾಗಿದೆ. ಆದರೆ ಯಾವುದೇ ಬದಲಾವಣೆಗಳಾಗಿಲ್ಲ ಪೂರ್ವನಿರ್ಧಾರದಂತೆ ಚಾಮರಾಜನಗರ ಜಿಲ್ಲೆಯ ಮಲೆಮಹದೇಶ್ವರ ಬೆಟ್ಟದಲ್ಲಿಯೇ ಸಚಿವ ಸಂಪುಟ ಸಭೆ ಜರುಗಲಿದೆ ಎಂದು ಅವರು ಪ್ರಕಟಣೆಯಲ್ಲಿ ಸ್ಪಷ್ಟಪಡಿಸಿದ್ದಾರೆ.



ಬೆಂಗಳೂರಿನ ಮಾಗಡಿ ರಸ್ತೆ ಎಂ. ಜಿ.ರೈಲ್ವೆ ಕಾಲೋನಿಯ. ಶ್ರೀ ವಿನಾಯಕ ವೆಂಕಟೇಶ್ವರ ಸ್ವಾಮಿ ದೇವಸ್ಥಾನದಲ್ಲಿ ಶುಕ್ರವಾರ ವೈಕುಂಠ ಏಕಾದಶಿ ಪ್ರಯುಕ್ತ ಅಯೋಧ್ಯ ಶ್ರೀರಾಮನ ಅಲಂಕಾರವನ್ನು ಏರ್ಪಡಿಸಲಾಗಿತ್ತು.



ವಿಜಯಪುರ ಪಟ್ಟಣದ ಹಾರ್ಡಿಪುರದ ಶ್ರೀ ಲಕ್ಷ್ಮಿ ವೆಂಕಟೇಶ್ವರ ಸ್ವಾಮಿ ದೇವಾಲಯಕ್ಕೆ ವಿಧಾನ ಪರಿಷತ್ತಿನ ವಿರೋಧ ಪಕ್ಷದ ನಾಯಕರಾದ ಚಲವಾದಿ ನಾರಾಯಣಸ್ವಾಮಿ ರವರು ಕುಟುಂಬ ಸಮೇತರಾಗಿ ಕುಟುಂಬ ಸಮೇತರಾಗಿ ಭೇಟಿ ನೀಡಿ ಭೇಟಿ ನೀಡಿ ಪೂಜೆ ಸಲ್ಲಿಸಿದ ಸಂದರ್ಭದಲ್ಲಿ ಬಿಜೆಪಿ ಮುಖಂಡರಾದ ಅಜಿತ್ ಕುಮಾರ್, ರವಿಕುಮಾರ್ ಕನಕ ರಾಜು ದೇವಾಲಯದ ವ್ಯವಸ್ಥಾಪಕರಾದ ಜಯರಾಮ್ ವೆಂಕಟೇಶಪ್ಪ ಉಪಸ್ಥಿತರಿರುವರು.



ವಿಜಯಪುರ ಪಟ್ಟಣದ ಬಲಿಜಪೇಟೆಯಲ್ಲಿರುವ ಶ್ರೀ ಲಕ್ಷ್ಮಿ ವೆಂಕಟರಮಣ ಸ್ವಾಮಿ ದೇವಾಲಯದಲ್ಲಿ ವೈಕುಂಠ ಏಕಾದಶಿ ಪ್ರಯುಕ್ತ ಏರ್ಪಡಿಸಿದ್ದ ಉತ್ತರ ದ್ವಾರದಲ್ಲಿ ಸ್ಥಾಪಿಸಿದ್ದ ಶ್ರೀ ಲಕ್ಷ್ಮಿ ವೆಂಕಟರಮಣ ಸ್ವಾಮಿರವರ ಬೃಹತ್ ವಿಗ್ರಹ.

# 76ನೇ ಗಣರಾಜ್ಯೋತ್ಸವ ದಿನಾಚರಣೆ

**ಬೆಂಗಳೂರು ಗ್ರಾಮಾಂತರ:** ಜನವರಿ 26 ರಂದು 76ನೇ ಗಣರಾಜ್ಯೋತ್ಸವ ದಿನಾಚರಣೆಯನ್ನು ಜಿಲ್ಲೆಯಲ್ಲಿ ಅರ್ಥಪೂರ್ಣವಾಗಿ ಆಚರಿಸಲು ಅಗತ್ಯ ಸಿದ್ಧತೆ ಕೈಗೊಳ್ಳಬೇಕು ಎಂದು ಸಂಬಂಧಪಟ್ಟ ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ಡಾ. ಎನ್. ಶಿವಶಂಕರ ಅವರು ಸೂಚಿಸಿದರು.



ದೇವನಹಳ್ಳಿ ತಾಲೂಕಿನ ಬೀರಸಂದ್ರ ಗ್ರಾಮದ ಬೆಂಗಳೂರು ಗ್ರಾಮಾಂತರ ಜಿಲ್ಲಾಡಳಿತ ಭವನದಲ್ಲಿರುವ ಜಿಲ್ಲಾಧಿಕಾರಿಯವರ ಕಚೇರಿ ಸಭಾಂಗಣದಲ್ಲಿಂದು ನಡೆದ 76ನೇ ಗಣರಾಜ್ಯೋತ್ಸವ ದಿನಾಚರಣೆಯ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

76ನೇ ಗಣರಾಜ್ಯೋತ್ಸವದ ದಿನಾಚರಣೆ ಅಂಗವಾಗಿ ಜನವರಿ 26 ರಂದು ಬೆಂಗಳೂರು ಗ್ರಾಮಾಂತರ ಜಿಲ್ಲೆ ದೇವನಹಳ್ಳಿ ತಾಲೂಕು ಬೀರಸಂದ್ರ ಗ್ರಾಮದಲ್ಲಿರುವ ಜಿಲ್ಲಾಡಳಿತ ಭವನದಲ್ಲಿ ಬೆಳಗ್ಗೆ 07.30 ಗಂಟೆಗೆ ಧ್ವಜಾರೋಹಣ ನಡೆಸಲಾಗುವುದು. ನಂತರ ದೇವನಹಳ್ಳಿಯ ಕ್ರೀಡಾಂಗಣದಲ್ಲಿ ಬೆಳಗ್ಗೆ 09.00 ಗಂಟೆಗೆ ಜಿಲ್ಲಾ ಉಸ್ತುವಾರಿ ಸಚಿವರು ಧ್ವಜಾರೋಹಣ ನೆರವೇರಿಸಲಿದ್ದು, ನಂತರ ಜಿಲ್ಲಾ ಮಟ್ಟದ ಗಣರಾಜ್ಯೋತ್ಸವ ದಿನಾಚರಣೆ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ. ಗಣರಾಜ್ಯೋತ್ಸವದ ದಿನದಂದು ಜಿಲ್ಲಾ, ತಾಲ್ಲೂಕು ಕಛೇರಿಗಳನ್ನು ದೀಪಾಲಂಕಾರದಿಂದ ಅಲಂಕೃತಗೊಳಿಸಲು ಅಗತ್ಯ ಕ್ರಮ ಕೈಗೊಳ್ಳಲು ಅಧಿಕಾರಿಗಳಿಗೆ ಸೂಚಿಸಿದರು. ಶಿಷ್ಟಾಚಾರದಂತೆ ಗಣ್ಯರನ್ನು ಕಾರ್ಯಕ್ರಮಕ್ಕೆ ಆಹ್ವಾನಿಸಬೇಕು. ಆಹ್ವಾನ ಪತ್ರಿಕೆಗಳ ಮುದ್ರಣ, ಕಾರ್ಯಕ್ರಮದ ವೇದಿಕೆ ನಿರ್ಮಾಣ ವ್ಯವಸ್ಥೆ, ವೇದಿಕೆಗೆ ಅಗತ್ಯವಾದ ಅಲಂಕಾರಿಕ ಹೂ ಗಿಡಗಳ ವ್ಯವಸ್ಥೆ, ಸಾಂಸ್ಕೃತಿಕ ಕಾರ್ಯಕ್ರಮ, ವಿವಿಧ ಸಾಧಕರಿಗೆ ಪ್ರಶಸ್ತಿ, ಪಥಸಂಚಲನ, ಉಪಹಾರ ಹಾಗೂ ಕುಡಿಯುವ ನೀರಿನ ವ್ಯವಸ್ಥೆ, ಪ್ಲಾಸ್ಟಿಕ್ ಬಳಕೆ ನಿಷೇಧ ಸೇರಿದಂತೆ ಅಗತ್ಯ ಸಿದ್ಧತೆ ಕೈಗೊಳ್ಳಲು ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸಿ ಗಣರಾಜ್ಯೋತ್ಸವ ಆಚರಣೆಯನ್ನು ಮಾಡಬೇಕು ಎಂದು ಸಂಬಂಧಪಟ್ಟ ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ಸೂಚನೆ ನೀಡಿದರು. ಸಭೆಯಲ್ಲಿ ಬೆಂಗಳೂರು ಅಂತರಾಷ್ಟ್ರೀಯ ವಿಮಾನ ನಿಲ್ದಾಣ ಪ್ರಾಧಿಕಾರದ ಅಧ್ಯಕ್ಷರಾದ ವಿ. ಶಾಂತಕುಮಾರ, ಜಿ.ಪಂ ಯೋಜನಾ ನಿರ್ದೇಶಕರಾದ ವಿಠಲ್ ಕಾವ್ಳೆ, ದೇವನಹಳ್ಳಿ ತಾಲ್ಲೂಕು ತಹಸೀಲ್ದಾರ್ ಬಾಲಕೃಷ್ಣ ಸೇರಿದಂತೆ ಜಿಲ್ಲಾ ಮಟ್ಟದ ಅಧಿಕಾರಿಗಳು ಹಾಗೂ ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.

## ವಿಷೇಶ ಪ್ರೋತ್ಸಾಹಧನಕ್ಕಾಗಿ ಬಿ.ಎಡ್ ವಿದ್ಯಾರ್ಥಿಗಳಿಂದ ಅರ್ಜಿ ಸಲ್ಲಿಸಲು ಅವಧಿ ವಿಸ್ತರಣೆ

**ಬೆಂಗಳೂರು ಗ್ರಾಮಾಂತರ:** ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ವತಿಯಿಂದ 2024-25ನೇ ಸಾಲಿನಲ್ಲಿ ಬಿ.ಎಡ್ ನಲ್ಲಿ ವ್ಯಾಸಂಗ ಮಾಡುತ್ತಿರುವ ಅಲ್ಪಸಂಖ್ಯಾತರ ಸಮುದಾಯದ ವಿದ್ಯಾರ್ಥಿಗಳಿಗೆ ವಿಶೇಷ ಪ್ರೋತ್ಸಾಹಧನ ನೀಡಲು ಸೇವಾಸಿಂಧು https://sevasindhu.Karnataka.gov.in ಪೋರ್ಟಲ್‌ನಲ್ಲಿ ಆನ್ಲೈನ್ ಮೂಲಕ 2025ರ ಜನವರಿ 20 ರ ವರೆಗೂ ಅರ್ಜಿ ಸಲ್ಲಿಸಲು ಅವಧಿಯನ್ನು ವಿಸ್ತರಿಸಲಾಗಿದೆ.

ಹೆಚ್ಚಿನ ಮಾಹಿತಿಗಾಗಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ವೆಬ್ಸೈಟ್ https://dom.karnataka.gov.in ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಸಹಾಯವಾಣಿ ಸಂಖ್ಯೆ: 8277799990, ಬೆಂಗಳೂರು ಗ್ರಾಮಾಂತರ ಜಿಲ್ಲಾ ದೂರವಾಣಿ ಸಂಖ್ಯೆ: 08022866966, ದೊಡ್ಡಬಳ್ಳಾಪುರ ತಾಲ್ಲೂಕು ಮಾಹಿತಿ ಕೇಂದ್ರ, ದೂರವಾಣಿ ಸಂಖ್ಯೆ: 9986874857, ನೆಲಮಂಗಲ ತಾಲ್ಲೂಕು ಮಾಹಿತಿ ಕೇಂದ್ರ, ದೂರವಾಣಿ ಸಂಖ್ಯೆ: 8660197516, ದೇವನಹಳ್ಳಿ ತಾಲ್ಲೂಕು ಮಾಹಿತಿ ಕೇಂದ್ರ ದೂರವಾಣಿ ಸಂಖ್ಯೆ: 9591176959, ಹೊಸಕೋಟೆ ತಾಲ್ಲೂಕು ಮಾಹಿತಿ ಕೇಂದ್ರ, ದೂರವಾಣಿ ಸಂಖ್ಯೆ: 7676905779 ಇವರನ್ನು ಸಂಪರ್ಕಿಸಬಹುದಾಗಿದೆ ಎಂದು ಬೆಂಗಳೂರು ಗ್ರಾಮಾಂತರ ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣಾಧಿಕಾರಿಯವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವೈಕುಂಠ ನೋಡಲು ಬಂದ ಜನಸ್ತೋಮ

**ವಿಜಯಪುರ:** ವೈಕುಂಠ ಏಕಾದಶಿ ಅಂಗವಾಗಿ ಪಟ್ಟಣ ಸೇರಿದಂತೆ ಹೋಬಳಿಯಾದ್ಯಂತ ಶ್ರೀ ಲಕ್ಷ್ಮೀ ವೆಂಕಟೇಶ್ವರಸ್ವಾಮಿ ದೇವಾಲಯಗಳಲ್ಲಿ ವಿಶೇಷ ಪೂಜೆ, ಪುನಸ್ಕಾರಗಳು ನೆರವೇರಿದವು.

ಪಟ್ಟಣದ ಹೊರ ಹೊಲಯದ ಶ್ರೀ ಕ್ಷೇತ್ರ ಹಾರ್ಡಿಪುರ ಶ್ರೀ ಲಕ್ಷ್ಮೀ ವೆಂಕಟೇಶ್ವರ ದೇವಸ್ಥಾನದಲ್ಲಿ ಪ್ರತಿವರ್ಷದಂತೆ ಈ ವರ್ಷವು ಭಕ್ತಿ ಭಾವದಿಂದ ಸಂಭ್ರಮದೊಂದಿಗೆ ವೈಕುಂಠ ಏಕಾದಶಿ ಆಚರಣೆ ಮಾಡಲಾಯಿತು.

ವೈಕುಂಠ ಏಕಾದಶಿ ಹಿನ್ನಲೆಯಲ್ಲಿ ಮುಂಜಾನೆಯಿಂದಲೇ ವಿವಿಧ ಪೂಜಾವಿಧಿ ವಿಧಾನಗಳು ನೆರವೇರಿದವು.

ದೇವಸ್ಥಾನದೊಳಗೆ ಹಸಿರು ತೋರಣಗಳೊಂದಿಗೆ ಹಾಗೂ ವರ್ಣವೈವಿಧ್ಯದಿಂದ ಕೂಡಿದ ಹೂವಿನ ಅಲಂಕಾರವು ಚಿತ್ತಾಕರ್ಷಕವಾಗಿತ್ತು. ತಿರುಮಲ ತಿರುಪತಿಯ ದೇವಸ್ಥಾನದಲ್ಲಿ ನಡೆಯುವ ಪೂಜಾ ವಿಧಿವಿಧಾನಗಳ ರೀತಿಯಲ್ಲೇ ದೇವರಿಗೆ ಪೂಜೆ ನೆರವೇರಿಸಲಾಯಿತು. ಸಾರ್ವಜನಿಕರು ಕೂಡಾ ಉತ್ತರ ಬಾಗಿಲಿನಂದ ಸರತಿ ಸಾಲಿನಲ್ಲಿ ನಿಂತು ಅಂತರ ಕಾಯ್ದುಕೊಂಡು ದೇವರ ದರ್ಶನ ಪಡೆಯುವ ವ್ಯವಸ್ಥೆಯನ್ನು ಮಾಡಲಾಗಿತ್ತು.

ಅಪಾರ ಸಂಖ್ಯೆಯಲ್ಲಿ ಜನರು ಈ ದೇವಸ್ಥಾನಕ್ಕೆ ಭೇಟಿ ನೀಡಿದ ಹಿನ್ನಲೇ ಸ್ವಾಮಿಯ ದರ್ಶನ ಪಡೆಯುವ ಎಲ್ಲಾ ಭಕ್ತರೊಗೂ ಲಡ್ಡು ಸೇವೆಯನ್ನು ಮಾಡಲಾಯಿತು.



ಸ್ವಾಮಿಯ ಎಡ ಭಲವಿರುವ ಶ್ರೀದೇವಿ, ಭೂದೇವಿಯವರ ಉತ್ಸವ ಮೂರ್ತಿಗಳ ಪೂಜಾ ಕಾರ್ಯಕ್ರಮ ಅದ್ದೂರಿಯಾಗಿ ನೆರವೇರಿತು.

ತಿರುಪತಿ ದೇವಾಲಯದ ಅಲಂಕಾರ: ಪಟ್ಟಣದ ಬಲಿಜಗರ ಪೇಟೆಯ ಶ್ರೀ ಲಕ್ಷ್ಮೀವೆಂಕಟೇಶರಸ್ವಾಮಿ ದೇವಾಲಯದಲ್ಲಿ ಹಾಗೂ ಶ್ರೀ ಚನ್ನಕೇಶವಸ್ವಾಮಿ ದೇವಾಲಯಗಳಲ್ಲಿ ಮುಂಜಾನೆಯಿಂದ ದೇವಾಲಯದಲ್ಲಿ ಸುಪ್ರಭಾತ ಸೇವೆ, ವಿಷ್ಣು ಸಹಸ್ರನಾಮಾರ್ಚನೆ, ಅಭಿಷೇಕ ಹಾಗೂ ಮಹಾಮಂಗಳಾರತಿ ಸೇರಿದಂತೆ ವಿಶೇಷ ಪೂಜಾ ಕೈಂಕರ್ಯಗಳು ನೇರವೇರಿದವು.

ದೇವಾಲಯದಲ್ಲಿ ವಿಷ್ಣುವಿನ ನಾನಾ ರೂಪಗಳ ದೇವಸ್ಥಾನ ದಲ್ಲಿ ದರ್ಶನ ಪಡೆದರೆ ಮೋಕ್ಷ ಸಿಗುತ್ತದೆ ಎಂಬ ನಂಬಿಕೆಯಿಂದ. ಹೀಗಾಗಿ ಬೆಳಿಗ್ಗೆಯಿಂದಲೇ ಜನರು ದೇವಸ್ಥಾನಗಳಿಗೆ ಆಗಮಿಸಿ ವಿಷ್ಣುವಿನ ಕೃಪೆಗೆ ಪಾತ್ರರಾಗುತ್ತಿದ್ದುದು ಕಂಡು ಬಂತು. ವೈಕುಂಠ ಏಕಾದಶಿ ಅಂಗವಾಗಿ ದೇವಾಲಯದಲ್ಲಿ ನಿರ್ಮಿಸಲಾಗಿದ್ದ ವಿಶೇಷ ದ್ವಾರದ ಮೂಲಕ ಭಕ್ತರು ಸರದಿ ಸಾಲಿನಲ್ಲಿ ತೆರಳಿ ಸ್ವಾಮಿಯ ದರ್ಶನ ಪಡೆದರು.

ಸ್ವಾಮಿಯ ದರ್ಶನದ ಬಳಿಕ ಉತ್ತರ ದ್ವಾರದ ಮೂಲಕ ಹೊರ ಬಂದ ಭಕ್ತರಿಗೆ ಲಡ್ಡು, ಸಿಹಿ, ಪಂಚಾಮೃತ ಪ್ರಸಾದ ವಿತರಿಸುತ್ತಿದ್ದುದು ಕಂಡು ಬಂತು.

ಈ ವೇಳೆ ಮಾತನಾಡಿದ ಅದಿ ಪರಶಕ್ತಿ ಮಹಾಸಂಸ್ಥಾನ ಶ್ರೀಗಳಾದ ಶ್ರೀ ಮಂಜುನಾಥ ಸ್ವಾಮೀಜಿಗಳು ಅವರು ವೈಕುಂಠ ಎನ್ನುವುದು ಮಹಾವಿಷ್ಣುವಿನ ನೆಲೆ. ವರ್ಷದಲ್ಲಿ ಒಂದು ದಿನ, ಎಂದರೆ ವೈಕುಂಠ ಏಕಾದಶಿಯಂದು ವಿಷ್ಣುವಿನ ಈ ಮನೆಯ ಬಾಗಿಲು ಮುಕ್ತವಾಗಿ ಎಲ್ಲರಿಗೂ ತೆರೆದಿರುತ್ತದೆಯಂತೆ. ವಿಷ್ಣುವಿನ ಧಾಮವನ್ನು ನಮ್ಮ ಮನೆಯನ್ನಾಗಿಸಿಕೊಳ್ಳಬಲ್ಲಂಥ ಅವಕಾಶ ಒದಗುವ ಪುಣ್ಯದಿನವಿದು ಪ್ರತಿಯೊಬ್ಬರು ಸ್ವಾಮಿಯ ಬಾಗಿಲು ತುಳಿದು ದರ್ಶನ ಪಡೆದರೆ ಪುಷ್ಯ ದೊರೆಯುತ್ತದೆ ಎಂದರು. ಬುಳ್ಳಳ್ಳಿಯ ಶ್ರೀ ಪರ್ತಿ ಕ್ಷೇತ್ರದ ಶ್ರೀ ದ್ರೌಪದಿ ಆದಿ ಪರಾಶಕ್ತಿ ಮಹಾ ಆಶ್ರಮದ ಶ್ರೀ ಬಾಲಯೋಗಿ ಸಾಯಿ ಮಂಜುನಾಥ್ ಮಹಾರಾಜ್, ಉಪಸ್ಥಿತರಿದ್ದರು.

## ಡಾ. ಎಂ. ಬೈರೇಗೌಡರ 3 ಪುಸ್ತಕಗಳ ಬಿಡುಗಡೆ

**ರಾಮನಗರ:** ಕೃಷ್ಣಾಪುರದೊಡ್ಡಿಯ ಕೆ.ಎಸ್. ಮುದ್ದಪ್ಪ ಸ್ಮಾರಕ ಟ್ರಸ್ಟ್, ರಾಮನಗರ ತಾಲ್ಲೂಕು ಕನ್ನಡ ಸಾಹಿತ್ಯ ಪರಿಷತ್ತುಗಳು ಸಂಯುಕ್ತವಾಗಿ ಜಾನಪದ ವಿದ್ವಾಂಸ ಡಾ. ಎಂ. ಬೈರೇಗೌಡರ ನಾಟಕ ಕೃತಿ ಅರ್ಕ ಬುರ್ಕ, ಕವನ ಸಂಕಲನ ಕದವಿರದ ಮನೆ ಹಾಗೂ ಪಾದರಿಯ ಪರಿಮಳ ಕಥಾ ಸಂಕಲನ ಮೂರು ಕೃತಿಗಳ ಬಿಡುಗಡೆ ಕಾರ್ಯಕ್ರಮ ಹಮ್ಮಿಕೊಂಡಿದೆ.




ಇಬ್ಬರು ಅಂಧರಾದ ಆತ್ಮೀಯ ಸ್ನೇಹಿತರ ಅವಿನಾ ಸಂಬಂಧವನ್ನು ವಿವರಿಸುವ ವಸ್ತುವುಳ್ಳ ನಾಟಕ ಅರ್ಕ-ಬುರ್ಕ. ಸಂತೆ, ಶಾಲೆ, ಶಿಕ್ಷಣ, ಪವಾಡಗಳೆಲ್ಲ ಮಿಶ್ರಣಗೊಂಡ ವಿವರಗಳುಳ್ಳ ಕೃತಿ. ಕಳೆದ ಹತ್ತು ವರ್ಷಗಳಲ್ಲಿ ಬರೆದ ಕವಿತೆಗಳಲ್ಲಿ ಕೆಲವನ್ನು ಆರಿಸಿಕೊಂಡು ರಚಿತವಾದ ಕವನ ಸಂಕಲನ ಕದವಿರದ ಮನೆ. ಪಾದರಿಯ ಪರಿಮಳ ಬೈರೇಗೌಡರ ಹಲವು ವರ್ಷಗಳ ಅನುಭವಪೂರಿತ ಕತೆಗಳ ಸಂಕಲನ. ಪಾದರಿ ನೆಲಮಲೆ ಬೆಟ್ಟ-ಕಾಡಿನಲ್ಲಿ ಕಂಡುಬರುವ ಅಪರೂಪದ ಮರ. ಶಿವರಾತ್ರಿ ಸಂದರ್ಭದಲ್ಲಿ ಹುಣ್ಣಿಮೆಯ ರಾತ್ರಿ ಹೂಬಿಟ್ಟು ಇಡೀ ಬೆಟ್ಟಕ್ಕೆ ತನ್ನ ಪರಿಮಳವನ್ನು ಸೂಸುತ್ತ, ಬೆಳಗಾಗುವಷ್ಟರಲ್ಲಿ ಮಾಯವಾಗುವ ಮಾಯಾಂಗನೆ. ಈ ಸಂಬಂಧದ ಯಾವುದೇ ಕತೆಗಳಿಲ್ಲದಿದ್ದರೂ ಇಂಥದೊಂದು ಸಸ್ಯಸಂಕುಲದ ಮರದ ಮತ್ತು ಅದರ ಹೂಬಿಟ್ಟು ಕಮರಿಹೋಗುವ ವಿಚಾರಗಳನ್ನು ಗಮನದಲ್ಲಿರಿಸಿಕೊಂಡು ಬೈರೇಗೌಡ ತಮ್ಮ ಕಥಾಸಂಕಲನಕ್ಕೆ ಪಾದರಿಯ ಪರಿಮಳ ಎಂದು ಹೆಸರಿಸಿಕೊಂಡಿದ್ದಾರೆ. ಜ.13ರ ಬೆಳಗ್ಗೆ 10.30ಕ್ಕೆ ರಾಮನಗರದ ನ್ಯೂ ಎಕ್ಸ್ಫರ್ಟ್ ಕಾಲೇಜು ಸಭಾಂಗಣದಲ್ಲಿ ಕಾರ್ಯಕ್ರಮ ಜರುಗುವುದು. ನಾಡಿನ ಹೆಸರಾಂತ ಹಾಸ್ಯ ಸಾಹಿತಿ ಮತ್ತು ಅಧ್ಯಾತ್ಮ ಚಿಂತಕರಾದ ವೈ.ವಿ. ಗುಂಡೂರಾವ್ ಕೃತಿಗಳನ್ನು ಬಿಡುಗಡೆ ಮಾಡುವರು. ಹೆಸರಾಂತ ಅಣುಕು ಸಾಹಿತಿ ಅಣುಕು ರಾಮನಾಥ್ ಕಾರ್ಯಕ್ರಮದ ಅಧ್ಯಕ್ಷತೆ ವಹಿಸುವರು. ಅರ್ಕ-ಬುರ್ಕ ನಾಟಕ ಕೃತಿ ಹಾಗೂ ಕದವಿರದ ಮನೆ ಕವನ ಸಂಕಲನಗಳನ್ನು ಕುರಿತು ಹಿರಿಯ ರಂಗಕರ್ಮಿ ಕನಕಪುರದ ಎಂ.ಸಿ. ನಾಗರಾಜ್ ಪರಿಚಯಿಸುವರು. ಪಾದರಿಯ ಪರಿಮಳ ಕಥಾಸಂಕಲನ ಕುರಿತು ಸಾಹಿತ್ಯ ಸಂಶೋಧಕಿ ಡಾ. ಸುನೀತ ಬಿ.ವಿ. ಮಾತನಾಡುವರು. ರಾಮನಗರ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಬಿ.ಟಿ. ನಾಗೇಶ್, ನ್ಯೂ ಎಕ್ಸ್ಫರ್ಟ್ ಕಾಲೇಜಿನ ಪ್ರಾಂಶುಪಾಲ ರವಿಕುಮಾರ್ ಅತಿಥಿಗಳಾಗಿ ಪಾಲ್ಗೊಳ್ಳುವರು. ರಾಮನಗರ ತಾಲ್ಲೂಕು ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಬಿ.ಟಿ. ದಿನೇಶ್ ಬಿಳಗುಂಬ ಪ್ರಾಸ್ತಾವಿಕವಾಗಿ ಮಾತನಾಡುವರು. ಲೇಖಕ, ಜಾನಪದ ವಿದ್ವಾಂಸ ಡಾ. ಎಂ. ಬೈರೇಗೌಡ ಕಾರ್ಯಕ್ರಮದಲ್ಲಿ ಉಪಸ್ಥಿತರಿರುವರು ಎಂದು ಕೃಷ್ಣಾಪುರದೊಡ್ಡಿಯ ಕೆ.ಎಸ್. ಮುದ್ದಪ್ಪ ಸ್ಮಾರಕ ಟ್ರಸ್ಟ್, ತಾಲ್ಲೂಕು ಕನ್ನಡ ಸಾಹಿತ್ಯ ಪರಿಷತ್ತು ಜಂಟಿ ಹೇಳಿಕೆಯಲ್ಲಿ ತಿಳಿಸಿದೆ.

## ಅಪ್ರೆಂಟಿಶಿಪ್ ತರಬೇತಿಗೆ ಅರ್ಜಿ

**ಚಿಕ್ಕಬಳ್ಳಾಪುರ:** ಹಿಂದೂಸ್ಥಾನ್ ಏರೋನಾಟಿಕ್ ಲಿಮಿಟೆಡ್ (ಊಂಐ) ಬೆಂಗಳೂರು ಇವರು 2024-25 ನೇ ಸಾಲಿಗೆ ಶಿಶಿಕ್ಷು ತರಬೇತಿಗಾಗಿ (ಅಪ್ರೆಂಟಿಶಿಪ್) ಕೆಲವು ವೃತ್ತಿಗಳಲ್ಲಿ ITI, in Fitter, Turner, Machinist, Electrician, COPA, Carpenter, Foundry Man, Sheet Metal Worker, Tool and die Maker and CNC Programmer Cum Operator, Mechanic ವಿಭಾಗಗಳಲ್ಲಿ ಕ್ರಾಫ್ಟ್ಸ್ ಮೆನ್‌ಟ್ರೈನಿಂಗ್ ಸ್ಕೀಮ್‌ನಲ್ಲಿ (ಅಖಿಖ) ತೇರ್ಗಡೆ ಹೊಂದಿರುವ ಅಭ್ಯರ್ಥಿಗಳಿಗೆ ಅಪ್ರೆಂಟಿಶಿಪ್ ತರಬೇತಿಗೆ ಅರ್ಜಿ ಆಹ್ವಾನಿಸಲಾಗಿದೆ. ಅರ್ಹ ಮತ್ತು ಆಸಕ್ತಿಯುಳ್ಳ ಅಭ್ಯರ್ಥಿಗಳು ಆನ್ ಲೈನ್ ವೆಬ್ ಸೈಟ್ ವಿಳಾಸ https://apprenticeship.gov.in ನಲ್ಲಿ ನೋಂದಾಯಿಸಿಕೊಂಡು ನೋಂದಾಯಿಸಿದ ಸಂಖ್ಯೆ ಹಾಗೂ ಅರ್ಜಿಗಳನ್ನು ಡೌನ್ ಲೊಡ್ ಮಾಡಿಕೊಂಡು ಭರ್ತಿ ಮಾಡಿದ ಅರ್ಜಿಗಳನ್ನು ಉದ್ಯೋಗಾಧಿಕಾರಿಗಳು ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ, ಜಿಲ್ಲಾಡಳಿತ ಭವನ, ಚಿಕ್ಕಬಳ್ಳಾಪುರ ಈ ಕಚೇರಿಗೆ ಜನವರಿ 22 ರೊಳಗೆ ಸಲ್ಲಿಸಲು ಕೋರಿದೆ. ಹೆಚ್ಚಿನ ಮಾಹಿತಿಗಾಗಿ ವೆಬ್‌ಸೈಟ್: www.halindia.co.inಮತ್ತು ದೂರವಾಣಿ ಸಂಖ್ಯೆ: 9148542728, 8310004823 ಗೆ ಸಂಪರ್ಕಿಸಬಹುದೆಂದು ಜಿಲ್ಲಾ ಉದ್ಯೋಗಾಧಿಕಾರಿ ಎಂ. ಪ್ರಸಾದ್ ರವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮೈಸೂರು ಕಿಸಾನ್ ಮಾಲ್ ಸ್ಥಾಪಿಸಲು ಅರ್ಜಿ ಆಹ್ವಾನ

**ಚಿಕ್ಕಬಳ್ಳಾಪುರ:** 2024-25 ನೇ ಸಾಲಿನಲ್ಲಿ ಸಮಗ್ರ ತೋಟಗಾರಿಕೆ ಅಭಿವೃದ್ಧಿ ಯೋಜನೆಯಡಿ ಬಜೆಟ್ ಪ್ಯಾರ ಕಂಡಿಕೆ- 43 ರಂತೆ ಚಿಕ್ಕಬಳ್ಳಾಪುರ ಜಿಲ್ಲೆಯ ತೋಟಗಾರಿಕೆ ಇಲಾಖೆ, ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು (ಜಿ.ಪಂ) ಚಿಕ್ಕಬಳ್ಳಾಪುರ ಕಚೇರಿ ಆವರಣ ಇಲ್ಲಿ ''ಮೈಸೂರು ಕಿಸಾನ್ ಮಾಲ್'' ಸ್ಥಾಪಿಸಲು ಅರ್ಹ ರೈತ ಉತ್ಪಾದಕರ ಸಂಸ್ಥೆಯಿಂದ ಆಸಕ್ತಿ ಅಭಿವ್ಯಕ್ತಿಪಡಿಸುವಿಕೆ ಮರು ಟೆಂಡರ್ ರನ್ನು ಕರ್ನಾಟಕ ಪಬ್ಲಿಕ್ ಪ್ರೊಕ್ಯುರ್ ಮೆಂಟ್ ಪ್ರೊರ್ಟಲ್ ನಲ್ಲಿ ಅರ್ಜಿ ಆಹ್ವಾನಿಸಲಾಗಿದೆ. ಆಸಕ್ತಿ ಹೊಂದಿರುವ ಮತ್ತು ಅರ್ಹ ರೈತ ಉತ್ಪಾದಕರ ಸಂಸ್ಥೆಗಳು ಜನವರಿ 17 ರೊಳಗಾಗಿ ಕರ್ನಾಟಕ ಪಬ್ಲಿಕ್ ಪ್ರೊಕ್ಯುರ್ ಮೆಂಟ್ ಪ್ರೊರ್ಟಲ್ ನಲ್ಲಿ ಆಸಕ್ತಿ ಅಭಿವ್ಯಕ್ತಿಪಡಿಸುವಿಕೆ ಅರ್ಜಿಗಳನ್ನು ಸಲ್ಲಿಸುವಂತೆ ತಿಳಿಸಲಾಗಿದೆ. ಹೆಚ್ಚಿನ ಮಾಹಿತಿಗಾಗಿ ಮೊ: 9448999242 ಗೆ ಸಂಪರ್ಕಿಸಬಹುದೆಂದು ಚಿಕ್ಕಬಳ್ಳಾಪುರ ತೋಟಗಾರಿಕೆ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಭಾರತೀಯ ವಾಯುಪಡೆಯಲ್ಲಿ ಉದ್ಯೋಗಾವಕಾಶ

**ಚಿಕ್ಕಬಳ್ಳಾಪುರ:** ಭಾರತೀಯ ವಾಯುಸೇನೆಯಲ್ಲಿ ಅಗ್ನಿಪಥ್ ಯೋಜನೆಯಡಿ ಸೇವೆ ಸಲ್ಲಿಸಲು ಆನ್ ಲೈನ್ ಪರೀಕ್ಷೆಗಾಗಿ ಅವಿವಾಹಿತ ಪುರುಷ ಮತ್ತು ಮಹಿಳಾ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಆಸಕ್ತ ಅಭ್ಯರ್ಥಿಗಳು http://agnipathvayu.cdac.in ಪೋರ್ಟಲ್ ನಲ್ಲಿ ಆನ್ ಲೈನ್ ಮುಖಾಂತರ ಮಾತ್ರ ಅರ್ಜಿಯನ್ನು ಸಲ್ಲಿಸಬಹುದು. ಅರ್ಜಿ ಸಲ್ಲಿಸಲು ಜನವರಿ 27 ಕೊನೆಯ ದಿನಾಂಕವಾಗಿದೆ. ಹೆಚ್ಚಿನ ಮಾಹಿತಿಗಾಗಿ ವೆಬ್‌ಸೈಟ್: www.halindia.co.in ಮತ್ತು ದೂರವಾಣಿ ಸಂಖ್ಯೆ: 9148542728, 8310004823 ಗೆ ಸಂಪರ್ಕಿಸಬಹುದೆಂದು ಜಿಲ್ಲಾ ಉದ್ಯೋಗಾಧಿಕಾರಿ ಎಂ. ಪ್ರಸಾದ್ ರವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅರ್ಜಿ ಸಲ್ಲಿಕೆ ಅವಧಿ ವಿಸ್ತರಣೆ

**ಚಿಕ್ಕಬಳ್ಳಾಪುರ:** 2024-25ನೇ ಸಾಲಿನಲ್ಲಿ ಬಿ.ಎಡ್ ವ್ಯಾಸಂಗ ಮಾಡುತ್ತಿರುವ ಅಲ್ಪಸಂಖ್ಯಾತರ ವರ್ಗಗಳ (ಮುಸ್ಲಿಂ, ಕ್ರಿಶ್ಚಿಯನ್, ಪಾರ್ಸಿ, ಸಿಖ್, ಜೈನ್, ಬೌದ್ಧ)Nationla Council for Teacher Educationನಿಂದ ಮಾನ್ಯತೆ ಪಡೆದಿರುವ ಸರ್ಕಾರಿ/ಅರೆ ಸರ್ಕಾರಿ/ಅನುದಾನಿತ ಹಾಗೂ ಖಾಸಗಿ ಕಾಲೇಜುಗಲ್ಲಿ ಬಿ.ಎಡ್ ದಾಖಲಾತಿ ಹೊಂದಿ ವ್ಯಾಸಂಗ ಮಾಡುತ್ತಿರುವ ಅಲ್ಪಸಂಖ್ಯಾತ ಸಮುದಾಯದ ವಿದ್ಯಾರ್ಥಿಗಳಿಗೆ ರೂ. 25,000/- ಗಳ ವಿಶೇಷ ಪ್ರೋತ್ಸಾಹಧನ ಸೌಲಭ್ಯವನ್ನು ಪಡೆದುಕೊಳ್ಳಲು ಅರ್ಜಿ ಆಹ್ವಾನಿಸಲಾಗಿದ್ದು, ಅರ್ಜಿ ಸಲ್ಲಿಸುವ ಅವಧಿಯನ್ನು ಜನವರಿ 20 ರವರೆಗೆ ವಿಸ್ತರಿಸಲಾಗಿದೆ. ವಿದ್ಯಾರ್ಥಿಗಳು https://sevasindhu.karnataka.gov.in ಪೋರ್ಟಲ್‌ನಲ್ಲಿ ಆನ್‌ಲೈನ್ ಮೂಲಕ ಅರ್ಜಿಯನ್ನು ಸಲ್ಲಿಸಿ, ಸಲ್ಲಿಸಿದ ಅರ್ಜಿಯ ಪ್ರತಿಯನ್ನು ಹಾಗೂ ಅಗತ್ಯ ದಾಖಲೆಗಳೊಂದಿಗೆ ದಿನಾಂಕ:20-01-2025 ರೊಳಗಾಗಿ ಪ್ರಾಂಶುಪಾಲರಿಂದ ದೃಢೀಕರಿಸಿ ಜಿಲ್ಲಾ ಅಧಿಕಾರಿಗಳ ಕಚೇರಿ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಚಿಕ್ಕಬಳ್ಳಾಪುರ ಇಲ್ಲಿಗೆ ಸಲ್ಲಿಸುವುದು. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ :08156-277049ಗೆ ಸಂಪರ್ಕಿಸಬಹುದು.

## ಸಾಲ ವಸೂಲಾತಿಗೆ ಕಿರುಕುಳ ನೀಡಿದ್ದಲ್ಲಿ ದೂರು ಸಲ್ಲಿಸಿ

**ಚಾಮರಾಜನಗರ:** ಜಿಲ್ಲಾ ವ್ಯಾಪ್ತಿಯಲ್ಲಿರುವ ಹಣಕಾಸು ಸಂಸ್ಥೆಗಳಾದ ಖಾಸಗಿ ಫೈನಾನ್ಸ್‌ಗಳು, ಸಂಘ ಸಂಸ್ಥೆಗಳು, ಮೈಕ್ರೋ ಫೈನಾನ್ಸ್‌ಗಳು ಹಾಗೂ ಇತರೆ ಬ್ಯಾಂಕ್‌ಗಳಿಂದ ಸಾಲ ವಸೂಲಿಗಾಗಿ ಬ್ಯಾಂಕ್‌ನ ರಿಕವರಿ ಏಜೆಂಟ್‌ಗಳು ದೌರ್ಜನ್ಯ, ಕಿರುಕುಳ, ಮಾನಸಿಕ ಹಿಂಸೆ ನೀಡುತ್ತಿದ್ದಲ್ಲಿ ಜಿಲ್ಲಾಧಿಕಾರಿಗಳ ಕಚೇರಿಯ ದೂರವಾಣಿ ಹಾಗೂ ಪೊಲೀಸ್ ಕಂಟ್ರೋಲ್ ರೂಂ ಗೆ ಕರೆ ಮಾಡಿ ದೂರು ಸಲ್ಲಿಸುವಂತೆ ಜಿಲ್ಲಾಧಿಕಾರಿ ಶಿಲ್ಪಾ ನಾಗ್ ಅವರು ತಿಳಿಸಿದ್ದಾರೆ.
ಜಿಲ್ಲೆಯಲ್ಲಿರುವ ಖಾಸಗಿ ಫೈನಾನ್ಸ್‌ಗಳು, ಸಂಘ-ಸಂಸ್ಥೆಗಳು, ಮೈಕ್ರೋ ಫೈನಾನ್ಸ್‌ಗಳು ಹಾಗೂ ಇತರೆ ಬ್ಯಾಂಕ್‌ಗಳಿಂದ ಮಹಿಳೆಯರು, ರೈತರು, ಬುಡಕಟ್ಟು ಜನರು, ಸಣ್ಣ ಪ್ರಮಾಣದ ವ್ಯಾಪಾರಸ್ಥರು ಮಾಡಿರುವ ಸಾಲದ ವಸೂಲಿಗಾಗಿ ಬ್ಯಾಂಕಿನ ರಿಕವರಿ ಏಜೆಂಟ್‌ಗಳು ದೌರ್ಜನ್ಯ, ಕಿರುಕುಳ, ಮಾನಸಿಕ ಹಿಂಸೆ ನೀಡುತ್ತಿದ್ದಲ್ಲಿ ದೂರನ್ನು ಜಿಲ್ಲಾಧಿಕಾರಿಗಳ ಕಚೇರಿಯ ದೂರವಾಣಿ ಸಂಖ್ಯೆ 08226-223160 ಹಾಗೂ ವಾಟ್ಸಾಪ್ ಸಂಖ್ಯೆ 9740942901 ಸಂಪರ್ಕಿಸಿ

# ಮಕ್ಕಳ ಹಕ್ಕುಗಳನ್ನು ರಕ್ಷಣೆ ಮಾಡುವುದು ಪ್ರತಿಯೊಬ್ಬರ ಜವಾಬ್ದಾರಿ

**ಮೈಸೂರು:** ಮಕ್ಕಳ ಹಕ್ಕುಗಳನ್ನು ರಕ್ಷಣೆ ಮಾಡುವುದು ತಂದೆ ತಾಯಿಗಳು, ಶಿಕ್ಷಕರು ಹಾಗೂ ಸಮಾಜದ ಪ್ರತಿಯೊಬ್ಬರ ಜವಾಬ್ದಾರಿ ಎಂದು ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯದ ಉಪ ಕುಲಪತಿಗಳಾದ ಶರಣಪ್ಪ ವಿ ಹಲಸೆ ಅವರು ತಿಳಿಸಿದರು.

ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯದ ಕಾವೇರಿ ಸಭಾಂಗಣದಲ್ಲಿ ಮಕ್ಕಳ ರಕ್ಷಣಾ ನಿರ್ದೇಶನಾಲಯ, ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗ, ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯ, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಜಿಲ್ಲಾ ಮಕ್ಕಳ ರಕ್ಷಣಾ ಘಟಕ ಹಾಗೂ ನ್ಯೂಟ್ರಿಶಿಯನ್ ಸೊಸೈಟಿ ಆಫ್ ಇಂಡಿಯಾ ಮೈಸೂರು ಚಾಪ್ಟರ್ ಇವರ ಸಹಯೋಗದೊಂದಿಗೆ ಹಮ್ಮಿಕೊಂಡಿದ್ದ ಮಕ್ಕಳ ಸಂರಕ್ಷಣೆ ಮತ್ತು ಮಕ್ಕಳ ವಿವಿಧ ಕಾನೂನುಗಳ ಅನುಷ್ಠಾನ ಹಾಗೂ ವಿವಿಧ ಹಂತದ ಮಕ್ಕಳ ರಕ್ಷಣಾ ಸಮಿತಿಗಳ ರಚನೆಯಲ್ಲಿ ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ಅಧಿಕಾರಿಗಳ ಪಾತ್ರ, ಕರ್ತವ್ಯ ಹಾಗೂ ಜವಾಬ್ದಾರಿಗಳ ಕುರಿತು ದಿನದ ಕಾರ್ಯಾಗಾರವನ್ನು ಉದ್ಘಾಟಿಸಿ ಅವರು ಮಾತನಾಡಿದರು. ಮನೆಯೇ ಮೊದಲ



ಪಾಠಶಾಲೆ. ಮಕ್ಕಳ ಹಕ್ಕುಗಳನ್ನು ರಕ್ಷಣೆ ಮಾಡುವುದು ತಂದೆ ತಾಯಿಗಳ ಪಾತ್ರ ಮೊದಲು. ನಂತರ ಶಿಕ್ಷಕರದ್ದು. ಇವರಿಬ್ಬರೂ ಮಾಡದೆ ಇದ್ದಾಗ ಅಧಿಕಾರಿಗಳ ಪಾತ್ರ ಬರುತ್ತದೆ ಎಂದರು.

ಎಲ್ಲಾ ಅಧಿಕಾರಿಗಳು ಮಕ್ಕಳ ಹಕ್ಕುಗಳನ್ನು ರಕ್ಷಿಸುವ ಜವಾಬ್ದಾರಿ ಹೊಂದಿರುತ್ತಾರೆ. ಮಕ್ಕಳನ್ನು ಸಂರಕ್ಷಣೆ ಮಾಡಿ ಅವರ ಹಕ್ಕುಗಳನ್ನು ರಕ್ಷಿಸಿ ಸಮಾಜವನ್ನು ಗಟ್ಟಿಯಾಗಿ ಕಟ್ಟಬೇಕು ಎಂದು ತಿಳಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿದ್ದ ಅಪರ ಜಿಲ್ಲಾಧಿಕಾರಿಗಳಾದ ಡಾ. ಪಿ. ಶಿವರಾಜು ಅವರು ಮಾತನಾಡಿ ಮಕ್ಕಳು ಎದುರಿಸುವ ಸವಾಲುಗಳನ್ನು ನಾವು ಅರಿತುಕೊಳ್ಳಬೇಕು. ಕಾನೂನು ಈ ದೇಶದ ದೇವರು ಎಂದು ಹೇಳಬಹುದು. ಕಾನೂನಿನ ಅಡಿಯಲ್ಲಿ ಮಕ್ಕಳ ಹಕ್ಕುಗಳ ರಕ್ಷಣೆ ಮಾಡಬೇಕು. ಎಲ್ಲಾ ಮಕ್ಕಳನ್ನು ಪ್ರೀತಿ ವಾತ್ಸಲ್ಯದಿಂದ ಕಾಣಬೇಕು ಎಂದು ತಿಳಿಸಿದರು.

ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯ ರಾದ ಮಂಜು ಮೇಡಂ ಅವರು ಮಾತನಾಡಿ ಮಕ್ಕಳ ಹಕ್ಕುಗಳನ್ನು ರಕ್ಷಣೆ ಮಾಡುವುದು ನಮ್ಮೆಲ್ಲರ ಕರ್ತವ್ಯ. ಮಕ್ಕಳ ಮೇಲೆ ಆಗುತ್ತಿರುವ ಲೈಂಗಿಕ ದೌರ್ಜನ್ಯ, ಮಕ್ಕಳು ಮಾದಕ ವಸ್ತುಗಳ ವ್ಯಸನಿಗಳು ಆಗುತ್ತಿರುವುದು ಹಾಗೂ ಮಕ್ಕಳು ಕೆಟ್ಟ ಚಟಗಳಿಗೆ ಒಳಗಾಗುತ್ತಿರುವುದನ್ನು ತಡೆಗಟ್ಟಬೇಕು.

ಕರ್ನಾಟಕ ಮುಕ್ತ ವಿಶ್ವವಿದ್ಯಾಲಯದ ಕುಲಸಚಿವರಾದ ಪ್ರವೀಣ್ ಕೆ ವಿ ಅವರು ಮಾತನಾಡಿ ಮಕ್ಕಳು ನೇರವಾಗಿ ಸ್ಪಂದಿಸುವುದು ಶಿಕ್ಷಕರ ಜೊತೆ. ಮಕ್ಕಳು ಹೆಚ್ಚಿನ ಸಮಯವನ್ನು ಶಾಲೆಯಲ್ಲಿ ಶಿಕ್ಷಕರ ಜೊತೆ ಕಳೆಯುತ್ತಾರೆ. ಶಿಕ್ಷಕರು ಹೇಳಿದ ಮಾತನ್ನು ಚಾಚೂ ತಪ್ಪದೇ ಪಾಲಿಸುತ್ತಾರೆ ಆದ್ದರಿಂದ ಶಿಕ್ಷಕರು ಮಕ್ಕಳಿಗೆ ಉತ್ತಮ ಗುಣಗಳನ್ನು ಕಲಿಸಬೇಕು. ಶಿಕ್ಷಕರು ಮಕ್ಕಳಿಗೆ ಒಳ್ಳೆಯ ಸ್ಪರ್ಶ ಕೆಟ್ಟ ಸ್ಪರ್ಶದ ಬಗ್ಗೆ ಅರಿವು ಮೂಡಿಸಬೇಕು ಎಂದರು.

ಬಾಲ್ಯ ವಿವಾಹವು ಸಮಾಜಕ್ಕೆ ಒಂದು ಪಿಡುಗು ಆಗಿದೆ. ಇತ್ತೀಚಿನ ದಿನಗಳಲ್ಲಿ ಹೆಣ್ಣಿನ ಮೇಲೆ ಲೈಂಗಿಕ ದೌರ್ಜನ್ಯಗಳು ನಡೆಯುತ್ತಿವೆ. ಮಕ್ಕಳ ಮೇಲಿನ ದೌರ್ಜನ್ಯಗಳನ್ನು ತಡೆಯಲು 2012 ರಲ್ಲಿ ಪೋಕ್ಸೋ ಕಾಯ್ದೆಯನ್ನು ಜಾರಿಗೆ ತರಲಾಯಿತು. ಇದು ಮಕ್ಕಳಿಗೆ ರಕ್ಷಣೆ ನೀಡುವ ಪ್ರಬಲ ಕಾಯ್ದೆಯಾಗಿದೆ. ಮಕ್ಕಳಿಗೆ ಲೈಂಗಿಕ ದೌರ್ಜನ್ಯದ ಬಗ್ಗೆ ಅರಿವು ಮೂಡಿಸಬೇಕು. 6 ರಿಂದ 14 ವರ್ಷದವರೆಗಿನ ಮಕ್ಕಳಿಗೆ ಉಚಿತ ಹಾಗೂ ಕಡ್ಡಾಯ ಶಿಕ್ಷಣ ಇದೆ. ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ನೀಡಬೇಕು. ಜೀವನದ ಕೌಶಲ್ಯಗಳ ಶಿಕ್ಷಣವನ್ನು ನೀಡಬೇಕು ಎಂದರು

ಕಾರ್ಯಕ್ರಮದಲ್ಲಿ, ವಿವಿಧ ಸಂಘ ಸಂಸ್ಥೆಗಳು ಪ್ರತಿನಿಧಿಗಳು, ವಿವಿಧ ಇಲಾಖೆಗಳ ಅಧಿಕಾರಿಗಳು ಹಾಗೂ ಸಿಬ್ಬಂದಿಗಳು ಉಪಸ್ಥಿತರಿದ್ದರು.

### ಮುಂಬರುವ ಬೇಸಿಗೆಯಲ್ಲಿ 19 ಸಾವಿರ ವಿದ್ಯುತ್ ಬೇಡಿಕೆ ನಿರೀಕ್ಷೆ: ಸಚಿವ ಕೆ.ಜೆ.ಜಾರ್ಜ್

# ಲೋಡ್ ಶೆಡಿಂಗ್ ಮಾಡುವ ಪರಿಸ್ಥಿತಿ ಇಲ್ಲ

**ಬೆಂಗಳೂರು ಗ್ರಾಮಾಂತರ:** ಮುಂಬರುವ ಬೇಸಿಗೆಯ ಗರಿಷ್ಟ ಬೇಡಿಕೆ ಅವಧಿಯಲ್ಲಿ 19,000 ಮೆಗಾವ್ಯಾಟ್ ವಿದ್ಯುತ್ ಅಗತ್ಯವಿದೆ ಎಂದು ನಿರೀಕ್ಷಿಸಲಾಗಿದ್ದು, ಅದನ್ನು ಪೂರೈಸಲು ಅಗತ್ಯ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ. ಹೀಗಾಗಿ ಸದ್ಯಕ್ಕೆ ಲೋಡ್ ಶೆಡಿಂಗ್ ಪ್ರಶ್ನೆ ಉದ್ಭವಿಸುವುದಿಲ್ಲ ಎಂದು ಇಂಧನ ಸಚಿವ ಕೆ.ಜೆ.ಜಾರ್ಜ್ ಹೇಳಿದರು.

ಇಂಧನ ಇಲಾಖೆಗೆ ಸಂಬಂಧಿಸಿದಂತೆ ಬೆಂಗಳೂರು ಗ್ರಾಮಾಂತರ ಜಿಲ್ಲಾಡಳಿತ ಭವನದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜಿಲ್ಲೆಯ ಜನಪ್ರತಿನಿಧಿಗಳು, ಬೆಸ್ಕಾಂ ಮತ್ತು ಕೆಪಿಟಿಸಿಎಲ್ ಅಧಿಕಾರಿಗಳೊಂದಿಗಿನ ಸಭೆಯಲ್ಲಿ ಮಾತನಾಡಿ, ಬೇಸಿಗೆಯಲ್ಲಿ ಅಗತ್ಯವಿರುವ ವಿದ್ಯುತ್ ಪೂರೈಸಲು ಎಲ್ಲಾ ಸಿದ್ಧತೆ ಮಾಡಿಕೊಳ್ಳಲಾಗಿದೆ. ಅದಕ್ಕೆ ತಕ್ಕಂತೆ ವಿತರಣೆಯಲ್ಲಿ ಯಾವುದೇ ಸಮಸ್ಯೆಯಾಗದಂತೆ ನೋಡಿಕೊಳ್ಳಲು ಅಧಿಕಾರಿಗಳಿಗೆ ನಿರ್ದೇಶನ ನೀಡಲಾಗಿದೆ ಎಂದರು.

ಕಳೆದ ಬೇಸಿಗೆಯಲ್ಲಿ 17,000 ಮೆಗಾವ್ಯಾಟ್ ಗರಿಷ್ಠ ಬೇಡಿಕೆ ಬಂದಿತ್ತು. ಅದರಂತೆ ಮುಬರುವ ಬೇಸಿಗೆಯಲ್ಲಿ ಎಷ್ಟು ವಿದ್ಯುತ್ ಬೇಕಾಗಬಹುದು ಎಂಬ ಬಗ್ಗೆ ಕೃತಕ ಬುದ್ಧಿಮತ್ತೆ (ಐಎ) ತಂತ್ರಜ್ಞಾನ ಬಳಸಿಕೊಂಡು ಕೆಪಿಟಿಸಿಎಲ್, ಪಿಸಿಕೆಎಲ್ ಮತ್ತು ಎಸ್ ಎಲ್ ಡಿಸಿ ವತಿಯಿಂದ ನಡೆಸಿದ ಸಮೀಕ್ಷೆ ಪ್ರಕಾರ ಗರಿಷ್ಠ ಬೇಡಿಕೆ ಅವಧಿಯಲ್ಲಿ 19,000 ಮೆಗಾವ್ಯಾಟ್ ವಿದ್ಯುತ್ ಅವಶ್ಯಕತೆ ಬರಬಹುದು ಎಂದು ಅಂದಾಜಿಸಲಾಗಿದೆ ಎಂದು ತಿಳಿಸಿದರು.

ಅದರಂತೆ ಅಗತ್ಯ ವಿದ್ಯುತ್ ಪೂರೈಸಲು ರಾಜ್ಯದಲ್ಲಿ ವಿದ್ಯುತ್ ಉತ್ಪಾದನೆಯನ್ನು ಹೆಚ್ಚಿಸಲು ಕ್ರಮ ವಹಿಸುವಂತೆ ಅಧಿಕಾರಿಗಳಿಗೆ ಸೂಚಿಸಲಾಗಿದೆ. ಜತೆಗೆ ದೀರ್ಘಾವಧಿ ವಿದ್ಯುತ್ ಖರೀದಿ ಒಪ್ಪಂದದ ಮೂಲಕ ಹೆಚ್ಚುವರಿ ಅಗತ್ಯವಿರುವ ವಿದ್ಯುತ್ ಅನ್ನು ಕಡಿಮೆ ದರಕ್ಕೆ ಖರೀದಿಸಲು ಅನ್ಯ ರಾಜ್ಯಗಳೊಂದಿಗೆ ಒಪ್ಪಂದ ಮಾಡಿಕೊಳ್ಳಲಾಗುತ್ತಿದೆ. ಹೀಗಾಗಿ ಸದ್ಯದ ಪರಿಸ್ಥಿತಿಯಲ್ಲಿ ಲೋಡ್ ಶೆಡಿಂಗ್ ಮಾಡುವ ಪ್ರಶ್ನೆ ಉದ್ಭವವಾಗುವುದಿಲ್ಲ ಎಂದರು.

ಜಿಲ್ಲೆಯಲ್ಲಿ ಅಗತ್ಯ ವಿದ್ಯುತ್ ಪೂರೈಕೆಗೆ ಕ್ರಮ: ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಕೈಗಾರಿಕೆಗಳು ಹೆಚ್ಚಿನ ಸಂಖ್ಯೆಯಲ್ಲಿರುವುದರಿಂದ ಕೃಷಿ ಚಟುವಟಿಕೆ ಜತೆಗೆ ಕೈಗಾರಿಕೆಗಳಿಗೂ ಸಮರ್ಪಕ ವಿದ್ಯುತ್ ಪೂರೈಸಬೇಕಾಗಿದೆ. ಹೀಗಾಗಿ ಸುಗಮ ವಿದ್ಯುತ್ ವಿತರಣೆಗೆ ಅಗತ್ಯ ಕ್ರಮ ಕೈಗೊಳ್ಳಬೇಕು. ಅದಕ್ಕಾಗಿ ಫೀಡರ್ ಗಳು, ಟ್ರಾನ್ಸ್ ಫಾರ್ಮರ್ ಗಳನ್ನು ಸುಸ್ಥಿತಿಯಲ್ಲಿಟ್ಟುಕೊಳ್ಳಬೇಕು ಎಂದು ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಫೀಡರ್ ಮಟ್ಟದ ಸೌರೀಕರಣದ ಮೂಲಕ ರೈತ ಕೃಷಿ ಪಂಪ್ ಸೆಟ್ ಗಳಿಗೆ ವಿದ್ಯುತ್ ಪೂರೈಸಲು ಕುಸುಮ್- ಸಿ ಯೋಜನೆಯನ್ನು ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿಯೂ



ಅನುಷ್ಠಾನಗೊಳಿಸಲಾಗುತ್ತಿದೆ. ಬೇಸಿಗೆಯಲ್ಲಿ ರೈತರಿಗೆ ಸಮಸ್ಯೆಯಾಗದಂತೆ ಈ ಫೀಡರ್ ಮಟ್ಟದ ಸೌರೀಕರಣ ಕಾಮಗಾರಿಯನ್ನು ಎಲ್ಲಾ ಕಡೆ ಏಕಕಾಲದಲ್ಲಿ ಕೈಗೊಂಡು ನಿಗದಿತ ಗಡುವಿನಲ್ಲಿ ಪೂರ್ಣಗೊಳಿಸಬೇಕು ಎಂದು ಅನುಷ್ಠಾನ ಏಜನ್ಸಿಗಳಿಗೆ ಸಚಿವರು ಸೂಚನೆ ನೀಡಿದರು.

ನಮ್ಮ ಸರ್ಕಾರ ಅಧಿಕಾರಕ್ಕೆ ಬಂದ ಸಂದರ್ಭದಲ್ಲಿ ಕೃಷಿ ಪಂಪ್ ಸೆಟ್ ಗಳ ಅಕ್ರಮ- ಸಕ್ರಮ ಯೋಜನೆಯಡಿ 4.5 ಲಕ್ಷ ಅರ್ಜಿಗಳು ಬಾಕಿ ಇದ್ದವು. ಕಳೆದ ಒಂದೂವರೆ ವರ್ಷದಲ್ಲಿ 2.5 ಲಕ್ಷ ಪಂಪ್ ಸೆಟ್ ಗಳನ್ನು ಸಕ್ರಮಗೊಳಿಸಲಾಗಿದೆ. ಇನ್ನುಳಿದ ಪಂಪ್ ಸೆಟ್ ಗಳನ್ನು ಮುಂದಿನ ಒಂದು ವರ್ಷದೊಳಗೆ ಸಕ್ರಮಗೊಳಿಸಲಾಗುವುದು. ವಿದ್ಯುತ್ ಫೀಡರ್ ಗಳಿಂದ 500 ಮೀಟರ್ ಗಿಂತ ಹೆಚ್ಚು ದೂರದಲ್ಲಿರುವ ಪಂಪ್ ಸೆಟ್ ಗಳನ್ನು ಸೌರೀಕರಣಗೊಳಿಸಲು ಆದ್ಯತೆ ನೀಡಲಾಗಿದೆ. ಅದಕ್ಕಾಗಿ ರಾಜ್ಯ ಸರ್ಕಾರದ ಸಬ್ಸಿಡಿಯನ್ನು ಶ. 50ಕ್ಕೆ ಹೆಚ್ಚಿಸಲಾಗಿದೆ. ಕೇಂದ್ರ ಸರ್ಕಾರಶೇ. 30ರಷ್ಟು ಸಬ್ಸಿಡಿ ನೀಡುತ್ತಿದ್ದು, ರೈತರು ಶೇ. 20ರಷ್ಟು ಮೊತ್ತ ಭರಿಸಿದರೆ ಸಾಕು ಎಂದರು.

ಟ್ರಾನ್ಸ್ ಫಾರ್ಮರ್ ಗಳಲ್ಲಿ ಸಮಸ್ಯೆ ಉದ್ಭವವಾದರೆ ತಕ್ಷಣ ಅದನ್ನು ಬದಲಾಯಿಸಲು ಅನುಕೂಲವಾಗುವಂತೆ ಜಿಲ್ಲೆಯಲ್ಲಿ ಟ್ರಾನ್ಸ್ ಫಾರ್ಮರ್ ಬ್ಯಾಂಕ್ ಗಳನ್ನು ಸ್ಥಾಪಿಸಲಾಗಿದ್ದು, ಅಲ್ಲಿ 213 ಟ್ರಾನ್ಸ್ ಫಾರ್ಮರ್ ಗಳು ಲಭ್ಯವಿದೆ. ಜತೆಗೆ ವಿದ್ಯುತ್ ಕಂಬಗಳು, ಕಂಡಕ್ಟರ್ ಗಳನ್ನು ಕೂಡ ಸಾಕಷ್ಟು ಪ್ರಮಾಣದಲ್ಲಿ ಸಂಗ್ರಹಿಸಿಡಲಾಗಿದೆ ಎಂದರು.

ನೆಲಮಂಗಲ ನಗರದಲ್ಲಿ ವಿದ್ಯುತ್ ತಂತಿಗಳನ್ನು ಭೂಗತವಾಗಿ ಅಳವಡಿಸಬೇಕು ಎಂಬ ಶಾಸಕ ಎನ್.ಶ್ರೀನಿವಾಸ್ ಅವರ ಮನವಿಗೆ ಸ್ಪಂದಿಸಿದ ಸಚಿವರು, ಈ ಬಗ್ಗೆ ಯೋಜನೆ ರೂಪಿಸುವಂತೆ ಸಂಬಂಧಿಸಿದ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು. ಹೊಸಕೋಟೆ ತಾಲೂಕಿನಲ್ಲಿ ಕುಸುಮ್-ಸಿ ಯೋಜನೆಯಡಿ ಕೆರೆಗಳ ಅಂಗಳಗಳಲ್ಲಿ ನಡೆಯುತ್ತಿರುವ ಫೀಡರ್ ಸೌರೀಕರಣ ಕಾಮಗಾರಿಗಳನ್ನು ತ್ವರಿತವಗಿ ಪೂರ್ಣಗೊಳಿಸೇಕು ಎಂಬ ಶಾಸಕ ಶರತ್ ಬಚ್ಚೇಗೌಡ ಅವರ ಮನವಿಗೆ ಪ್ರತಿಕ್ರಿಯಿಸಿ, ಈ ಬಗ್ಗೆ ತ್ವರಿತ ಕ್ರಮ ಕೈಗೊಳ್ಳುವಂತೆ ಬೆಸ್ಕಾಂ ಅಧಿಕಾರಿಗಳಿಗೆ ನಿರ್ದೇಶಿಸಿದರು.

ಗ್ಯಾರಂಟಿ ಯೋಜನೆಗಳಿಂದ ಕುಟುಂಬಗಳ ಆರ್ಥಿಕ ಸ್ಥಿತಿಗತಿ ಸುಧಾರಿಸಿದೆ. ಪ್ರತಿ ತಿಂಗಳು ಅಂದಾಜು 5000 ರೂ.ಗಳಷ್ಟು ಒಂದು ಕುಟುಂಬಕ್ಕೆ ಸಿಗುತ್ತಿದೆ. 200 ಯೂನಿಟ್ ಉಚಿತ ವಿದ್ಯುತ್ ನೀಡುವ ಗೃಹ ಜ್ಯೋತಿಗೆ 18,000 ಕೋಟಿ ರೂ. ಗಳು ಪ್ರತಿ ವರ್ಷ ಖರ್ಚಾಗುತ್ತದೆ ಎಂದರು. ಜಿಲ್ಲಾ ಉಸ್ತುವಾರಿ ಸಚಿವರಾದ ಕೆ.ಹೆಚ್ ಮುನಿಯಪ್ಪ ಅವರು ಮಾತನಾಡಿ ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಅಂದಾಜು 10.000 ಎಕರೆ ಕೈಗಾರಿಕಾ ಪ್ರದೇಶವಿದೆ. ಮುಂದಿನ ದಿನಗಳಲ್ಲಿ ಕೈಗಾರಿಕಾ ಪ್ರದೇಶ ಹೆಚ್ಚಾಗಬಹುದು. ಜಿಲ್ಲೆಯಲ್ಲಿ ಟೌನ್ ಶಿಪ್ ನಿರ್ಮಾಣಕ್ಕೆ ಯೋಜನೆ ರೂಪಿಸಲಾಗಿದೆ. ಜಿಲ್ಲೆಗೆ ಕಾವೇರಿ ನೀರು ಹರಿಸುವುದು, ಮೆಟ್ರೋ ಸಂಪರ್ಕ ಕಲ್ಪಿಸುವ ಗುರಿ ಇದೆ. ಈ ಹಿನ್ನೆಲೆಯಲ್ಲಿ ಮುಂದಿನ 20-30 ವರ್ಷಗಳ ದೂರದೃಷ್ಟಿಯನ್ನು ಇಟ್ಟುಕೊಂಡು ವಿದ್ಯುತ್ ಸಂಪರ್ಕ ಕಲ್ಪಿಸುವ ಯೋಜನೆ ರೂಪಿಸಿ. ಶಾಶ್ವತ ಕಾಮಗಾರಿಗಳಿಗೆ ಹೆಚ್ಚಿನ ಒತ್ತು ನೀಡಿ ಎಂದರು.

ರಾಜ್ಯ ಸರ್ಕಾರದ ಮಹತ್ವಕಾಂಕ್ಷಿ ಯೋಜನೆಯಾದ ಎತ್ತಿನಹೊಳೆ ಯೋಜನೆಯಡಿ ಬಯಲು ಸೀಮೆ ಜಿಲ್ಲೆಗಳಾದ ಬೆಂಗಳೂರು ಗ್ರಾಮಾಂತರ, ಚಿಕ್ಕಬಳ್ಳಾಪುರ, ಕೋಲಾರ ಜಿಲ್ಲೆಗಳಿಗೆ ನೀರು ಹರಿಸುವುದು ಈ ಯೋಜನೆಯ ಉದ್ದೇಶವಾಗಿದೆ. ಮುಖ್ಯಮಂತ್ರಿಗಳು ಈಗಾಗಲೇ ಹಾಸನದಲ್ಲಿ ಚಾಲನೆ ನೀಡಿದ್ದು ಕಾಮಗಾರಿ ಪ್ರಗತಿಯಲ್ಲಿದೆ. ದೊಡ್ಡಬಳ್ಳಾಪುರ ತಾಲ್ಲೂಕಿನ ಲಕ್ಕೇನಹಳ್ಳಿ ಬಳಿ ಜಲಾಶಯ ನಿರ್ಮಿಸಿ ಎತ್ತಿನ ಹೊಳೆ ನೀರನ್ನು ಅಲ್ಲಿ ಶೇಖರಿಸಿ ಅಲ್ಲಿಂದ ನೀರನ್ನು ಸರಬರಾಜು ಮಾಡಬೇಕು. ಜಲಾಶಯಕ್ಕಾಗಿ ಭೂಸ್ವಾಧೀನ ಪ್ರಕ್ರಿಯೆ ನಡೆಯುತ್ತಿದೆ. ಮುಂದಿನ ಎರಡು ವರ್ಷಗಳಲ್ಲಿ ಬಯಲು ಸೀಮೆಗೆ ನೀರು ಹರಿಸುವ ಗುರಿ ಹೊಂದಲಾಗಿದೆ ಎಂದರು.

ಕಿಯೋನಿಕ್ಸ್ ಅಧ್ಯಕ್ಷರು ಹಾಗೂ ಶಾಸಕರಾದ ಶರತ್ ಕುಮಾರ್ ಬಚ್ಚೇಗೌಡ ಅವರು ಮಾತನಾಡಿ ಹೊಸಕೋಟೆ ನಗರದಲ್ಲಿ 100 ಕೋಟಿ ರೂಗಳ ವೆಚ್ಚದಲ್ಲಿ ನೆಲದಡಿ (ಅಂಡರ್ ಗ್ರೌಂಡ್) ವಿದ್ಯುತ್ ಕೇಬಲ್ ಅಳವಡಿಕೆ ಕಾಮಗಾರಿಗೆ ಚಾಲನೆ ನೀಡಲಾಗಿದೆ. ವಿದ್ಯುತ್ ಕಾಮಗಾರಿಗಳು ಗುಣಮಟ್ಟದಿಂದ ಕೂಡಿರಬೇಕು. ವಿದ್ಯುತ್ ಕಾಮಗಾರಿಗಳು ಮುಕ್ತಾಯವಾದ ನಂತರ ಅವುಗಳನ್ನು ಪೂರ್ವ ಸ್ಥಿತಿಗೆ ತರುವುದು ಬಹಳ ಮುಖ್ಯ ಎಂದರು. ಕೆರೆ ಅಂಗಳದಲ್ಲಿ ಸೋಲಾರ್ ಪ್ಲಾಂಟ್ ಸ್ಥಾಪಿಸಿ ಅದರಿಂದ ವಿದ್ಯುತ್ ತಯಾರಿಸುವ ಮೂಲಕ ರೈತರಿಗೆ ಉಚಿತ ವಿದ್ಯುತ್ ಪೂರೈಕೆ ಮಾಡುವ ನಿಟ್ಟಿನಲ್ಲಿ ಹೊಸಕೋಟೆ ತಾಲೂಕಿನ ಆಯ್ದ ಕೆರೆಗಳಲ್ಲಿ ಕಾಮಗಾರಿ ನಡೆಯುತ್ತಿದೆ ಎಂದರು. ಕಾಮಗಾರಿ ತ್ವರಿತವಾಗಿ ಮುಗಿಸಲು ಸಚಿವರಲ್ಲಿ ಮನವಿ ಮಾಡಿದರು. ನೆಲಮಂಗಲ ಶಾಸಕ ಶ್ರೀನಿವಾಸ ಅವರು ಮಾತನಾಡಿ ನೆಲಮಂಗಲ ತಾಲೂಕಿನಲ್ಲಿ ?300 ಕೋಟಿ ಅನುದಾನದಡಿ 220 ಕೆ.ವಿ ವಿದ್ಯುತ್ ಉತ್ಪಾದನಾ ಉಪಕೇಂದ್ರ ನಿರ್ಮಾಣದ ಭೂಮಿ ಪೂಜೆ ನೆರವೇರಿಸಲು ಕ್ರಮ ವಹಿಸುವಂತೆ, ತಾಲೂಕಿಗೆ ನೆಲದಡಿ(ಅಂಡರ್ ಗ್ರೌಂಡ್ ವಿದ್ಯುತ್ ಕೇಬಲ್) ಅಳವಡಿಕೆಗೆ ಅನುಧಾನ ಒದಗಿಸುವಂತೆ ಇಂಧನ ಸಚಿವರಲ್ಲಿ ಮನವಿ ಮಾಡಿದರು.

ವಿಧಾನಪರಿಷತ್ ಸದಸ್ಯ ಎಸ್. ರವಿ ಅವರು ಮಾತನಾಡಿ ಬೇಸಿಗೆ ಸಮಯದಲ್ಲಿ ರೈತರಿಗೆ ಅನುಕೂಲವಾಗುವಂತೆ ಕೃಷಿ ಪಂಪ್ ಸೆಟ್ ಗಳಿಗೆ ಹೆಚ್ಚುವರಿ ವಿದ್ಯುತ್ ಪೂರೈಸಲು ಕ್ರಮ ವಹಿಸಬೇಕು. ಸದ್ಯ ರಾತ್ರಿ ಹೊತ್ತಿನಲ್ಲಿ ವಿದ್ಯುತ್ ಹೆಚ್ಚು ನೀಡುವ ಬದಲು ಹಗಲು ಹೊತ್ತಿನಲ್ಲೇ ರೈತರಿಗೆ ಹೆಚ್ಚು ವಿದ್ಯುತ್ ನೀಡಬೇಕು ಎಂದರು.

ಸಭೆಯಲ್ಲಿ ಇಂಧನ ಇಲಾಖೆಯ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಗೌರವ ಗುಪ್ತ, ಕರ್ನಾಟಕ ವಿದ್ಯುತ್ ಪ್ರಸರಣ ನಿಗಮದ ವ್ಯವಸ್ಥಾಪಕ ನಿರ್ದೇಶಕರಾದ ಪಂಕಜ್ ಕುಮಾರ್ ಪಾಂಡೆ, ಬೆಂಗಳೂರು ವಿದ್ಯುತ್ ಸರಬರಾಜು ಕಂಪನಿ ಲಿಮಿಟೆಡ್ ನ ವ್ಯವಸ್ಥಾಪಕ ನಿರ್ದೇಶಕರಾದ ಮಾಂತೇಶ್ ಬೀಳಗಿ, ಜಿಲ್ಲಾಧಿಕಾರಿ ಡಾ.ಎನ್ ಶಿವಶಂಕರ, ಜಿ.ಪಂ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಡಾ.ಕೆ ಎನ್ ಅನುರಾಧ, ಇಂಧನ ಸಚಿವರ ಆಪ್ತ ಕಾರ್ಯದರ್ಶಿ ಸತೀಶ್ ಕುಮಾರ್, ಬಯಪ ಅಧ್ಯಕ್ಷರಾದ ಶಾಂತಕುಮಾರ್, ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಅಧ್ಯಕ್ಷರಾದ ರಾಜಣ್ಣ, ದೇವನಹಳ್ಳಿ ತಾಲ್ಲೂಕು ಗ್ಯಾರಂಟಿ ಅನುಷ್ಠಾನ ಸಮಿತಿ ಅಧ್ಯಕ್ಷರಾದ ಜಗನ್ನಾಥ್ ಹಾಗೂ ಜಿಲ್ಲಾ ಮಟ್ಟದ ಅಧಿಕಾರಿಗಳು, ಜನಪ್ರತಿನಿಧಿಗಳು, ಮುಖಂಡರು ಉಪಸ್ಥಿತರಿದ್ದರು.

## ವೇಮನ ಜಯಂತಿ ಮತ್ತು ಅಂಬಿಗರ ಚೌಡಯ್ಯ ಜಯಂತಿ ಪೂರ್ವಭಾವಿ ಸಭೆ

**ಚಿಕ್ಕಬಳ್ಳಾಪುರ :** ಜನವರಿ 20 ರಂದು ''ವೇಮನ ಜಯಂತಿ''ಯನ್ನು ಮತ್ತು ಜನವರಿ 21 ರಂದು ಅಂಬಿಗರ ಚೌಡಯ್ಯ ಜಯಂತಿಯನ್ನು ಜಿಲ್ಲಾಡಳಿತ ಭವನದ, ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಆಚರಿಸಲಾಗುವುದು ಎಂದು ಜಿಲ್ಲಾಧಿಕಾರಿ ಪಿ.ಎನ್ ರವೀಂದ್ರ, ಅವರು ತಿಳಿಸಿದರು. ಗುರುವಾರ ಜಿಲ್ಲಾಡಳಿತ ಭವನದ ಜಿಲ್ಲಾಧಿಕಾರಿಗಳ ಕಚೇರಿಯ ನ್ಯಾಯಾಲಯ ಸಭಾಂಗಣದಲ್ಲಿ ನಡೆದ ವೇಮನ ಜಯಂತಿ'' ಮತ್ತು ಅಂಬಿಗರ ಚೌಡಯ್ಯ ಜಯಂತಿಗಳ ಪೂರ್ವಭಾವಿ ಸಿದ್ಧತಾ ಸಭೆಯ ಅಧ್ಯಕ್ಷತೆ ವಹಿಸಿ ಸಮುದಾಯದ ಮುಖಂಡರ ಸಲಹೆಗಳನ್ನು ಆಲಿಸಿದ ನಂತರ ಅವರು ಮಾತನಾಡಿದರು. ವೇದಿಕೆ ಕಾರ್ಯಕ್ರಮದಲ್ಲಿ ವೇಮನ ಜಯಂತಿ ಮತ್ತು ಅಂಬಿಗರ ಚೌಡಯ್ಯ ವಿಚಾರದಾರೆಗಳ ಕುರಿತು ಭಾಷಣ, ಎಸ್ಸೆಸ್ಸೆಲ್ಸಿ ಮತ್ತು ಪಿಯುಸಿಯಲ್ಲಿ ಅತಿ ಹೆಚ್ಚು ಅಂಕ ಗಳಿಸಿರುವ ಪ್ರತಿಭಾನ್ವಿತ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಮಾಡಲಾಗುವುದು. ಆಹ್ವಾನ ಪತ್ರಿಕೆ ಮುದ್ರಣ,



ವಿತರಣೆ, ವೇದಿಕೆ ಸಿದ್ಧತೆ ಮತ್ತು ಅಲಂಕಾರ, ಕುಡಿಯುವ ನೀರು, ಸೇರಿದಂತೆ ಕಾರ್ಯಕ್ರಮ ಆಯೋಜನೆಗೆ ಅಗತ್ಯ ಸಕಲ ಸಿದ್ಧತೆಗಳನ್ನು ಸಮರ್ಪಕವಾಗಿ ಮಾಡುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದರು. ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಡಾ. ಎನ್ ಭಾಸ್ಕರ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ರವಿಕುಮಾರ್, ವೇಮನ ಸಮುದಾಯ ಸಂಘದ ಅಧ್ಯಕ್ಷ ಪಾಪಿರೆಡ್ಡಿ, ಕಾರ್ಯದರ್ಶಿ ರವೀಂದ್ರ ರೆಡ್ಡಿ, ಖಜಾಂಚಿ ರಾಮ ಚಂದ್ರರೆಡ್ಡಿ, ಗೌರವ ಅಧ್ಯಕ್ಷ ನಾಗರಾಜ ರೆಡ್ಡಿ, ಶಿವರಾಮ ರೆಡ್ಡಿ, ರಾಮ ಸುಬ್ಬಾರೆಡ್ಡಿ, ಅಂಬಿಗರ ಚೌಡಯ್ಯರ ಸಮುದಾಯ ಸಂಘದ ಜಿಲ್ಲಾಧ್ಯಕ್ಷ ಕೆ. ಜಯರಾಮ್, ಉಪಾಧ್ಯಕ್ಷ ಕೃಷ್ಣಮೂರ್ತಿ, ತಾಲ್ಲೂಕು ಅಧ್ಯಕ್ಷ ಆರ್.ಎ. ರವಿಕುಮಾರ್, ಸಮುದಾಯದ ಮುಖಂಡರಾದ ರಾಜಶೇಖರ್, ನರಸಿಂಹರಾಜು, ಸಮುದಾಯದ ಮುಖಂಡರು ಹಾಗೂ ಸಂಘ ಸಂಸ್ಥೆಯ ಪದಾಧಿಕಾರಿಗಳು ಉಪಸ್ಥಿತರಿದ್ದರು.

## ಅಂಗನವಾಡಿ ಹುದ್ದೆಗೆ ಅರ್ಜಿ ಆಹ್ವಾನ

**ಚಾಮರಾಜನಗರ :** ಯಳಂದೂರು ಶಿಶು ಅಭಿವೃದ್ಧಿ ಯೋಜನಾ ವ್ಯಾಪ್ತಿಯಲ್ಲಿ ಖಾಲಿ ಇರುವ 4 ಅಂಗನವಾಡಿ ಕಾರ್ಯಕರ್ತೆಯರ ಹಾಗೂ 7 ಸಹಾಯಕಿಯರ ಹುದ್ದೆಗಳಿಗೆ ಗೌರವಧನದ ಆಧಾರದ ಮೇಲೆ ಭರ್ತಿ ಮಾಡಲು ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಯಳಂದೂರು ತಾಲೂಕಿನ ಕೆಸ್ತೂರು ಗ್ರಾಮ ಪಂಚಾಯಿತಿಯ ಕಟ್ನವಾಡಿ-1 ಅಂಗನವಾಡಿ ಕೇಂದ್ರ (ಪರಿಶಿಷ್ಟ ಜಾತಿ), ಗೌಡಳ್ಳಿ ಗ್ರಾಮಪಂಚಾಯಿತಿಯ ಮಲಾರಪಾಳ್ಯ ಮಿನಿ ಅಂಗನವಾಡಿ ಕೇಂದ್ರ (ಇತರೆ), ಹೊನ್ನೂರು ಗ್ರಾಮಪಂಚಾಯಿತಿಯ ಹೊನ್ನೂರು-1 ಅಂಗನವಾಡಿ ಕೇಂದ್ರ (ಪರಿಶಿಷ್ಟ ಜಾತಿ), ಯಳಂದೂರಿನ 9ನೇ ಅಂಗನವಾಡಿ ಕೇಂದ್ರ (ವಾರ್ಡ್ ನಂ 5) (ಪರಿಶಿಷ್ಟ ಜಾತಿ) ಕೇಂದ್ರದಲ್ಲಿ ಖಾಲಿ ಇರುವ ಅಂಗನವಾಡಿ ಕಾರ್ಯಕರ್ತೆಯರ ಹುದ್ದೆಗಳಿಗೆ ಅರ್ಜಿ ಸಲ್ಲಿಸಬಹುದು. ಕೆಸ್ತೂರು-5ನೇ ಅಂಗನವಾಡಿ ಕೇಂದ್ರ (ಇತರೆ), ಬಸಾಪುರ ಅಂಗನವಾಡಿ ಕೇಂದ್ರ (ಇತರೆ), ಮಾಂಬಳ್ಳಿ-2ನೇ ಅಂಗನವಾಡಿ ಕೇಂದ್ರ (ಪರಿಶಿಷ್ಟ ಜಾತಿ), ಯರಿಯೂರು-2ನೇ ಅಂಗನವಾಡಿ ಕೇಂದ್ರ (ಇತರೆ), ಗಣಿಗನೂರು 2ನೇ ಅಂಗನವಾಡಿ ಕೇಂದ್ರ (ಪರಿಶಿಷ್ಟ ಪಂಗಡ) ಗೌಡಳ್ಳಿ ಗ್ರಾಮಪಂಚಾಯಿತಿಯ ಗೌಡಹಳ್ಳಿ 2ನೇ ಅಂಗನವಾಡಿ ಕೇಂದ್ರ (ಪರಿಶಿಷ್ಟ ಜಾತಿ), ಬೂದಿತಿಟ್ಟಿನ 1ನೇ ಅಂಗನವಾಡಿ ಕೇಂದ್ರ (ಇತರೆ), ಗಂಗವಾಡಿ ಅಂಗನವಾಡಿ ಕೇಂದ್ರ (ಪರಿಶಿಷ್ಟ ಜಾತಿ) ಅಂಗನವಾಡಿ ಕೇಂದ್ರಗಳಲ್ಲಿ ಸಹಾಯಕಿಯರ ಹುದ್ದೆಗಳಿಗೆ ಅರ್ಜಿ ಸಲ್ಲಿಸಬಹುದು.

# ಅಂಗನವಾಡಿ ಕಾರ್ಯಕರ್ತೆ, ಸಹಾಯಕಿಯರ ಹುದ್ದೆಗಳಿಗೆ ಅರ್ಜಿ

**ಚಾಮರಾಜನಗರ:** ಚಾಮರಾಜನಗರ ಶಿಶು ಅಭಿವೃದ್ಧಿ ಯೋಜನೆ ವ್ಯಾಪ್ತಿಯಲ್ಲಿ ಖಾಲಿ ಇರುವ 11 ಅಂಗನವಾಡಿ ಕಾರ್ಯಕರ್ತೆಯರು ಹಾಗೂ 23 ಸಹಾಯಕಿಯರ ಹುದ್ದೆಗಳಿಗೆ ಅರ್ಹ ಮಹಿಳಾ ಅಭ್ಯರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

ಚಂದುಕಟ್ಟೆಮೋಳೆ ಅಂಗನವಾಡಿ ಕೇಂದ್ರ, (ಇತರೆ), ಸೋಮವಾರಪೇಟೆ 3ನೇ ಅಂಗನವಾಡಿ ಕೇಂದ್ರ, (ಪರಿಶಿಷ್ಟಜಾತಿ), ಮಲೆಯೂರಿನ 2ನೇ ಅಂಗನವಾಡಿ ಕೇಂದ್ರ, (ಇತರೆ), ದೇವಾಂಗ ಬೀದಿಯ 3ನೇ ಅಂಗನವಾಡಿ ಕೇಂದ್ರ, (ಪರಿಶಿಷ್ಟಪಂಗಡ), ಕೆ.ಪಿ ಮೊಹಲ್ಲಾ 1ನೇ ಅಂಗನವಾಡಿ ಕೇಂದ್ರ, (ಇತರೆ), ರಾಮಸಮುದ್ರ, 7ನೇ ಅಂಗನವಾಡಿ ಕೇಂದ್ರ, (ಇತರೆ), ರಾಮಸಮುದ್ರ 8ನೇ ಅಂಗನವಾಡಿ ಕೇಂದ್ರ, (ಇತರೆ), ದೊಡ್ಡಹಳ್ಳ ಅಂಗನವಾಡಿ ಕೇಂದ್ರ, (ಇತರೆ) (1ನೇ ಬಾರಿ ಮರು ಪ್ರಕಟಣೆ), ಬಿ.ಜಿ ಕಾಲೋನಿ ಅಂಗನವಾಡಿ ಕೇಂದ್ರ, (ಪರಿಶಿಷ್ಟಜಾತಿ) (1ನೇ ಬಾರಿ ಮರು ಪ್ರಕಟಣೆ), ಉಪ್ಪಾರಬೀದಿ 4ನೇ ಅಂಗನವಾಡಿ ಕೇಂದ್ರ, (ಇತರೆ) ಹಾಗೂ ಕುಲಗಾಣ 2ನೇ ಅಂಗನವಾಡಿ ಕೇಂದ್ರ, (ಪರಿಶಿಷ್ಟಜಾತಿ) ಅಂಗನವಾಡಿ ಕೇಂದ್ರಗಳಲ್ಲಿ ಕಾರ್ಯಕರ್ತೆಯರ ಹುದ್ದೆಗಳಿಗೆ ಅರ್ಜಿ ಸಲ್ಲಿಸಬಹುದು.

ಸೋಮವಾರಪೇಟೆ 3ನೇ ಅಂಗನವಾಡಿ ಕೇಂದ್ರ (ಪರಿಶಿಷ್ಟಜಾತಿ), ನಂಜೆದೇವನಪುರ 2ನೇ ಅಂಗನವಾಡಿ ಕೇಂದ್ರ, (ಇತರೆ), ಯಾನಗಹಳ್ಳಿ 4ನೇ ಅಂಗನವಾಡಿ ಕೇಂದ್ರ (ಪರಿಶಿಷ್ಟಪಂಗಡ), ದೊಡ್ಡಹಳ್ಳ ಅಂಗನವಾಡಿ ಕೇಂದ್ರ (ಇತರೆ) (1ನೇ ಬಾರಿ ಮರು ಪ್ರಕಟಣೆ), ಗೋಡೆಮಡು ಅಂಗನವಾಡಿ ಕೇಂದ್ರ, (ಪರಿಶಿಷ್ಟಪಂಗಡ), ತಮಿಳು ಕೇಂದ್ರ, ಅಂಗನವಾಡಿ ಕೇಂದ್ರ, (ಇತರೆ) (2ನೇ ಬಾರಿ ಮರು ಪ್ರಕಟಣೆ), ಹೊಸಪೋಡು ಅಂಗನವಾಡಿ ಕೇಂದ್ರ, (ಪರಿಶಿಷ್ಟಪಂಗಡ) (1ನೇ ಬಾರಿ ಮರು ಪ್ರಕಟಣೆ), ರಾಮಸಮುದ್ರ, 9ನೇ ಅಂಗನವಾಡಿ ಕೇಂದ್ರ, (ಪರಿಶಿಷ್ಟಜಾತಿ), ದೇವಲಾಪುರ ಅಂಗನವಾಡಿ ಕೇಂದ್ರ, (ಪರಿಶಿಷ್ಟಜಾತಿ), ಮೂಡ್ನಾಕೂಡು 3ನೇ ಅಂಗನವಾಡಿ ಕೇಂದ್ರ, (ಪರಿಶಿಷ್ಟಜಾತಿ), ಮೂಡ್ಲುಪುರ ಅಂಗನವಾಡಿ ಕೇಂದ್ರ, (ಇತರೆ), ಬೊಮ್ಮನಹಳ್ಳಿ ಅಂಗನವಾಡಿ ಕೇಂದ್ರ, (ಇತರೆ), ಹರದನಹಳ್ಳಿ 2ನೇ ಅಂಗನವಾಡಿ ಕೇಂದ್ರ, (ಇತರೆ) (1ನೇ ಬಾರಿ ಮರು ಪ್ರಕಟಣೆ), ಬೆಟ್ಟದಪುರ 1ನೇ ಅಂಗನವಾಡಿ ಕೇಂದ್ರ, (ಇತರೆ) (3ನೇ ಬಾರಿ ಮರು ಪ್ರಕಟಣೆ), ಬೀಡಿಕಾಲೋನಿ 2ನೇ ಅಂಗನವಾಡಿ ಕೇಂದ್ರ, (ಇತರೆ) (1ನೇ ಬಾರಿ ಮರು ಪ್ರಕಟಣೆ), ಗಾಳಿಪುರ 5ನೇ ಅಂಗನವಾಡಿ ಕೇಂದ್ರ, (ಇತರೆ) (1ನೇ ಬಾರಿ ಮರು ಪ್ರಕಟಣೆ), ರಾಮಸಮುದ್ರ 6ನೇ ಅಂಗನವಾಡಿ ಕೇಂದ್ರ, (ಇತರೆ) (1ನೇ ಬಾರಿ ಮರು ಪ್ರಕಟಣೆ), ಚೆನ್ನಿಪುರದಮೋಳೆ 1ನೇ ಅಂಗನವಾಡಿ ಕೇಂದ್ರ, (ಇತರೆ) (1ನೇ ಬಾರಿ ಮರು ಪ್ರಕಟಣೆ), ಶಿವಪುರ 3ನೇ ಅಂಗನವಾಡಿ ಕೇಂದ್ರ, (ಇತರೆ) (1ನೇ ಬಾರಿ ಮರು ಪ್ರಕಟಣೆ), ಅಹಮದ್ ನಗರ 2ನೇ ಅಂಗನವಾಡಿ ಕೇಂದ್ರ, (ಇತರೆ) (1ನೇ ಬಾರಿ ಮರು ಪ್ರಕಟಣೆ), ಮುಕ್ಕಡಹಳ್ಳಿ 2ನೇ ಅಂಗನವಾಡಿ ಕೇಂದ್ರ, (ಪರಿಶಿಷ್ಟಜಾತಿ), ಬಸವಾಪುರ 2ನೇ ಅಂಗನವಾಡಿ ಕೇಂದ್ರ, (ಪರಿಶಿಷ್ಟಪಂಗಡ), ರೈಲ್ವೆ ಬಡಾವಣೆ ಅಂಗನವಾಡಿ ಕೇಂದ್ರ, (ಇತರೆ) ಅಂಗನವಾಡಿ ಕೇಂದ್ರಗಳಲ್ಲಿ ಸಹಾಯಕಿಯರ ಹುದ್ದೆಗಳಿಗೆ ಅರ್ಜಿ ಸಲ್ಲಿಸಬಹುದು.

ಅರ್ಜಿಗಳನ್ನು ವೆಬ್ ಸೈಟ್ https://karnemakaone.kar.nic.in/abcd/ ನಲ್ಲಿ ಫೆಬ್ರವರಿ 7ರ ಸಂಜೆ 5.30 ಗಂಟೆಯೊಳಗೆ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ನಗರದ ಪಿಡಬ್ಲ್ಯೂಡಿ ಕಾಲೋನಿಯಲ್ಲಿರುವ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಚೇರಿಯನ್ನು ಸಂಪರ್ಕಿಸುವಂತೆ ತಿಳಿಸಿದೆ.

## 'ಇಂಡಿಯನ್ ಖಶಿಕಿ ಶೂಟೋರಿಯ ಕರಾಟೆ ಫೆಡೆಟ್ರಾಕ್ಷನ್' ಸಂಸ್ಥೆಯ ಗುರುಗಳಿಂದ ಉತ್ತಮ ಸಾಧನೆ

**ಕೋಲಾರ:** ಮಧುರೈನ ಡೆಕ್ಲತಾಂ ಸ್ಟೇಡಿಯಂನಲ್ಲಿ ಹಿಂದುಸ್ತಾನ್ ಕರಾಟೆ ಫೆಡೆಟ್ರಾಕ್ಷನ್ ಸಂಸ್ಥೆಯು ಹಾಂಶಿ ಡಾಖುಖು ಎಂ.ಎಸ್. ವೆಟ್ರಿವಲ್ ರವರು, ರೆಫ್ರಿ ಪರೀಕ್ಷೆ ಮತ್ತು ಬ್ಲಾಕ್ ಬೆಲ್ಟ್ ಪರೀಕ್ಷೆಯನ್ನು ಆಯೋಜಿಸಿದ್ದರು.

ಈ ಸ್ಪರ್ಧೆಯಲ್ಲಿ ಜಿಲ್ಲೆಯ ಇಂಡಿಯನ್ ಖಶಿಕಿ ಶೂಟೋರಿಯ ಕರಾಟೆ ಫೆಡೆಟ್ರಾಕ್ಷನ್ ಸಂಸ್ಥೆಯ ಕ್ಯೂಷಿ ಎಂ.ಜಿ.ಶ್ರೀನಿವಾಸ್ ಗೌಡ ರವರ ವತಿಯಿಂದ ಎಂ.ಎನ್.ನಾಗೇಶ್, ನವೀನ್ ಕುಮಾರ್.ಎನ್, ಶೇಷಾದ್ರಿ.ಕೆ, ಮಣಿ.ವಿ, ಗುರು ದೀಪ್.ಎಸ್. ಗೌಡ, ಮಂಜುನಾಥ.ಎಂ, ಲಿಖಿತ್ ಕುಮಾರ್.ಕೆ, ಪೂಜಾ, ಸಾಯಿ ಯಶ್ವಂತ್ ರಫ್ರಿ ಪರೀಕ್ಷೆಯಲ್ಲಿ ಪಾಲ್ಗೊಂಡು ಉತ್ತೀರ್ಣರಾಗಿರುತ್ತಾರೆ. ಅಷ್ಟೇ ಅಲ್ಲದೆ ಬ್ಲಾಕ್ ಬೆಲ್ಟ್ ಗ್ರೇಡಿಗೆ ಎಂ.ಎನ್ .ನಾಗೇಶ್ 5ನೇ ಬ್ಲಾಕ್ ಬೆಲ್ಟ್, ಗುರು ದೀಪ್ ಎಸ್.ಗೌಡ 3ನೇ ಬ್ಲಾಕ್ ಬೆಲ್ಟ್ ಪರೀಕ್ಷೆಯಲ್ಲಿ ಪಾಲ್ಗೊಂಡು ಉತ್ತೀರ್ಣರಾಗಿರುತ್ತಾರೆ.



## ಕಲಿಕಾರ್ಥಿ ಸಹಾಯ ಕೇಂದ್ರಗಳನ್ನು ತೆರೆಯಲು ಅರ್ಜಿ

**ಚಿಕ್ಕಬಳ್ಳಾಪುರ:** ಮುಕ್ತ ವಿಶ್ವವಿದ್ಯಾನಿಲಯವು ''ಉನ್ನತ ಶಿಕ್ಷಣ ಎಲ್ಲರಿಗೂ ಎಲ್ಲೆಡೆ'' ಎಂಬ ಘೋಷವಾಕ್ಯದೊಂದಿಗೆ ವಿದ್ಯಾರ್ಥಿಗಳ ಮನೆ ಬಾಗಿಲಿಗೆ ಉನ್ನತ ಶಿಕ್ಷಣ ನೀಡಲು ಪ್ರಯತ್ನಿಸುತ್ತಿದ್ದು, ಪ್ರಸ್ತುತ ಚಿಕ್ಕಬಳ್ಳಾಪುರ ಜಿಲ್ಲೆಯ ನಗರ ಹಾಗೂ ಪ್ರತಿ ತಾಲ್ಲೂಕು ಮತ್ತು ಹೋಬಳಿ ಕೇಂದ್ರಗಳಲ್ಲೂ ಕರಾಮುವಿ ಕಲಿಕಾರ್ಥಿ ಸಹಾಯ ಕೇಂದ್ರಗಳನ್ನು (ಅಧ್ಯಯನ ಕೇಂದ್ರಗಳನ್ನು) ಪ್ರಥಮ ದರ್ಜೆ ಕಾಲೇಜುಗಳಲ್ಲಿ ತೆರೆಯಲು ಅರ್ಜಿ ಆಹ್ವಾನಿಸಲಾಗಿದೆ. ಆಸಕ್ತ ಪ್ರಥಮ ದರ್ಜೆ ಕಾಲೇಜುಗಳು ಕರಾಮುವಿಯ ಅಧಿಕೃತ ವೆಬ್ ಸೈಟ್ www.ksoumysuru.ac.in ಅಥವಾ https://ksouportal.com/reg_sc/StudyCentreRegistration.aspx ನಲ್ಲಿ ಆನ್‌ಲೈನ್‌ನಲ್ಲಿ ಅರ್ಜಿ ಭರ್ತಿ ಮಾಡಿ ನಂತರ ಭರ್ತಿ ಮಾಡಿದ ಅರ್ಜಿಯನ್ನು ಡೀನ್ (ಅಧ್ಯಯನ ಕೇಂದ್ರ) ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯ, ಮುಕ್ತ ಗಂಗೋತ್ರಿ, ಮೈಸೂರು-06 ಇಲ್ಲಿಗೆ ಸಲ್ಲಿಸುವುದು. ಅರ್ಜಿ ಸಲ್ಲಿಸಲು ಜನವರಿ 18 ಕೊನೆಯ ದಿನಾಂಕವಾಗಿದೆ. ಮುಂದುವರೆದು ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳು ಕರಾಮುವಿ



ಕಲಿಕಾರ್ಥಿ ಸಹಾಯ ಕೇಂದ್ರಗಳನ್ನು ಸ್ಥಾಪಿಸಲು ಯಾವುದೇ ಶುಲ್ಕ ಪಾವತಿ ಮಾಡುವಂತಿಲ್ಲ. ಮುಕ್ತ ವಿವಿಗೆ ಪ್ರವೇಶಾತಿ ಪಡೆಯುವ ವಿದ್ಯಾರ್ಥಿಗಳು ಪ್ರವೇಶಾತಿಯನ್ನು ಕಲಿಕಾರ್ಥಿ ಸಹಾಯ ಕೇಂದ್ರಗಳಲ್ಲೂ ಅನ್‌ಲೈನ್ ಮುಖಾಂತರ ಪಡೆಯಬಹುದು. ಹೆಚ್ಚಿನ ವಿವರಗಳಿಗಾಗಿ ಪ್ರಾದೇಶಿಕ ನಿರ್ದೇಶಕರು, ಕರಾಮುವಿ ಪ್ರಾದೇಶಿಕ ಕೇಂದ್ರ, ಚಿಕ್ಕಬಳ್ಳಾಪುರ, ಸರ್ಕಾರಿ ಪ್ರಥಮ ದರ್ಜೆ (ಮುನ್ಸಿಪಾಲ್) ಕಾಲೇಜು, ಎಂ.ಜಿ. ರಸ್ತೆ, ಚಿಕ್ಕಬಳ್ಳಾಪುರ-562101 ದೂರವಾಣಿ ಸಂಖ್ಯೆ-9164300299, 9535339498, ಅನ್ನು ಸಂಪರ್ಕಿಸಬಹುದೆಂದು ಪ್ರಾದೇಶಿಕ ನಿರ್ದೇಶಕ ಹೆಚ್. ಸುರೇಶ್ ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ.

## ಇಂದು ಹಲವೆಡೆ ವಿದ್ಯುತ್ ವ್ಯತ್ಯಯ

**ಮೈಸೂರು:** ಜನವರಿ 11 ರಂದು ಬೆಳಿಗ್ಗೆ 10 ರಿಂದ ಸಂಜೆ 5 ಗಂಟೆಯವರೆಗೆ ಎಫ್.ಟಿ.ಎಸ್ ವಿದ್ಯುತ್ ವಿತರಣಾ ಕೇಂದ್ರದಿಂದ ಹೊರಹೊಮ್ಮುವ ಕಲ್ಯಾಣಗಿರಿ ಫೀಡರ್‌ನ ತುರ್ತು ನಿರ್ವಹಣಾ ಕಾಮಗಾರಿಯನ್ನು ಹಮ್ಮಿಕೊಳ್ಳಲಾಗಿರುವುದರಿಂದ, ಶಿವಾಜಿ ರಸ್ತೆ, ನಾರ್ಥ್ ಈಸ್ಟ್ ಆಫ್ ನ.ರಾ ಮೊಹಲ್ಲಾ, ಕುರಿಮಂಡಿ ಬ್ಲಾಕ್, ಸೋನಿಯಾ ಗಾಂಧಿ ಬಡಾವಣೆ, ಕೆಸರೆ 3ನೇ ಹಂತ, ಕಲ್ಪವೃಕ್ಷ ನಗರ, ತಿಬ್ಬಾದೇವಿ ಟಾಕೀಸ್ ಹಾಗೂ ಸುತ್ತ-ಮುತ್ತಲಿನ ಪ್ರದೇಶಗಳಲ್ಲಿ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದ್ದು, ಸಾರ್ವಜನಿಕರು ಹಾಗೂ ಕೈಗಾರಿಕೋದ್ಯಮಿಗಳು ಸಹಕರಿಸಬೇಕೆಂದು ಚಾ.ವಿ.ಸ.ನಿ.ನಿ. ಯ ನ.ರಾ.ಮೊಹಲ್ಲಾದ ಕಾರ್ಯ ಮತ್ತು ಪಾಲನೆ ವಿಭಾಗದ ಕಾರ್ಯನಿರ್ವಾಹಕ ಇಂಜಿನಿಯರ್(ವಿ), ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಸಂಜೆ ಮುಗಿಲು
ಶನಿವಾರ
11.1.2025





## ರಾಜ್ಯ ಮಟ್ಟದ ಸ್ಪರ್ಧೆಯಲ್ಲಿ ಬಹುಮಾನ

**ಮೈಸೂರಿನ ಸರಸ್ವತಿಪುರಂನಲ್ಲಿರುವ ಜ್ಞಾನೋದಯ ಪದವಿ ಪೂರ್ವ ಕಾಲೇಜಿನ ವಿದ್ಯಾರ್ಥಿನಿ ಕೆ.ಕೆ.ವೈಭವಿ ಶಾಲಾ ಶಿಕ್ಷಣ ಇಲಾಖೆಯ (ಪದವಿ ಪೂರ್ವ) ವತಿಯಿಂದ ತುಮಕೂರಿನಲ್ಲಿ ಆಯೋಜಿಸಿದ್ದ ರಾಜ್ಯ ಮಟ್ಟದ ಸಾಂಸ್ಕೃತಿಕ ಮತ್ತು ಸಹಪಠ್ಯ ಸ್ಪರ್ಧೆಯಲ್ಲಿ ಭಕ್ತಿಗೀತೆ ಸ್ಪರ್ಧೆಯಲ್ಲಿ ಪ್ರಥಮ ಬಹುಮಾನ ಪಡೆದು ಸಾಂಸ್ಕೃತಿಕ ಜಿಲ್ಲೆ ಹಾಗೂ ಕಾಲೇಜಿಗೆ ಕೀರ್ತಿ ತಂದಿರುತ್ತಾರೆ. ಈ ಅಭೂತಪೂರ್ವ ಸಾಧನೆಯೊಂದಿಗೆ ಗೆಲುವಿನ ಗರಿ ತಂದ ವಿದ್ಯಾರ್ಥಿನಿಯನ್ನು ಕಾಲೇಜು ಆಡಳಿತ ಮಂಡಳಿ, ಪ್ರಾಂಶುಪಾಲರು, ಬೋಧಕ-ಬೋಧಕೇತರ ವರ್ಗ ಹಾಗೂ ವಿದ್ಯಾರ್ಥಿಗಳು ಅಭಿನಂದಿಸಿದ್ದಾರೆ.**

# ಬಂಡೀಪುರದಲ್ಲಿ ಬೆಂಕಿ ನಿಯಂತ್ರಣಕ್ಕೆ ಕಸರತ್ತು

**ಚಾಮರಾಜನಗರ :** ಕರ್ನಾಟಕ ತಮಿಳುನಾಡು ಮತ್ತು ಕೇರಳ ಗಡಿಗಳಿಗೆ ವಿಸ್ತಾರಗೊಂಡಿರುವ ಚಾಮರಾಜನಗರ ಜಿಲ್ಲೆಯ ಬಂಡೀಪುರ ರಾಷ್ಟ್ರೀಯ ಉದ್ಯಾನವನ ವ್ಯಾಪ್ತಿಯಲ್ಲಿ ಬೇಸಿಗೆಗೂ ಮುನ್ನ ಬೆಂಕಿ ಅವಘಡ ನಿಯಂತ್ರಣಕ್ಕೆ ಅರಣ್ಯ ಇಲಾಖೆ ಕಸರತ್ತು ಮಾಡುತ್ತಿದ್ದು, ಈಗಾಗಲೇ ಶೇ 80 ರಷ್ಟು ಬೆಂಕಿ ನಿಯಂತ್ರಣ ರೇಖೆ ನಿರ್ಮಿಸಲಾಗಿದೆ.

ಚಾಮರಾಜನಗರ ಜಿಲ್ಲೆಯ ಬಂಡೀಪುರ ರಾಷ್ಟ್ರೀಯ ಉದ್ಯಾನವನ ಹಾಗೂ ಹುಲಿ ಸಂರಕ್ಷಿತ ಪ್ರದೇಶದಲ್ಲಿನ 13 ವಲಯದಲ್ಲಿ ಸುಮಾರು 2650 ಚದರ ಕಿಲೋ ಮೀಟರ್ಫೈರ್ಲೈನ್ ಮಾಡಡಲಾಗಿದೆ.

ಕರ್ನಾಟಕ ತಮಿಳುನಾಡು ಮತ್ತು ಕೇರಳ ರಾಜ್ಯಗಳ ಗಡಿಗಳಿಗೆ ವಿಸ್ತರಿಸಿಕೊಂಡಿರುವ ಚಾಮರಾಜನಗರ ಜಿಲ್ಲೆಯ ಬಂಡೀಪುರ ರಾಷ್ಟ್ರೀಯ ಉದ್ಯಾನವನ ಹಾಗೂ ಹುಲಿ ಸಂರಕ್ಷಿತ ಪ್ರದೇಶದೊಳಗೆ ರಾಷ್ಟ್ರೀಯ ಹೆದ್ದಾರಿ, ಸೂಕ್ಷ್ಮ ಪ್ರದೇಶ, ಟೈಗರ್ಹಾಗೂ ವಾಟರ್ ರಸ್ತೆಗಳಲ್ಲಿ ಬೆಂಕಿ ತಡೆಗೆ ಬಂಡೀಪುರದ 13 ವಲಯಗಳಲ್ಲಿ ಫೈರ್ಲೈನ್ ಕೆಲಸ ಆರಂಭವಾಗಿದೆ.

ಈಗಾಗಲೇ ಬಂಡೀಪುರ ಹುಲಿ ಸಂರಕ್ಷಿತ ಪ್ರದೇಶದ ರಾಷ್ಟ್ರೀಯ ಹೆದ್ದಾರಿ, ಟೈಗರ್ಹಾಗೂ ವಾಟರ್ರಸ್ತೆಗಳಲ್ಲಿ 10 ರಿಂದ 20 ಮೀಟರ್ತನಕ ಫೈರ್ಲೈನ್ ಮಾಡಿದ್ದಾರೆ. ಈ ಬಾರಿ ಬೆಂಕಿ ಬೀಳದಂತೆ ಅರಣ್ಯ ಇಲಾಖೆ ಎಲ್ಲ ಮುಂಜಾಗ್ರತ ಕ್ರಮವಾಗಿ ಬೇಸಿಗೆ ಆರಂಭಕ್ಕೂ ಮುನ್ನವೇಫೈರ್ಲೈನ್ ಮಾಡಿದ್ದು ಈಗಹೆದ್ದಾರಿಯಲ್ಲಿ ಹಗಲು ರಾತ್ರಿ ಸಿಬ್ಬಂದಿ ಗಸ್ತು ತಿರುಗುತ್ತಿದ್ದಾರೆ.

ಬಂಡೀಪುರ ಅರಣ್ಯದಲ್ಲಿ ತಮಿಳುನಾಡು ಕೇರಳ ಸಂಪರ್ಕಿಸುವ ರಾಷ್ಟ್ರೀಯ ಹೆದ್ದಾರಿಗಳಿವೆ. ಹೆದ್ದಾರಿ ಮಾತ್ರವಲ್ಲದೆ ಅರಣ್ಯ ವಲಯಗಳಲ್ಲಿ ವಾಹನಗಳು ಸಂಚರಿಸುವ ರಸ್ತೆಗಳು ಹಾಗೂ ಸೂಕ್ಷ್ಮ ಪ್ರದೇಶಗಳಲ್ಲಿನ ರಸ್ತೆಗಳಲ್ಲಿ ಫೈರ್ ಲೈನ್ ಆಗಿದ್ದು, ಫೈರ್ ಲೈನ್ ಕೆಲಸ ಶೇ.80 ರಷ್ಟು ನಡೆದಿದೆ.

ಮುಂದಿನ ದಿನಗಳಲ್ಲಿ ಬೇಸಿಗೆ ಆರಂಭದ ಹಿನ್ನೆಲೆ ಕಾಡಿನ ಪ್ರಮುಖ ಸ್ಥಳ ಹಾಗೂ ಹೆದ್ದಾರಿಯಲ್ಲಿ ಡ್ರೋಣ್ ಮೂಲಕ ಕಿಡಿಗೇಡಿಗಳ ಚಲನ, ವಲನಗಳ ಮೇಲೆ ನಿಗಾ ಇಡಲಾಗಿದೆ. ಅಗ್ನಿಶಾಮಕ ದಳಕ್ಕೆ ಪತ್ರ ಕೂಡ ಬರೆಯಲಾಗಿದೆ. ಈಗಾಗಲೇ ಗುಂಡ್ಲುಪೇಟೆ ಹಾಗೂ ಬಂಡೀಪುರ ಉಪ ವಿಭಾಗದ ಅಧಿಕಾರಿಗಳ ಸಭೆ ನಡೆಸಲಾಗಿದೆ ಎಂದರು. ಬಂಡೀಪುರ ಹುಲಿ ಸಂರಕ್ಷಿತ ಪ್ರದೇಶದಲ್ಲಿರುವ ಸೋಲಾರ್ ಬೋರ್ವೆಲ್ಗಳ ತಪಾಸಣೆ ನಡೆಸಿದ್ದು, ಕೆರೆಕಟ್ಟೆಗಳಿಗೆ ನೀರುತುಂಬಿಸಲು ವಲಯ ಅರಣ್ಯಾಧಿಕಾರ ಗಳಿಗೆ ಹೇಳಲಾಗಿದೆ. ಕೆರೆ ಕಟ್ಟೆಗಳಲ್ಲಿ ನೀರಿದ್ದರೆ ವನ್ಯಜೀವಿಗಳಿಗೂ ಅನುಕೂಲವಾಗಲಿದೆ ಎಂದರು.

## ವಿವಿಧೆಡೆ ವಿದ್ಯುತ್ ವ್ಯತ್ಯಯ

**ಚಾಮರಾಜನಗರ:** ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮದಿಂದ ಚಾಮರಾಜನಗರ ಉಪವಿಭಾಗ ವ್ಯಾಪ್ತಿಯಲ್ಲಿ ತುರ್ತು ಕಾಮಗಾರಿಯನ್ನು ಜನವರಿ 11 ರಂದು ಹಮ್ಮಿಕೊಂಡಿರುವುದರಿಂದ ಬೆಳಿಗ್ಗೆ 10 ರಿಂದ ಮಧ್ಯಾಹ್ನ 3 ಗಂಟೆಯವರೆಗೆ ವಿವಿಧೆಡೆ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದೆ. ಕಾರಾಗೃಹ, ಕಾರಾಗೃಹ ಹಿಂಭಾಗ, ನ್ಯಾಯಾಲಯ, ನ್ಯಾಯಾಲಯ ರಸ್ತೆ ಮತ್ತು ಜಿಲ್ಲಾಧಿಕಾರಿಗಳ ಮನೆ ಹಾಗೂ ಸುತ್ತಮುತ್ತಲ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ ಎಂದು ನಿಗಮದ ಸಹಾಯಕ ಕಾರ್ಯನಿರ್ವಾಹಕ ಎಂಜಿನಿಯರ್ ತಿಳಿಸಿದ್ದಾರೆ.

## ಏಕಲವ್ಯ ವಸತಿ ಶಾಲೆಯ 6ನೇ ತರಗತಿ ಪ್ರವೇಶಕ್ಕೆ ಅರ್ಜಿ ಆಹ್ವಾನ

**ಚಾಮರಾಜನಗರ:** ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ ವ್ಯಾಪ್ತಿಯ ಹನೂರು ತಾಲೂಕಿನ ಮಂಗಲ ಗ್ರಾಮದ ಏಕಲವ್ಯ ಮಾದರಿ ವಸತಿ ಶಾಲೆಗೆ 2025-26ನೇ ಸಾಲಿಗೆ 6 ನೇ ತರಗತಿ ಪ್ರವೇಶಕ್ಕಾಗಿ 5ನೇ ತರಗತಿಯಲ್ಲಿ ವ್ಯಾಸಾಂಗ ಮಾಡುತ್ತಿರುವ ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ವಿದ್ಯಾರ್ಥಿಗಳನ್ನು ಪ್ರವೇಶ ಪರೀಕ್ಷೆಯ ಮೂಲಕ ಮೆರಿಟ್ ಆಧಾರದ ಮೇಲೆ ಆಯ್ಕೆ ಮಾಡಲಾಗುತ್ತದೆ. ಅರ್ಜಿಯನ್ನು ಭರ್ತಿ ಮಾಡಿ ಅಗತ್ಯ ದಾಖಲಾತಿಗಳೊಂದಿಗೆ ಜನವರಿ 31 ರೊಳಗೆ ಮಂಗಲ ಗ್ರಾಮದ ಏಕಲವ್ಯ ಮಾದರಿ ವಸತಿ ಶಾಲೆಗೆ ಸಲ್ಲಿಸಬೇಕು. ಪ್ರವೇಶ ಪರೀಕ್ಷೆಯನ್ನು ಫೆಬ್ರವರಿ 17 ರಂದು ನಡೆಸಲಾಗುತ್ತದೆ. ಹೆಚ್ಚಿನ ಮಾಹಿತಿಗಾಗಿ ಏಕಲವ್ಯ ಮಾದರಿ ವಸತಿ ಶಾಲೆಯ ಪ್ರಾಂಶುಪಾಲರಾದ ಶ್ಯಾಮ್ ಲಾಲ್ (ಮೊ.ಸಂ 9871248685), ಪಿ.ಜಿ.ಟಿ. ಶಿಕ್ಷಕರಾದ ರೇಖಾ ರಾಣಿ (ಮೊ.ನಂ 9211343432) ಅವರನ್ನು ಸಂಪರ್ಕಿಸುವಂತೆ ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣ ಅಧಿಕಾರಿ ಬಿಂದ್ಯಾ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## 15ರಂದು ಬಿಳಿಗಿರಿ ರಂಗನಾಥಸ್ವಾಮಿಯವರ ಸಂಕ್ರಾಂತಿ ರಥೋತ್ಸವ (ಚಿಕ್ಕಜಾತ್ರೆ)

**ಚಾಮರಾಜನಗರ:** ಯಳಂದೂರು ತಾಲೂಕಿನ ಬಿಳಿಗಿರಿರಂಗನಬೆಟ್ಟದ ಶ್ರೀ ಬಿಳಿಗಿರಿ ರಂಗನಾಥಸ್ವಾಮಿಯವರ ಸಂಕ್ರಾಂತಿ ರಥೋತ್ಸವ (ಚಿಕ್ಕಜಾತ್ರೆ) ಹಾಗೂ ಇದರ ಅಂಗವಾಗಿ ವಿವಿಧ ಪೂಜಾ ಕೈಂಕರ್ಯಗಳು ಜನವರಿ 12 ರಿಂದ 17 ರವರೆಗೆ ನಡೆಯಲಿದೆ.



ಜನವರಿ 12ರಂದು ಅಂಕುರಾರ್ಪಣ ನಂತರ ರಾತ್ರಿ ಕೊಠಾರೋತ್ಸವ, 13ರಂದು ಹಗಲು ಸರ್ವತ್ರ ಅಭಿಷೇಕ ಧ್ವಜಾರೋಹಣ ರಾತ್ರಿ ಕೊಠಾರೋತ್ಸವ, 14ರಂದು ಸ್ವರ್ಗದ ಬಾಗಿಲು ತೆರೆಯುವುದು ರಾತ್ರಿ 7.30 ಗಂಟೆಗೆ ನಂತರ ಕೊಠಾರೋತ್ಸವ ಜರುಗಲಿದೆ. ಜನವರಿ 15ರಂದು ಬೆಳಿಗ್ಗೆ 11.55 ರಿಂದ 12.06 ಗಂಟೆ ಒಳಗೆ ಸಲ್ಲುವ ಶುಭ ಮೀನಾ ಲಗ್ನದ ಮೀನಗುರು ನವಾಂಶದ ಶುಭ ಮುಹೂರ್ತದಲ್ಲಿ ರಥಾರೋಹಣ ಮಹೋತ್ಸವ ನಡೆಯಲಿದೆ. ರಾತ್ರಿ ಸಂಧಾನೋತ್ಸವ ಪಾರುವಾಟೆ ಮಂಟಪೋತ್ಸವ, ಮೋಹಿನಿ ಅಲಂಕಾರಸೇವೆ ನಡೆಯಲಿದೆ. ಜನವರಿ 16ರಂದು ಸೇವಾರ್ಥ ಗರುಡೋತ್ಸವ ರಾತ್ರಿ ರಂಗ ಮಂಟಪಪೋತ್ಸವ ಶಯನೋತ್ಸವ, 17ರಂದು ಸಂಧಾನಸೇವೆ, ಅವಭೃತಮಂಗಳಸ್ನಾನ ಧ್ವಜಾರೋಹಣ ನೆರವೇರಲಿದೆ ಎಂದು ಪ್ರಕಟಣೆ ತಿಳಿಸಿದೆ.

## ಅಕ್ರಮವಾಗಿ ಗಾಂಜಾ ಸಾಗಾಣಿಕೆ : ಆರೋಪಿ ಬಂಧನ

**ಚಾಮರಾಜನಗರ:** ಜಿಲ್ಲೆಯಲ್ಲಿ ಅಕ್ರಮವಾಗಿ ಗಾಂಜಾ ಸಾಗಾಣಿಕೆ ಮಾರಾಟ ಮಾಡುತ್ತಿರುವ ಬಗ್ಗೆ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳುವಂತೆ ಪೊಲೀಸ್ ವರಿಷ್ಠಾಧಿಕಾರಿಗಳು ನಿರ್ದೇಶನ ನೀಡಿದ್ದು, ಈ ಮೇರೆಗೆ ಚಾಮರಾಜನಗರ ಸಿ.ಇ.ಎನ್. ಅಪರಾಧ ಪೊಲೀಸ್ ಠಾಣೆಯ ಪೊಲೀಸ್ ಇನ್ಸ್ಪೆಕ್ಟರ್ ಎಸ್.ಎಲ್.ಸಾಗರ್ ರವರಿಗೆ ಕೊಳ್ಳೇಗಾಲದ ಕಡೆಯಿಂದ ಗುಂಡ್ಲುಪೇಟೆ ಕಡೆಗೆ ತನ್ವೀರ್ಪಾಷ ಎಂಬುವರು ಟಿ.ಎನ್-56, ಡಿ-6806 ಗ್ರೇ ಕಲರ್ ಹೋಂಡಾಶೈನ್ ಮೋಟಾರ್ ಸೈಕಲ್ನಲ್ಲಿ ಅಕ್ರಮವಾಗಿ ಒಣಗಾಂಜಾವನ್ನು ಸಾಗಾಣಿಕೆ ಮಾಡುತ್ತಿದ್ದಾರೆಂದು ಭಾತ್ಮೀದಾರರಿಂದ ಮಾಹಿತಿ ದೊರೆತ ಮೇರೆಗೆ ಮಾನ್ಯ ಡಿವೈಎಸ್ಪಿ ರವರಾದ ಎಸ್.ಎಂ.ಪವನ್ ಕುಮಾರ್ರವರ ಮಾರ್ಗದರ್ಶನದಂತೆ ಶ್ರೀ ಸಾಗರ್.ಎಸ್.ಎಲ್ ರವರು ತಮ್ಮ ಸಿಬ್ಬಂದಿಯವರ ಜೊತೆ ಕಾರ್ಯಾಚರಣೆ ಕೈಗೊಂಡು ಆರೋಪಿಯಾದ ತನ್ವೀರ್ಪಾಷ ಎಂಬುವವರನ್ನು ಚಾಮರಾಜನಗರ ಪಟ್ಟಣದ ಮೂಡ್ಲುಪುರ ಬೈಪಾಸ್ ರಸ್ತೆಯಲ್ಲಿ ದಸ್ತಗಿರಿ ಮಾಡಿ ಆರೋಪಿಯಿಂದ 60,000/- ರೂ ಮೌಲ್ಯದ 990 ಗ್ರಾಂ ತೂಕದ ಒಣಗಾಂಜಾವನ್ನು ಹಾಗೂ ಸುಮಾರು 45,000/- ರೂ ಮೌಲ್ಯದ ಮೋಟಾರ್ ಸೈಕಲ್ ಅನ್ನು ಅಮಾನತ್ತುಪಡಿಸಿಕೊಂಡು ಠಾಣಾ ಮೊ.ನಂ. 04/2025 ಕಲಂ:20(ಥ)()(೦) ಓಆಕಖ ೦ಥಿಣ 1985 ರೀತ್ಯಾ ಕೇಸು ದಾಖಲಿಸಿ ಆರೋಪಿಯನ್ನು ನ್ಯಾಯಾಂಗ ಬಂಧನಕ್ಕೆ ಒಪ್ಪಿಸಿರುತ್ತಾರೆ. ಈ ಕಾರ್ಯಾಚರಣೆಯಲ್ಲಿ ಭಾಗವಹಿಸಿದ ಸಿ.ಇ.ಎನ್ ಅಪರಾಧ ಪೊಲೀಸ್ ಠಾಣೆಯ ಪೊಲೀಸ್ ಅಧಿಕಾರಿ ಮತ್ತು ಸಿಬ್ಬಂದಿಯವರಾದ ಶ್ರೀ ಎಂ.ಎಸ್.ಪವನ್ ಕುಮಾರ್ ಡಿವೈಎಸ್ಪಿ, ಶ್ರೀ ಎಸ್.ಎಲ್.ಸಾಗರ್ ಪಿ.ಐ, ಹೆಚ್.ಸಿ-200 ಬಂಗಾರು, ಹೆಚ್.ಸಿ-214 ಮಹದೇವಸ್ವಾಮಿ, ಹೆಚ್.ಸಿ-278 ಬಿ.ಸುರೇಶ್, ಹೆಚ್.ಸಿ-54 ಮಹೇಶ್.ಎಂ, ಪಿಸಿ-26 ಮಂಜುನಾಥ್, ಪಿಸಿ-562 ಜಗದೀಶ್, ಪಿಸಿ-477 ಮಹೇಶ್, ಪಿಸಿ-320 ಮೋಹನ್, ಪಿಸಿ-328 ಗುರುಕಿರಣ್, ಮ.ಪಿ.ಸಿ-237 ರಮ್ಯ, ಪಿಸಿ-199 ಭೀಮಪ್ಪ ಇಂಡಿ ಹಾಗೂ ಚಾಲಕರಾದ ಎಪಿಸಿ-101 ಮಲ್ಲೇಶ್ಕುಮಾರ್ ರವರ ಕಾರ್ಯವನ್ನು ಮಾನ್ಯ ಪೊಲೀಸ್ ಅಧೀಕ್ಷಕರು ಶ್ಲಾಘಿಸಿದ್ದಾರೆ.

## ಚಿಕ್ಕಲ್ಲೂರು ಜಾತ್ರೆ : ಸೆಕ್ಟರ್ ಅಧಿಕಾರಿಗಳನ್ನು ನಿಯೋಜಿಸಿ ಡಿಸಿ ಆದೇಶ

**ಚಾಮರಾಜನಗರ:** ಕೊಳ್ಳೇಗಾಲ ತಾಲೂಕಿನ ಶ್ರೀ ಕ್ಷೇತ್ರ ಚಿಕ್ಕಲ್ಲೂರು ಘನನೀಲ ಸಿದ್ದಾಪ್ಪಾಜಿಯವರ ಜಾತ್ರಾ ಮಹೋತ್ಸವು ಜನವರಿ 13 ರಿಂದ 17ರವರೆಗೆ ನಡೆಯಲಿದ್ದು, ಪ್ರಾಣಿ ಬಲಿ ನಿಷೇಧದ ಬಗ್ಗೆ ಸಾರ್ವಜನಿಕರಿಗೆ ತಿಳಿವಳಿಕೆ ನೀಡಿ ಕ್ರಮ ಕೈಗೊಳ್ಳುವ ಸಮಯದಲ್ಲಿ ಕಾನೂನು ಮತ್ತು ಸುವ್ಯವಸ್ಥೆಗೆ ಧಕ್ಕೆಯಾಗುವ ಘಟನೆಗಳು ಸಂಭವಿಸಿದರೆ ತಕ್ಷಣ ಆದೇಶಗಳನ್ನು ಮಾಡುವ ಸಲುವಾಗಿ ವಿವಿಧ ಅಧಿಕಾರಿಗಳನ್ನು ಸೆಕ್ಟರ್ ಆಫೀಸರ್ಗಳನ್ನಾಗಿ ನಿಯೋಜಿಸಿ ಕರ್ತವ್ಯ ನಿರ್ವಹಿಸಲು ಜಿಲ್ಲಾಧಿಕಾರಿ ಶಿಲ್ಪಾ ನಾಗ್ ಅವರು ಆದೇಶ ಹೊರಡಿಸಿದ್ದಾರೆ.

ಕರ್ನಾಟಕ ಪ್ರಾಣಿ ಬಲಿ ಪ್ರತಿಬಂಧಕ ಅಧಿನಿಯಮ ಅನ್ವಯ ಚಿಕ್ಕಲ್ಲೂರು ಸಿದ್ದಾಪ್ಪಾಜಿರವರ ಜಾತ್ರಾ ಮಹೋತ್ಸವದಲ್ಲಿ ಜನವರಿ 13 ರಿಂದ 17ರ ಮಧ್ಯ ರಾತ್ರಿಯವರೆಗೆ ದೇವರ ಹೆಸರಿನಲ್ಲಿ ಯಾವುದೇ ರೀತಿಯ ಪ್ರಾಣಿಬಲಿ ನೀಡುವುದನ್ನು ಮತ್ತು ಮಾರಕಾಸ್ತ್ರಗಳನ್ನು ತರುವುದನ್ನು ತಡೆಗಟ್ಟಲು ಹಾಗೂ ಇದರೊಂದಿಗೆ ಹೈಕೋರ್ಟ್ ನಿರ್ದೇಶನದಂತೆ ಪ್ರಾಣಿಬಲಿಯನ್ನು ಸಂಪೂರ್ಣವಾಗಿ ತಡೆಗಟ್ಟುವ ನಿಟ್ಟಿನಲ್ಲಿ ಅಗತ್ಯ ಕ್ರಮ ಕೈಗೊಳ್ಳಲು, ಪ್ರಾಣಿಬಲಿ ನಿಷೇಧದ ಬಗ್ಗೆ ಸಾರ್ವಜನಿಕರಿಗೆ ತಿಳಿವಳಿಕೆ ನೀಡಿ ಕ್ರಮ ಕೈಗೊಳ್ಳುವ ಸಮಯದಲ್ಲಿ ಕಾನೂನು ಮತ್ತು ಸುವ್ಯವಸ್ಥೆಗೆ ಧಕ್ಕೆಯಾಗುವ ಘಟನೆಗಳು ಸಂಭವಿಸಿದರೆ ತಕ್ಷಣ ಆದೇಶಗಳನ್ನು ಮಾಡುವ ಸಲುವಾಗಿ ಕೊಳ್ಳೇಗಾಲ ಉಪವಿಭಾಗಾಧಿಕಾರಿಗಳು, ತಹಶೀಲ್ದಾರ್ ಅವರೊಂದಿಗೆ ಇನ್ನಿತರ ಅಧಿಕಾರಿಗಳನ್ನು ಹೆಚ್ಚುವರಿ ಸೆಕ್ಟರ್ ಆಫೀಸರ್ಗಳನ್ನಾಗಿ ವಿವಿಧ ಪ್ರದೇಶ ಸ್ಥಳಗಳಿಗೆ ನಿಯೋಜಿಸಿ ಕರ್ತವ್ಯ ನಿರ್ವಹಿಸಲು ಜಿಲ್ಲಾಧಿಕಾರಿಯವರು ಆದೇಶಿಸಿದ್ದಾರೆ.

ಚಿಕ್ಕಲ್ಲೂರು ಹೊಸಮಠದ ತೆರೆದ ಸುತ್ತಮುತ್ತಲಿನ ಪ್ರದೇಶದಲ್ಲಿ ಮೊದಲನೇ ಪಾಳಿಯಲ್ಲಿ ಬೆಳಿಗ್ಗೆ 8 ರಿಂದ ಮಧ್ಯಾಹ್ನ 2 ಗಂಟೆಯವರೆಗೆ ತೋಟಗಾರಿಕೆ ಇಲಾಖೆಯ ಉಪ ನಿರ್ದೇಶಕರಾದ ಶಿವಪ್ರಸಾದ್ (ಮೊ.ಸಂ 9448999221), ಎರಡನೇ ಪಾಳಿಯಲ್ಲಿ ಮಧ್ಯಾಹ್ನ 2 ರಿಂದ ರಾತ್ರಿ 10 ಗಂಟೆಯವರೆಗೆ ಸಮಾಜ ಕಲ್ಯಾಣ ಇಲಾಖೆ ಉಪ ನಿರ್ದೇಶಕರಾದ ಮುನಿರಾಜು (ಮೊ.ಸಂ 8904089006), ಮೂರನೇ ಪಾಳಿಯಲ್ಲಿ ರಾತ್ರಿ 10 ರಿಂದ ಬೆಳಿಗ್ಗೆ 8 ಗಂಟೆಯವರೆಗೆ ಕೊಳ್ಳೇಗಾಲದ ಪಂಚಾಯತ್ ರಾಜ್ ಎಂಜಿನಿಯರಿಂಗ್ ವಿಭಾಗದ ಸಹಾಯಕ ಕಾರ್ಯಪಾಲಕ ಅಭಿಯಂತರರಾದ ಶಿವಪ್ರಕಾಶ್ (ಮೊ.ಸಂ 9632819249) ಸೆಕ್ಟರ್ ಅಧಿಕಾರಿಯಾಗಿ ಕಾರ್ಯನಿರ್ವಹಿಸಲಿದ್ದಾರೆ.

ಚಿಕ್ಕಲ್ಲೂರು ಹಳೆಮಠದ ಸುತ್ತಮುತ್ತಲಿನ ಪ್ರದೇಶದಲ್ಲಿ ಮೊದಲನೇ ಪಾಳಿಯಲ್ಲಿ ಬೆಳಿಗ್ಗೆ 8 ರಿಂದ ಮಧ್ಯಾಹ್ನ 2 ಗಂಟೆಯವರೆಗೆ ಮೀನುಗಾರಿಕೆ ಇಲಾಖೆ ಉಪ ನಿರ್ದೇಶಕರಾದ ಮಂಜೇಶ್ವರ್ (ಮೊ.ಸಂ 9535733953), ಎರಡನೇ ಪಾಳಿಯಲ್ಲಿ ಮಧ್ಯಾಹ್ನ 2 ರಿಂದ ರಾತ್ರಿ 10 ಗಂಟೆಯವರೆಗೆ ಶ್ರೀ ಮಹರ್ಷಿ ವಾಲ್ಮೀಕಿ ಅಭಿವೃದ್ಧಿ ನಿಗಮದ, ಜಿಲ್ಲಾ ವ್ಯವಸ್ಥಾಪಕರಾದ ವಿಜಯ್ ಕುಮಾರ್ (ಮೊ.ಸಂ 9632034524), ಮೂರನೇ ಪಾಳಿಯಲ್ಲಿ ರಾತ್ರಿ 10 ರಿಂದ ಬೆಳಿಗ್ಗೆ 8 ಗಂಟೆಯವರೆಗೆ ಕೊಳ್ಳೇಗಾಲದ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗದ ಸಹಾಯಕ ಕಾರ್ಯಪಾಲಕ ಅಭಿಯಂತರರಾದ ಸುಧನ್ವ (ಮೊ.ಸಂ 9590961961) ಸೆಕ್ಟರ್ ಅಧಿಕಾರಿಯಾಗಿ ಕಾರ್ಯನಿರ್ವಹಿಸಲಿದ್ದಾರೆ.

ಚಿಕ್ಕಲ್ಲೂರು ಸಿದ್ದಾಪ್ಪಾಜಿ ದೇವಸ್ಥಾನದ ಸುತ್ತಮುತ್ತಲಿನ ಪ್ರದೇಶದಲ್ಲಿ ಮೊದಲನೇ ಪಾಳಿಯಲ್ಲಿ ಬೆಳಿಗ್ಗೆ 8 ರಿಂದ ಮಧ್ಯಾಹ್ನ 2 ಗಂಟೆಯವರೆಗೆ ಸಾರ್ವಜನಿಕ ಶಿಕ್ಷಣ ಇಲಾಖೆ ಉಪ ನಿರ್ದೇಶಕರಾದ ರಾಮಚಂದ್ರ, ರಾಜೇ ಅರಸ್ (ಮೊ.ಸಂ 9448999332), ಎರಡನೇ ಪಾಳಿಯಲ್ಲಿ ಮಧ್ಯಾಹ್ನ 2 ರಿಂದ ರಾತ್ರಿ 10 ಗಂಟೆಯವರೆಗೆ ಚಾಮರಾಜನಗರ ನಗರಸಭೆಯ ಪೌರಾಯುಕ್ತರು ರಾಮದಾಸ್ (ಮೊ.ಸಂ 7975996700), ಮೂರನೇ ಪಾಳಿಯಲ್ಲಿ ರಾತ್ರಿ 10 ರಿಂದ ಬೆಳಿಗ್ಗೆ 8 ಗಂಟೆಯವರೆಗೆ ಕೊಳ್ಳೇಗಾಲದ ಕೃಷಿ ಇಲಾಖೆ ಸಹಾಯಕ ಕೃಷಿ ನಿರ್ದೇಶಕರಾದ ರಂಗಸ್ವಾಮಿ (ಮೊ.ಸಂ 8277930783, 9035590436) ಸೆಕ್ಟರ್ ಅಧಿಕಾರಿಯಾಗಿ ಕಾರ್ಯನಿರ್ವಹಿಸಲಿದ್ದಾರೆ.

ರಾಚಪ್ಪಾಜಿ ನಗರದ ಸುತ್ತಮುತ್ತಲ ಪ್ರದೇಶದಲ್ಲಿ ಮೊದಲನೇ ಪಾಳಿಯಲ್ಲಿ ಬೆಳಿಗ್ಗೆ 8 ರಿಂದ ಮಧ್ಯಾಹ್ನ 2 ಗಂಟೆಯವರೆಗೆ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಉಪನಿರ್ದೇಶಕರಾದ ಮಂಜುನಾಥ್, (ಮೊ.ಸಂ 7259374868) ಮಧ್ಯಾಹ್ನ 2 ರಿಂದ ರಾತ್ರಿ 10 ಗಂಟೆಯವರೆಗೆ ಎರಡನೇ ಪಾಳಿಯಲ್ಲಿ ಕೊಳ್ಳೇಗಾಲ ನಗರಸಭೆ ಪೌರಾಯುಕ್ತರಾದ ರಮೇಶ್ (ಮೊ.ಸಂ 9483306166) ರಾತ್ರಿ 10 ರಿಂದ ಬೆಳಿಗ್ಗೆ 8 ಗಂಟೆಯವರೆಗೆ ಮೂರನೇ ಪಾಳಿಯಲ್ಲಿ ಹನೂರು ತಾಲೂಕು ಮಲೆ ಮಹದೇಶ್ವರ ಬೆಟ್ಟದ ಲೋಕೋಪಯೋಗಿ ಇಲಾಖೆಯ ಸಹಾಯಕ ಕಾರ್ಯಪಾಲಕ ಅಭಿಯಂತರರಾದ ಪಿ. ಸಿನ್ನಣ್ಣನ್ (ಮೊ.ಸಂ 8277313954) ಸೆಕ್ಟರ್ ಅಧಿಕಾರಿಯಾಗಿ ಕಾರ್ಯನಿರ್ವಹಿಸಲಿದ್ದಾರೆ.

ಬಂಡಳ್ಳಿ ರಸ್ತೆ ಮಾರ್ಗದ ಸುತ್ತ ಮುತ್ತಲ ಪ್ರದೇಶದಲ್ಲಿ ಬೆಳಿಗ್ಗೆ 8 ರಿಂದ ಮಧ್ಯಾಹ್ನ 2 ಗಂಟೆಯವರೆಗೆ ಮೊದಲನೇ ಪಾಳಿಯಲ್ಲಿ ಪ್ರವಾಸೋದ್ಯಮ ಇಲಾಖೆಯ ಸಹಾಯಕ ನಿರ್ದೇಶಕರಾದ ತಮ್ಮಣ್ಣಗೌಡ ಪಾಟೀಲ್ (ಮೊ.ಸಂ 8826045698), ಮಧ್ಯಾಹ್ನ 2 ರಿಂದ ರಾತ್ರಿ 10 ಗಂಟೆಯವರೆಗೆ ಎರಡನೇ ಪಾಳಿಯಲ್ಲಿ ಕೆ.ಆರ್.ಐ.ಡಿ.ಎಲ್ ಕಾರ್ಯಪಾಲಕ ಅಭಿಯಂತರರಾದ ಚಿಕ್ಕಲಿಂಗಯ್ಯ (ಮೊ.ಸಂ 9108252502), ರಾತ್ರಿ 10 ರಿಂದ ಬೆಳಿಗ್ಗೆ 8 ಗಂಟೆಯವರೆಗೆ ಮೂರನೇ ಪಾಳಿಯಲ್ಲಿ ಕೊಳ್ಳೇಗಾಲದ ಲೋಕೋಪಯೋಗಿ ಇಲಾಖೆಯ ಸಹಾಯಕ ಕಾರ್ಯಪಾಲಕ ಅಭಿಯಂತರರಾದ ಪುರುಷೋತ್ತಮ (ಮೊ.ಸಂ 9731443285) ಸೆಕ್ಟರ್ ಅಧಿಕಾರಿಯಾಗಿ ಕಾರ್ಯನಿರ್ವಹಿಸಲಿದ್ದಾರೆ ಎಂದು ಜಿಲ್ಲಾಧಿಕಾರಿ ಶಿಲ್ಪಾ ನಾಗ್ ಅವರು ಆದೇಶದಲ್ಲಿ ತಿಳಿಸಿದ್ದಾರೆ.

# ಗ್ಯಾರಂಟಿ ಯಶಸ್ಸಿಗೆ ಸಹಕಾರ ಅಗತ್ಯ

## ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಅಧ್ಯಕ್ಷ ನಿತಿನ್ ವೆಂಕಟೇಶ್ ಹೇಳಿಕೆ

**ಪಿರಿಯಾಪಟ್ಟಣ:** ರಾಜ್ಯ ಸರ್ಕಾರದ ಪಂಚ ಗ್ಯಾರಂಟಿ ಯೋಜನೆಗಳು ಶೇ.98ರಷ್ಟು ಫಲಾನುಭವಿಗಳಿಗೆ ತಲುಪುತ್ತಿದ್ದು ಉಳಿದವರಿಗೂ ಅವುಗಳ ಉಪಯೋಗ ಕಲ್ಪಿಸುವ ನಿಟ್ಟಿನಲ್ಲಿ ಕಾರ್ಯಯೋಜನೆ ರೂಪಿಸಲಾಗಿದೆ ಎಂದು ತಾಲ್ಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಅಧ್ಯಕ್ಷ ನಿತಿನ್ ವೆಂಕಟೇಶ್ ತಿಳಿಸಿದರು.



ಪಟ್ಟಣದ ತಾಲೂಕು ಪಂಚಾಯಿತಿ ಸಭಾಂಗಣದಲ್ಲಿ ನಡೆದ ಗ್ಯಾರಂಟಿ ಯೋಜನೆಯ ಅನುಷ್ಠಾನ ಸಮಿತಿ ಸಭೆಯ ಪ್ರಗತಿ ಪರಿಶೀಲನಾ ಸಭೆಯಲ್ಲಿ ಮಾತನಾಡಿದರು.

ಅನ್ನಭಾಗ್ಯ ಯೋಜನೆಯಡಿ ಪಿರಿಯಾಪಟ್ಟಣ ನಗರದಲ್ಲಿ 15314, ಗ್ರಾಮೀಣಾ ಭಾಗದಲ್ಲಿ 203168 ಸೇರಿ ಒಟ್ಟು 218482 ಫಲಾನುಭವಿಗಳಿದ್ದು, ನ್ಯಾಯ ಬೆಲೆ ಅಂಗಡಿಗಳಲ್ಲಿ ಪಡಿತರ ವಿತರಣೆ ಸಂಬಂಧ ಯಾವುದೇ ದೂರುಗಳು ಬಾರದ ರೀತಿಯಲ್ಲಿ ಅಧಿಕಾರಿಗಳು ಎಚ್ಚರಿಕೆ ವಹಿಸಬೇಕು ಈ ಬಗ್ಗೆ ಸಮಿತಿ ಸದಸ್ಯರು ಆಗ್ಗಾಗ್ಗೆ ನ್ಯಾಯಬೆಲೆ ಅಂಗಡಿಗಳಿಗೆ ಭೇಟಿ ನೀಡಿ ಫಲಾನುಭವಿಗಳಿಂದ ಮಾಹಿತಿ ಪಡೆಯಬೇಕು. ಅದೇ ರೀತಿ ಗೃಹಲಕ್ಷ್ಮೀ ಯೋಜನೆಯಡಿ ಒಟ್ಟು 65329 ಫಲಾನುಭವಿಗಳಿದ್ದು ಈಗಾಗಲೇ ಅವರಿಗೆ ಡಿಬಿಟಿ ಮೂಲಕ ನೇರ ನಗದು ವರ್ಗಾವಣೆ ಮಾಡಲಾಗುತ್ತಿದೆ. ಗೃಹಜ್ಯೋತಿ ಯೋಜನೆಯಡಿ ಪಿರಿಯಾಪಟ್ಟಣ ಹಾಗೂ ಬೆಟ್ಟದಪುರ ಚೆಸ್ಕಾಂ ವಿಭಾಗದಲ್ಲಿ 35156 ಕುಟುಂಬಗಳು ಉಚಿತ ಕರೆಂಟ್ ಸಂಪರ್ಕ ಪಡೆದಿವೆ, ಶಕ್ತಿ ಯೋಜನೆಯಡಿ 2023 ಜೂನ್ 11 ರಿಂದ ಇಲ್ಲಿಯವರೆಗೆ 578068 ಮಹಿಳಾ ಪ್ರಯಾಣಿಕರು ಅನುಕೂಲ ಪಡೆದುಕೊಂಡಿದ್ದಾರೆ. ಅದೇ ರೀತಿ ಯುವದಿಧಿ ಯೋಜನೆಯಡಿ ಪಿರಿಯಾಪಟ್ಟಣ ತಾಲೂಕಿನಲ್ಲಿ 2023ರ ಡಿಸೆಂಬರ್ 23 ರಿಂದ ಇಲ್ಲಿಯವರೆಗೆ 640 ನಿರುದ್ಯೋಗಿ ಯುವಕರು ನೊಂದಣಿ ಮಾಡಿಸಿಕೊಂಡಿದ್ದು ಎಲ್ಲಾ ನಿರುದ್ಯೋಗಿ ಯುವಕ ಯುವತಿಯರಿಗೆ ಅದರ ಸೌಲಭ್ಯಗಳನ್ನು ನೀಡಲಾಗುತ್ತಿದ್ದು, ಸರ್ಕಾರ ಪಂಚ ಗ್ಯಾರಂಟಿ ಯೋಜನೆಗಳನಗನು ಅರ್ಹರ ಮನೆ ಬಾಗಿಲಿಗೆ ತಲುಪಿಸಲು ಶತಪ್ರಯತ್ನ ಮಾಡುತ್ತಿದ್ದು, ಈ ಯೋಜನೆಗಳು ಫಲಪ್ರದವಾಗಲು ಸಮಿತಿಯ ಸದಸ್ಯರು ಹಾಗೂ ಅಧಿಕಾರಿಗಳು ಮತ್ತು ಸಾರ್ವಜನಿಕರರು ಕೈಜೋಡಿಸಬೇಕು ಒಂದು ವೇಳೆ ಯೋಜನೆಗಳು ಅರ್ಹರಿಗೆ ತಲುಪದಿದ್ದರೆ ಅದಕ್ಕೆ ಸಂಬಂಧಿದ ಅಧಿಕಾರಗಳನ್ನೇ ನೇರಾ ಹೊಣೆಗಾರರನ್ನಾಗಿ ಮಾಡಲಾಗುತ್ತದೆ ಎಂದು ಎಚ್ಚರಿಕೆ ನೀಡಿದರು.

ಸಭೆಯಲ್ಲಿ ಸದಸ್ಯರು ಮಾತನಾಡಿ ಉಚಿತ ವಿದ್ಯುತ್ ಸರಬರಾಜು ಮಾಡಲಾಗುತ್ತಿದ್ದರೂ ಗ್ರಾಮೀಣಾ ಭಾಗದಲ್ಲಿ ವಿದ್ಯುತ್ ಕಡಿತ ವಿಪರೀತವಾಗುತ್ತಿದೆ ಆದ್ದರಿಂದ ಚೆಸ್ಕಾಂ ಇಲಾಖೆಯ ಅಸಮರ್ಪಕ ಸೇವೆಯ ಬಗೆಯೂ ಗ್ಯಾರಂಟಿ ಸಮಿತಿಗೆ ಹಲವು ದೂರುಗಳು ಬಂದಿದ್ದು ಮುಂದೆ ಸಮರ್ಪಕ ಸೇವೆ ನೀಡಿ ಗ್ರಾಮೀಣಾ ಭಾಗಕ್ಕೆ ಹೆಚ್ಚು ಗಮನ ಹರಿಸಬೇಕು, ಶಕ್ತಿ ಯೋಜನೆಯಡಿ ಸಾರಿಗೆ ಬಸ್ಸುಗಳಲ್ಲಿ ಮಹಿಳೆಯರು ಉಚಿತವಾಗಿ ಪ್ರಯಾಣ ಮಾಡುತ್ತಾರೆ ಎಂಬ ಮನೋಭಾವನೆಯನ್ನು ಚಾಲಕರು ಮತ್ತು ನಿರ್ವಹಕರು ಬಿಟ್ಟು ಅವರಿಗೆ ಉತ್ತಮ ಸೇವೆ ನೀಡಬೇಕು ಅದರೊಂದಿಗೆ ಆಧಾರ್ ಕಾರ್ಡ್ ಮರೆತು ಬಂದು ಮೊಬೈಲ್ಗಟಳಲ್ಲಿ ಪೋಟೋ ತೋರಿಸಿದರೆ ಟಿಕೇಟ್ ಹರಿದು ಪ್ರಯಾಣಕ್ಕೆ ಸಹಾಯ ಮಾಡದಿದ್ದಲ್ಲಿ ಅಂತಹವರ ವಿರುದ್ಧ ಸರ್ಕಾರಕ್ಕೆ ದೂರು ನೀಡಲಾಗುತ್ತಿದೆ. ಗೃಹ ಲಕ್ಷ್ಮೀ ಯೋಜನೆಯಡಿ ಸರ್ಕಾರದ ವತಿಯಿಂದ ನೀಡುತ್ತಿರುವ 2 ಸಾವಿರ ಹಣ ತಲುಪದಿದ್ದವರನ್ನು ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯವರು ಗುರುತಿಸಿ ಅವರ ಮನೆ ಬಾಗಿಲಿಗೆ ತೆರಳಿ ದಾಖಲೆ ಪರಿಶೀಲಿಸಿ ಹಣ ಬರುವಂತೆ ನೋಡಿಕೊಂಡು ಈ ಸಂಬಂಥ ಯಾವುದೇ ಸಮಸ್ಯೆಗಳಿದ್ದರೂ ನಮ್ಮ ಗಮನಕ್ಕೆ ತರಬೇಕು ಹಾಗೂ ಕಛೇರಿಗೆ ಬರುವವರೊಂದಿಗೆ ಸೌಜನ್ಯದಿಂದ ವರ್ತಿಸಬೇಕು, ತಾಲೂಕಿನಲ್ಲಿ ಉಳಿದ ನಿರುದ್ಯೋಗಿ ಪದವಿಧರರು ಯೋಜನೆಯ ಅನುಕೂಲ ದೊರೆಯಲು ಈ ಬಗ್ಗೆ ಹೆಚ್ಚು ಪ್ರಚಾರ ಮಾಡಬೇಕು ಎಂದರು. ಈ ಸಂದರ್ಭದಲ್ಲಿ ಗ್ಯಾರಂಟಿ ಅನುಷ್ಠಾನ ಸಮಿತಿ ಕಾರ್ಯದರ್ಶಿ ಇಓ ಸುನೀಲ್ ಕುಮಾರ್, ಸದಸ್ಯರಾದ ಆಯಿತನಹಳ್ಳಿ ಮಹದೇವ್, ಬೆಟ್ಟದಪುರ ರವಿ ಬಿ.ವಿ, ಕೆ.ಆರ್.ನಿರೂಪ, ಬೆಟ್ಟದತುಂಗ ಕೃಷ್ಣೇಗೌಡ, ಧನರಾಜ್, ಹಬಟೂರು ರಘು, ನವಿಲೂರು ಮಹದೇವ್, ಪುನಾಡಹಳ್ಳಿ ರವಿಂದ್ರ, ಆರ್.ಎಸ್.ವಿಜಯ್ ಕುಮಾರ್, ರವಿ ಚಪ್ಪರದಹಳ್ಳಿ, ಸಿಡಿಪಿಒ ಮಮತಾ, ಕೆಎಸ್ಆರ್ಟಿಸಿ ವ್ಯವಸ್ಥಾಪಕ ದರ್ಶನ್ ರಾಮಚಂದ್ರ, ಆಹಾರ ಇಲಾಖೆ ಶಿರಸ್ತೇದಾರ್ ಸಣ್ಣಸ್ವಾಮಿ, ಚೆಸ್ಕಾಂ ಎಇಇಗಳಾದ ಗುರು ಬಸವರಾಜು, ಲಕ್ಷ್ಮೀಶ್, ಜಿಲ್ಲಾ ಉದ್ಯೋಗ ವಿನಿಮಯ ಸಹಾಯಕ ನಿರ್ದೇಶಕಿ ರಾಣಿ, ತಾಪಂ ಅಧಿಕಾರಿ ವಿಶ್ವನಾಥ್ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

# ಪೌರಾಣಿಕ ನಾಟಕಗಳು ಸಂಸ್ಕೃತಿಯ ಪ್ರತಿಬಿಂಬ

**ಪಿರಿಯಾಪಟ್ಟಣ :** ಪೌರಾಣಿಕ ನಾಟಕಗಳು ಸಂಸ್ಕೃತಿಯ ಪ್ರತಿಬಿಂಬವಾಗಿವೆ. ಜನಸಾಮಾನ್ಯರು ನಾಟಕದಲ್ಲಿ ಬರುವ ಉತ್ತಮ ಪಾತ್ರಗಳ ಆದರ್ಶಗಳನ್ನು ಮೈಗೂಡಿಸಿಕೊಂಡರೆ ಉತ್ತಮ ಎಂದು ಮುಖಂಡ ಯಜಮಾನ್ ಜಯಶಂಕರ್ ತಿಳಿಸಿದರು.



ತಾಲ್ಲೂಕಿನ ಹಿಟ್ನೆಹೆಬ್ಬಾಗಿಲು ಗ್ರಾಮದಲ್ಲಿ ಶ್ರೀ ದೊಡ್ಡಮ್ಮತಾಯಿ ಕೃಪಾಪೋಷಿತ ನಾಟಕ ಮಂಡಳಿ ವತಿಯಿಂದ ಆಯೋಜಿಸಿದ್ದ ಕುರುಕ್ಷೇತ್ರ ಅಥವಾ ಧರ್ಮರಾಜ್ಯ ಸ್ಥಾಪನೆ ಎಂಬ ಪೌರಾಣಿಕ ನಾಟಕದ ಸಭಾ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ರಾಮಾಯಣ ಹಾಗೂ ಮಹಾಭಾರತದ ವಸ್ತು ವಿಷಯಗಳನ್ನೊಳಗೊಂಡ ಪೌರಾಣಿಕ ನಾಟಕಗಳು ಉತ್ತಮ ಮೌಲ್ಯ, ಸಂಸ್ಕೃತಿಯ ಪ್ರತಿಬಿಂಬವಾಗಿವೆ. ಈ ನಾಟಕದಲ್ಲಿನ ಪಾತ್ರಗಳು ಆದರ್ಶಮಯವಾಗಿರುತ್ತವೆ. ಆದ್ದರಿಂದ ಇಂದಿನ ಯುವ ಪೀಳಿಗೆ 'ಕಲೆ ಮತ್ತು ಕಲಾವಿದರನ್ನು ಗೌರವಿಸಿ ಪ್ರೋತ್ಸಾಹಿಸುವ ಮೂಲಕ ನಮ್ಮ ಸಂಸ್ಕೃತಿ ಬೆಳೆಸಬೇಕು. ಕಲೆಗೆ ಜಾತಿ, ಧರ್ಮದ ಹಂಗಿಲ್ಲ. ಉತ್ತಮ ಕಲಾವಿದರನ್ನು ಸಮಾಜ ಜಾತಿಯ ಚೌಕಟ್ಟು ಮೀರಿ ಗೌರವಿಸುತ್ತದೆ. ಧಾರಾವಾಹಿಗಳ ನಡುವೆಯೂ ಗ್ರಾಮೀಣ ಪ್ರದೇಶಗಳಲ್ಲಿ ಪೌರಾಣಿಕ ನಾಟಕಗಳು ಇಂದಿಗೂ ಜನಾಕರ್ಷಣೆ ಉಳಿಸಿಕೊಂಡಿವೆ. ಕಲಾ ಪ್ರದರ್ಶನಕ್ಕೆ ಸರ್ಕಾರ ಹೆಚ್ಚಿನ ನೆರವು ನೀಡಬೇಕು ಎಂದರು.

ಕೆಪಿಸಿಸಿ ಸದಸ್ಯ ಅನಿಲ್ ಕುಮಾರ್ ಮಾತನಾಡಿ ಸಿನಿಮಾ ಮತ್ತು ಧಾರವಾಹಿಗಳಲ್ಲಿ ಕ್ರೌರ್ಯ ಮತ್ತು ಮನೆಮುರುಕತನ ವಿಜೃಂಭಿಸುತ್ತಿದೆ. ಪೌರಾಣಿಕ ನಾಟಕಗಳು ಸತ್ಯ ಮತ್ತು ಧರ್ಮಕ್ಕೆ ಗೆಲುವು ಎನ್ನುವ ಬದುಕಿನ ಮೌಲ್ಯಗಳನ್ನು ಸಾರುತ್ತಿವೆ. ಇಂತಹ ನಾಟಕಗಳ ವೀಕ್ಷಣೆಯ ಮೂಲಕ ಅದೆಷ್ಟೋ ಕುಟುಂಬಗಳು ಇಂದಿಗೂ ಸಾಮರಸ್ಯದ ಜೀವನ ನಡೆಸುತ್ತಿದ್ದಾರೆ. ತಮ್ಮ ಬದುಕನ್ನು ರೂಪಿಸಿಕೊಂಡಿದ್ದಾರೆ. ಇಂದಿನ ಯುವಪೀಳಿಗೆ ನಾಟಕಗಳತ್ತ ಆಸಕ್ತಿ ಬೆಳೆಸಿಕೊಳ್ಳಬೇಕು, ಪೌರಾಣಿಕ ನಾಟಕಗಳು ಜೀವನದ ಪ್ರತಿಬಿಂಬವಾಗಿದ್ದು, ಜನಸಾಮಾನ್ಯರು ನಾಟಕದಲ್ಲಿ ಬರುವ ಉತ್ತಮ ಪಾತ್ರಧಾರಿಗಳ ಆದರ್ಶಗಳನ್ನು ಬದುಕಿನಲ್ಲಿ ಅಳವಡಿಸಿಕೊಳ್ಳುವ ಮೂಲಕ ಅಭಿವೃದ್ಧಿಯತ್ತ ಸಾಗಬೇಕು ಎಂದರು.

ಹಾಲು ಉತ್ಪಾದಕರ ಸಹಕಾರ ಸಂಘದ ಅಧ್ಯಕ್ಷ ವಿನೋದ್ ಕುಮಾರ್ ಮಾತನಾಡಿ ಸಮಾಜದಲ್ಲಿ ಹೆಚ್ಚಾಗುತ್ತಿರುವ ಆಧುನಿಕತೆಯಲ್ಲಿ ನಾಡಿನ ವೈಭವ ಮತ್ತು ಇತಿಹಾಸವನ್ನು ತಿಳಿಸುವಂತಹ ಕಲೆ, ಸಾಹಿತ್ಯ, ಸಂಸ್ಕೃತಿ, ಪರಂಪರೆ ಕಣ್ಮರೆಯಾಗುತ್ತಿದೆ. ಪೌರಾಣಿಕ ನಾಟಕಗಳು ನಮ್ಮ ಜೀವನದ ಪ್ರತಿಬಿಂಬವಾಗಿದ್ದು, ಜನಸಾಮಾನ್ಯರು ನಾಟಕದಲ್ಲಿ ಬರುವ ಉತ್ತಮವಾದ ಪಾತ್ರಧಾರಿಗಳ ಆದರ್ಶಗಳನ್ನು ಬದುಕಿನಲ್ಲಿ ಅಳವಡಿಸಿಕೊಳ್ಳಬೇಕು. ಪಾಶ್ಚಾತ್ಯ ಸಂಸ್ಕೃತಿಯ ಪ್ರಭಾವ ಹಾಗೂ ದೃಶ್ಯಮಾಧ್ಯಮಗಳ ಹಾವಳಿಯಿಂದಾಗಿ ಜಾನಪದ ಕಲೆಗಳು ದಿನದಿಂದ ದಿನಕ್ಕೆ ತೆರೆಮರೆಗೆ ಸರಿಯುತ್ತಿವೆ. ಪೌರಾಣಿಕ ಹಾಗೂ ಜಾನಪದದ ಕಣಜಗಳಾಗಿರುವ ಗ್ರಾಮೀಣ ಪ್ರದೇಶಗಳಲ್ಲಿನ ಕಲಾವಿದರನ್ನು ಗುರಿತಿಸುವ ಕೆಲಸವನ್ನು ಮಾಡಬೇಕಿದೆ. ಇಂತಹ ಕಲೆಗಳನ್ನು ಉಳಿಸಿ, ಪೋಷಣೆ ಮಾಡಿ ಮುಂದಿನ ಪೀಳಿಗೆಗೆ ಇವುಗಳ ಮಹತ್ವವನ್ನು ತಿಳಿಸಿಕೊಡುವ ಹೊಣೆಗಾರಿಕೆ ಪ್ರತಿಯೊಂದು ಸಂಘ ಸಂಸ್ಥೆಗಳು ಮಾಡಬೇಕು ಎಂದರು. ಗ್ರಾಪಂ ಅಧ್ಯಕ್ಷ ರವಿಕುಮಾರ್, ಮಾಜಿ ಅಧ್ಯಕ್ಷರಾದ ಮೀನಾಕ್ಷಮ್ಮ, ಕಾಮರಾಜ್, ಉಪಾಧ್ಯಕ್ಷೆ ವನಜಾಕ್ಷಿ ಕುಮಾರ್, ಸದಸ್ಯರಾದ ಎಚ್.ಸಿ.ಮಹದೇವ್, ಸೀಗೂರು ವಿಜಯಕುಮಾರ್, ಎಚ್.ಎಸ್.ಕುಮಾರ್, ಮಹದೇವ್, ಮಂಜುನಾಯ್ಕ, ಮುಖಂಡರಾದ ಹೆಚ್.ಬಿ.ಶಿವರುದ್ರ, ಶಿವಕುಮಾರ್, ಹೆಚ್.ಜೆ.ಪ್ರವೀಣ್, ಮಹೇಶ್ ನಾಯಕ್, ಈರೇಗೌಡ, ಅಮೃತೇಶ್, ಎಚ್.ಡಿ.ಮಹಾದೇವ್, ದಶರಥ, ಎಚ್.ಎಸ್.ಗೋವಿಂದ, ಜವರಪ್ಪ, ಎಚ್.ಎಸ್.ಪ್ರಸನ್ನ, ತಮ್ಮೇಗೌಡ, ಶಶಿಕುಮಾರ್, ಶ್ರೀನಿವಾಸ್, ರಾಮನಾಯಕ, ಕರಿಯಪ್ಪ ಲೋಕೇಶ್ ಉಪಸ್ಥಿತರಿದ್ದರು.

## ವೈಕುಂಠ ಏಕಾದಶಿ



**ಬನ್ನೂರು ಸಮೀಪವಿರುವ ಇತಿಹಾಸ ಪ್ರಸಿದ್ಧಿ ಕೊಡಗಹಳ್ಳಿ ಶ್ರೀ ಕೋದಂಡರಾಮ ಮಂದಿರದಲ್ಲಿ ವೈಕುಂಠ ಏಕಾದಶಿ ಅಂಗವಾಗಿ ಇಂದು ಶ್ರೀ ರಾಮದೇವರಿಗೆ ವಿಶೇಷ ಪೂಜೆ, ಅಭಿಷೇಕ, ಹೋಮ, ವಿಶೇಷ ಹೂವಿನ ಅಂಲಕಾರಏರ್ಪಡಿಸಲಾಗಿತ್ತು. ಬೆಳಿಗ್ಗೆಯಿಂದ ಕಲಾವಿದರಾದ ಗಾಯಕ ಕೆ.ಎಸ್.ರಾಜು, ತಬಲ ವಿದ್ವಾನ್ ಬಸವಣ್ಣ, ರಘು, ಹಿನ್ನೆಲೆಗಾಯಕರಾದ ತಾಂಡವಮೂರ್ತಿ, ಕೃಷ್ಣ, ಶ್ರೀಹರಿ ಭಾಗವಹಿಸಿ ಭಕ್ತಿಗೀತೆಗಳ ಗಾಯನ ನಡೆಸಿಕೊಟ್ಟರು.ಗ್ರಾಮದ ಪಟೇಲರಾದಯಜಮಾನ್ ಚಿಕ್ಕಜವರಪ್ಪ ರವರ ನೇತೃತ್ವದಲ್ಲಿ ಸಾವಿರಾರು ಭಕ್ತಾದಿಗಳಿಗೆ ಪ್ರಸಾದ ವಿನಿಯೋಗ ಏರ್ಪಡಿಸಲಾಗಿದೆ. ದೇವಸ್ಥಾನದ ಪ್ರಧಾನಅರ್ಚಕರಾದ ಶ್ರೀನಿವಾಸದೀಕ್ಷಿತ್, ಮಂಜುನಾಥ್, ಧನಂಜಯ, ಚನ್ನಪ್ಪ, ಸುಮಾ ಶ್ರೀನಿವಾಸ್ ಹಾಗೂ ಗ್ರಾಮಸ್ಥರು ಭಾಗವಹಿಸಿದ್ದರು.**

## ಸ್ವಾಭಿಮಾನಿ ಶರಣಮೇಳದಲ್ಲಿ ಐತಿಹಾಸಿಕ ನಿರ್ಣಯ : ಓಂಕಾರಶ್ರೀಗಳಿಂದ ಪೋಸ್ಟರ್ ಬಿಡುಗಡೆ

# ಕೂಡಲಸಂಗಮದಲ್ಲಿ ಶರಣರ ಶಕ್ತಿ ಪ್ರದರ್ಶನ

**ಮಂಡ್ಯ :** ವಿಶ್ವಗುರು ಬಸವಣ್ಣನವರ ಐಕ್ಯಕ್ಷೇತ್ರ ಕೂಡಲಸಂಗಮದಲ್ಲಿ ಪ್ರತಿ ವರ್ಷದಂತೆ ಜನವರಿ 12, 13 ಮತ್ತು 14 ರಂದು ಮೂರನೇ ವರ್ಷದ ಸ್ವಾಭಿಮಾನಿ ಶರಣ ಮೇಳವು ಭಕ್ತಿ ಸಂಭ್ರಮದಿಂದ ನಡೆಯಲಿದ್ದು ದೇಶದ ವಿವಿಧ ರಾಜ್ಯಗಳಿಂದ ಆಗಮಿಸುವ ಬಸವಾಭಿಮಾನಿಗಳು ಶರಣತತ್ವಗಳ ಜನಜಾಗೃತಿಗೆ ಹತ್ತು ಹಲವು ಐತಿಹಾಸಿಕ ನಿರ್ಣಯಕೈಗೊಳ್ಳಲಾಗುವುದು ಎಂದು ಲಿಂಗಪಟ್ಟಣದ ಕಲ್ಯಾಣಬಸವೇಶ್ವರ ಮಠದ ಪೀಠಾಧ್ಯಕ್ಷರಾದ ಶ್ರೀ ಓಂಕಾರೇಶ್ವರಸ್ವಾಮೀಜಿ ಹೇಳಿದರು.



ನಗರದಹಿಂದಿಭವನದಲ್ಲಿಸ್ವಾಭಿಮಾನಿಶರಣಮೇಳದ ಪೋಸ್ಟರ್ ಬಿಡುಗಡೆಗೊಳಿಸಿ ಮಾತನಾಡಿದ ಅವರು, ವಿಶ್ವಗುರು ಬಸವಣ್ಣನವರ ಜಯಂತಿಯನ್ನು ಕೇಂದ್ರ ಸರ್ಕಾರ ಆಚರಿಸಬೇಕು, ಲಿಂಗಾಯತ ಧರ್ಮಕ್ಕೆ ಸ್ವತಂತ್ರ ಧರ್ಮ ಮಾನ್ಯತೆ, ಕನ್ನಡರಾಜ್ಯೋತ್ಸವ ಆಚರಣೆಯಲ್ಲಿ ಗುರುಬಸವಣ್ಣನವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ಧ್ವಜಾರೋಹಣ ನೆರವೇರಿಸುವುದು ಸೇರಿದಂತೆ ಹತ್ತು ಹಲವು ಮಹತ್ತರ ನಿರ್ಣಯವನ್ನು ಶರಣಮೇಳದಲ್ಲಿ ಕೈಗೊಳ್ಳಲಾಗುವುದು ಎಂದು ಹೇಳಿದರು.

ಕಾಯಕಯೋಗಿ ಫೌಂಡೇಶನ್ ಅಧ್ಯಕ್ಷ ಎಂ.ಶಿವಕುಮಾರ್ ಮಾತನಾಡಿ, ಮಂಡ್ಯ, ಮೈಸೂರು, ಚಾಮರಾಜನಗರ ಸೇರಿದಂತೆ ಹಳೆಮೈಸೂರು ಭಾಗದಿಂದ ಸಹಸ್ರಾರು ಮಂದಿ ಬಸವಭಕ್ತರು ಶರಣಮೇಳದಲ್ಲಿ ಪಾಲ್ಗೊಳ್ಳಲಿದ್ದು ಸಚಿವ ಸತೀಶ ಜಾರಕಿಹೊಳಿ ಬಸವ ಜ್ಯೋತಿ ಬೆಳಗಿಸಿ ಜ.13ರಂದು ಬೆಳಿಗ್ಗೆ 11 ಗಂಟೆಗೆ ಶರಣ ಮೇಳ ಉದ್ಘಾಟಿಸಲಿದ್ದಾರೆ ಎಂದರು.

ಕಲಬುರಗಿಯ ಶರಣಬಸವೇಶ್ವರ ವಿದ್ಯಾವರ್ಧಕ ಸಂಘದ ಕಾರ್ಯದರ್ಶಿ ಬಸವರಾಜ ದೇಶಮುಖ ಬಸವ ಧ್ವಜಾರೋಹಣ ಮಾಡಲಿದ್ದಾರೆ. ಬಸವ ತತ್ವ ಚಿಂತಕರಾದ ಕಲಬುರ್ಗಿಯ ಶರಣೆ ಮೀನಾಕ್ಷಿ ಬಾಳಿ ಉಪನ್ಯಾಸ ನೀಡಲಿದ್ದಾರೆ ಎಂದು ತಿಳಿಸಿದರು. ಸಮ್ಮುಖವನ್ನು ಕ್ರಾಂತಿ ಗಂಗೋತ್ರಿ ಮಹಿಳಾಗಣದ ರಾಷ್ಟ್ರೀಯ ಅಧ್ಯಕ್ಷರಾದ ಪೂಜ್ಯ ಸದ್ಗುರು ಮಾತೆ ಸತ್ಯಾದೇವಿಯವರು ವಹಿಸಲಿದ್ದು, ಕುಣಿಗಲ್ ಅರೆಶಂಕರ ಮಠದ ಶ್ರೀ ಸಿದ್ಧರಾಮ ಚೈತನ್ಯ ಸ್ವಾಮಿಗಳು, ಚಿಕ್ಕಮಗಳೂರಿನ ವಿಶ್ವಧರ್ಮ ಪೀಠದ ಶ್ರೀ ಜಯಬಸವಾನಂದ ಸ್ವಾಮಿಗಳು, ಮಂಡ್ಯದ ಓಂಕಾರೇಶ್ವರ ಸ್ವಾಮಿಗಳು, ಚಳ್ಳಕೆರೆಯ ಗುರು ಸ್ವಾಮಿಗಳು, ಧಾರವಾಡದ ಶ್ರೀ ಅಬ್ದುಲ್ ರಜಾಕ ಖಾದ್ರಿ, ಸೂಫಿ ಸಂತರು ಸಾನಿಧ್ಯ ವಹಿಸಲಿದ್ದಾರೆ. ಚಿಕ್ಕಮಗಳೂರು ರಾಷ್ಟ್ರೀಯ ಬಸವದಳದ ಗಣನಾಯಕರಾದ ಬಾಣೂರು ಚನ್ನಪ್ಪ ಅಧ್ಯಕ್ಷತೆ ವಹಿಸಲಿದ್ದಾರೆ ಎಂದರು.

ಜ. 12 ರಂದು ಬೆಳಿಗ್ಗೆ 10-30 ಗಂಟೆಗೆ ಲಿಂಗಾಯತ ಧರ್ಮ ಮಹಾಸಭಾದ ರಾಷ್ಟ್ರೀಯ ಉಪಾಧ್ಯಕ್ಷ ಶಿವರಾಜ ಪಾಟೀಲ ಅತಿವಾಳ ಅವರ ಅಧ್ಯಕ್ಷತೆಯಲ್ಲಿ ಚಿಂತಾಗೋಷ್ಠಿ-1 ನಡೆಯಲಿದೆ. ಬಸವಧರ್ಮ ಪೀಠದ ವಿವಾದ ಬಗೆಹರಿಸಿಕೊಂಡು ಒಂದಾಗುವ ಕುರಿತು ಮತ್ತು ಧರ್ಮಗ್ರಂಥ ಬಿಡುಗಡೆ, ಲಿಂಗಾಯತ ಸ್ವತಂತ್ರ ಧರ್ಮದ ಮಾನ್ಯತೆಗಾಗಿ ಮುಂದೆ ರೂಪಿಸಬೇಕಾದ ಹೋರಾಟದ ಕುರಿತು ಚರ್ಚೆ ನಡೆಯಲಿದೆ.

ಜ. 14 ಬಸವ ಕ್ರಾಂತಿಯ ದಿನದಂದು ಲಿಂಗಾಯತ ಧರ್ಮ ಸಂಸ್ಥಾಪನ ದಿನಾಚರಣೆ ನಿಮಿತ್ಯ ಸಮುದಾಯ ಪ್ರಾರ್ಥನೆ, ವಚನ ಪಠಣ, ಸಾಮೂಹಿಕ ಇಷ್ಟಲಿಂಗಪೂಜೆ ಹಾಗೂ ಶರಣವ್ರತಧಾರಿಗಳಿಗೆ ಆಶೀರ್ವಾದ ಮಾಡುವ ಕಾರ್ಯಕ್ರಮ ನಡೆಯಲಿದೆ.

ಮೂರು ದಿನಗಳ ಕಾಲ ನಡೆಯಲಿರುವ ಉತ್ಸವಕ್ಕೆ ಆಗಮಿಸುವ ಎಲ್ಲ ಭಕ್ತರಿಗಾಗಿ ವಸತಿ ಮತ್ತು ಪ್ರಸಾದದ ವ್ಯವಸ್ಥೆಯನ್ನು ಸ್ವಾಭಿಮಾನಿ ಶರಣಮೇಳ ಉತ್ಸವ ಸಮಿತಿ ವತಿಯಿಂದ ಮಾಡಲಾಗಿದೆ. ಸುಮಾರು ಒಂದು ಲಕ್ಷಕ್ಕೂ ಹೆಚ್ಚು ಮಂದಿ ಬಸವ ಭಕ್ತರು ಭಾಗವಹಿಸುವ ನಿರೀಕ್ಷೆ ಇದೆ. ಕರ್ನಾಟಕ, ಮಹಾರಾಷ್ಟ್ರ, ತೆಲಂಗಾಣ, ತಮಿಳುನಾಡು, ಆಂಧ್ರಪ್ರದೇಶ ರಾಜ್ಯಗಳ ಬಸವ ಭಕ್ತರು ಲಿಂಗಾಯತ ಬಾಂಧವರು ಸಹ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲಿದ್ದಾರೆ ಎಂದರು. ಕಾರ್ಯಕ್ರಮದಲ್ಲಿ ಲಿಂಗಾಯತ ಮಹಾಸಭಾ ಅಧ್ಯಕ್ಷ ಎಂ.ಎಸ್.ಮಂಜುನಾಥ್ಬೆಟ್ಟಹಳ್ಳಿ, ಬಿಜೆಪಿ ಮುಖಂಡ ಜಿ.ಮಹಾಂತಪ್ಪ, ಯೋಗಶಿಕ್ಷಕ ಎಚ್.ವಿ.ಶಿವರುದ್ರಸ್ವಾಮಿ, ಬೆಳ್ಳಪ್ಪ, ಬೇವುಕಲ್ಲು ಕುಮಾರ್ ಮತ್ತಿತರರು ಉಪಸ್ಥಿತರಿದ್ದರು.

# ಸಂಜೆ ಟಿಪ್ಸ್

## ಒಡಿಸ್ಸಿ ಎಲೆಕ್ಟ್ರಿಕ್ 1,500 ಕ್ಕೂ ಹೆಚ್ಚು ಇವಿ ಸ್ಕೂಟರ್‌ಗಳನ್ನು ಜಿಪ್ ಎಲೆಕ್ಟ್ರಿಕ್‌ಗೆ ಡೆಲಿವರಿ

ಭಾರತೀಯ ದ್ವಿಚಕ್ರ ಎಲೆಕ್ಟ್ರಿಕ್ ವಾಹನ (ಇವಿ) ಒಡಿಸ್ಸಿ ಎಲೆಕ್ಟ್ರಿಕ್ ಕೊನೆಯ ಮೈಲು ವಿತರಣೆ ಸೇವೆಗಳ ಮೇಲೆ ಕೇಂದ್ರೀಕರಿಸಿರುವ ಪ್ರಸಿದ್ಧ ಎಲೆಕ್ಟ್ರಿಕ್ ವೆಹಿಕಲ್ ಫ್ಲೀಟ್ ಆಪರೇಟರ್ ಜಿಪ್ ಎಲೆಕ್ಟ್ರಿಕ್ಗೆ 1,500 ಎಲೆಕ್ಟ್ರಿಕ್ ಸ್ಕೂಟರ್‌ಗಳನ್ನು ವಿತರಿಸುವಲ್ಲಿ ಯಶಸ್ವಿಯಾಗಿದೆ ಎಂದು ಹೆಮ್ಮೆಯಿಂದ ಪ್ರಕಟಿಸುತ್ತಿದೆ. ಈ ಮೈಲುಗಲ್ಲು, ಸುಸ್ಥಿರ ಸಾರಿಗೆ ಪರಿಹಾರಗಳನ್ನು ಜನರು ಹೆಚ್ಚುಹೆಚ್ಚಾಗಿ ಸ್ವೀಕರಿಸುತ್ತಿದ್ದಾರೆ ಎಂಬುದನ್ನು ಗುರುತಿಸುತ್ತದೆ, ಜೊತೆಗೆ ಉತ್ತಮ, ಸ್ವಚ್ಛ ಭವಿಷ್ಯಕ್ಕೆ ಕೊಡುಗೆ ನೀಡಲು ಎರಡೂ ಸಂಸ್ಥೆಗಳು ಮಾಡುತ್ತಿರುವ ಪ್ರಯತ್ನಗಳ ಬಗ್ಗೆ ತಿಳಿಸುತ್ತದೆ. ಕಂಪನಿಯು ಕಳೆದ ತಿಂಗಳು ಪ್ರಕಟಿಸಿದಂತೆ ಒಡಿಸ್ಸಿ ಎಲೆಕ್ಟ್ರಿಕ್ ಮುಂದಿನ ಮೂರು ವರ್ಷಗಳಲ್ಲಿ 40,000 ಎಲೆಕ್ಟ್ರಿಕ್ ವಾಹನಗಳನ್ನು ವಿತರಿಸುವ ಆದೇಶವೂ ಇದರಲ್ಲಿ ಬರುತ್ತದೆ. ಮತ್ತು ಈ 1,500+ ಇವಿ ಸ್ಕೂಟರ್‌ಗಳ ವಿತರಣೆಯೊಂದಿಗೆ, ಒಡಿಸ್ಸಿ ಎಲೆಕ್ಟ್ರಿಕ್ ಮತ್ತು ಜಿಪ್ ಎಲೆಕ್ಟ್ರಿಕ್ ಎರಡೂ ಒಟ್ಟಾಗಿ ನಗರ ಸಾರಿಗೆಯ ಇಂಗಾಲದ ಪ್ರಭಾವವನ್ನು ಕಡಿಮೆ ಮಾಡುವ ನಿಟ್ಟಿನಲ್ಲಿ ಕೆಲಸಮಾಡುವ ಉದ್ದೇಶವನ್ನೂ ಹೊಂದಿವೆ. ಒಡಿಸ್ಸಿ ಎಲೆಕ್ಟ್ರಿಕ್ನ ಸಿಇಒ, ಶ್ರೀ. ನೆಮಿನ್ ವೋರಾ, ಪ್ರತಿ ಸ್ಕೂಟರ್ ವಿತರಣೆಯೊಂದಿಗೆ, ನಾವು ಸುಸ್ಥಿರ ಚಲನಶೀಲತೆಯನ್ನು ಮುಖ್ಯವಾಹಿನಿಯ ವಾಸ್ತವತೆಗೆ ಹತ್ತಿರವಾಗಿಸುತ್ತಿದ್ದೇವೆ. ಎಲೆಕ್ಟ್ರಿಕ್ ವಾಹನಗಳು ನಗರ ಚಲನಶೀಲತೆಯ ಭವಿಷ್ಯವನ್ನು ಪ್ರತಿನಿಧಿಸುತ್ತವೆ ಎಂದು ನಾವು ನಂಬಿದ್ದೇವೆ ಮತ್ತು ಈ ಸಹಯೋಗವು ಭಾರತದ ಸಾರಿಗೆ ಪರಿಸರದಲ್ಲಿ ಹಸಿರು ಪರಿಸರ ಪ್ರಯತ್ನಗಳು ಹೆಚ್ಚಾಗಬೇಕಿರುವ ಅಗತ್ಯವನ್ನು ತೋರಿಸುತ್ತದೆ. ಜಿಪ್ ಎಲೆಕ್ಟ್ರಿಕ್ನೊಂದಿಗಿನ ಸಹಯೋಗವು ಬಹಳ ಸಫಲವಾಗಿದೆ ಮತ್ತು ನಾವು ಇನ್ನಷ್ಟು ಮುಂದುವರಿಯುವ ಬಗ್ಗೆ ಉತ್ಸಾಹದಿಂದಿದ್ದೇವೆ.

## ನಿಮಗಿದು ಗೊತ್ತೇ?

ಎಂ. ವೆಂಕಟೇಶ್ ಶೇಷಾದ್ರಿ

8.ಕರ್ನಾಟಕದಲ್ಲಿ ಗುಹಾಂತರ ದೇವಾಲಯಗಳು ಎಲ್ಲಿವೆ ?

ಉತ್ತರ: ಬಾದಾಮಿ

## ಸಜ್ಜೆರೊಟ್ಟಿ

### ಪಾಕ ಶಾಲೆ



**ಬೇಕಿರುವ ಸಾಮಗ್ರಿ**

ಸಜ್ಜೆ ಹಿಟ್ಟು 2ಬಟ್ಟಲು, ಉಪ್ಪು - 1/4 ಚಮಚ ಬಿಸಿನೀರು 1.25 ಬಟ್ಟಲು

**ಮಾಡುವ ವಿಧಾನ**

ಸಜ್ಜೆ ಹಿಟ್ಟಿಗೆ ಉಪ್ಪು, ಬಿಸಿನೀರು ಹಾಕಿ ಚೆನ್ನಾಗಿ ಕಲೆಸಿ, ನಾದಿಕೊಳ್ಳಿ. ಉಟಣಣಜಟ ಎಂಬ ಪದಾರ್ಥ ಸಜ್ಜೆಹಿಟ್ಟಿನಲ್ಲಿ ಕಮ್ಮಿಯಾಗಿರುವುದರ ಪರಿಣಾಮವಾಗಿ ಕಲೆಸಿಕೊಂಡ ಹಿಟ್ಟು ಚಪಾತಿ ಹಿಟ್ಟಿನಂತೆ ಮೃದುವಾಗಿರುವುದಿಲ್ಲ. ಹೀಗೆ ಕಲಸಿದ ಹಿಟ್ಟನ್ನು ಒಂದು ಒದ್ದೆಬಟ್ಟೆಯಲ್ಲಿ ಕಟ್ಟಿ ಅರ್ಧಗಂಟೆ ಇಡಿ. ಅರ್ಧಗಂಟೆಯ ನಂತರ ಕಲೆಸಿದ ಹಿಟ್ಟನ್ನು ಸಣ್ಣ ಹಿಟ್ಟಿನ ಉಂಡೆಗಳಾಗಿ ಮಾರ್ಪಡಿಸಿ. ಹಳೆಯ ಸಂಪ್ರದಾಯದ ಪ್ರಕಾರ ಸಜ್ಜೆರೊಟ್ಟಿಯನ್ನು ಕೈಯಲ್ಲೆ ತಟ್ಟಿ ಮಾಡಬೇಕು (ಜೋಳದ ರೊಟ್ಟಿಯ ತರಹ). ಆ ರೀತಿ ಕಷ್ಟ ಅನಿಸಿದರೆ, ಹಿಟ್ಟಿನ ಉಂಡೆಯನ್ನು 2 ಪ್ಲಾಸ್ಟಿಕ್ ಹಾಳೆಗಳ ಮಧ್ಯ ಇಟ್ಟು ಚಪತಿಯಂತೆ ಲಟ್ಟಿಸಿಕೊಳ್ಳಬಹುದು. ಕೈಯಲ್ಲೆ ರೊಟ್ಟಿ ತಟ್ಟುವುದಾದರೆ ಕೈಗೆ ನೀರನ್ನು ಹಚ್ಚಿಕೊಂಡು ತಟ್ಟಿದರೆ ಸುಲಭವಾಗುತ್ತದೆ. ಒಂದು ಕಾವಲಿಯನ್ನು (ತವಾ/ಹೆಂಚು) ಒಲೆಯ ಮೇಲಿಟ್ಟು ಬಿಸಿಮಾಡಿಕೊಳ್ಳಿ. ಕಾವಲಿ ಕಾದನಂತರ ಲಟ್ಟಿಸಿಕೊಂಡ ಅಥವಾ ತಟ್ಟಿದ ರೊಟ್ಟಿಯನ್ನು ಅದರಮೇಲೆ ಹಾಕಿ. ಚಪಾತಿಗೆ ಎಣ್ಣೆ ಸವರುವಂತೆ ಬೇಯುತ್ತಿರುವ ರೊಟ್ಟಿಯ ಮೇಲೆ ನೀರನ್ನು ಸವರಿ, ರೊಟ್ಟಿಯ ಎರಡೂ ಕಡೆ ಬೇಯಿಸಿಕೊಳ್ಳಿ. ಒಂದು ರೊಟ್ಟಿ ಚನ್ನಾಗಿ ಬೇಯಲು 3 ನಿಮಿಷ ಸಾಕಾಗುತ್ತದೆ.

## ಕುತ್ತಿಗೆನೋವಿಗೆಸರಳಮನೆಮದ್ದು



ಹೆಲ್ತ್ ಟಿಪ್ಸ್

ಸದಾ ಮೊಬೈಲ್ ನೋಡುವುದು ಅಥವಾ ಕಂಪ್ಯೂಟರ್ ಮುಂದೆ ಕುಳಿತು ಕೆಲಸ ಮಾಡುವಾಗ ಕುತ್ತಿಗೆ ನೋವು ಬರುವುದು ಆಶ್ಚರ್ಯವೇನಿಲ್ಲ. ಸಾಮಾನ್ಯವಾಗಿ ಕುತ್ತಿಗೆ ನೋವಿಗೆ ಮಲಗುವ ಕಳಪೆ ಭಂಗಿ, ಒತ್ತಡ ಕೂಡ ಕಾರಣವಾಗಬಹುದು.

ನಿಮ್ಮ ಕುತ್ತಿಗೆ ಸ್ನಾಯುಗಳು ದುರ್ಬಲಗೊಂಡಾಗ ಮತ್ತು ನಿಮ್ಮ ತಲೆಯನ್ನು ತಿರುಗಿಸಲು ಪ್ರಯತ್ನಿಸಿದಾಗ ನೋವು ಕಾಣಿಸುತ್ತದೆ. ಕುತ್ತಿಗೆ ನೋವು ಕೆಲವೊಮ್ಮೆ ಮರಗಟ್ಟುವಿಕೆ, ತಲೆನೋವು, ಬಿಗಿತದಿಂದ ಕೂಡಿರಬಹುದು.

ಇಡೀ ದಿನ ಕಂಪ್ಯೂಟರ್ ನೋಡುವುದರಿಂದ ಕುತ್ತಿಗೆಯ ಕೀಲುಗಳ ಸುತ್ತಲಿನ ಸ್ನಾಯುಗಳು ಆಯಾಸಗೊಳ್ಳುವುದು ಮತ್ತು ಅತಿಯಾಗಿ ವಿಸ್ತರಿಸಲು ಉತ್ತೇಜಿಸುತ್ತದೆ, ಕುತ್ತಿಗೆ ನೋವಿಗೆ ಸೂಕ್ತವಾದ ಚಿಕಿತ್ಸೆಗಳಲ್ಲಿ ವ್ಯಾಯಾಮ ಕೂಡ ಒಂದು. ಕುತ್ತಿಗೆಯನ್ನು ಸ್ವಲ್ಪ ಅಲ್ಲಾಡಿಸುತ್ತಾ ಇರಿ ಇದರಿಂದ ಮರಗಟ್ಟಿರುವ ನಿಮ್ಮ ಕುತ್ತಿಗೆಗೆ ಸ್ವಲ್ಪ ರಿಲ್ಯಾಕ್ಸ್ ಸಿಗುತ್ತದೆ. ನಿಮ್ಮ ಭುಜಗಳನ್ನು ಹಿಂದಕ್ಕೆ ಮತ್ತು ಮುಂದಕ್ಕೆ ಸುತ್ತಿಕೊಳ್ಳಿ. ನಿಮ್ಮ ಭುಜಕ್ಕೆ ನಿಧಾನವಾಗಿ ಪ್ರತಿ ಬದಿಯಲ್ಲಿ ಕಿವಿಗಳನ್ನು ಟಚ್ ಮಾಡಿ. ನಿಮ್ಮ ತಲೆಯನ್ನು ನಿಧಾನವಾಗಿ ಅಕ್ಕ ಪಕ್ಕಕ್ಕೆ ತಿರುಗಿಸಿ. ಹೀಗೆ ಮಾಡುವುದರಿಂದ ನಿರ್ದಿಷ್ಟ ಪ್ರದೇಶಕ್ಕೆ ರಕ್ತದ ಹರಿವು ಹೆಚ್ಚಾಗುತ್ತದೆ ಮತ್ತು ಉರಿಯೂತವನ್ನು ಕಡಿಮೆ ಮಾಡುತ್ತದೆ.

ಕುತ್ತಿಗೆಯ ನೋವಿಗೆ ಮಲುಗುವ ಭಂಗಿ ಕೂಡ ಕಾರಣವಾಗಬಹುದು. ರಾತ್ರಿಯ ವೇಳೆ ಯದ್ವಾತದ್ವಾ ಮಲಗುವುದು, ಗಟ್ಟಿಯಾದ ದಿಂಬಿನ ಮೇಲೆ ಮಲಗುವುದರಿಂದ ಕೂಡ ಕುತ್ತಿಗೆಯ ಭಾಗದಲ್ಲಿ ನೋವು ಕಾಣಿಸಿಕೊಳ್ಳುತ್ತದೆ. ಕುತ್ತಿಗೆಯ ಮೇಲೆ ಕಡಿಮೆ ಒತ್ತಡವನ್ನು ನೀಡುವ ಭಂಗಿಯಲ್ಲಿ ಮಲಗುವುದು ಉತ್ತಮ.

ನೀವು ಹೊಟ್ಟೆಯ ಮೇಲೆ ಮಲಗಿದಾಗ, ದೀರ್ಘಕಾಲದವರೆಗೆ ನಿಮ್ಮ ಕುತ್ತಿಗೆಯ ಮೇಲೆ ಒತ್ತಡ ಉಂಟು ಮಾಡಿ, ನೋವು ಮತ್ತು ಬಿಗಿತವನ್ನು ಉತ್ತೇಜಿಸುತ್ತದೆ.

ಕುತ್ತಿಗೆಯ ನೋವನ್ನು ಹೋಗಲಾಡಿಸಲು 2 ವಿಧಾನಗಳನ್ನು ನೀವು ಬಳಸಬಹುದು. ಅವುಳೆಂದರೆ ಒಂದು ಬಿಸಿ ನೀರಿನ ಶಾಖ ಮತ್ತು ಐಸ್ ಪ್ಯಾಡ್.

ನೋವಿನ ಪ್ರದೇಶಕ್ಕೆ ಶಾಖ ಅಥವಾ ಐಸ್ ಪ್ಯಾಡ್ ಮೊದಲ 48 ರಿಂದ 72 ಗಂಟೆಗಳ ಬಳಸಿ. ಇದು ನಿಮ್ಮ ಸ್ನಾಯುಗಳನ್ನು ಸಡಿಲಗೊಳಿಸಿ, ಕುತ್ತಿಗೆಯಲ್ಲಿ ರಕ್ತದ ಹರಿವನ್ನು ಹೆಚ್ಚಿಸುತ್ತದೆ. ಹಾಗೆಯೇ ನೋವನ್ನು ನಿವಾರಿಸಲು ಸಹ ಸಹಾಯ ಮಾಡುತ್ತದೆ.

## ಕೈಗಳಕಪ್ಪುಕಲೆನಿವಾರಣೆಗೆಸಲಹೆ

### ಬ್ಯೂಟಿ ಟಿಪ್ಸ್



ಸಾಸಿವೆ ಎಣ್ಣೆಯಲ್ಲಿ ಲಿನೋಲಿಕ್, ಎರುಸಿಸ್ ಮತ್ತು ಒಲಯಿಕ್ ಆಮ್ಲವು ಮೊಣಕೈ ಹಾಗೂ ಮೊಣಕಾಲಿನ ಬಣ್ಣವನ್ನು ತಿಳಿಯಾಗಿಸುವುದು. ಮಲಗುವ ಮೊದಲು ಸಾಸಿವೆ ಎಣ್ಣೆಯನ್ನು ಮೊಣಕಾಲು ಹಾಗೂ ಮೊಣಕೈಗೆ ಹಚ್ಚಿಕೊಂಡು ಸರಿಯಾಗಿ ಮಸಾಜ್ ಮಾಡಿಕೊಳ್ಳಬೇಕು. ರಾತ್ರಿಯಿಡೀ ಹಾಗೆ ಇರಲಿ. ಬೆಳಗ್ಗೆ ಎದ್ದ ಬಳಿಕ ಸೋಪಿನಿಂದ ತೊಳೆಯಬೇಕು.

-ಮೊಣಕಾಲು ಹಾಗೂ ಮೊಣಕೈಯಲ್ಲಿರುವಂತಹ ನಿರ್ಜೀವ ಚರ್ಮದ ಕೋಶಗಳನ್ನು ಅಡುಗೆ ಸೋಡಾವು ತೆಗೆದುಹಾಕುವುದು. ಒಂದು ಚಮಚ ಅಡುಗೆ ಸೋಡಾಕ್ಕೆ ಹಾಲು ಹಾಕಿ ದಪ್ಪಗಿನ ಪೇಸ್ಟ್ ಮಾಡಿಕೊಂಡು ಅದನ್ನು ಮೊಣಕೈ ಹಾಗೂ ಮೊಣಕಾಲಿಗೆ ಹಚ್ಚಿಕೊಳ್ಳಬೇಕು. ಇದು ಒಣಗಿದ ಬಳಿಕ ಸ್ಕಬ್ ಮಾಡಬೇಕು. ವಾರದಲ್ಲಿ ಎರಡು ಸಲ ಈ ರೀತಿ ಮಾಡಿದರೆ ಶುಷ್ಕ ಚರ್ಮದ ಸಮಸ್ಯೆ ನಿವಾರಣೆಯಾಗುವುದು.

-ಈರುಳ್ಳಿ ಹಾಗೂ ನಿಂಬೆರಸದ ಮಾಸ್ಕ್‌ನಲ್ಲಿರುವ ಸಲ್ಫರ್ ಮತ್ತು ಸಿಟ್ರಿಕ್ ಆಮ್ಲವು ನಿರ್ಜೀವ ಚರ್ಮದ ಕೋಶಗಳ ಶೇಖರಣೆಯನ್ನು ತೆಗೆದುಹಾಕಿ ಚರ್ಮದ ಬಣ್ಣವನ್ನು ತಿಳಿಯಾಗಿಸುವುದು. ಈರುಳ್ಳಿಯ ಸಿಪ್ಪೆ ತೆಗೆದು ಒಂದು ಚಮಚ ಲಿಂಬೆರಸ ಮತ್ತು ಒಂದು ಚಮಚ ಗ್ಲಿಸರಿನ್ ಹಾಕಿ ಚೆನ್ನಾಗಿ ಕಲಸಬೇಕು. ಇದನ್ನು ಮೊಣಕೈಗೆ ಹಚ್ಚಿಕೊಂಡು ಸುಮಾರು 15 ನಿಮಿಷ ಕಾಲ ಬಿಟ್ಟು ಸ್ಕಬ್ ಬಳಸಿ ಚೆನ್ನಾಗಿ ಉಜ್ಜಬೇಕು. -ಕಿತ್ತಳೆಯ ಸಿಪ್ಪೆಯಲ್ಲಿರುವ ವಿಟಮಿನ್ ಸಿ ಚರ್ಮಕ್ಕೆ ಕಾಂತಿ ನೀಡುವುದು. ಕಿತ್ತಳೆಯ ಸಿಪ್ಪೆಯನ್ನು ಬಿಸಿಲಿನಲ್ಲಿ ಒಣಗಿಸಬೇಕು. ಬಳಿಕ ಇದನ್ನು ಪುಡಿ ಮಾಡಿಟ್ಟುಕೊಳ್ಳಬೇಕು. ಒಂದು ಚಮಚ ಕಿತ್ತಳೆ ಪುಡಿಗೆ ರೋಸ್ ವಾಟರ್ ಹಾಕಿ ಕಲಸಬೇಕು. ಈ ಪೇಸ್ಟ್ ಅನ್ನು ಮೊಣಕೈಗೆ ಹಚ್ಚಿಕೊಂಡು ಒಣಗಲು ಬಿಡಬೇಕು. ಬಳಿಕ ಸ್ಕಬ್ ಮಾಡಿಕೊಂಡು ತೊಳೆಯಬೇಕು.

# ಇಸ್ಕಾನ್ ದೇವಸ್ಥಾನಗಳಲ್ಲಿ ಸಂಭ್ರಮದ ವೈಕುಂಠ ಏಕಾದಶಿ ಉತ್ಸವದ ಆಚರಣೆ





ವೈಕುಂಠ ಏಕಾದಶಿಯ ಪಾವನ ದಿನದಂದು, ಇಸ್ಕಾನ್ ಬೆಂಗಳೂರಿನ ರಾಜಾಜಿನಗರ ಹಾಗೂ ವಸಂತಪುರದಲ್ಲಿರುವ ದೇವಾಲಯಗಳು, ಸಂಭ್ರಮದ ಭಕ್ತಿಯ ವಾತಾವರಣ ಮತ್ತು ಅವಿರತ ಗೋವಿಂದ ನಾಮಘೋಷಗಳಿಂದ ತುಂಬಿ ತುಳುಕುತ್ತಿದ್ದವು. ಈ ಶುಭದಿನದಂದು, ಲಕ್ಷಾಂತರ ಭಕ್ತರು, ಹರೇಕೃಷ್ಣ ಗಿರಿಯ ರಾಧಾಕೃಷ್ಣ ಮಂದಿರಕ್ಕೆ ಮತ್ತು ವೈಕುಂಠ ಗಿರಿಯ ರಾಜಾಧಿರಾಜ ಗೋವಿಂದ ಮಂದಿರಕ್ಕೆ ಭೇಟಿ ನೀಡಿದರು.

ದೇವಸ್ಥಾನಗಳನ್ನು ಅಲಂಕರಿಸಿದ್ದ ಬಣ್ಣಬಣ್ಣದ ಪರಿಮಳಯುಕ್ತ ಹೂವುಗಳು, ರಂಗುರಂಗಿನ ತೋರಣಗಳು ಮತ್ತು ದೀಪಾಲಂಕಾರಗಳು ಹಬ್ಬದ ಉತ್ಸಾಹವನ್ನು ಇಮ್ಮಡಿಗೊಳಿಸಿದ್ದವು. ಉತ್ಸವದ ಆಚರಣೆಗಳು, ಮುಂಜಾನೆ 3 ಘಂಟೆಗೆ, ಹರೇಕೃಷ್ಣ ಗಿರಿಯ ಶ್ರೀನಿವಾಸ ಗೋವಿಂದ ದೇವರ ಹಾಗೂ ವೈಕುಂಠ ಗಿರಿಯ ರಾಜಾಧಿರಾಜ ಗೋವಿಂದ ದೇವರ ಸುಪ್ರಭಾತ ಸೇವೆಯೊಂದಿಗೆ ಪ್ರಾರಂಭವಾದವು. ಬಳಿಕ ಮೂಲವಿಗ್ರಹಗಳಿಗೆ ಪಂಚಾಮೃತ, ಪಂಚಗವ್ಯ, ಹಣ್ಣಿನರಸಗಳು ಮುಂತಾದ ಮಂಗಳಕರ ದ್ರವ್ಯಗಳನ್ನೊಳಗೊಂಡ, ವೈಭವೋಪೇತ ಅಭಿಷೇಕವನ್ನು ನೆರವೇರಿಸಲಾಯಿತು. ನಂತರ ದೇವರುಗಳನ್ನು ನವವಸ್ತ್ರಗಳು, ಒಡವೆಗಳು ಮತ್ತು ಪರಿಮಳಯುಕ್ತ ರಂಗುರಂಗಿನ ಪುಷ್ಪಮಾಲೆಗಳಿಂದ ಸಿಂಗರಿಸಲಾಯಿತು.

ಶ್ರೀ ರಾಧಾಕೃಷ್ಣಚಂದ್ರರ ಉತ್ಸವ ವಿಗ್ರಹಗಳು, ಅನಂತಶೇಷನ ಮೇಲೆ ಆಸೀನರಾದ ಲಕ್ಷ್ಮೀನಾರಾಯಣರ ರೂಪದಲ್ಲಿ, ಹರೇಕೃಷ್ಣ ಗಿರಿಯ ವೈಕುಂಠದ್ವಾರವನ್ನು ಅಲಂಕರಿಸಿದ್ದರು. ವೈಕುಂಠಗಿರಿಯಲ್ಲಿ, ಶ್ರೀ ರಾಜಗೋಪಾಲ ಸ್ವಾಮಿ, ರುಕ್ಮಿಣಿ ಮತ್ತು ಸತ್ಯಭಾಮೆಯರು ವೈಕುಂಠದ್ವಾರವನ್ನು ಅಲಂಕರಿಸಿದ್ದರು. ಲಕ್ಷಾರ್ಚನೆ ಸೇವೆ , ಕುಂಕುಮಾರ್ಚನೆ ಮತ್ತು ಕಲ್ಯಾಣೋತ್ಸವಗಳು ಉತ್ಸವದ ಪ್ರಮುಖ ಆಕರ್ಷಣೆಗಳಾಗಿದ್ದವು. ಏಕಾಂತಸೇವೆ ಮತ್ತು ಮಹಾಮಂಗಳಾರತಿಗಳೊಂದಿಗೆ, ವೈಕುಂಠ ಏಕಾದಶಿಯ ಪರ್ವವು ಪರಿಸಮಾಪ್ತಿಗೊಂಡಿತು. ರಾಜ್ಯದ ಸನ್ಮಾನ್ಯ ಮಾಜಿ ಮುಖ್ಯಮಂತ್ರಿಗಳಾದ ಶ್ರೀ ಬಿ. ಎಸ್. ಯಡಿಯೂರಪ್ಪ, ಪ್ರಮುಖ ರಾಜಕಾರಣಿಗಳಾದ ಬಿ ವೈ ವಿಜಯೇಂದ್ರ, ಶ್ರೀ ಆರ್.ವಿ. ದೇಶಪಾಂಡೆ, ಶ್ರೀ ಕೆ. ಎಚ್. ಮುನಿಯಪ್ಪ, ಡಾ. ಅಶ್ವಥ್ ನಾರಾಯಣ್, ಶ್ರೀ ಗೋಪಾಲಯ್ಯ, ಸಿನೀ ಜಗತ್ತಿನ ಪ್ರಖ್ಯಾತ ತಾರೆಗಳಾದ ಶ್ರೀ ರಮೇಶ್ ಅರವಿಂದ್, ಶ್ರೀಮತಿ ಪ್ರಿಯಾಂಕ ಉಪೇಂದ್ರ, ಶ್ರೀ ಜಗ್ಗೇಶ್ ಇನ್ನಿತರ ಗಣ್ಯವ್ಯಕ್ತಿಗಳು ಈ ಶುಭಸಂದರ್ಭದಲ್ಲಿ ದೇವಸ್ಥಾನಕ್ಕೆ ಭೇಟಿ ನೀಡಿ, ವೈಕುಂಠದ್ವಾರವನ್ನು ಪ್ರವೇಶ ಮಾಡಿ, ಭಗವಂತನ ದರ್ಶನವನ್ನು ಪಡೆದರು. ಈ ಸಂದರ್ಭದಲ್ಲಿ, ಜನಪ್ರಿಯ ಗಾಯಕರಾದ ಮೇಧಾ ವಿದ್ಯಾಭೂಷಣ ಮತ್ತು ಸೂರ್ಯಗಾಯತ್ರಿಯವರಿಂದ ವಿಶೇಷ ಸಂಗೀತಸೇವೆ ಕಾರ್ಯಕ್ರಮವು ನಡೆಯಿತು.

ಶ್ರೀ ವೈಕುಂಠ ಏಕಾದಶಿಯ ಸಂದರ್ಭದಲ್ಲಿ ದೇವಸ್ಥಾನಕ್ಕೆ ಭೇಟಿ ನೀಡಿದ ಎಲ್ಲ ಭಕ್ತರಿಗೂ ಪ್ರಸಾದ ವಿತರಣೆ ಮಾಡಲಾಯಿತು. ವೈಕುಂಠ ಏಕಾದಶಿಯ ಪ್ರಯುಕ್ತ ತಯಾರಿಸಲಾದ ವಿಶೇಷ ಲಡ್ಡುಗಳನ್ನು ಸಹ ದಿನವಿಡೀ ವಿತರಿಸಲಾಯಿತು. ಸರತಿ ಸಾಲು, ಪಾದುಕ ಸೇವೆ, ಕುಡಿಯುವ ನೀರು ಮುಂತಾದ ಜನಸ್ನೇಹಿ ವ್ಯವಸ್ಥೆಗಳು ಲಕ್ಷಾಂತರ ಭಕ್ತರ ಸುಗಮ ದರ್ಶನ ಹಾಗೂ ಸುರಕ್ಷತೆಯನ್ನು ಖಾತ್ರಿಪಡಿಸಿದವು.

ಈ ಶುಭ ಸಂದರ್ಭದಲ್ಲಿ, ಇಸ್ಕಾನ್ ಬೆಂಗಳೂರಿನ ಅಧ್ಯಕ್ಷರಾದ ಶ್ರೀ ಮಧುಪಂಡಿತ ದಾಸರು ಮಾತನಾಡುತ್ತಾ, ''ವೈಕುಂಠ ಏಕಾದಶಿಯ ಶುಭಸಂದರ್ಭದಲ್ಲಿ, ಹರೇಕೃಷ್ಣ ಗಿರಿ ಮತ್ತು ವೈಕುಂಠ ಗಿರಿಯ ನಮ್ಮ ದೇವಸ್ಥಾನಗಳಿಗೆ, ನಗರದ ಲಕ್ಷಾಂತರ ಭಕ್ತರು ಭೇಟಿ ನೀಡುತ್ತಿರುವುದನ್ನು ಕಂಡು ಬಹು ಸಂತಸವಾಗಿದೆ. ವೈಕುಂಠದ್ವಾರವನ್ನು ಪ್ರವೇಶ ಮಾಡಿ, ಭಗವಂತನ ದರ್ಶನವನ್ನು ಪಡೆದ ಅವರೆಲ್ಲರೂ ತುಂಬಾ ಅದೃಷ್ಟವಂತರು. ಶ್ರೀ ಶ್ರೀನಿವಾಸ ಗೋವಿಂದನು ಅವರೆಲ್ಲರಿಗೆ ಶಾಂತಿ, ಸಂತೋಷ ಮತ್ತು ಭಕ್ತಿಗಳಿಂದ ತುಂಬಿದ ಸಂವತ್ಸರವನ್ನು ಅನುಗ್ರಹಿಸಲಿ'' ಎಂದರು.

# ಕಹೋ ನಾ ಪ್ಯಾರ್ ಹೈ ಚಿತ್ರಕ್ಕೆ 25ರ ಸಂಭ್ರಮ








ಕಹೋ ನಾ ಪ್ಯಾರ್ ಹೈ ಎನ್ನುತ್ತಲೇ ಬಾಲಿವುಡ್ ಗೆ ಪ್ರವೇಶ ಪಡೆದಿದ್ದ ಹೃತಿಕ್ ರೋಶನ್ ಅಭಿನಯದ ಈ ಚಿತ್ರಕ್ಕೆ ಈಗ ಬೆಳ್ಳಿ ಹಬ್ಬದ ಸಂಭ್ರಮ.ಈ ಚಿತ್ರದಲ್ಲಿ ನಾಯಕನಾಗಿ ಹೃತಿಕ್ ರೋಶನ್ ಪಾದಾರ್ಪಣೆ ಮಾಡಿದ್ದರೆ, ನಾಯಕಿಯಾಗಿ ಅಮಿಷಾ ಪಟೇಲ್ ಸಿನಿ ಜಗತ್ತಿಗೆ ಎಂಟ್ರಿ ಕೊಟ್ಟಿದ್ದರು.

ಪ್ರೇಮದ ಕಥಾ ಹಂದರವನ್ನು ಹೊಂದಿರುವ ಈ ಚಿತ್ರವನ್ನು ಹೃತಿಕ್ ರೋಶನ್ ಅವರ ತಂದೆ ರಾಕೇಶ್ ರೋಶನ್ ನಿರ್ದೇಶಿಸಿ ನಿರ್ಮಿಸಿದ್ದರು.ಈ ಚಿತ್ರದಲ್ಲಿ ದ್ವಿಪಾತ್ರದಲ್ಲಿ ಅಭಿನಯಿಸಿದ್ದ ಹೃತಿಕ್ ರೋಶನ್ ಅವರ ನಟನೆ ಹಾಗೂ ಡ್ಯಾನ್ಸ್ ಎಲ್ಲರ ಗಮನ ಸೆಳೆದಿತ್ತು.2000 ರಲ್ಲಿ 10 ಕೋಟಿ ರೂ ವೆಚ್ಚದಲ್ಲಿ ನಿರ್ಮಾಣವಾಗಿದ್ದ ಈ ಚಿತ್ರ, ಬಾಕ್ಸ್ ಆಫೀಸ್ ನಲ್ಲಿ 80 ಕೋಟಿ ರೂ ಗಳಿಸುವ ಮೂಲಕ ಆ ವರ್ಷದ ಬ್ಲಾಕ್ ಬಸ್ಟರ್ ಸಿನಿಮಾ ಎನ್ನುವ ಹೆಗ್ಗಳಿಕೆಗೆ ಪಾತ್ರವಾಗಿದ್ದಲ್ಲದೆ ವಿವಿಧ ವಿಭಾಗದಲ್ಲಿ ಒಟ್ಟು 92 ಪ್ರಶಸ್ತಿಗಳನ್ನೂ ಗೆದ್ದಿತ್ತು.ಆ ಮೂಲಕ ಅತಿ ಹೆಚ್ಚು ಪ್ರಶಸ್ತಿಗಳನ್ನೂ ಗೆದ್ದ ಚಿತ್ರ ಎನ್ನುವ ಹೆಗ್ಗಳಿಕೆಗೆ ಪಾತ್ರವಾಗಿ ಲಿಮ್ಕಾ ಬುಕ್ ದಾಖಲೆಯಲ್ಲಿ ಸೇರ್ಪಡೆಯಾಗಿತ್ತು.

ಈ ಚಿತ್ರದ ನಿರ್ದೇಶಕ ಮತ್ತು ನಿರ್ಮಾಪಕರಾಗಿದ್ದ ರಾಕೇಶ್ ರೋಶನ್ ತಮ್ಮ ಮೊಟ್ಟಮೊದಲ ಫಿಲ್ಮ್‌ಫೇರ್ ಪ್ರಶಸ್ತಿಯನ್ನು ಸ್ವೀಕರಿಸಿದರೆ, ಇನ್ನೊಂದೆಡೆಗೆ ಪಾದಾರ್ಪಣೆ ಚಿತ್ರದಲ್ಲಿಯೇ ಫಿಲ್ಮ್‌ಫೇರ್ ಅತ್ಯುತ್ತಮ ನಟ ಪ್ರಶಸ್ತಿಯನ್ನು ಗೆದ್ದ ಏಕೈಕ ನಟ ಎನ್ನುವ ಹೆಗ್ಗಳಿಕೆಗೆ ಪಾತ್ರರಾಗಿದ್ದರು. ಎಕ್ ಪಲ್ ಕಾ ಜೀನಾ', ನಾ ತುಮ್ ಜಾನೊ ನ ಹಮ್', ಚಾಂದ್ ಸಿತಾರೆ' ಟೈಟಲ್ ಸಾಂಗ್ 'ಕಹೋ ನಾ ಪ್ಯಾರ್ ಹೇ ನಂತಹ ಸೂಪರ್ ಹಿಟ್ ಹಾಡುಗಳಿಂದಾಗಿ ಆ ವರ್ಷ ಅತಿ ಹೆಚ್ಚು ಕ್ಯಾಸೆಟ್ ಗಳು ಮಾರುಕಟ್ಟೆಯಲ್ಲಿ ಮಾರಾಟವಾಗಿದ್ದವು.ಈ ಚಿತ್ರದಲ್ಲಿ ಹೃತಿಕ್ ರೋಶನ್,ಅಮಿಷಾ ಪಟೇಲ್, ಅನುಪಮ್ ಖೇರ್, ದಲೀಪ್ ತಾಹಿಲ್, ಮೊಹ್ನಿಶ್ ಬಹ್ಲ್, ಆಶಿಶ್ ವಿದ್ಯಾರ್ಥಿ, ಸತೀಶ್ ಶಾ, ಫರೀದಾ ಜಲಾಲ್ ರಂತಹ ತಾರಾಗಣ ಇದೆ. ಬಹುತೇಕರಿಗೆ ಈ ವಿಷಯ ತಿಳಿದಿರಲಿಕ್ಕಿಲ್ಲ, ಕಹೋ ನಾ ಪ್ಯಾರ್ ಹೇ ಚಿತ್ರವು 1986 ರಲ್ಲಿ ಬಿಡುಗಡೆಯಾದ ಶಿವರಾಜಕುಮಾರ್ ಅಭಿನಯದ ರಥಸಪ್ತಮಿ ಚಿತ್ರದಿಂದ ಸ್ಫೂರ್ತಿ ಪಡೆದಿದೆ.ಎಂ.ಎಸ್.ರಾಜಶೇಖರ್ ನಿರ್ದೇಶನದ ಪ್ರೇಮಕಥಾ ಹಂದರದ ಈ ಚಿತ್ರ, ಕರ್ನಾಟಕ ರಾಜ್ಯಾದ್ಯಂತ ಯಶಸ್ವಿ 25 ವಾರಗಳ ಪ್ರದರ್ಶನ ಕಂಡು ದಾಖಲೆ ನಿರ್ಮಿಸಿತು. ಈಗ ಜನವರಿ 10 ರಂದು ಹೃತಿಕ್ ರೋಷನ್ ತಮ್ಮ 51ನೇ ಜನ್ಮದಿನ ಆಚರಿಸಿಕೊಳ್ಳುತ್ತಿರುವ ಸಂದರ್ಭದಲ್ಲಿ ಈ ಐಕಾನಿಕ್ ಸಿನಿಮಾ ಕಹೋ ನಾ ಪ್ಯಾರ್ ಹೈ ಚಿತ್ರಮಂದಿರಗಳಲ್ಲಿ ಮರು-ಬಿಡುಗಡೆಯಾಗಲಿದೆ.ಈ ಹಿನ್ನೆಲೆಯಲ್ಲಿ ಸಿನಿಪ್ರಿಯರೂ ಸೇರಿದಂತೆ ಅಪಾರ ಸಂಖ್ಯೆಯ ಅಭಿಮಾನಿಗಳು ಸಂತಸಗೊಂಡಿದ್ದಾರೆ.



ಜಯಶ್ರೀ.ಬಿ.ಆರ್

ಖ್ಯಾತ ಜ್ಯೋತಿಷಿ

ದೂರವಾಣಿ-9964739507

www.jyotishyavaastu.com

## ರಾಶಿ ಭವಿಷ್ಯ

**ಮೇಷ:** ಸರ್ಕಾರಿ ಕೆಲಸಗಳಿಂದ ಅನುಕೂಲ, ಮಾನ ಅಪಮಾನ ನಿಂದನೆ, ಆತ್ಮಗೌರವಕ್ಕೆ ಸ್ನೆಹಿತರಿಂದ ದೂರ, ಮಕ್ಕಳ ನಡವಳಿಕೆಯಿಂದ ಬೇಸರ.

**ವೃಷಭ:** ಕುಟುಂಬದವರೊಂದಿಗೆ ಮನಸ್ತಾಪ, ಮಾನಸಿಕ ವೇದನೆ, ಆರೋಗ್ಯದಲ್ಲಿ ವ್ಯತ್ಯಾಸ,

**ಮಿಥುನ:** ಅನಿರೀಕ್ಷಿತ ಪ್ರಯಾಣ, ಪ್ರೀತಿ ಪ್ರೇಮದ ವಿಷಯಗಳ ಪ್ರಸ್ತಾಪ, ಆರೋಗ್ಯದಲ್ಲಿ ವ್ಯತ್ಯಾಸ.

**ಕಟಕ:** ಆರ್ಥಿಕವಾಗಿ ಮೋಸ, ಭೂಮಿ ವಾಹನ ಖರೀದಿಯಲ್ಲಿ ಸಮಸ್ಯೆ, ಸ್ನೇಹಿತರ ನಡುವೆ ಸಮಸ್ಯೆ

**ಸಿಂಹ:** ಉದ್ಯೋಗ ಸ್ಥಳದಲ್ಲಿ ಸಮಸ್ಯೆ, ಗೌರವಕ್ಕೆ ದಕ್ಕೆ, ಮಕ್ಕಳ ನಡವಳಿಕೆಯಿಂದ ಬೇಸರ, ಪ್ರೀತಿ ಪ್ರೇಮದ ಚಿಂತೆ.

**ಕನ್ಯಾ:** ಸರ್ಕಾರಿ ಅಧಿಕಾರಿಗಳಿಂದ ಅನುಕೂಲ, ಸಂಗಾತಿ ಆರೋಗ್ಯದಲ್ಲಿ ವ್ಯತ್ಯಾಸ, ಪತ್ರ ವ್ಯವಹಾರದಲ್ಲಿ ನಷ್ಟ ಮತ್ತು ಸಂಕಷ್ಟ.

**ತುಲಾ:** ಮಿತ್ರರು ಶತ್ರುಗಳಾಗಿ ಪರಿವರ್ತನೆ, ಆತ್ಮಗೌರವಕ್ಕೆ ಚ್ಯುತಿ, ಉತ್ತಮ ಅವಕಾಶಗಳು ಪ್ರಾಪ್ತಿ.

**ವೃಶ್ಚಿಕ:** ದುರಾಲೋಚನೆಗಳು ಹೆಚ್ಚು, ಮೋಸ ಮತ್ತು ನಷ್ಟಗಳನ್ನು ಅನುಭವಿಸುವಿರಿ, ಉದ್ಯೋಗ ಸ್ಥಳದಲ್ಲಿ ಸಮಸ್ಯೆ.

**ಧನಸ್ಸು:** ಸಾಲದ ಸಹಾಯ, ಮಾನಸಿಕ ವೇದನೆ, ದೇವತಾ ಕಾರ್ಯಗಳಲ್ಲಿ ನಿರಾಸಕ್ತಿ, ಕುಲದೇವತಾ ನಿಂದನೆ.

**ಮಕರ:** ಮಕ್ಕಳ ಆರೋಗ್ಯದಲ್ಲಿ ವ್ಯತ್ಯಾಸ, ಆರ್ಥಿಕ ಸಮಸ್ಯೆಗಳು ಹೆಚ್ಚು, ದೂರ ಭಾವನೆಗಳಿಗೆ ಕಲ್ಪನೆಗಳಿಗೆ ಪೆಟ್ಟು.

**ಕುಂಭ:** ಕುಟುಂಬ ಗೌರವಕ್ಕೆ ಧಕ್ಕೆ, ದಾಂಪತ್ಯದಲ್ಲಿ ಸಮಸ್ಯೆ, ಭವಿಷ್ಯದ ಚಿಂತನೆಗಳು ಮತ್ತು ಆತಂಕ, ಶಕ್ತಿ ದೇವತೆಗಳ ದರ್ಶನಕ್ಕೆ ಮುಂದಾಗುವಿರಿ.

**ಮೀನ:** ಸಂಕಷ್ಟಕ್ಕೆ ಸಿಲುಕುವ ಸನ್ನಿವೇಶ, ಮಕ್ಕಳು ಪೆಟ್ಟು ಮಾಡಿಕೊಳ್ಳುವರು, ಆರೋಗ್ಯದಲ್ಲಿ ಏರುಪೇರು.

# ರಾಷ್ಟ್ರೀಯ ಮಾನವ ಕಳ್ಳಸಾಗಣೆ ಜಾಗೃತಿ ದಿನ




ಪ್ರತಿ ವರ್ಷ ಜನವರಿ 11 ರಂದು ರಾಷ್ಟ್ರೀಯ ಮಾನವ ಕಳ್ಳಸಾಗಣೆ ಜಾಗೃತಿ ದಿನವನ್ನು ಆಚರಿಸಲಾಗುತ್ತದೆ.

ಮಾನವ ಕಳ್ಳಸಾಗಣೆ ಮುಂತಾದ ಕುಖ್ಯಾತ ಅಭ್ಯಾಸಗಳಿಂದಾಗಿ, ಜನರು ತಮ್ಮ ಜೀವನದ ಸಂತೋಷವನ್ನು ಕಸಿದುಕೊಳ್ಳುತ್ತಾರೆ ಮತ್ತು ಶಿಕ್ಷೆ, ಭಯೋತ್ಪಾದನೆ ಮತ್ತು ಅಪರಾಧದ ಜೀವನವನ್ನು ನಡೆಸಲು ಒತ್ತಾಯಿಸಲ್ಪಡುತ್ತಾರೆ, ಅವರ ಜೀವನಶೈಲಿ ಮತ್ತು ಆರೋಗ್ಯದ ವೆಚ್ಚದಲ್ಲಿ. ಆಗಾಗ್ಗೆ ಜನರನ್ನು ವಿವಿಧ ಕಾರಣಗಳಿಂದ ಕಳ್ಳಸಾಗಣೆ ಮಾಡಲಾಗುತ್ತದೆ - ಭಯೋತ್ಪಾದನೆ, ಅಥವಾ ಲೈಂಗಿಕ ಜಾಲಕ್ಕೆ ಸೇರಲು ಅಥವಾ ಅಂಗಾಂಗ ಕಳ್ಳಸಾಗಣೆಗಾಗಿ. ಇವೆಲ್ಲವನ್ನೂ ಹೆಚ್ಚಾಗಿ ಬಲಿಪಶುವಿನ ಇಚ್ಛೆಗೆ ವಿರುದ್ಧವಾಗಿ ಮಾಡಲಾಗುತ್ತದೆ , ಬಲಿಪಶುಗಳ ಸ್ಥಿತಿ ಮತ್ತು ಈ ಜೀವಗಳನ್ನು ಉಳಿಸಲು ಕ್ರಮಬದ್ಧಗೊಳಿಸಬಹುದಾದ ಅಭ್ಯಾಸಗಳ ಬಗ್ಗೆ ಜಾಗೃತಿ ಮೂಡಿಸಲು ಪ್ರತಿ ವರ್ಷ ರಾಷ್ಟ್ರೀಯ ಮಾನವ ಕಳ್ಳಸಾಗಣೆ ಜಾಗೃತಿ ದಿನವನ್ನು ಆಚರಿಸಲಾಗುತ್ತದೆ. ಈ ವರ್ಷದ ವಿಶೇಷ ದಿನವನ್ನು ಆಚರಿಸಲು ನಾವು ಸಜ್ಜಾಗುತ್ತಿರುವಾಗ, ನೆನಪಿನಲ್ಲಿಟ್ಟುಕೊಳ್ಳಬೇಕಾದ ಕೆಲವು ಸಂಗತಿಗಳು ಇಲ್ಲಿವೆ. ಬಲವಂತದ ದುಡಿಮೆ, ಬಲವಂತದ ಅಪರಾಧ ಚಟುವಟಿಕೆಗಳು, ಬಲವಂತದ ಲೈಂಗಿಕ ಶೋಷಣೆ, ಅಂಗಾಂಗಗಳನ್ನು ತೆಗೆಯುವುದು ಮತ್ತು ಕಳ್ಳಸಾಗಣೆ ಜನರನ್ನು ಕಳ್ಳಸಾಗಣೆ ಮಾಡಲು ಕೆಲವು ಕಾರಣಗಳಾಗಿವೆ. ಕೆಲವೊಮ್ಮೆ ನಮಗೆ ಅದರ ಬಗ್ಗೆ ತಿಳಿದಿಲ್ಲದಿದ್ದರೂ ಸಹ, ಗುಲಾಮಗಿರಿ ಇನ್ನೂ ಜಗತ್ತಿನಲ್ಲಿ ಅಸ್ತಿತ್ವದಲ್ಲಿದೆ. 2007 ರಲ್ಲಿ, ಯುನೈಟೆಡ್ ಸ್ಟೇಟ್ಸ್ ಸೆನೆಟ್ ಜನವರಿ 11 ರಂದು ಆಚರಿಸಲು ರಾಷ್ಟ್ರೀಯ ಮಾನವ ಕಳ್ಳಸಾಗಣೆ ಜಾಗೃತಿ ದಿನವನ್ನು ಘೋಷಿಸಿತು. ಆಗಿನ ಅಧ್ಯಕ್ಷ ಬರಾಕ್ ಒಬಾಮಾ ಅವರು ಜನವರಿ 2010 ರ ಸಂಪೂರ್ಣ ತಿಂಗಳನ್ನು ಮಾನವ ಕಳ್ಳಸಾಗಣೆ ಬಗ್ಗೆ ಜಾಗೃತಿ ಮೂಡಿಸಲು ಮೀಸಲಿಟ್ಟರು.

ಪ್ರತಿ ವರ್ಷ, ಲಕ್ಷಾಂತರ ಜನರನ್ನು ಸ್ಥಳಾಂತರಿಸಲಾಗುತ್ತದೆ ಮತ್ತು ಅವರ ಮನೆಗಳಿಂದ ದೂರದ ದೇಶಗಳಿಗೆ ಸಾಗಿಸಲಾಗುತ್ತದೆ. ಮಾನವ ಕಳ್ಳಸಾಗಣೆಯಲ್ಲಿ ಸಾಮಾನ್ಯ ರೂಪಗಳಲ್ಲಿ ಒಂದು ಲೈಂಗಿಕ ಶೋಷಣೆಯಾಗಿದೆ ಮತ್ತು ಮುಖ್ಯವಾಗಿ ಮಹಿಳೆಯರನ್ನು ಗುರಿಯಾಗಿಸುತ್ತದೆ. ಈ ದಿನವು ಜಾಗೃತಿ ಮೂಡಿಸಲು, ಭದ್ರತೆಯನ್ನು ಬಿಗಿಗೊಳಿಸಲು ಮತ್ತು ಜನರು ಕಳ್ಳಸಾಗಣೆಯಾಗದಂತೆ ನೋಡಿಕೊಳ್ಳಲು ಮೀಸಲಾಗಿರುತ್ತದೆ. ಬಲಿಪಶುಗಳ ಕಷ್ಟಗಳನ್ನು ಅರ್ಥಮಾಡಿಕೊಳ್ಳಲು ಮತ್ತು ಅವರೊಂದಿಗೆ ಸಹಾನುಭೂತಿ ಹೊಂದಲು ಮತ್ತು ಅವರು ನಿಯಮಿತ ಜೀವನಕ್ಕೆ ಮರಳಲು ಸಹಾಯ ಮಾಡಲು ಇದು ನಮಗೆ ಸಹಾಯ ಮಾಡುತ್ತದೆ.

# ಮಹಿಳಾ ಮೀಸಲಾತಿ ಕಾಯ್ದೆ ವಿರುದ್ಧದ ಅರ್ಜಿಗಳ ವಿಚಾರಣೆ ನಡೆಸಲು ಸುಪ್ರೀಂಕೋರ್ಟ್ ನಿರಾಕರಣೆ

**ನವದೆಹಲಿ:** ಲೋಕಸಭೆ ಮತ್ತು ರಾಜ್ಯ ವಿಧಾನಸಭೆಗಳಲ್ಲಿ ಮಹಿಳೆಯರಿಗೆ ಮೂರನೇ ಒಂದು ಭಾಗದಷ್ಟು ಸ್ಥಾನಗಳನ್ನು ಮೀಸಲಿಡುವ 2023ರ ನಾರಿ ಶಕ್ತಿ ವಂದನ್ ಕಾಯ್ದೆಯಲ್ಲಿನ ಮರು ಹಂಚಿಕಾ ನಿಯಮ ವಿರುದ್ಧ ಸಲ್ಲಿಕೆಯಾಗಿದ್ದ ಅರ್ಜಿಗಳ ವಿಚಾರಣೆ ನಡೆಸಲು ಸುಪ್ರೀಂಕೋರ್ಟ್ ನಿರಾಕರಿಸಿದೆ.

ಸಂವಿಧಾನದ 32ನೇ ವಿಧಿ ಅಡಿ ಭಾರತೀಯ ಮಹಿಳೆಯರ ರಾಷ್ಟ್ರೀಯ ಒಕ್ಕೂಟ(ಎನ್‌ಎಫ್‌ಐಡಬ್ಲ್ಯೂ) ಮತ್ತು ಜಯಾ ಠಾಕೂರ್ ಸಲ್ಲಿಸಿದ್ದ ಮನವಿಗಳ ವಿಚಾರಣೆಗೆ ನ್ಯಾಯಮೂರ್ತಿಗಳಾದ ಬೇಲಾ ಎಂ ತ್ರಿವೇದಿ ಮತ್ತು ಪಿ.ಬಿ. ವರಾಳೆ ನೇತೃತ್ವದ ಪೀಠ ನಿರಾಕರಿಸಿದೆ.

ಜಯಾ ಠಾಕೂರ್ ಅವರ ಅರ್ಜಿಯು ಕಾಯ್ದೆಯಾಗಿ ಮಾರ್ಪಟ್ಟಿರುವ ಮಸೂದೆಯನ್ನು ಪ್ರಶ್ನಿಸಿದೆ ಮತ್ತು ಎನ್‌ಎಫ್‌ಐಡಬ್ಲ್ಯೂ ಸಲ್ಲಿಸಿದ ಮತ್ತೊಂದು ಅರ್ಜಿಯು ಕಾನೂನಿನ ಮರು ಹಂಚಿಕಾ ನಿಯಮ (ಡಿಲಿಮಿಟೇಶನ್ ನಿಯಮ) ಪ್ರಶ್ನಿಸಿದೆ ಎಂದಿರುವ ನ್ಯಾಯಪೀಠ, ಜಯಾ ಠಾಕೂರ್ ಅವರ ಅರ್ಜಿ ನಿರುಪಯುಕ್ತವಾಗಿದೆ ಎಂದು ಹೇಳಿ ವಜಾಗೊಳಿಸಿದೆ.

ಎನ್‌ಎಫ್‌ಐಡಬ್ಲ್ಯೂನ ಮನವಿಗೆ ಸಂಬಂಧಿಸಿದಂತೆ ನ್ಯಾಯಪೀಠ, ನಿಮ್ಮ ಅರ್ಜಿಯನ್ನು ಸ್ವೀಕರಿಸಲು ಸಾಧ್ಯವಿಲ್ಲ, ನೀವು ಹೈಕೋರ್ಟ್ ಅಥವಾ ಇತರ ಸೂಕ್ತ ವೇದಿಕೆಗೆ ಹೋಗಬಹುದು ಎಂದು ಸಂಸ್ಥೆಗೆ ಸೂಚಿಸಿತು.

ಎನ್‌ಎಫ್‌ಐಡಬ್ಲ್ಯೂ 2023ರ ಕಾಯ್ದೆಯ 334 ಎ (1) ಮತ್ತು ಷರತ್ತು 5 ರ ಸಾಂವಿಧಾನಿಕ ಸಿಂಧುತ್ವ ಪ್ರಶ್ನಿಸಿತ್ತು. 2023ರ ನವೆಂಬರ್‌ನಲ್ಲಿ ಜಯಾ ಠಾಕೂರ್ ಅವರ ಅರ್ಜಿ ವಿಚಾರಣೆ ವೇಳೆ, ಜನಗಣತಿಯ ನಂತರ ಜಾರಿಗೆ ಬರಲಿರುವ ಮಹಿಳಾ ಮೀಸಲಾತಿ ಕಾನೂನಿನ ಒಂದು ಭಾಗವನ್ನು ರದ್ದುಗೊಳಿಸುವುದು ನ್ಯಾಯಾಲಯಕ್ಕೆ ತುಂಬಾ ಕಷ್ಟ ಎಂದು ಸುಪ್ರೀಂಕೋರ್ಟ್ ಹೇಳಿತ್ತು.



## 50 ಅಮೃತ ಭಾರತ ರೈಲುಗಳ ತಯಾರಿಕೆ: ಸಚಿವ ಅಶ್ವಿನಿ ವೈಷ್ಣವ್

**ಚೆನ್ನೈ:** ರೈಲ್ವೆ ಸಚಿವಾಲಯವು ಅಮೃತ ಭಾರತ ಆವೃತ್ತಿ 2.0 ರೈಲುಗಳಲ್ಲಿ 12 ಪ್ರಮುಖ ಸುಧಾರಣೆಗಳನ್ನು ಸೇರ್ಪಡೆಗೊಳಿಸಿದೆ ಮತ್ತು ಮುಂದಿನ ಎರಡು ವರ್ಷಗಳಲ್ಲಿ ಚೆನ್ನೈನ ಇಂಟಿಗ್ರಲ್ ಕೋಚ್ ಫ್ಯಾಕ್ಟರಿ(ಐಸಿಎಫ್)ಯಲ್ಲಿ ಇಂತಹ 50 ರೈಲುಗಳು ತಯಾರಾಗಲಿವೆ ಎಂದು ರೇಲ್ವೆ ಸಚಿವ ಅಶ್ವಿನಿ ವೈಷ್ಣವ್ ಅವರು ತಿಳಿಸಿದರು. ಐಸಿಎಫ್‌ನ ಜನರಲ್ ಮ್ಯಾನೇಜರ್ ಯು.ಸುಬ್ಬರಾವ್ ಅವರೊಂದಿಗೆ ಫ್ಯಾಕ್ಟರಿಯನ್ನು ಪರಿಶೀಲಿಸಿದ ವೈಷ್ಣವ್, ರಾಜ್ಯ ಸರಕಾರವು ರಾಜಕೀಯಕ್ಕಿಂತ ಜನರಿಗೆ ಸೇವೆ ಒದಗಿಸುವುದಕ್ಕೆ ಹೆಚ್ಚಿನ ಆದ್ಯತೆಯನ್ನು ನೀಡಬೇಕು ಮತ್ತು ಕೇಂದ್ರ, ಹಾಗೂ ತನ್ನ ಸಚಿವಾಲಯ ಜನರ ಕಲ್ಯಾಣಕ್ಕಾಗಿ ಕ್ರಮಗಳನ್ನು ತೆಗೆದುಕೊಳ್ಳಲು ಬದ್ಧವಾಗಿವೆ ಎಂದು ತಿಳಿಸಿದರು.

ಸೆಮಿ-ಆಟೊಮ್ಯಾಟಿಕ್ ಕಪ್ಲೆಟ್‌ಗಳು,ಮಾಡ್ಯುಲರ್ ಶೌಚಾಲಯಗಳು ತುರ್ತು ಟಾಕ್ ಬ್ಯಾಕ್ ಸೌಲಭ್ಯ,ತುರ್ತು ಬ್ರೇಕ್ ವ್ಯವಸ್ಥೆ,ವಂದೇಭಾರತ ರೈಲುಗಳಲ್ಲಿ ಇರುವಂತೆ ನಿರಂತರ ಬೆಳಕಿನ ವ್ಯವಸ್ಥೆ ಸೇರಿದಂತೆ 12 ಪ್ರಮುಖ ಸುಧಾರಣೆಗಳನ್ನು ಅಮೃತ ಭಾರತಿ ರೈಲುಗಳಲ್ಲಿ ತರಲಾಗಿದೆ ಎಂದು ವೈಷ್ಣವ ಸುದ್ದಿಗಾರರಿಗೆ ವಿವರಿಸಿದರು.



# ಲಾಸ್ ಎಂಜಲಿಸ್‌ನಲ್ಲಿ ಕಾಡ್ಗಿಚ್ಚು; ಸೆಲಿಬ್ರಿಟಿಗಳ ಮನೆಗಳು ಸುಟ್ಟು ಭಸ್ಮ



**ಲಾಸ್ ಏಂಜಲೀಸ್(ಅಮೆರಿಕ):** ಲಾಸ್ ಏಂಜಲೀಸ್‌ನಲ್ಲಿ ಕಾಣಿಸಿಕೊಂಡಿರುವ ಭೀಕರ ಕಾಡ್ಗಿಚ್ಚು ಹಾಲಿವುಡ್ ಬೆಟ್ಟಗಳಲ್ಲಿ ವೇಗವಾಗಿ ಹರಡುತ್ತಿದ್ದು, ಇಲ್ಲಿನ ಪ್ರಸಿದ್ಧ ಸ್ಥಳಗಳು, ಸೆಲೆಬ್ರಿಟಿಗಳ ಮನೆ ಮತ್ತಿತರ ಆಸ್ತಿಗಳೂ ಕೂಡ ಬೆಂಕಿಯ ಕೆನ್ನಾಲಿಗೆಗೆ ತುತ್ತಾಗಿವೆ. ಬೆಂಕಿ ವ್ಯಾಪಿಸುತ್ತಿರುವುದನ್ನು ನಿಯಂತ್ರಿಲು ಅಗ್ನಿಶಾಮಕದಳ ಸಿಬ್ಬಂದಿ ಹರಸಾಹಸಪಡುತ್ತಿದ್ದಾರೆ. ಇದುವರೆಗೆ ಐವರು ಸಾವನ್ನಪ್ಪಿದ್ದು, 1,30,000 ಜನರು ತಾವಿದ್ದ ಸ್ಥಳಗಳನ್ನು ತೊರೆದಿದ್ದಾರೆ. ಕಾಡ್ಗಿಚ್ಚು ಪೆಸಿಫಿಕ್ ಕರಾವಳಿಯಿಂದ ಒಳನಾಡಿನ ಪಸಾಡೆನಾವರೆಗೆ ಹಬ್ಬಿದೆ.

ಹಾಲಿವುಡ್‌ನ ವಾಕ್ ಆಫ್ ಫೇಮ್‌ನಿಂದ 1.6 ಕಿ.ಮೀ ದೂರದಲ್ಲಿ ಈ ಸನ್‌ಸೆಟ್ ಫೈರ್ (ಇಳಿಸಂಜೆ ಬೆಂಕಿ) ಕಾಣಿಸಿಕೊಂಡಿದ್ದು, ಗ್ರೌಮನ್ಸ್ ಚೈನೀಸ್ ಥಿಯೇಟರ್ ಮತ್ತು ಮೆಡಮ್ಸ್ ಟ್ಯೂಸೆಡ್ಸ್‌ನಲ್ಲೂ ಕೂಡ ಬೆಂಕಿಯ ಅಲರಾಂಗಳು ಹೊಡೆದುಕೊಂಡಿವೆ. ಬೆಂಕಿ ಅನಾಹುತಗಳನ್ನು ನಿಯಂತ್ರಿಸಲು ನಿರಂತರ ಪ್ರಯತ್ನ ನಡೆಸಲಾಗುತ್ತಿದ್ದು, ಹೆಲಿಕ್ಯಾಪ್ಟರ್‌ಗಳ ಮೂಲಕ ಆಗಸದಿಂದ ನೀರು ಸುರಿಯಲಾಗುತ್ತಿದೆ. ಬೆಂಕಿಯ ಕೆನ್ನಾಲಿಗೆಗೆ ಬೆಚ್ಚಿದ ಜನರು ಇಲ್ಲಿನ ಪ್ರಖ್ಯಾತ ಹೋಟೆಲ್‌ಗಳಿಂದ ಹೊರ ಓಡಿದ್ದಾರೆ.

ಬೆಂಕಿ 12ಕ್ಕೂ ಹೆಚ್ಚು ಶಾಲೆಗಳನ್ನು ಹಾನಿಗೊಳಿಸಿದೆ. ಬಲವಾಗಿ ಬೀಸುತ್ತಿರುವ ಗಾಳಿ ನಮಗೆ ಬೆಂಕಿ ನಂದಿಸಲು ಸವಾಲಾಗಿದೆ ಎಂದು ಲಾಸ್ ಏಜೆಂಲ್ಸ್ ಮೇಯರ್ ಕರೆನ್ ಬಾಸ್ ತಿಳಿಸಿದರು.

ಈಟೋನ್ ಮತ್ತು ಪಲಿಸಡೆಸ್‌ನಲ್ಲಿ 1,900 ಕಟ್ಟಡಗಳು ಹಾನಿಗೊಂಡಿದ್ದು, ಹಾನಿಯ ಪ್ರಮಾಣ ಮತ್ತಷ್ಟು ಹೆಚ್ಚುವ ಆತಂಕವಿದೆ. ನೀರು ಪೂರೈಕೆ ವ್ಯವಸ್ಥೆ ಮತ್ತು ವಿದ್ಯುತ್ ಸಂಪರ್ಕಕ್ಕೂ ಕಾಡ್ಗಿಚ್ಚು ಅಡ್ಡಿಯಾಗುತ್ತಿದೆ.

## ಪರೀಕ್ಷೆಯಿಂದ ತಪ್ಪಿಸಿಕೊಳ್ಳಲು 23 ಶಾಲೆಗಳಿಗೆ ಬಾಂಬ್ ಬೆದರಿಕೆ: ವಿದ್ಯಾರ್ಥಿ ಅರೆಸ್ಟ್

**ನವದೆಹಲಿ:** ಪರೀಕ್ಷೆಗೆ ಹಾಜರಾಗಲು ಬಯಸದೇ ಶಾಲೆಗಳಿಗೆ ಬಾಂಬ್ ಬೆದರಿಕೆ ಹಾಕಿದ್ದ 12ನೇ ತರಗತಿಯ ವಿದ್ಯಾರ್ಥಿಯೊಬ್ಬನನ್ನು ದೆಹಲಿ ಪೊಲೀಸರು ಬಂಧಿಸಿದ್ದಾರೆ. ವಿಚಾರಣೆ ವೇಳೆ ವಿದ್ಯಾರ್ಥಿ 23 ಶಾಲೆಗಳಿಗೆ ಇಮೇಲ್ ಮೂಲಕ ಬಾಂಬ್ ಬೆದರಿಕೆ ಹಾಕಿರುವುದಾಗಿ ತಪ್ಪೊಪ್ಪಿಕೊಂಡಿದ್ದಾನೆ ಎಂದು ಪೊಲೀಸರು ತಿಳಿಸಿದ್ದಾರೆ. ದಕ್ಷಿಣ ದೆಹಲಿಯ ಉಪ ಪೊಲೀಸ್ ಆಯುಕ್ತ ಅಂಕಿತ್ ಚೌಹಾಣ್ ಮಾತನಾಡಿ, ಶಂಕಿತ ವಿದ್ಯಾರ್ಥಿ ದೆಹಲಿಯ 23 ಶಾಲೆಗಳಿಗೆ ಬೆದರಿಕೆ ಇಮೇಲ್‌ಗಳನ್ನು ಕಳುಹಿಸಿದ್ದ. ತಾನು ಈ ಹಿಂದೆ ಬೆದರಿಕೆ ಇಮೇಲ್‌ಗಳನ್ನು ಕಳುಹಿಸಿದ್ದಾಗಿ ಒಪ್ಪಿಕೊಂಡಿದ್ದಾನೆ. ಅಪ್ರಾಪ್ತ ಯುವಕ ಪರೀಕ್ಷೆಯಿಂದ ತಪ್ಪಿಸಿಕೊಳ್ಳಲು ಶಾಲೆಗಳಲ್ಲಿ ಆತಂಕದ ವಾತಾವರಣ ಸೃಷ್ಟಿಸಲು ತೀರ್ಮಾನಿಸಿದ್ದ, ಈ ಹಿನ್ನೆಲೆ



ಬಾಂಬ್ ಬೆದರಿಕೆ ಇಮೇಲ್ ಕಳುಹಿಸಿದ್ದು, ಇದರಿಂದ ಪರೀಕ್ಷೆ ರದ್ದಾಗಲಿ ಎಂದು ಆತ ಬಯಸಿದ್ದ ಎಂದು ತಿಳಿಸಿದ್ದಾರೆ.

ನ.28 ರಂದು ರೋಹಿಣಿ ಪ್ರಶಾಂತ್ ವಿಹಾರ್ ಪಿವಿಆರ್ ಮಲ್ಟಿಪ್ಲೆಕ್ಸ್‌ನಲ್ಲಿ ನಿಗೂಢ ಸ್ಫೋಟ ಸಂಭವಿಸಿತ್ತು. ಅದಾದ ಒಂದು ದಿನದ ನಂತರ ಹಲವಾರು ಶಾಲೆಗಳು ಬಾಂಬ್ ಬೆದರಿಕೆಯನ್ನು ಸ್ವೀಕರಿಸಿದ್ದವು. ಜೊತೆಗೆ ವೆಂಕಟೇಶ್ವರ್ ಗ್ಲೋಬಲ್ ಸ್ಕೂಲ್‌ಗೆ ಬೆದರಿಕೆ ಇಮೇಲ್ ಬಂದಿತ್ತು. ಪೊಲೀಸರ ತನಿಖೆಯ ವೇಳೆ ವಿದ್ಯಾರ್ಥಿಯೇ ಬಾಂಬ್ ಬೆದರಿಕೆ ಹಾಕಿದ್ದ ಆರೋಪಿ ಎಂದು ತಿಳಿದುಬಂದಿದೆ.

ಕಳೆದ ತಿಂಗಳು 11 ದಿನಗಳಲ್ಲಿ 100ಕ್ಕೂ ಹೆಚ್ಚು ಬಾಂಬ್ ಬೆದರಿಕೆಗಳು ದೆಹಲಿ ಶಾಲೆಗಳನ್ನು ಅಸ್ತವ್ಯಸ್ತಗೊಳಿಸಿತ್ತು. ಈ ಇಮೇಲ್‌ಗಳನ್ನು ವಿಪಿಎನ್ (ವರ್ಚುವಲ್ ಪ್ರೈವೇಟ್ ನೆಟ್‌ವರ್ಕ್) ಮೂಲಕ ಕಳುಹಿಸಲಾಗಿದೆ. ಹೀಗಾಗಿ ಅಪರಾಧಿಗಳನ್ನು ಪತ್ತೆಹಚ್ಚಲು ಕಠಿಣ ಎಂದು ಪೊಲೀಸರು ತಿಳಿಸಿದ್ದಾರೆ. ಕಳೆದ ವರ್ಷದ ಮೇ ತಿಂಗಳಿನಿಂದ 50ಕ್ಕೂ ಹೆಚ್ಚು ಬಾಂಬ್ ಬೆದರಿಕೆ ಇಮೇಲ್‌ಗಳನ್ನು ದೆಹಲಿಯ ಶಾಲೆಗಳು, ಆಸ್ಪತ್ರೆಗಳು, ವಿಮಾನ ನಿಲ್ದಾಣಗಳು ಮತ್ತು ವಿಮಾನಯಾನ ಸಂಸ್ಥೆಗಳು ಸ್ವೀಕರಿಸಿವೆ.

## ಕಾಲ್ತುಳಿತದಲ್ಲಿ ಗಾಯಗೊಂಡವರಿಗೆ ವಿಶೇಷ ದರ್ಶನ

**ತಿರುಪತಿ:** ತಿರುಪತಿಯಲ್ಲಿ ಬುಧವಾರ ರಾತ್ರಿ ಸಂಭವಿಸಿದ ಕಾಲ್ತುಳಿತದಲ್ಲಿ ಗಾಯಗೊಂಡ ಭಕ್ತರಿಗೆ ತಿರುಮಲ ತಿರುಪತಿ ದೇವಸ್ಥಾನಂ(ಟಿಟಿಡಿ) ಶುಕ್ರವಾರ ವಿಶೇಷ ದರ್ಶನ ವ್ಯವಸ್ಥೆ ಮಾಡಿತ್ತು.

ಮುಖ್ಯಮಂತ್ರಿ ಎನ್. ಚಂದ್ರಬಾಬು ನಾಯ್ಡು ಅವರ ಭರವಸೆಯಂತೆ, ಟಿಟಿಡಿ, ಗಾಯಗೊಂಡವರಿಗೆ ಮುಕ್ಕೋಟಿ ಏಕಾದಶಿಯಂದು ವೈಕುಂಠ ದ್ವಾರ ದರ್ಶನವನ್ನು ಏರ್ಪಡಿಸಿತ್ತು. ಇದು ಸ್ವರ್ಗ ಖಾತರಿಪಡಿಸುತ್ತದೆ ಎಂದು ನಂಬಲಾಗಿದೆ.

'ಮುಖ್ಯಮಂತ್ರಿ ಎನ್. ಚಂದ್ರಬಾಬು ನಾಯ್ಡು ಅವರ ಸೂಚನೆಯಂತೆ, ಟಿಟಿಡಿ ಅಧಿಕಾರಿಗಳು ತಿರುಪತಿ ಕಾಲ್ತುಳಿತ ಘಟನೆಯಲ್ಲಿ ಗಾಯಗೊಂಡವರಿಗೆ ಶುಕ್ರವಾರ ವಿಶೇಷ ದರ್ಶನ ವ್ಯವಸ್ಥೆ ಮಾಡಿದ್ದರು' ಎಂದು ಟಿಟಿಡಿ ಪ್ರಕಟಣೆ



ತಿಳಿಸಿದೆ. ನಂತರ, ಜಿಲ್ಲಾಡಳಿತವು ಭಕ್ತರನ್ನು ಅವರ ಊರುಗಳಿಗೆ ಹಿಂತಿರುಗಿಸಲು ವಿಶೇಷ ವಾಹನಗಳ ವ್ಯವಸ್ಥೆ ಮಾಡಿತ್ತು.

ಶ್ರೀ ವೆಂಕಟೇಶ್ವರ ವೈದ್ಯಕೀಯ ವಿಜ್ಞಾನ ಸಂಸ್ಥೆಯಿಂದ 32 ಗಾಯಗೊಂಡ ಭಕ್ತರನ್ನು ಡಿಸ್ಚಾರ್ಜ್ ಮಾಡಲಾಗಿದೆ ಎಂದು ತಿರುಪತಿ ಜಿಲ್ಲಾಧಿಕಾರಿ ಎಸ್. ವೆಂಕಟೇಶ್ವರ್ ಅವರು ಹೇಳಿದ್ದಾರೆ.

ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿರುವ ಇನ್ನೂ ಐವರು ಭಕ್ತರನ್ನು ಒಂದು ದಿನದ ನಂತರ ಡಿಸ್ಚಾರ್ಜ್ ಮಾಡಲಾಗುವುದು ಎಂದು ಅವರು ತಿಳಿಸಿದ್ದಾರೆ.

ತಿರುಪತಿ ದೇವಾಲಯದ ವೈಕುಂಠ ಏಕಾದಶಿ ದರ್ಶನದ ಟೋಕನ್ ನೀಡುವ ಕೇಂದ್ರದಲ್ಲಿ ಬುಧವಾರ ರಾತ್ರಿ ಸಂಭವಿಸಿದ ಕಾಲ್ತುಳಿತದಲ್ಲಿ ಕರ್ನಾಟಕದ ಮೂಲದ ಓರ್ವ ಮಹಿಳೆ ಸೇರಿದಂತೆ 6 ಮಂದಿ ಸಾವನ್ನಪ್ಪಿದ್ದು, ಹಲವರು ಗಾಯಗೊಂಡಿದ್ದಾರೆ. ಮೃತಪಟ್ಟವರ ಕುಟುಂಬಗಳಿಗೆ ಆಂಧ್ರಪ್ರದೇಶ ಸರಕಾರ 25 ಲಕ್ಷ ರೂ. ಪರಿಹಾರ ಘೋಷಣೆ ಮಾಡಲಾಗಿದೆ.

## ಟ್ರಂಪ್‌ಗೆ ಬಿಗ್ ರಿಲೀಫ್!

**ವಾಷಿಂಗ್ಟನ್:** ನ್ಯೂಯಾರ್ಕ್‌ನಲ್ಲಿ ಹಶ್ ಹಣ ವಂಚನೆ ಪ್ರಕರಣದ ತೀರ್ಪು ಹೊರಬಿದ್ದಿದ್ದು, ಅಮೆರಿಕದ ನೂತನ ಅಧ್ಯಕ್ಷ ಡೊನಾಲ್ಡ್ ಟ್ರಂಪ್‌ಗೆ ಕ್ಲೀನ್ ಚಿಟ್ ಸಿಕ್ಕಿದೆ. ನವೆಂಬರ್‌ನಲ್ಲಿ ನಡೆದ ಅಮೆರಿಕದ ಅಧ್ಯಕ್ಷೀಯ ಚುನಾವಣೆಯಲ್ಲಿ ಡೊನಾಲ್ಡ್ ಟ್ರಂಪ್ ಜಯಭೇರಿ ಬಾರಿಸಿದ್ದು, ಜನವರಿ 20ರಂದು 2ನೇ ಬಾರಿಗೆ ಅಧಿಕಾರ ವಹಿಸಿಕೊಳ್ಳಲಿದ್ದಾರೆ. ಅದಕ್ಕೂ ಮೊದಲು



ಟ್ರಂಪ್ ಜೈಲುಪಾಲಾಗುವ ಭೀತಿ ಎದುರಾಗಿತ್ತು. ಆದರೆ ಇಂದಿನ ಕೋರ್ಟ್ ತೀರ್ಪಿನಲ್ಲಿ ಅವರನ್ನು ಖುಲಾಸೆಗೊಳಿಸಲಾಗಿದೆ. ನೀಲಿ ಚಿತ್ರ ತಾರೆ ಸ್ಟೋರ್ಮಿ ಡೇನಿಯಲ್ಸ್ ಜತೆ ಟ್ರಂಪ್ ಲೈಂಗಿಕ ಸಂಬಂಧ ಹೊಂದಿದ್ದು, ಅದನ್ನು ಮುಚ್ಚಿಹಾಕಲು 2016ರ ಚುನಾವಣಾ ಪ್ರಚಾರದ ಸಮಯದಲ್ಲಿ ಟ್ರಂಪ್ ತಮ್ಮ ವಕೀಲ ಮೈಕೆಲ್ ಕೋಹೆನ್ ಅವರಿಗೆ ಅಕ್ರಮವಾಗಿ ಹಣ ವರ್ಗಾವಣೆ ಮಾಡಿದ್ದರು ಎನ್ನುವ ಆರೋಪವಿದೆ. ಇದೀಗ ಆ ಪ್ರಕರಣದ ವಿಚಾರಣೆ ಮುಗಿದಿದ್ದು, ತೀರ್ಪು ಪ್ರಕಟವಾಗಲಿದೆ. ಟ್ರಂಪ್ ಅವರು ತಮ್ಮ ಅಧ್ಯಕ್ಷರಾಗಿದ್ದ ಅವಧಿಯಲ್ಲಿ ಈ ಎಲ್ಲ ಆರೋಪಗಳನ್ನು ತಳ್ಳಿ ಹಾಕಿದ್ದಾರೆ ಮತ್ತು ತಪ್ಪಿತಸ್ಥರಲ್ಲ ಎಂದಿದ್ದರು. ಅಲ್ಲದೇ ಈ ಪ್ರಕರಣವು ಅವರ 2024ರ ಅಧ್ಯಕ್ಷೀಯ ಪ್ರಚಾರವನ್ನು ಹಾನಿ ಮಾಡುವ ಪ್ರಯತ್ನವಾಗಿದೆ ಎಂದು ಅವರು ಹೇಳಿದ್ದರು. ಇನ್ನು ಶುಕ್ರವಾರ, ಟ್ರಂಪ್ ವಕ್ತಾರರು ನ್ಯಾಯಾಧೀಶ ಮಾರ್ಚೆನ್ ಅವರ ಶಿಕ್ಷೆಯ ಆದೇಶವನ್ನು ಟೀಕಿಸಿದ್ದಾರೆ.

## ಮನೆಯಲ್ಲೇ ಮೊಸಳೆ ಸಾಕಿದ್ದ ಬಿಜೆಪಿ ಮಾಜಿ ಶಾಸಕ

**ಭೋಪಾಲ್:** ಮಧ್ಯಪ್ರದೇಶದ ಬಿಜೆಪಿಯ ಮಾಜಿ ಶಾಸಕ ಮನೆಯೊಬ್ಬರ ಮೇಲೆ ಅರಣ್ಯ ಇಲಾಖೆಯ ಅಧಿಕಾರಿಗಳು ದಾಳಿ ನಡೆಸಿದ್ದಾರೆ. ಕಾಡು ಪ್ರಾಣಿಗಳನ್ನು ಸಾಕುವುದು ಅಕ್ರಮ ಎಂದು ತಿಳಿದಿದ್ದರೂ ಮಾಜಿ ಶಾಸಕ ಹರ್ವಂಶ್ ಸಿಂಗ್ ರಾಥೋಡ್ ತಮ್ಮ ಮನೆಯಲ್ಲಿ ಮೊಸಳೆಯನ್ನು ಸಾಕಿದ್ದರು. ಶುಕ್ರವಾರ ಸಾಗರದಲ್ಲಿರುವ ಅವರ ಮನೆಗೆ ಅಧಿಕಾರಿಗಳು ದಾಳಿ ನಡೆಸಿ ಪರಿಶೀಲನೆ ನಡೆಸುತ್ತಿದ್ದಾರೆ. ರಾಥೋಡ್ ಮನೆಯ ಆವರಣದಲ್ಲಿ ನಿರ್ಮಿಸಲಾದ ಕೃತಕ ಕೊಳದ ಬಳಿ ಮೊಸಳೆಗಳನ್ನು ತೋರಿಸುವ ವೀಡಿಯೋ ಸಾಮಾಜಿಕ ಮಾಧ್ಯಮದಲ್ಲಿ ವೈರಲ್ ಆಗಿದ್ದು, ನೆಟ್ಟಿಗರನ್ನು ಬೆಚ್ಚಿ ಬೀಳಿಸಿದೆ. ಸದ್ಯ ಕೊಳದ ಪರಿಶೀಲನೆ ನಡೆಸಲಾಗುತ್ತಿದ್ದು, ಆಳವಾದ ಕೊಳವಾದ್ದರಿಂದ ಎಷ್ಟು ಮೊಸಳೆಗಳಿವೆ ಎಂಬುದು ಇನ್ನೂ ತಿಳಿದು ಬಂದಿಲ್ಲ. ಅಕ್ರಮವಾಗಿ ಸಾಕಲಾಗುತ್ತಿರುವ ಮೊಸಳೆಗಳ ಪತ್ತೆಗೆ ಶೋಧ ಕಾರ್ಯ ನಡೆಯುತ್ತಿದೆ ಎಂದು ಉತ್ತರ ಸಾಗರದ ಜಿಲ್ಲಾ ಅರಣ್ಯಾಧಿಕಾರಿ ಚಂದ್ರಶೇಖರ್ ಮಾಧ್ಯಮಗಳಿವೆ ತಿಳಿಸಿದ್ದಾರೆ. ಶೋಧ ಕಾರ್ಯಾಚರಣೆಯ ನಂತರ ಮೊಸಳೆಗಳನ್ನು ನೌರದೇಹಿ ಅಭಯಾರಣ್ಯಕ್ಕೆ ಬಿಡಲಾಗುವುದು ಎಂದು ಅವರು ತಿಳಿಸಿದ್ದಾರೆ. ಹೆಚ್ಚುವರಿಯಾಗಿ, ಆರೋಪ ಸಾಭೀತಾದರೆ ಮಾಲೀಕರ ವಿರುದ್ಧ ವನ್ಯಜೀವಿ ಕಾನೂನುಗಳ ಸಂಬಂಧಿತ ವಿಭಾಗಗಳ ಅಡಿಯಲ್ಲಿ ಕ್ರಮ ತೆಗೆದುಕೊಳ್ಳಲಾಗುತ್ತದೆ ಎಂದು ತಿಳಿಸಿದ್ದಾರೆ.





## ಮಹಾಕುಂಭ ಮೇಳ: ಆಪಲ್ ಸಹ-ಸಂಸ್ಥಾಪಕ ಸ್ಟೀವ್ ಜಾಬ್ಸ್ ಪತ್ನಿ ಲಾರೆನ್ ಪೊವೆಲ್ ಜಾಬ್ಸ್ ಭಾಗಿ

**ಲಖನೌ:** ಜನವರಿ 13 ರಿಂದ ಫೆಬ್ರವರಿ 26 ರವರೆಗೆ ಉತ್ತರ ಪ್ರದೇಶದ ಪ್ರಯಾಗ್ರಾಜ್‌ನಲ್ಲಿ ಮಹಾಕುಂಭ ಮೇಳ ನಡೆಯಲಿದ್ದು, ಈಗಾಗಲೇ ಸಕಲ ಸಿದ್ಧತೆ ನಡೆದಿದೆ. ಜಗತ್ತಿನಾದ್ಯಂತ ಮಹಾಕುಂಭ ಮೇಳಕ್ಕೆ ಭಕ್ತರು ಆಗಮಿಸಲಿದ್ದಾರೆ. ಈ ಕಾರ್ಯಕ್ರಮಕ್ಕೆ ಆಪಲ್ ಸಹ-ಸಂಸ್ಥಾಪಕ ಸ್ಟೀವ್ ಜಾಬ್ಸ್ ಅವರ ಪತ್ನಿ ಲಾರೆನ್ ಪೊವೆಲ್ ಜಾಬ್ಸ್ ಕೂಡ ಆಗಮಿಸುತ್ತಾರೆ ಎಂದು ತಿಳಿದು ಬಂದಿದೆ.



ಲಾರೆನ್ ಪೊವೆಲ್ ಜಾಬ್ಸ್ ಜನವರಿ 13 ರಂದು ಪ್ರಯಾಗರಾಜ್ಗೆ ಆಗಮಿಸುತ್ತಾರೆ ಮತ್ತು ಆಚಾರ್ಯ ಮಹಾಮಂಡಲೇಶ್ವರ ಸ್ವಾಮಿ ಕೈಲಾಶಾನಂದ ಗಿರಿ ಅವರ ಶಿಬಿರದಲ್ಲಿ ಸುಮಾರು 10 ದಿನಗಳ ಕಾಲ ತಂಗಲಿದ್ದಾರೆ ಎಂದು ಹೇಳಲಾಗಿದೆ. ಅವರು ಮಕರ ಸಂಕ್ರಾಂತಿಯ ಸಂದರ್ಭದಲ್ಲಿ ಗಂಗಾದಲ್ಲಿ ಅಮೃತ ಸ್ನಾನ ಮಾಡುತ್ತಾರೆ. ಈ ಸ್ನಾನವು ಮಹಾಕುಂಭದ ಪ್ರಮುಖ ಆಕರ್ಷಣೆಗಳಲ್ಲಿ ಒಂದಾಗಿದೆ ಮತ್ತು ಆಧ್ಯಾತ್ಮಿಕ ಶುದ್ಧೀಕರಣದ ಸಂಕೇತವೆಂದು ಪರಿಗಣಿಸಲಾಗಿದೆ.

ಲಾರೆನ್ ಪೊವೆಲ್ ಜಾಬ್ಸ್ ಜನವರಿ 29ಕ್ಕೆ ಕಲ್ಪವಾಸ್ ವೀಕ್ಷಣೆ ಮಾಡಲಿದ್ದಾರೆ. ಮಹಾಭಾರತ ಮತ್ತು ರಾಮಚರಿತಮಾನಗಳಲ್ಲಿ ಉಲ್ಲೇಖಿಸಲಾದ ಈ ಹಿಂದೂ ಸಂಪ್ರದಾಯವು ಸ್ವಯಂ-ಶುದ್ಧೀಕರಣ ಮತ್ತು ತೀವ್ರವಾದ ಆಧ್ಯಾತ್ಮಿಕ ಶಿಸ್ತನ್ನು ಒಳಗೊಂಡಿರುತ್ತದೆ. ಸಮಯವು ಆತ್ಮಾವಲೋಕನ ಮತ್ತು ಆಧ್ಯಾತ್ಮಿಕ ಶುದ್ಧೀಕರಣದ ಭಾವನೆಯಾಗಿ ಕಾರ್ಯನಿರ್ವಹಿಸುತ್ತದೆ. ಇದು ಪೌಶ್ ಪೂರ್ಣಿಮಾದಿಂದ ಮಾಘಿ ಪೂರ್ಣಿಮಾದವರೆಗೆ ಒಂದು ತಿಂಗಳ ಕಾಲ ಆಚರಿಸಲಾಗುತ್ತದೆ. ಈ 'ಕಲ್ಪವಾಸಿಗಳು' ಪ್ರತಿದಿನ ಗಂಗಾ ಸ್ನಾನವನ್ನು ಮಾಡುತ್ತಾರೆ.

## ಮುಂಬೈ ವಾಯು ಮಾಲಿನ್ಯ ತಡೆಯಲು ಕ್ರಮಗಳಿಗೆ ಬಾಂಬೆ ಹೈಕೋರ್ಟ್ ಸಲಹೆ

**ಮುಂಬೈ:** ಮುಂಬೈನಲ್ಲಿ ವಾಯು ಮಾಲಿನ್ಯವನ್ನು ತಡೆಯಲು ಬೇಕರಿಗಳಲ್ಲಿ ಕಟ್ಟಿಗೆ ಅಥವಾ ಕಲ್ಲಿದ್ದಲು ಭಟ್ಟಿಗಳ ಬಳಕೆಯನ್ನು ಮತ್ತು ಡೀಸೆಲ್ ವಾಹನಗಳನ್ನು ಕ್ರಮೇಣ ನಿಲ್ಲಿಸುವುದನ್ನು ಬಾಂಬೆ ಉಚ್ಚ ನ್ಯಾಯಾಲಯವು ಪ್ರಸ್ತಾವಿಸಿದೆ.



ಮುಂಬೈನಲ್ಲಿ ಹದಗೆಡುತ್ತಿರುವ ವಾಯು ಗುಣಮಟ್ಟ ಕಳವಳಗಳಿಗೆ ಸಂಬಂಧಿಸಿದಂತೆ ಸಲ್ಲಿಸಲಾಗಿರುವ ಸ್ವಯಂಪ್ರೇರಿತ ಸಾರ್ವಜನಿಕ ಹಿತಾಸಕ್ತಿ ಅರ್ಜಿಯನ್ನು ಗುರುವಾರ ವಿಚಾರಣೆಗೆ ಕೈಗೆತ್ತಿಕೊಂಡಿದ್ದ ಮುಖ್ಯ ನ್ಯಾಯಾಧೀಶ ಡಿ.ಕೆ. ಉಪಾಧ್ಯಾಯ ಮತ್ತು ಜಿ.ಎಸ್.ಕುಲಕರ್ಣಿ ಅವರ ಪೀಠವು ಡೀಸೆಲ್ ಚಾಲಿತ ವಾಹನಗಳ ಬದಲು ಸಿಎನ್‌ಜಿ ಮತ್ತು ವಿದ್ಯುತ್ ಚಾಲಿತ ವಾಹನಗಳನ್ನು ಬಳಸುವುದು ಮುಖ್ಯವಾಗಿದೆ. ದಿಲ್ಲಿಯ ನಕಲು ಮಾಡುವುದಲ್ಲ,ಆದರೆ ಕೇವಲ ಸಿಎನ್‌ಜಿ ಚಾಲಿತ ವಾಹನಗಳನ್ನು ಮಾತ್ರ ಅನುಮತಿಸುವುದನ್ನು ಮತ್ತು ಡೀಸೆಲ್ ಇಂಜಿನ್‌ಗಳನ್ನು ಹಂತ ಹಂತವಾಗಿ ನಿಲ್ಲಿಸುವುದನ್ನು ಪರಿಗಣಿಸಬಹುದು ಎಂದು ಹೇಳಿತು.

ಈ ವಿಷಯದಲ್ಲಿ ಅಮಿಕಸ್ ಕ್ಯೂರೆ ಆಗಿರುವ ವಕೀಲ ಡೇರಿಯಸ್ ಖಂಬಟ್ಟಾ ಅವರು,ಬೇಕರಿಗಳಲ್ಲಿ ಬಳಸಲಾಗುವ ಭಟ್ಟಿಗಳು ನಗರದಲ್ಲಿಯ ವಾಯು ಗುಣಮಟ್ಟ ಬಿಕ್ಕಟ್ಟಿನಲ್ಲಿ ಮೂರನೇ ಅತಿ ದೊಡ್ಡ ಪಾಲನ್ನು ಹೊಂದಿವೆ ಎಂದು ವಿಚಾರಣೆ ಸಂದರ್ಭದಲ್ಲಿ ತಿಳಿಸಿದರು. ನಿರ್ಮಾಣ ಸ್ಥಳಗಳು ಮತ್ತು 60 ಮತ್ತು ಅದಕ್ಕಿಂತ ಹೆಚ್ಚಿನ ಮಾಲಿನ್ಯ ಸೂಚ್ಯಂಕವನ್ನು ಹೊಂದಿರುವ ಕುಲುಮೆಗಳಂತಹ ಕೆಂಪು ವರ್ಗದಲ್ಲಿಯ ಕೈಗಾರಿಕೆಗಳು ವಾಯುಮಾಲಿನ್ಯದಲ್ಲಿ ಅತ್ಯಂತ ಹೆಚ್ಚಿನ ಪಾಲನ್ನು ಹೊಂದಿರುವ ಎರಡು ಕ್ಷೇತ್ರಗಳಾಗಿವೆ.

## ರಾಹುಲ್ ಗಾಂಧಿಗೆ ಪುಣೆ ನ್ಯಾಯಾಲಯ ಜಾಮೀನು

**ನವದೆಹಲಿ:** ಹಿಂದುತ್ವ ಸಿದ್ಧಾಂತವಾದಿ ವಿನಾಯಕ ದಾಮೋದರ್ ಸಾವರ್ಕರ್ (ವಿ.ಡಿ. ಸಾವರ್ಕರ್) ಅವರ ಸೋದರಳಿಯ ಸತ್ಯಕಿ ಸಾವರ್ಕರ್ ಸಲ್ಲಿಸಿದ್ದ ಕ್ರಿಮಿನಲ್ ಮಾನನಷ್ಟ ಪ್ರಕರಣದಲ್ಲಿ ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿಗೆ ಪುಣೆಯ ವಿಶೇಷ ನ್ಯಾಯಾಲಯ ಜಾಮೀನು ನೀಡಿದೆ. ಲಂಡನ್‌ನಲ್ಲಿ ನೀಡಲಾದ ಭಾಷಣದಲ್ಲಿ ವಿ.ಡಿ. ಸಾವರ್ಕರ್ ಮತ್ತು ಕೆಲವು ಸ್ನೇಹಿತರು ಮುಸ್ಲಿಂ ವ್ಯಕ್ತಿಯನ್ನು ಥಳಿಸಿದ ಘಟನೆಯ ಬಗ್ಗೆ ಪುಸ್ತಕದಲ್ಲಿ ಬರೆದಿದ್ದಾರೆ ಎಂದು ಹೇಳಿದ್ದರು.

ಆದರೆ, ವಿ.ಡಿ. ಸಾವರ್ಕರ್ ಸೋದರಳಿಯ ಸತ್ಯಕಿ ಸಾವರ್ಕರ್ ಈ ಆರೋಪಗಳನ್ನು ಬಲವಾಗಿ



ನಿರಾಕರಿಸಿದ್ದರು. ಅವುಗಳನ್ನು ''ಕಾಲ್ಪನಿಕ, ಸುಳ್ಳು ಮತ್ತು ದುರುದ್ದೇಶಪೂರಿತ'' ಎಂದು ಕರೆದಿದ್ದರು. ಅಂತಹ ಯಾವುದೇ ಘಟನೆ ನಡೆದಿಲ್ಲ ಮತ್ತು ವಿ.ಡಿ. ಸಾವರ್ಕರ್ ಈ ರೀತಿ ಏನನ್ನೂ ಬರೆದಿಲ್ಲ ಎಂದು ಅವರು ಪ್ರತಿಪಾದಿಸಿದ್ದರು. ರಾಹುಲ್ ಗಾಂಧಿಯವರ ಹೇಳಿಕೆಗಳು ನಮ್ಮ ಪ್ರತಿಷ್ಠೆಗೂ ಧಕ್ಕೆ ತರುತ್ತಿವೆ ಎಂದು ಸತ್ಯಕಿ ಸಾವರ್ಕರ್ ತಮ್ಮ ದೂರಿನಲ್ಲಿ ತಿಳಿಸಿದ್ದಾರೆ. ಆ ದೂರಿನ ನಂತರ, ಪುಣೆ ನ್ಯಾಯಾಲಯವು ಪೊಲೀಸರಿಗೆ ಈ ವಿಷಯದ ಬಗ್ಗೆ ತನಿಖೆ ನಡೆಸುವಂತೆ ಸೂಚಿಸಿತು. ರಾಹುಲ್ ಗಾಂಧಿಯ ವಕೀಲರು ಡಿಸೆಂಬರ್ 3ರಂದು ಸಂಸತ್ತಿನ ಚಳಿಗಾಲದ ಅಧಿವೇಶನ ಇರುವುದರಿಂದ ವಿಚಾರಣೆಗೆ ಹಾಜರಾಗುವುದರಿಂದ ವಿನಾಯಿತಿ ಕೋರಿದ್ದರು. ನ್ಯಾಯಾಲಯ ವಿನಾಯಿತಿ ನೀಡಿತ್ತು. ಆದರೆ ಇಂದು ನಿಗದಿಯಾಗಿದ್ದ ಮುಂದಿನ ವಿಚಾರಣೆಗೆ ರಾಹುಲ್ ಗಾಂಧಿಯವರು ಹಾಜರಾಗದಿದ್ದರೆ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದು ಎಚ್ಚರಿಸಿತ್ತು. ಲೋಕಸಭೆಯ ವಿರೋಧ ಪಕ್ಷದ ನಾಯಕ ವಿಡಿಯೋ ಕಾನ್ಫರೆನ್ಸಿಂಗ್ ಮೂಲಕ ನ್ಯಾಯಾಲಯಕ್ಕೆ ಹಾಜರಾದ ನಂತರ, ನ್ಯಾಯಾಲಯವು 25,000 ರೂ.ಗಳ ಶ್ಯೂರಿಟಿ ಬಾಂಡ್ ಮೇಲೆ ಅವರಿಗೆ ಜಾಮೀನು ನೀಡಿದೆ. ಹಿರಿಯ ಕಾಂಗ್ರೆಸ್ ನಾಯಕ ಮೋಹನ್ ಜೋಶಿ ನ್ಯಾಯಾಲಯದ ಮುಂದೆ ಶ್ಯೂರಿಟಿಯಾಗಿ ನಿಂತರು.



## ಐಸಿಸಿಗೆ ನಿರ್ಬಂಧ ಹೇರುವ ಮಸೂದೆಗೆ ಅಮೆರಿಕ ಅಂಗೀಕಾರ

**ವಾಶಿಂಗ್ಟನ್:** ಇಸ್ರೇಲ್ ಪ್ರಧಾನಿ ಬೆಂಜಮಿನ್ ನೆತನ್ಯಾಹು ಮತ್ತು ಮಾಜಿ ರಕ್ಷಣಾ ಸಚಿವ ಯೋವ್ ಶೌರ್ಯಂಟ್ ವಿರುದ್ಧ ಹೊರಡಿಸಲಾದ ಬಂಧನ ವಾರಂಟ್ಗಳಿಗೆ ಪ್ರತಿಕ್ರಿಯೆಯಾಗಿ ಅಂತಾರಾಷ್ಟ್ರೀಯ ಕ್ರಿಮಿನಲ್ ನ್ಯಾಯಾಲಯದ (ಐಸಿಸಿ) ಮೇಲೆ ನಿರ್ಬಂಧಗಳನ್ನು ವಿಧಿಸುವ ಮಸೂದೆಯನ್ನು ಅಮೆರಿಕದ ಹೌಸ್ ಆಫ್ ರೆಪ್ರೆಸೆಂಟೇಟಿವ್ಸ್ ಗುರುವಾರ ಅಂಗೀಕರಿಸಿದೆ ಎಂದು ಅಲ್ ಜಜೀರಾ ವರದಿ ಮಾಡಿದೆ

'ಕಾನೂನುಬಾಹಿರ ನ್ಯಾಯಾಲಯ ಪ್ರತಿರೋಧ ಕಾಯ್ದೆ'' ಎಂಬ ಶೀರ್ಷಿಕೆಯ ಈ ಮಸೂದೆಯನ್ನು 243-140 ಮತಗಳೊಂದಿಗೆ ಅಂಗೀಕರಿಸಲಾಯಿತು, ಇದು ಇಸ್ರೇಲ್ಗೆ ಬಲವಾದ ಬೆಂಬಲವನ್ನು ಸೂಚಿಸಿತು.

ಅಲ್ ಜಜೀರಾ ಪ್ರಕಾರ, 45 ಡೆಮೋಕ್ರಾಟ್ಗಳು 198 ರಿಪಬ್ಲಿಕನ್ನರೊಂದಿಗೆ ಸೇರಿ ಮಸೂದೆಯನ್ನು ಬೆಂಬಲಿಸಿದರು, ಯಾವುದೇ ರಿಪಬ್ಲಿಕನ್ ವಿರೋಧವಿಲ್ಲ. ಈ ಮಸೂದೆಯನ್ನು ಈಗ ರಿಪಬ್ಲಿಕನ್ ನಿಯಂತ್ರಣದಲ್ಲಿರುವ ಸೆನೆಟ್ ಪರಿಗಣಿಸಲಿದೆ.

'ಕಾಂಗರೂ ನ್ಯಾಯಾಲಯವು ನಮ್ಮ ಮಹಾನ್ ಮಿತ್ರ ಇಸ್ರೇಲ್‌ನ ಪ್ರಧಾನಿಯನ್ನು ಬಂಧಿಸಲು ಪ್ರಯತ್ನಿಸುತ್ತಿರುವುದರಿಂದ ಅಮೆರಿಕ ಈ ಕಾನೂನನ್ನು ಅಂಗೀಕರಿಸುತ್ತಿದೆ'' ಎಂದು ಹೌಸ್ ವಿದೇಶಾಂಗ ವ್ಯವಹಾರಗಳ ಸಮಿತಿಯ ರಿಪಬ್ಲಿಕನ್ ಅಧ್ಯಕ್ಷ ಪ್ರತಿನಿಧಿ ಬ್ರಿಯಾನ್ ಮಾಸ್ಟ್ ಹೇಳಿದ್ದಾರೆ.



Postal Registration No.KA/BGW-1823/2019-2021, Posted at Patrika Channel, RMS Bhavan, Bengaluru PSO, Mysore Road, Bengaluru- 560020, RNI No.KARKAN/2002/08054





# ರಶ್ಮಿಕಾ ಮಂದಣ್ಣಗೆ ಪೆಟ್ಟು 'ಸಿಖಂದರ್' ಚಿತ್ರದ ಶೂಟಿಂಗ್ ಸ್ಥಗಿತ

'ಪುಷ್ಪ 2' ಸಕ್ಸಸ್ ಖುಷಿಯಲ್ಲಿದ್ದ ಕೊಡಗಿನ ಕುವರಿ ರಶ್ಮಿಕಾ ಮಂದಣ್ಣ ಗಾಯಗೊಂಡಿದ್ದಾರೆ. ಜಿಮ್‌ನಲ್ಲಿ ವರ್ಕೌಟ್ ಮಾಡುವಾಗ ರಶ್ಮಿಕಾಗೆ ಪೆಟ್ಟಾಗಿದೆ ಎಂದು ಹೇಳಲಾಗುತ್ತಿದೆ.

ಮೂಲಗಳ ಪ್ರಕಾರ, ನಟಿ ರಶ್ಮಿಕಾಗೆ ಸಣ್ಣದಾಗಿ ಪೆಟ್ಟಾಗಿದೆ ಎನ್ನಲಾಗಿದೆ. ಜಿಮ್‌ನಲ್ಲಿ ವ್ಯಾಯಾಮ ಮಾಡುವಾಗ ನಟಿ ಗಾಯಗೊಂಡಿದ್ದಾರೆ. ಆತಂತಪಡುವಂತಹದ್ದು ಏನಿಲ್ಲ. ಕೆಲ ದಿನಗಳ ಕಾಲ ಅವರು ವಿಶ್ರಾಂತಿ ಪಡೆಯಲಿದ್ದಾರೆ ಎನ್ನಲಾಗಿದೆ. ಈ ಹಿನ್ನೆಲೆ ಸದ್ಯ ಒಪ್ಪಿಕೊಂಡಿದ್ದ ಸಲ್ಮಾನ್ ಖಾನ್ ಜೊತೆಗಿನ 'ಸಿಖಂದರ್' ಚಿತ್ರದ ಶೂಟಿಂಗ್ ಕೂಡ ನಿಲ್ಲಿಸಲಾಗಿದೆ. ಸಂಪೂರ್ಣವಾಗಿ ಚೇತರಿಸಿಕೊಂಡ ನಂತರವೇ ಅವರು ಶೂಟಿಂಗ್‌ನಲ್ಲಿ ಭಾಗಿಯಾಗಲಿದ್ದಾರೆ. ಇನ್ನೂ ನಟಿಯ ಕಡೆಯಿಂದ ಆರೋಗ್ಯದ ಬಗ್ಗೆ ಮಾಹಿತಿ ಸಿಗುತ್ತಾ? ಕಾಯಬೇಕಿದೆ. ಈ ವಿಚಾರ ತಿಳಿದು ಫ್ಯಾನ್ಸ್ ನಟಿಗೆ ಏನಾಯ್ತು ಎಂದು ಚರ್ಚಿಸುತ್ತಿದ್ದಾರೆ.

ಅಂದಹಾಗೆ, ಅಲ್ಲು ಅರ್ಜುನ್ ಜೊತೆ ರಶ್ಮಿಕಾ ನಟಿಸಿದ್ದ 'ಪುಷ್ಪ 2' ಡಿ.5ರಂದು ರಿಲೀಸ್ ಆಗಿ ಭರ್ಜರಿ ಕಲೆಕ್ಷನ್ ಮಾಡಿದೆ. 1800 ಕೋಟಿ. ರೂಗೂ ಅಧಿಕ ಗಳಿಕೆ ಮಾಡಿ ಸಿನಿಮಾ ಗೆದ್ದು ಬೀಗಿದೆ.



# ದಿ ರೈಸ್ ಆಫ್ ಅಶೋಕ ಮೋಷನ್ ಪೋಸ್ಟರ್ ಔಟ್

ನೀನಾಸಂ ಸತೀಶ್ ನಟಿಸುತ್ತಿರುವ ಅಶೋಕ ಬ್ಲೇಡ್ ಸಿನಿಮಾವೀಗ ಶೀರ್ಷಿಕೆ ಬದಲಾವಣೆಯೊಂದಿಗೆ ಮತ್ತೆ ಶೂಟಿಂಗ್ ಅಖಾಡಕ್ಕೆ ಇಳಿಯುತ್ತಿದೆ. ಅಶೋಕ್ ಬ್ಲೇಡ್ ಬದಲಿಗೆ 'ದಿ ರೈಸ್ ಆಫ್ ಅಶೋಕ' ಎಂಬ ಟೈಟಲ್ ಇಡಲಾಗಿದೆ. ಕೈಯಲ್ಲಿ ಮಚ್ಚು ಹಿಡಿದು ರಗಡ್ ಅವತಾರ ತಾಳಿದ್ದಾರೆ. ಸಿನಿಮಾದ ಪೋಸ್ಟರ್ ರಿಲೀಸ್ ಆಗಿದೆ.

ನಿರ್ದೇಶಕ ವಿನೋದ್ ದೊಂಡಾಲೆ ನಿಧನದ ಬಳಿಕ ಈ ಚಿತ್ರ ನಿಂತು ಹೋಯ್ತು ಎಂಬ ಸುದ್ದಿಯಾಗಿತ್ತು. ಆದರೆ ನಟ ನೀನಾಸಂ ಸತೀಶ್ 'ದಿ ರೈಸ್ ಆಫ್ ಅಶೋಕ' ಸಿನಿಮಾವನ್ನು ಕೈಗೆತ್ತಿಕೊಂಡಿದ್ದಾರೆ. ವಿನೋದ್ ದೊಂಡಾಲೆ ಶೇಕಡ 80%ರಷ್ಟು ಚಿತ್ರೀಕರಣ ಮುಗಿಸಿದ್ದಾರೆ. ಒಂದಿಷ್ಟು ಟಾಕಿ ಮತ್ತು ಹಾಡುಗಳ ಚಿತ್ರೀಕರಣ ಬಾಕಿ ಇತ್ತು.



ಚಮಕ್, ಕ್ಷೇತ್ರಪತಿ, ಅವತಾರ ಪುರುಷ ಸೇರಿದಂತೆ ಒಂದಷ್ಟು ಸಿನಿಮಾಗಳಲ್ಲಿ ಸಂಕಲನಕಾರರಾಗಿ ಕೆಲಸ ಮಾಡಿರುವ ಮನು ಶೇಡ್ಗಾರ್ 'ದಿ ರೈಸ್ ಆಫ್ ಅಶೋಕ'ನಿಗೆ ಉಳಿದ ದೃಶ್ಯಗಳಿಗೆ ಆಕ್ಷನ್ ಕಟ್ ಹೇಳುತ್ತಿದ್ದಾರೆ. ಈ ಚಿತ್ರದ ಮೋಷನ್ ಪೋಸ್ಟರ್ ಬಿಡುಗಡೆಯಾಗಿದೆ. ಮಚ್ಚು ಹಿಡಿದು ರಗಡ್ ಲುಕ್‌ನಲ್ಲಿ ನೀನಾಸಂ ಸತೀಶ್ ಕಾಣಿಸಿಕೊಂಡಿದ್ದಾರೆ. ಇದು ರೆಟ್ರೋ ಕಾಲದ ಕಥೆ ಅನ್ನೋದು ಪೋಸ್ಟರ್‌ನಲ್ಲಿ ಗೊತ್ತಾಗ್ತಿದೆ. ಬಂಡಾಯದ ಕಥೆಯನ್ನು ಹರವಿಡೋದಿಕ್ಕೆ ಸತೀಶ್ ಟೀಮ್ ಸಜ್ಜಾಗಿದೆ.

ಫೆಬ್ರವರಿ ತಿಂಗಳ 15ರಿಂದ 'ದಿ ರೈಸ್ ಆಫ್ ಅಶೋಕ'ಸಿನಿಮಾದ ಚಿತ್ರೀಕರಣ ಮತ್ತೆ ಪ್ರಾರಂಭವಾಗಲಿದೆ. ಸತೀಶ್ ವೃತ್ತಿ ಜೀವನದ ಅತ್ಯುತ್ತಮ ಚಿತ್ರವಾಗಿದ್ದು, ಕನ್ನಡದ ಜೊತೆಗೆ ತಮಿಳು ಹಾಗೂ ತೆಲುಗಿನಲ್ಲಿ ಅದ್ದೂರಿಯಾಗಿ ತಯಾರಾಗುತ್ತಿದೆ. ವೃದ್ಧಿ ಕ್ರಿಯೇಷನ್ ಹಾಗೂ ಸತೀಶ್ ಪಿಕ್ಚರ್ಸ್ ಹೌಸ್ ಬ್ಯಾನರ್ ನಡಿ ವರ್ಧನ್ ನರಹರಿ, ಜೈಷ್ಣವಿ ಹಾಗೂ ನೀನಾಸಂ ಸತೀಶ್ ಅವರು 'ರೈಸ್ ಆಫ್ ಅಶೋಕ' ಸಿನಿಮಾವನ್ನು ನಿರ್ಮಾಣ ಮಾಡುತ್ತಿದ್ದಾರೆ. ನೀನಾಸಂ ಸತೀಶ್ ನಾಯಕನಾಗಿ ಅಭಿನಯಿಸುತ್ತಿದ್ದು, ಬಿ.ಸುರೇಶ್, ಅಚ್ಯುತ್ ಕುಮಾರ್, ಗೋಪಾಲ ಕೃಷ್ಣ ದೇಶಪಾಂಡೆ, ಸಂಪತ್ ಮೈತ್ರೀಯಾ, ಯಶ್ ಶೆಟ್ಟಿ ತಾರಾಬಳಗದಲ್ಲಿದ್ದಾರೆ.

'ದಿ ರೈಸ್ ಆಫ್ ಅಶೋಕ'ನಿಗೆ ಲವಿತ್ ಕ್ಯಾಮೆರಾ ಹಿಡಿಯುತ್ತಿದ್ದು, ವರದರಾಜ್ ಕಾಮತ್ ಕಲಾ ನಿರ್ದೇಶನ, ಪೂರ್ಣಚಂದ್ರ ತೇಜಸ್ವಿ ಎಸ್.ವಿ ಸಂಗೀತ ನಿರ್ದೇಶನ, ಡಾ.ರವಿವರ್ಮಾ ಮತ್ತು ವಿಕ್ರಮ್ ಮೋರ್ ಸಾಹಸ ನಿರ್ದೇಶನ, ಸಂತೋಷ್ ಶೇಖರ್ ನೃತ್ಯ ನಿರ್ದೇಶನ ಈ ಚಿತ್ರಕ್ಕಿದೆ. ನಿರ್ದೇಶನದ ಜೊತೆಗೆ ಮನು ಶೆಡ್ಗಾರ್ ಸಂಕಲನದ ಹೊಣೆ ಕೂಡ ಹೊತ್ತುಕೊಂಡಿದ್ದಾರೆ.




# 'ಪುಷ್ಪ ಕಾ ಬಾಪ್' ಎಂದು ಕೇಕ್ ಮೇಲೆ ಬರೆದು ತಂದೆಗೆ ವಿಶ್ ಮಾಡಿದ ಅಲ್ಲು ಅರ್ಜುನ್

ಅಲ್ಲು ಅರ್ಜುನ್ ತಂದೆ ಅಲ್ಲು ಅರವಿಂದ್ ಅವರು ನಿನ್ನೆ ಹುಟ್ಟುಹಬ್ಬ ಆಚರಿಸಿಕೊಂಡಿದ್ದಾರೆ. ತಂದೆ ಹುಟ್ಟುಹಬ್ಬಕ್ಕೆ ವಿಶೇಷವಾಗಿ ಅಲ್ಲು ಅರ್ಜುನ್ ವಿಶ್ ಮಾಡಿದ್ದಾರೆ.

76ನೇ ಹುಟ್ಟುಹಬ್ಬದ ಸಂಭ್ರಮದಲ್ಲಿರುವ ತಂದೆಗೆ 'ಪುಷ್ಪ ಕಾ ಬಾಪ್' ಎಂದು ಕೇಕ್ ಮೇಲೆ ಬರೆದು ಅಲ್ಲು ಅರ್ಜುನ್ ವಿಶೇಷವಾಗಿ ಶುಭಹಾರೈಸಿದ್ದಾರೆ. ಹ್ಯಾಪಿ ಬರ್ತ್‌ಡೇ ಎಂದು ನಟ ಇನ್ಸ್ಟಾಗ್ರಾಂ ಸ್ಟೋರಿಯಲ್ಲಿ ಬರೆದುಕೊಂಡಿದ್ದಾರೆ.

ಇನ್ನೂ ನಿರ್ಮಾಪಕ ಅಲ್ಲು ಅರವಿಂದ್ ಕುಟುಂಬಸ್ಥರ ಜೊತೆ ಕೇಕ್ ಕತ್ತರಿಸಿ ಹುಟ್ಟುಹಬ್ಬ ಸೆಲೆಬ್ರೇಟ್ ಮಾಡಿದ್ದಾರೆ. ಅಲ್ಲು ಅರ್ಜುನ್ ತಂದೆಗೆ ಸೆಲೆಬ್ರಿಟಿಗಳು, ಅಭಿಮಾನಿಗಳು ಶುಭಹಾರೈಸುತ್ತಿದ್ದಾರೆ. ಇನ್ನೂ ಅಲ್ಲು ನಟನೆಯ 'ಪುಷ್ಪ 2' 1800 ಕೋಟಿ ರೂ. ಗಳಿಸಿರುವ ಖುಷಿ ಒಂದು ಕಡೆಯಾದ್ರೆ, ಅಪ್ಪನ ಬರ್ತ್‌ಡೇ ಮತ್ತೊಂದು ಸಂಭ್ರಮ. ಈ ಎರಡು ವಿಚಾರ ನಟನ ಮನೆಯಲ್ಲಿ ಖುಷಿಯನ್ನು ದುಪ್ಪಟ್ಟು ಮಾಡಿದೆ.






# ಟೆಸ್ಟ್ ಜೆರ್ಸಿ ಫೋಟೋ

## ನಿವೃತ್ತಿ ಸೂಚನೆ ನೀಡಿದ್ರಾ, ರವೀಂದ್ರ ಜಡೇಜಾ

ಟೀಮ್ ಇಂಡಿಯಾ ಆಲ್ ರೌಂಡರ್ ರವೀಂದ್ರ ಜಡೇಜಾ ಟೆಸ್ಟ್ ಕ್ರಿಕೆಟ್‌ಗೆ ವಿದಾಯ ಹೇಳುತ್ತಿದ್ದಾರಾ? ಇಂತಹದೊಂದು ಪ್ರಶ್ನೆ ಮೂಡಲು ಕಾರಣ ಅವರು ಸೋಷಿಯಲ್ ಮೀಡಿಯಾದಲ್ಲಿ ಹಂಚಿಕೊಂಡ ಆ ಒಂದು ಫೋಟೋ. ಅದು ಕೂಡ ಕೊನೆಯ ಟೆಸ್ಟ್ ಪಂದ್ಯದಲ್ಲಿ ಧರಿಸಿದ ಜೆರ್ಸಿ ಫೋಟೋ. ಸಿಡ್ನಿಯಲ್ಲಿ ನಡೆದ ಆಸ್ಟ್ರೇಲಿಯಾ ವಿರುದ್ಧದ ಕೊನೆಯ ಟೆಸ್ಟ್ ಪಂದ್ಯದಲ್ಲಿ ಭಾರತ ತಂಡ ಪಿಂಕ್ ಬಣ್ಣದ ಬರಹಗಳಿರುವ ಜೆರ್ಸಿಯಲ್ಲಿ ಕಣಕ್ಕಿಳಿದಿದ್ದರು. ಇದಾಗಿ ವಾರ ಕಳೆದರೂ, ಇದೀಗ ಜಡೇಜಾ ಆ ಜೆರ್ಸಿಯ ಫೋಟೋವನ್ನು ಸೋಷಿಯಲ್ ಮೀಡಿಯಾದಲ್ಲಿ ಹಂಚಿಕೊಂಡಿದ್ದಾರೆ. ಅಲ್ಲದೆ ಈ ಫೋಟೋಗೆ ಯಾವುದೇ ಅಡಿಬರಹ ನೀಡಿಲ್ಲ ಎಂಬುದು ವಿಶೇಷ.

ಸಾಮಾನ್ಯವಾಗಿ ರವೀಂದ್ರ ಜಡೇಜಾ ತಮ್ಮ ಕಂಬ್ಯಾಕ್ ಸೂಚನೆ ನೀಡುವಾಗ ಜೆರ್ಸಿ ಫೋಟೋಗಳನ್ನು ಹಂಚಿಕೊಳ್ಳುತ್ತಿದ್ದರು. ಈ ಹಿಂದೆ ಗಾಯದ ಬಳಿಕ ಟೆಸ್ಟ್ ಕ್ರಿಕೆಟ್‌ಗೆ ಮರಳುತ್ತಿರುವುದಾಗಿ ಜೆರ್ಸಿ ಫೋಟೋ ಹಂಚಿಕೊಳ್ಳುವಾಗ ಮೂಲಕ ತಿಳಿಸಿದ್ದರು. ಆದರೆ ಈ ಬಾರಿ ಜಡೇಜಾ ಯಾವುದೇ ಬರಹಗಳಿಲ್ಲದೆ, ಕೇವಲ ಟೆಸ್ಟ್ ಜೆರ್ಸಿ ಫೋಟೋ ಮಾತ್ರ ಹಂಚಿಕೊಂಡಿದ್ದಾರೆ.




ಇದರ ಬೆನ್ನಲ್ಲೇ ರವೀಂದ್ರ ಜಡೇಜಾ ಟೆಸ್ಟ್ ಕ್ರಿಕೆಟ್‌ಗೆ ವಿದಾಯ ಹೇಳುತ್ತಿದ್ದಾರಾ ಎಂಬ ಪ್ರಶ್ನೆಯೊಂದು ಹುಟ್ಟಿಕೊಂಡಿದೆ. ಏಕೆಂದರೆ ಮುಂಬರುವ ಇಂಗ್ಲೆಂಡ್ ವಿರುದ್ಧದ ಟೆಸ್ಟ್ ಸರಣಿಗೂ ಮುನ್ನ ಟೀಮ್ ಇಂಡಿಯಾಗೆ ಮೇಜರ್ ಸರ್ಜರಿಯಾಗಲಿದೆ. ಈ ಪಟ್ಟಿಯಲ್ಲಿ ರವೀಂದ್ರ ಜಡೇಜಾ ಕೂಡ ಇದ್ದಾರಾ ಎಂಬುದೇ ಈಗ ಪ್ರಶ್ನೆ.

ಏಕೆಂದರೆ 36 ವರ್ಷದ ರವೀಂದ್ರ ಜಡೇಜಾ ಈಗಾಗಲೇ ಟಿ20 ಕ್ರಿಕೆಟ್‌ಗೆ ವಿದಾಯ ಹೇಳಿದ್ದಾರೆ. ಇದೀಗ ಭಾರತ ಟೆಸ್ಟ್ ತಂಡದ ಹಿರಿಯ ಆಟಗಾರರಲ್ಲಿ ಜಡೇಜಾ ಕೂಡ ಒಬ್ಬರು. ಹೀಗಾಗಿ ಇಂಗ್ಲೆಂಡ್ ವಿರುದ್ಧದ 5 ಪಂದ್ಯಗಳ ಟೆಸ್ಟ್ ಸರಣಿಗೆ ರವೀಂದ್ರ ಜಡೇಜಾ ಅವರನ್ನು ಪರಿಗಣಿಸುವ ಸಾಧ್ಯತೆಯಿಲ್ಲ.

ಈ ಬಗ್ಗೆ ಸ್ಪಷ್ಟ ಸೂಚನೆ ಸಿಕ್ಕ ಹಿನ್ನಲೆಯಲ್ಲಿ ರವೀಂದ್ರ ಜಡೇಜಾ ಕೊನೆಯ ಬಾರಿ ಧರಿಸಿದ ಟೆಸ್ಟ್ ಜೆರ್ಸಿಯ ಫೋಟೋವನ್ನು ಹಂಚಿಕೊಂಡಿದ್ದಾರೆ ಎಂದು ಹೇಳಲಾಗುತ್ತಿದೆ. ಒಟ್ಟಿನಲ್ಲಿ ಜೂನ್‌ನಲ್ಲಿ ನಡೆಯಲಿರುವ ಇಂಗ್ಲೆಂಡ್ ವಿರುದ್ಧದ ಟೆಸ್ಟ್ ಸರಣಿಯಿಂದ ಟೀಮ್ ಇಂಡಿಯಾದ ಹಿರಿಯ ಆಟಗಾರರು ಹೊರಬೀಳುವುದು ಖಚಿತ. ಈ ಹಿರಿಯರಲ್ಲಿ 36 ವರ್ಷದ ಜಡೇಜಾ ಕೂಡ ಇರಲಿದ್ದಾರಾ ಕಾದು ನೋಡಬೇಕಿದೆ.

**ರವೀಂದ್ರ ಜಡೇಜಾ ಟೆಸ್ಟ್ ಕೆರಿಯರ್:** ರವೀಂದ್ರ ಜಡೇಜಾ ಟೀಮ್ ಇಂಡಿಯಾ ಪರ 80 ಟೆಸ್ಟ್ ಪಂದ್ಯಗಳನ್ನಾಡಿದ್ದಾರೆ. ಈ ವೇಳೆ 118 ಇನಿಂಗ್ಸ್‌ಗಳಲ್ಲಿ ಬ್ಯಾಟ್ ಬೀಸಿರುವ ಅವರು 4 ಶತಕ ಹಾಗೂ 22 ಅರ್ಧಶತಕಗಳೊಂದಿಗೆ ಒಟ್ಟು 3370 ರನ್ ಕಲೆಹಾಕಿದ್ದಾರೆ. ಹಾಗೆಯೇ 150 ಇನಿಂಗ್ಸ್‌ಗಳಲ್ಲಿ ಬೌಲಿಂಗ್ ಮಾಡಿರುವ ಅವರು 323 ವಿಕೆಟ್ ಕಬಳಿಸಿ ಮಿಂಚಿದ್ದಾರೆ.

# ಐರ್ಲೆಂಡ್ ವಿರುದ್ಧ ಟೀಂ ಇಂಡಿಯಾಗೆ 6 ವಿಕೆಟ್‌ಗಳ ಜಯ

ಸ್ಮೃತಿ ಮಂಧಾನ ನಾಯಕತ್ವದಲ್ಲಿ ಏಕದಿನ ಕ್ರಿಕೆಟ್‌ನಲ್ಲಿ ಟೀಂ ಇಂಡಿಯಾ ಮಹಿಳೆಯರ ತಂಡ ಐರ್ಲೆಂಡ್ ವಿರುದ್ಧ ಸುಲಭ ಜಯ ಸಾಧಿಸಿತು. ಮೂರು ಪಂದ್ಯಗಳ ಸರಣಿಯಲ್ಲಿ ಶುಭಾರಂಭ ಮಾಡಿದೆ.

ಶುಕ್ರವಾರ ರಾಜ್‌ಕೋಟ್‌ನಲ್ಲಿ ನಡೆದ ಮೊದಲ ಪಂದ್ಯದಲ್ಲಿ ಭಾರತ ತಂಡ 6 ವಿಕೆಟ್‌ಗಳಿಂದ ಐರ್ಲೆಂಡ್ ವಿರುದ್ಧ ಗೆಲುವು ದಾಖಲಿಸಿದೆ. ಆ ಮೂಲಕ 3 ಪಂದ್ಯಗಳ ಸರಣಿಯನ್ನು 1-0 ಅಂತರದಲ್ಲಿ ಮುನ್ನಡೆ ಕಾಯ್ದುಕೊಂಡಿದೆ.

**ಪ್ರತಿಕಾ, ತೇಜಲ್ ಫಿಫ್ಟಿ:** ಆರಂಭಿಕ ಆಟಗಾರ್ತಿ ಪ್ರತೀಕಾ ರಾವಲ್ ಅರ್ಧಶತಕ ಸಿಡಿಸಿ ಮಿಂಚಿದರು. 96 ಎಸೆತಗಳಿಗೆ 89 ರನ್ (10 ಫೋರ್, 1 ಸಿಕ್ಸರ್) ಗಳಿಸಿದರು. ಇವರಿಗೆ ನಾಯಕಿ ಸ್ಮೃತಿ ಮಂಧಾನ ಸಾಥ್ ನೀಡಿದರು. ಮೊದಲ ವಿಕೆಟ್ ನಷ್ಟಕ್ಕೆ ಜೋಡಿ 70 ರನ್ ಸೇರಿಸಿತು. ಸ್ಮೃತಿ 41 ರನ್ (6 ಫೋರ್, 1 ಸಿಕ್ಸರ್) ಗಳಿಸಿ ಔಟಾದರು.



ನಂತರ ಬಂದ ಹರ್ಲೀನ್ ಡಿಯೋಲ್ 20 ರನ್ ಗಳಿಸಿದರು. ತೇಜಲ್ ಹಸಬ್ನಿಸ್ 46 ಎಸೆತಕ್ಕೆ 53 ರನ್ ಗಳಿಸಿ (9 ಫೋರ್) ಗಮನ ಸೆಳೆದರು. ಜೆಮಿಮಾ ರೋಡ್ರಿಗಸ್ ಹಾಗೂ ರಿಚಾ ಘೋಷ್ ತಲಾ 8 ರನ್ ಗಳಿಸಿದರು.

ಟಾಸ್ ಗೆದ್ದು ಮೊದಲು ಬ್ಯಾಟ್ ಮಾಡಿದ ಐರ್ಲೆಂಡ್ 50 ಓವರ್‌ಗೆ 7 ವಿಕೆಟ್ ನಷ್ಟಕ್ಕೆ 238 ರನ್ ಗಳಿಸಿದರು. ಕ್ಯಾಪ್ಟನ್ ಗ್ಯಾಬಿ ಲೂಯಿಸ್ 92 ರನ್ (15 ಫೋರ್), ಲಿಯಾ ಪಾಲ್ 59 ರನ್ (7 ಫೋರ್) ಬಾರಿಸಿ ಗಮನ ಸೆಳೆದರು. ಅರ್ಲೀನ್ ಕೆಲ್ಲಿ 28, ಕ್ರಿಸ್ಟಿನಾ ಕೌಲ್ಟರ್ ರೀಲಿ 15 ರನ್ ಗಳಿಸಿ ತಂಡದ ಮೊತ್ತ 200 ಗಡಿ ದಾಟಲು ನೆರವಾದರು.

ಟೀಂ ಇಂಡಿಯಾ ಪರ ಪ್ರಿಯಾ ಮಿಶ್ರಾ 2, ಟೈಟಾಸ್ ಸಾಧು, ಸಯಾಲಿ ಸತ್ಘರೆ, ದೀಪ್ತಿ ಶರ್ಮಾ ತಲಾ 1 ವಿಕೆಟ್ ಕಿತ್ತರು.

## ಬಿಜೆಪಿಯಿಂದ ಪ್ರತಾಪ್ ಸಿಂಹ ಉಚ್ಚಾಟನೆಗೆ ಪತ್ರ

# ಪಕ್ಷದಿಂದ ಹೊರ ಹೋಗ್ತಾರಾ ಮಾಜಿ ಸಂಸದ!

**ಮೈಸೂರು:** ಮಾಜಿ ಸಂಸದ ಪ್ರತಾಪ್ ಸಿಂಹ ಅವರ ವಿರುದ್ಧ ಸ್ವಪಕ್ಷ ಬಿಜೆಪಿಯಲ್ಲೇ ಆಕ್ರೋಶ ವ್ಯಕ್ತವಾಗಿದೆ. ಮೈಸೂರು-ಕೊಡಗು ಲೋಕಸಭಾ ಕ್ಷೇತ್ರದ ಮಾಜಿ ಸಂಸದರಾಗಿರುವ ಪ್ರತಾಪ್ ಸಿಂಹ ಅವರ ವಿರುದ್ಧ ಮೈಸೂರಿನಲ್ಲೇ ಕಾರ್ಯಕರ್ತರು ಕಿಡಿ ಕಾರಿದ್ದು, ಪಕ್ಷ ವಿರೋಧಿ ಚಟುವಟಿಕೆ ಹಿನ್ನಲೆ ಅವರನ್ನು ಬಿಜೆಪಿಯಿಂದ ಉಚ್ಚಾಟಿಸಬೇಕು ಎಂದು ಪತ್ರ ಬರೆದಿದ್ದಾರೆ.

ಪ್ರತಾಪ್ ಸಿಂಹ ವಿರುದ್ಧ ಶಿಸ್ತು ಕ್ರಮ ಕೈಗೊಳ್ಳುವಂತೆ ಬಿಜೆಪಿ ಕಾರ್ಯಕರ್ತರು ಪತ್ರ ಬರೆದಿದ್ದಾರೆ. ಮೈಸೂರು ನಗರಾಧ್ಯಕ್ಷ ಎಲ್.ನಾಗೇಂದ್ರ, ಗ್ರಾಮಾಂತರ ಅಧ್ಯಕ್ಷ ಮಹದೇವಸ್ವಾಮಿಗೆ ಪತ್ರದ ಮೂಲಕ ಕಾರ್ಯಕರ್ತರು ಮನವಿ ಮಾಡಿದ್ದಾರೆ.

ಹಾಲಿ ಸಂಸದರಿಗೆ ಮುಜುಗರ ತರುವ ಕೆಲಸ

ಚಾಮರಾಜ ಕ್ಷೇತ್ರದ ನಿಕಟ ಪೂರ್ವ ಉಪಾಧ್ಯಕ್ಷ ಕುಮಾರ್ ಗೌಡ, ಪರಿಶಿಷ್ಟ ಪಂಗಡಗಳ ಮೋರ್ಚಾದ ಮಾಜಿ ಅಧ್ಯಕ್ಷ ಮೈ.ಕಾ ಪ್ರೇಮ್ ಕುಮಾರ್ ಪ್ರತಾಪ್ ಸಿಂಹ ವಿರುದ್ಧ ಕ್ರಮ ಕೈಗೊಳ್ಳುವಂತೆ ಪತ್ರ ಬರೆದಿದ್ದಾರೆ. ಪ್ರತಾಪ್ ಸಿಂಹ ಹಾಲಿ ಸಂಸದರಿಗೆ ಮುಜುಗರ ತರುವ ಕೆಲಸ ಮಾಡುತ್ತಿದ್ದಾರೆ ಎಂದು ಪತ್ರದಲ್ಲಿ ಆರೋಪಿಸಲಾಗಿದೆ.

ಪಕ್ಷದ ಬ್ಯಾನರ್ ಅಡಿಯಲ್ಲಿ ಹೋರಾಟ ಮಾಡುತ್ತಿಲ್ಲ

ಕಳೆದ ವಿಧಾನಸಭಾ ಚುನಾವಣೆಯಲ್ಲಿ ಮೈಸೂರು ಲೋಕಸಭಾ ಕ್ಷೇತ್ರಗಳಲ್ಲಿ ಪ್ರಚಾರ ಮಾಡಲಿಲ್ಲ. ಕೇವಲ ವರುಣ ವ್ಯಾಪ್ತಿಯಲ್ಲಿ ಪ್ರಚಾರ ಮಾಡಿ ಸೋಲಿಗೆ ಕಾರಣರಾದರು ಎಂದು ಪತ್ರದಲ್ಲಿ ಆರೋಪಿಸಿದ್ದಾರೆ. ಪ್ರತಾಪ್ ಸಿಂಹ ಅವರು ವಕ್ಫ್ ವಿಚಾರದಲ್ಲಿ ಪಕ್ಷದ ಬ್ಯಾನರ್ ಅಡಿಯಲ್ಲಿ ಹೋರಾಟ ಮಾಡದೆ ವಿಜಯೇಂದ್ರ ಅವರಿಗೆ ಮುಜುಗರ ಮಾಡಿದ್ರು ಎಂದು ಕಿಡಿ ಕಾರಿದ್ದು, ಇನ್ನೂ ಅನೇಕ ಕಾರಣ ನೀಡಿ ಅವರನ್ನು ಉಚ್ಚಾಟನೆ ಮಾಡಬೇಕು ಎಂದು ಮನವಿ ಮಾಡಿದ್ದಾರೆ.



ಮೈಸೂರಿನಲ್ಲಿ ರಸ್ತೆಗೆ ಸಿದ್ದರಾಮಯ್ಯ ಅವರ ಹೆಸರಿಡುವ ವಿಚಾರಕ್ಕೆ ಸಾಕಷ್ಟು ವಿರೋಧ ವ್ಯಕ್ತವಾಗಿತ್ತು. ಈ ನಡುವೆ ಬಿಜೆಪಿಯಲ್ಲೇ ಇದಕ್ಕೆ ಭಿನ್ನರಾಗ ಕೇಳಿಬಂದಿತ್ತು. ಹಲವು ಬಿಜೆಪಿ ನಾಯಕರು ರಸ್ತೆಗೆ ಸಿದ್ದರಾಮಯ್ಯ ಅವರ ಹೆಸರಿಡುವುದಕ್ಕೆ ವಿರೋಧ ವ್ಯಕ್ತಪಡಿಸಿದ್ದರು. ಆದರೆ, ಮಾಜಿ ಸಂಸದ ಪ್ರತಾಪ್ ಸಿಂಹ ಮಾತ್ರ ಸಿದ್ದರಾಮಯ್ಯ ಅವರ ಹೆಸರಿಟ್ಟರೆ ತಪ್ಪೇನಿದೆ ಎಂದು ಪ್ರಶ್ನಿಸುವ ಮೂಲಕ ಸಿಎಂ ಪರ ಬ್ಯಾಟ್ ಬೀಸಿದ್ದರು. ಇದಕ್ಕೆ ಪ್ರತಾಪ್ ಸಿಂಹ ವಿರುದ್ಧ ಸಂಸದ ಯದುವೀರ್ ಸೇರಿ ಹಲವರು ಬೇಸರ ವ್ಯಕ್ತಪಡಿಸಿದ್ದರು.

ಪ್ರತಾಪ್ ಸಿಂಹಗೆ ಕಾಂಗ್ರೆಸ್ ಪಕ್ಷದಿಂದ ಆಹ್ವಾನ ಬಂದಿದೆ ಅವರು ಕಾಂಗ್ರೆಸ್ ಸೇರಲಿದ್ದಾರೆ ಎಂಬ ಮಾತುಗಳು ಕೇಳಿಬಂದಿದ್ದವು ಇದಕ್ಕೆ ಉತ್ತರಿಸಿದ್ದ ಅವರು, 'ಪ್ರತಾಪ್ ಸಿಂಹಗೆ ಬಿಜೆಪಿ ಬಿಟ್ಟು ಕಾಂಗ್ರೆಸ್‌ಗೆ ಹೋಗುವ ಅನಿವಾರ್ಯತೆ ಇಲ್ಲ. ನನ್ನ ತಂದೆ ಕೂಡ ಜನಸಂಘದಿಂದ ಬಂದಿರೋರು. ನಾನು ಕಾಂಗ್ರೆಸ್‌ಗೆ ಹೋಗಬೇಕು ಅಂತಿದ್ದರೆ ಚುನಾವಣೆ ಸಮಯದಲ್ಲೇ ಹೋಡುತ್ತಿದ್ದೆ. ಟಿಕೆಟ್ ಕೊಡ್ತೀವಿ ಬನ್ನಿ ಅಂತ ಸಾಕಷ್ಟು ಜನ ಕರೆದರು. ಅಂತಹ ಸಮಯದಲ್ಲೇ ಹೋಗಲಿಲ್ಲ' ಎಂದು ಸ್ಪಷ್ಟನೆ ನೀಡಿದ್ದರು.

ವಿಜಯಪುರ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಬಣದವರೆಂದು ಗುರುತಿಸಿಕೊಂಡಿರುವ ಪ್ರತಾಪ್ ಸಿಂಹ ವಿರುದ್ಧ ಈ ಹಿಂದೆ ಹಲವು ಬಿಜೆಪಿ ನಾಯಕರು ಆಕ್ರೋಶ ವ್ಯಕ್ತಪಡಿಸಿದ್ದರು. ವಕ್ಫ್ ವಿರುದ್ಧದ ಹೋರಾಟದಲ್ಲೂ ಪ್ರತಾಪ್ ಸಿಂಹ್ ಯತ್ನಾಳ್ ಬಣದಲ್ಲಿ ಕಾಣಿಸಿಕೊಳ್ಳುತ್ತಿದ್ದಾರೆ.

# ಕಾಂಗ್ರೆಸ್ ಸರ್ಕಾರದಲ್ಲಿ ಪ್ರತಿಯೊಂದಕ್ಕೂ ರೇಟ್ ಫಿಕ್ಸ್ ಆಗಿದೆ: ಹೆಚ್‌ಡಿಕೆ ಆರೋಪ

**ಬೆಂಗಳೂರು:** ಕಾಂಗ್ರೆಸ್ ಸರ್ಕಾರದಲ್ಲಿ ಪ್ರತಿಯೊಂದಕ್ಕೂ ರೇಟ್ ಫಿಕ್ಸ್ ಆಗಿದೆ ಎಂದು ಕೇಂದ್ರ ಸಚಿವ ಹೆಚ್.ಡಿ ಕುಮಾರಸ್ವಾಮಿ ಆರೋಪ ಮಾಡಿದ್ದಾರೆ.



ನಗರದಲ್ಲಿ ಅವರು ಸುದ್ದಿಗಾರರೊಂದಿಗೆ ಮಾತನಾಡಿದರು. ಈ ವೇಳೆ, 60% ಕಮಿಷನ್ ಆರೋಪಕ್ಕೆ ದಾಖಲಾತಿ ಕೊಡಿ ಎಂಬ ಸಿಎಂ ಸಿದ್ದರಾಮಯ್ಯ ಹೇಳಿಕೆಗೆ ತಿರುಗೇಟು ಕೊಟ್ಟರು. ಅದ್ಯಾರೋ ಹಂಗಾಮಿ ಅಧ್ಯಕ್ಷರು ಹೇಳಿಕೆ ಕೊಟ್ಟಿದ್ದಾರೆ ಅದಕ್ಕಿಂತ ದಾಖಲಾತಿ ಬೇಕಾ? ಸಿದ್ದರಾಮಯ್ಯ ಮಹಾನ್ ನಾಯಕರು ಪೇ ಸಿಎಂ ಎಂದು ಪೋಸ್ಟರ್ ಅಂಟಿಸಲು ಹೋಗಿದ್ರು. ಅವರು ಇಲ್ಲಿಯವರೆಗೆ ಯಾವ ದಾಖಲೆ ಇಟ್ಟಿದ್ದಾರೆ ಎಂದು ಪ್ರಶ್ನಿಸಿದ್ದಾರೆ.

ಕೆಂಪಣ್ಣ ಹೇಳಿದ್ರು, ಕೆಂಪಣ್ಣ ಹೇಳಿದ್ರು, ಅಂತ ಸಿದ್ದರಾಮಯ್ಯ ಹೇಳ್ತಾರೆ. ಈಗ ಕಂಟ್ರಾಕ್ಟರ್‌ಗಳು 60% ಬಗ್ಗೆ ಹೇಳ್ತಿಲ್ವಾ? ಅದಕ್ಕಿಂತ ಸಾಕ್ಷಿ ಬೇಕಾ? ಈ ಆಟ ಸರ್ಕಾರ ಬಿಟ್ಟು ಬಿಡಬೇಕು ಎಂದು ಕಿಡಿಕಾರಿದ್ದಾರೆ.

ಇದೇ ವೇಳೆ ಮಗ ಸೋತಿರೋದಕ್ಕೆ ಹತಾಶರಾಗಿ ಹೆಚ್‌ಡಿಕೆ 60% ಕಮಿಷನ್ ಆರೋಪ ಮಾಡ್ತಿದ್ದಾರೆ ಎಂಬ ಸಚಿವ ಕೃಷ್ಣಬೈರೇಗೌಡ ಹೇಳಿಕೆ ವಿಚಾರವಾಗಿ, ಮಗ ಸೋತಿರೋದಕ್ಕೆ ಹತಾಶೆಯಾಗಿದ್ದೇನೋ. ಇಲ್ಲವೋ ಅದನ್ನ ಬಿಟ್ಟು ಬಿಡಿ. ಮೊದಲು 60% ಕಮೀಷನ್‌ಗೆ ಉತ್ತರ ಹೇಳಪ್ಪ. ಕಂದಾಯ ಇಲಾಖೆ ಏನು ಸ್ವಚ್ಛವಾಗಿ ನಡೆಯುತ್ತಿದೆಯಾ? ಬೆಂಗಳೂರು ಎಸಿ ಪೋಸ್ಟ್‌ಗೆ ಎಷ್ಟು ದುಡ್ಡು ತಗೋತೀರಾ? ಎಷ್ಟು ಫಿಕ್ಸ್ ಮಾಡಿಕೊಂಡಿದ್ದೀರಾ? ಆ ಹಣ ಯಾರ್ ಯಾರಿಗೆ ಹೋಗುತ್ತೆ? ಏನ್ ಏನ್ ನಡೆಸ್ತೀರಾ ನಮಗೆ ಗೊತ್ತಿಲ್ವಾ? ಎಂದು ಕಂದಾಯ ಇಲಾಖೆಯಲ್ಲಿ ಅಕ್ರಮ ನಡೆಯುತ್ತಿದೆ ಎಂದ ಆರೋಪಿಸಿದ್ದಾರೆ.

ನಾನು ಅಧಿಕಾರ ನಡೆಸಿದ್ದೇನೆ. ನಾನು ಹರಿಶ್ಚಂದ್ರ ಎಂದು ಎಲ್ಲೂ ಹೇಳಿಲ್ಲ. ವಿಧಾನಸಭೆಯಲ್ಲಿ ಹೇಳಿದ್ದೇನೆ. ಚುನಾವಣೆ ನಡೆಯಬೇಕಾದ್ರೆ ಇನ್ನೊಬ್ಬರ ಹತ್ರ ಕೈ ಚಾಚಲೇಬೇಕು. ಆದರೆ ನಾನು ಅಧಿಕಾರ ನಡೆಸುವಾಗ ಪ್ರತಿಯೊಂದು ಮಾರಾಟಕ್ಕೆ ಇಟ್ಟಿರಲಿಲ್ಲ. ಈ ಸರ್ಕಾರ ಪ್ರತಿಯೊಂದನ್ನು ಮಾರಾಟಕ್ಕೆ ಇಟ್ಟಿದೆ. ಪ್ರತಿಯೊಂದಕ್ಕೂ ಲೂಟಿ ಹೊಡೆದುಕೊಂಡು ಕೂತಿದ್ದಾರೆ. ಈ ಸರ್ಕಾರದಲ್ಲಿ ರೇಟ್ ಕಾರ್ಡ್ ಮೊದಲೇ ಫಿಕ್ಸ್ ಆಗಿ ಹೋಗಿದೆ. ನಾನು ಪ್ರಾರಂಭದಲ್ಲೇ ಈ ಸರ್ಕಾರದ ರೇಟ್ ಕಾರ್ಡ್ ಬಗ್ಗೆ ಹೇಳಿದ್ದೆ ಎಂದಿದ್ದಾರೆ.

ಇವತ್ತಿನ ರಾಜಕಾರಣಕ್ಕೆ ದುಡ್ಡು ಬೇಕು. ಪ್ರೀತಿ ವಿಶ್ವಾಸದಿಂದ ನಾವು ಕೆಲಸ ಮಾಡಿದಾಗ ಚುನಾವಣೆ ಸಮಯದಲ್ಲಿ ಯಾರೋ 4 ಜನ ಬರ್ತಾರೆ ಚುನಾವಣೆ ನಡೆಸೋಕೆ ಹಣ ಕೊಡ್ತಾರೆ. ಆದರೆ ಅಧಿಕಾರ ಇಟ್ಟುಕೊಂಡು ಪ್ರತಿದಿನ ನಮ್ಮ ಸಹಿಯನ್ನು ಮಾರಾಟಕ್ಕೆ ಇಡೋಕೆ ಆಗೊಲ್ಲ. ಈ ಸರ್ಕಾರ ಸಹಿಯನ್ನು ಮಾರಾಟಕ್ಕೆ ಇಟ್ಟಿದೆ. ಪ್ರತಿ ಕ್ಷಣವೂ ಈ ಸರ್ಕಾರದಲ್ಲಿ ಮಾರಾಟವೇ ಎಂದು ಸರ್ಕಾರದ ವಿರುದ್ಧ ವಾಗ್ದಾಳಿ ನಡೆಸಿದ್ದಾರೆ.

Printed, Published & Owned by N.Venugopal Krishna, Printed at DASHAPRAMATHI MUDRANALAYA, No.433/1, Chikkavitalenahalli Village, Thagachagere Post, Kasaba Hobli, Channapatna Taluk, Ramanagar District, Pin-562160. Published at No.15, Ground Floor, 12th Block, 5th Main, Kumara Park (West), Behind BDA Head Office, Bengaluru-560020. Editor: N.Venugopal Krishna, Mobile No.+91 94835 89085, email: sanjemugilu@gmail.com